ಸಂಪುಟ: 22, ಸಂಚಿಕೆ: 216, ಪುಟಗಳು: 8, ಶುಕ್ರವಾರ, 16 ಮೇ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

**ಸುಭಾಷಿತ**

ತಮ್ಮವರಿಗೇ ಪ್ರೀತಿ ನೀಡಲಾಗದಷ್ಟು ಬಡವರಾಗಬೇಡಿ. ಸಮಯವೇ ಇಲ್ಲ ಎಂದು ಹೇಳುವಷ್ಟು ಆತ್ಮವಂಚಿತರಾಗಬೇಡಿ.

**ಪಂಚಾಂಗ**

(ಶುಕ್ರವಾರ 16 ಮೇ-2025)

- ಶ್ರೀವಿಶ್ವಾವಸು ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಕೃಷ್ಣಪಕ್ಷ,
- ಚತುರ್ಥಿ, ಶುಕ್ರವಾರ,
- ಮೂಲ ನಕ್ಷತ್ರ / ಪೂರ್ವಾಷಾಡ ನಕ್ಷತ್ರ
- ರಾಹುಕಾಲ: 10:45 ರಿಂದ 12:20
- ಗುಳಿಕಕಾಲ: 07:35 ರಿಂದ 09:10
- ಯಮಗಂಡಕಾಲ: 03:30 ರಿಂದ 05:05

## ಸಂಕ್ಷಿಪ್ತ ಸುದ್ದಿ

### ಅಂಗಾಂಗ ದಾನ ಧಾರವಾಡ ಜಿಲ್ಲೆಗೆ ದೇಶದಲ್ಲೇ 2ನೇ ಸ್ಥಾನ

**ಧಾರವಾಡ:** ಅಪಘಾತ ಸೇರಿದಂತೆ ವಿವಿಧ ತುರ್ತು ಪರಿಸ್ಥಿತಿಗಳಲ್ಲಿ ಮನುಷ್ಯನ ಮೆದುಳು ಕೆಲವೊಮ್ಮೆ ನಿಷ್ಕ್ರಿಯಗೊಂಡು ಬಿಡುತ್ತದೆ. ಆಗ ಆ ವ್ಯಕ್ತಿ ಸಹಜವಾಗಿ ಕೋಮಾ ಸ್ಥಿತಿಗೆ ಹೋಗುತ್ತಾನೆ. ಅಂಥ ವ್ಯಕ್ತಿ ಜೀವಂತವಾಗಿದ್ದರೂ ಇಲ್ಲದಂತಾಗಿರುತ್ತಾನೆ. ಮತ್ತೆ ಆತನಿಗೆ ಪ್ರಜ್ಞೆ ಬರುವ ಸಾಧ್ಯತೆಯೇ ಇಲ್ಲ ಎಂಬಂಥ ಸ್ಥಿತಿಯಲ್ಲಿ ವೈದ್ಯಕೀಯ ಪರಿಭಾಷೆಯಲ್ಲಿ 'ಬ್ರೈನ್ ಡೆಡ್' ಎಂದು ಘೋಷಿಸಲಾಗುತ್ತದೆ. ಆದರೆ, ಇಂಥ ಸಂದರ್ಭದಲ್ಲಿ ಆ ವ್ಯಕ್ತಿಯ ಇತರೆ ಅಂಗಾಂಗಗಳು ಐದಾರು ಜನರ ಜೀವ ಉಳಿಸುವ ಸಾಮರ್ಥ್ಯ ಹೊಂದಿರುತ್ತವೆ. ಆ ರೀತಿ ಮೆದುಳು ನಿಷ್ಕ್ರಿಯಗೊಳ್ಳುವ ವ್ಯಕ್ತಿಯ ಅಂಗಾಂಗ ಮತ್ತು ಅಂಗಾಂಶಗಳನ್ನು ದಾನ ಮಾಡುವ ಪ್ರಕ್ರಿಯೆ ಇತ್ತೀಚಿಗೆ ಹೆಚ್ಚಾಗುತ್ತಿದೆ. ಇದಕ್ಕಾಗಿ ಕೇಂದ್ರ ಸರ್ಕಾರ ವೆಬ್‌ಸೈಟ್‌ನ್ನೂ ತೆರೆದಿರುವುದು ವಿಶೇಷ. ರಾಷ್ಟ್ರೀಯ ಅಂಗಾಂಗ ಮತ್ತು ಅಂಗಾಂಶಗಳ ದಾನ ನೀಡಲು ಮಾಡಿರುವ ವೆಬ್‌ಸೈಟ್ ಇದು. ಇದರಲ್ಲಿ ಯಾರಾದರೂ ಕೂಡ ತಮ್ಮ ಹೆಸರನ್ನು ನೋಂದಣಿ ಮಾಡಬಹುದಾಗಿದೆ. ಇಂಥದ್ದೊಂದು ಅಭಿಯಾನದಲ್ಲಿ ಧಾರವಾಡ ಜಿಲ್ಲೆಯ ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದ್ದರೆ, ರಾಜ್ಯದಲ್ಲಿ ಮೊದಲ ಸ್ಥಾನದಲ್ಲಿ ನಿಂತಿದೆ. ಪುಟ 2




### 327 ಕೋಟಿ ವೆಚ್ಚದ ನವಲಗುಂದ ಬೈಪಾಸ್ ರಸ್ತೆ ಕಾಮಗಾರಿಗೆ ಕೇಂದ್ರ ಅಸ್ತು

**ಹುಬ್ಬಳ್ಳಿ:** ಸವದತ್ತಿ ಯಲ್ಲಮ್ಮನಗುಡ್ಡ ಸೇರಿದಂತೆ ವಿವಿಧ ಸುಕ್ಷೇತ್ರಗಳಿಗೆ ಸಂಪರ್ಕ ಕಲ್ಪಿಸುವ 327 ಕೋಟಿ ರೂ. ವೆಚ್ಚದ ನವಲಗುಂದ ಬೈಪಾಸ್ ರಸ್ತೆ ಕಾಮಗಾರಿಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ನವಲಗುಂದ ಬೈಪಾಸ್ ರಸ್ತೆ ನಿರ್ಮಾಣಕ್ಕಾಗಿ ಈ ಹಿಂದೆಯೇ ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅದರಂತೆ ಇದೀಗ ಕಾಮಗಾರಿಗೆ ಅನುಮೋದನೆ ದೊರಕಿದೆ.

ಪುಟ 2






ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines




## ಬೆಂಗಳೂರು-ತುಮಕೂರು ಮೆಟ್ರೋ ಪಕ್ಕಾ!

ಕಾರ್ಯಸಾಧ್ಯತಾ ಪರೀಕ್ಷಾ ವರದಿ ಸರ್ಕಾರಕ್ಕೆ ಸಲ್ಲಿಕೆ

**ರು:** ಬೆಂಗಳೂರು ಹಾಗೂ ತುಮಕೂರು ನಮ್ಮ ಮೆಟ್ರೋ ೀಜನೆ ಕನಸು ನನಸಾಗುವ ಸಾಧ್ಯತೆ ಹೆಚ್ಚಾಗಿದೆ. ಎರಡು ನಗರಗಳ ನಡುವಿನ ಮೆಟ್ರೋ ಯೋಜನೆ ಬಗ್ಗೆ ಹೊಸ ಮಾಹಿತಿ ಸಿಕ್ಕಿದ್ದು, ಕಾರ್ಯಸಾಧ್ಯತಾ ಪರೀಕ್ಷಾ ವರದಿಯನ್ನು ಈಗಾಗಲೇ ಖಾಸಗಿ ಕಂಪನಿ ಬಿಎಂಆರ್‌ಸಿಎಲ್‌ಗೆ ಸಲ್ಲಿಸಿದೆ. ಆ ವರದಿಯನ್ನು ಬಿಎಂಆರ್‌ಸಿಎಲ್ ಸರ್ಕಾರಕ್ಕೆ ಸಲ್ಲಿಸಿದೆ. 56.6 ಕಿ.ಮೀ. ಮೆಟ್ರೋ ಮಾರ್ಗದಲ್ಲಿ, 25 ಎತ್ತರಿಸಿದ ನಿಲ್ದಾಣಗಳ ನಿರ್ಮಾಣ ಮಾಡಲು ಯೋಜನೆ ರೂಪಿಸಲಾಗಿದೆ. ಗ್ರೀನ್ ಲೈನ್‌ನಲ್ಲಿ ಬರುವ ಮಾದಾವರ ನಿಲ್ದಾಣದಿಂದ ಪ್ರಾರಂಭವಾಗುವ ಮೆಟ್ರೋ ಮಾರ್ಗವು ಶಿರಾ ಗೇಟ್ ವರೆಗೆ ಮೆಟ್ರೋ ಮಾರ್ಗ ಹಾದು ಹೋಗಲಿದೆ ಎಂದು ಮೂಲಗಳು ತಿಳಿಸಿವೆ.

ಇನ್ನು ಕಾರ್ಯಸಾಧ್ಯತಾ ಪರೀಕ್ಷಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವ ಬಗ್ಗೆ ಬಿಎಂಆರ್‌ಸಿಎಲ್ ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ಯಶವಂತ್ ಚೌವ್ಹಾಣ್ ಮಾಹಿತಿ ನೀಡಿದ್ದಾರೆ.

ತುಮಕೂರಿಗೆ ನಮ್ಮ ಮೆಟ್ರೋ ವಿಸ್ತರಣೆಯಾಗಿದ್ದೇ ಆದಲ್ಲಿ, ಇದೇ ಮೊದಲ ಬಾರಿಗೆ ಬೆಂಗಳೂರಿನಿಂದ ಮತ್ತೊಂದು ಜಿಲ್ಲೆಗೆ ಮೆಟ್ರೋ ಸಂಚಾರ ಮಾಡುವಂತಾಗಲಿದೆ. ಬೆಂಗಳೂರಿನಿಂದ ತುಮಕೂರಿಗೆ ಮೆಟ್ರೋ ಸಂಚಾರ ಮಾಡುವುದು ಬಹುತೇಕ ಪಕ್ಕಾ ಎನ್ನಲಾಗುತ್ತಿದೆ.

**ಎಲ್ಲೆಲ್ಲಿ ಹಾದುಹೋಗಲಿದೆ ಮೆಟ್ರೋ?** ಪುಟ 2

# ಕೊನೆಗೂ ಭಾರತದ ಮುಂದೆ ಮಂಡಿಯೂರಿದ ಪಾಕ್

## ಶಾಂತಿ ಮಾತುಕತೆಗೆ ಪಾಕ್ ಪ್ರಧಾನಿ ಆಹ್ವಾನ





**ಇಸ್ಲಾಮಾಬಾದ್:** ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ನಡೆದ 'ಆಪರೇಷನ್ ಸಿಂಧೂರ' ಕಾರ್ಯಾಚರಣೆಯಲ್ಲಿ ತತ್ತರಿಸಿದ ಪಾಕಿಸ್ತಾನ ಕೊನೆಗೂ ಭಾರತದ ಮುಂದೆ ಮಂಡಿಯೂರಿದೆ. ಪಾಕಿಸ್ತಾನ ಶಾಂತಿಗಾಗಿ ತೊಡಗಿಸಿಕೊಳ್ಳಲು ಸಿದ್ಧವಾಗಿದೆ ಎಂದು ಪ್ರಧಾನಿ ಶೆಹಬಾಜ್ ಶರೀಫ್ ಭಾರತದ ಮುಂದೆ ಮಾತುಕತೆ ಪ್ರಸ್ತಾಪ ಇಟ್ಟಿದ್ದಾರೆ. ಭಾರತದೊಂದಿಗಿನ ಮಿಲಿಟರಿ ಮುಖಾಮುಖಿಯಲ್ಲಿ ಭಾಗಿಯಾಗಿದ್ದ ಅಧಿಕಾರಿಗಳು ಮತ್ತು ಸೈನಿಕರೊಂದಿಗೆ ಸಂವಾದ ನಡೆಸಲು ಗುರುವಾರ ಪಂಜಾಬ್ ಪ್ರಾಂತ್ಯದ ಕಮ್ರಾ ವಾಯುನೆಲೆಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಶೆಹಬಾಜ್ ಈ ಹೇಳಿಕೆಗಳನ್ನು ನೀಡಿದ್ದಾರೆ. ಶಾಂತಿಗಾಗಿ ನಾವು ಅದರೊಂದಿಗೆ (ಭಾರತ) ಮಾತುಕತೆಗೆ ಸಿದ್ಧರಿದ್ದೇವೆ. ಶಾಂತಿಗಾಗಿ ಷರತ್ತುಗಳು ಕಾಶ್ಮೀರ ಸಮಸ್ಯೆಯನ್ನೂ ಒಳಗೊಂಡಿವೆ ಎಂದು ಶೆಹಬಾಜ್ ತಿಳಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶ ಮತ್ತು ಲಡಾಖ್ ಕೇಂದ್ರಾಡಳಿತ ಪ್ರದೇಶಗಳು ಯಾವಾಗಲೂ ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗಗಳಾಗಿರುತ್ತವೆ ಎಂದು ಭಾರತ ಈಗಾಗಲೇ ಸ್ಪಷ್ಟಪಡಿಸಿದೆ. ಶೆಹಬಾಜ್ ಅವರೊಂದಿಗೆ ಉಪ ಪ್ರಧಾನಿ ಇಶಾಕ್ ದಾರ್, ರಕ್ಷಣಾ ಸಚಿವ ಖವಾಜಾ ಆಸಿಫ್, ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್, ವಾಯುಪಡೆಯ ಮುಖ್ಯಸ್ಥ, ವಾಯುಪಡೆ ಮುಖ್ಯಸ್ಥ ಮಾರ್ಷಲ್ ಜಹೀರ್ ಅಹ್ಮದ್ ಬಾಬರ್ ಸಿಧು ಕೂಡ ಗುರುವಾರ ವಾಯುನೆಲೆಗೆ ಬಂದಿದ್ದರು.

> » **ಉಗ್ರರ ವಿರುದ್ಧ ಭಾರತ 'ಆಪರೇಷನ್ ಸಿಂಧೂರ' ಕಾರ್ಯಾಚರಣೆ**

ಪಹಲ್ಗಾಮ್ ಭಯೋತ್ಪಾದಕ ದಾಳಿಯಿಂದಾಗಿ 26 ಪ್ರವಾಸಿಗರು ಪ್ರಾಣ ಕಳೆದುಕೊಂಡರು. ಇದಕ್ಕೆ ಪ್ರತೀಕಾರವಾಗಿ ಉಗ್ರರ ವಿರುದ್ಧ ಭಾರತ 'ಆಪರೇಷನ್ ಸಿಂಧೂರ' ಕಾರ್ಯಾಚರಣೆ ನಡೆಸಿತು. ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ಒಂಬತ್ತು ಭಯೋತ್ಪಾದಕ ತಾಣಗಳನ್ನು ಗುರಿಯಾಗಿಸಿಕೊಂಡು ಭಾರತೀಯ ಸಶಸ್ತ್ರ ಪಡೆಗಳು ನಡೆಸಿದ ದಾಳಿಯಲ್ಲಿ 100 ಕ್ಕೂ ಹೆಚ್ಚು ಭಯೋತ್ಪಾದಕರು ಹತರಾಗಿದ್ದಾರೆ.

ನಂತರ ಪಾಕಿಸ್ತಾನವು ಮೇ 8, 9 ಮತ್ತು 10 ರಂದು ಹಲವಾರು ಭಾರತೀಯ ಸೇನಾ ನೆಲೆಗಳ ಮೇಲೆ ದಾಳಿ ಮಾಡಲು ಪ್ರಯತ್ನಿಸಿತು. ಪ್ರತ್ಯುತ್ತರವಾಗಿ ಭಾರತೀಯ ಸಶಸ್ತ್ರ ಪಡೆಗಳು ರಫೀಕಿ, ಮುರಿಯದ್, ಚಕ್ಲಾಲಾ, ರಹೀಮ್ ಯಾರ್ ಖಾನ್, ಸುಕ್ಕೂರ್ ಮತ್ತು ಚುನಿಯನ್ ಸೇರಿದಂತೆ ಹಲವಾರು ಪಾಕಿಸ್ತಾನಿ ಮಿಲಿಟರಿ ನೆಲೆಗಳ ಮೇಲೆ ಭೀಕರ ಪ್ರತಿದಾಳಿ ನಡೆಸಿದವು.

## ಮಾಜಿ ಸೈನಿಕನ ಹತ್ಯೆ

### ಪ್ರಿಯಕರನ ಜೊತೆ ಸೇರಿ ಪತಿಗೆ ಚಟ್ಟ ಕಟ್ಟಿದ ಪತ್ನಿ

**ಲಕ್ನೋ:** 2022ರಲ್ಲಿ ದೆಹಲಿಯಲ್ಲಿ ನಡೆದಿದ್ದ ಲಿವ್ ಇನ್ ಗೆಳತಿ ಶ್ರದ್ಧಾವಾಕರ್ ಹತ್ಯೆ ದೇಶಾದ್ಯಂತ ಭಾರೀ ಸದ್ದು ಮಾಡಿತ್ತು. ಇದೀಗ ಅದೇ ರೀತಿಯ ಪ್ರಕರಣ ಉತ್ತರ ಪ್ರದೇಶದ ಬಾಲಿಯಾ ಜಿಲ್ಲೆಯಲ್ಲಿ ನಡೆದಿದೆ.

ಮಹಿಳೆಯೊಬ್ಬಳು ತನ್ನ ಪ್ರಿಯಕರನ ಜೊತೆ ಸೇರಿ ಮಾಜಿ ಸೈನಿಕ ಪತಿಯನ್ನ ಹತ್ಯೆ ಮಾಡಿದ್ದಲ್ಲದೇ ದೇಹವನ್ನ 6 ತುಂಡುಗಳಾಗಿ ಕತ್ತರಿಸಿ ವಿವಿಧ ಸ್ಥಳಗಳಲ್ಲಿ ಎಸೆದಿರುವ ಘಟನೆ ನಡೆದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ 50 ವರ್ಷದ ಮಹಿಳೆ, ಆಕೆಯ ಪ್ರಿಯಕರ ಮತ್ತು ಇಬ್ಬರು ಸಹಚರರನ್ನ ಬಂಧಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಏನಿದು ಕೇಸ್?

ಉತ್ತರ ಪ್ರದೇಶದ ಬಹದ್ದೂರ್ ಪುರ ನಿವಾಸಿಯಾಗಿರುವ ಆರೋಪಿ ಮಹಿಳೆ ಮಾಯಾದೇವಿ ಪ್ರಿಯಕರ ಅನಿಲ್ ಯಾದವ್ ಜೊತೆ ಸೇರಿ ತನ್ನ ಮಾಜಿ ಸೈನಿಕ ಪತಿ ದೇವೇಂದ್ರ ಕುಮಾರ್‌ನನ್ನ ಹತ್ಯೆ ಮಾಡಿದ್ದಾಳೆ. ಈ ಪ್ರಕರಣದಲ್ಲಿ ಇವರಿಬ್ಬರಿಗೆ ಸಹಾಯ ಮಾಡಿದ್ದಕ್ಕಾಗಿ ಸತೀಶ್ ಯಾದವ್ ಮತ್ತು ಮಿಥಿಲೇಶ್ ಇಬ್ಬರು ಸಹಚರರನ್ನೂ ಬಂಧಿಸಲಾಗಿದೆ.

**ಏನಾಗಿತ್ತು?:** ಪೊಲೀಸರ ಮಾಹಿತಿ ಪ್ರಕಾರ, ಕಳೆದ ಮೇ 10 ರಂದು ಉತ್ತರ ಪ್ರದೇಶದ ಖರೀದ್ ಗ್ರಾಮದಲ್ಲಿ ಕತ್ತರಿಸಿದ ಶವ ಪತ್ತೆಯಾಗಿತ್ತು. ಒಂದು ಕಡೆ ಕೈ-ಕಾಲುಗಳು ತುಂಡಾಗಿ ಬಿದ್ದಿರುವುದು ಕಂಡುಬಂದಿತ್ತು. 2 ದಿನಗಳ ನಂತರ ಹತ್ತಿರದ ಬಾವಿಯಲ್ಲಿ ತಲೆ, ಕೈಕಾಲುಗಳಿಲ್ಲದ ದೇಹ ಪತ್ತೆಯಾಗಿತ್ತು. ಆದ್ರೆ ಮೃತ ವ್ಯಕ್ತಿಯ ತಲೆ ಇನ್ನೂ ಪತ್ತೆಯಾಗಿಲ್ಲ. ಅದಕ್ಕಾಗಿ ಡೈವರ್‌ಗಳಿಂದ ನದಿಯಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ವರದಿಗಳು ತಿಳಿಸಿವೆ.



## ಭಾರತ-ಅಫ್ಘಾನಿಸ್ತಾನದ ಸಂಬಂಧ ಹಾಳು ಮಾಡಲು ಪಾಕ್‌ಗೆ ಬಿಡೋದಿಲ್ಲ



**ನವದೆಹಲಿ:** ಭಾರತ ಹಾಗೂ ಅಫ್ಘಾನಿಸ್ತಾನದ ನಡುವಿನ ಸಂಬಂಧವನ್ನು ಹಾಳು ಮಾಡಲು ಪಾಕಿಸ್ತಾನಕ್ಕೆ ಬಿಡುವುದಿಲ್ಲವೆಂದು ವಿದೇಶಾಂಗ ಸಚಿವ ಎಸ್ ಜೈಶಂಕರ್ ಹೇಳಿದ್ದಾರೆ. ಜೈಶಂಕರ್ ಮತ್ತು ಅಫ್ಘಾನ್ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ನಡುವಿನ ಇತ್ತೀಚಿನ ಮಾತುಕತೆಯ ಒಳಗಿನ ವಿವರಗಳನ್ನು ಸರ್ಕಾರಿ ಉನ್ನತ ಮೂಲಗಳು ಬಹಿರಂಗಪಡಿಸಿವೆ. ತಾಲಿಬಾನ್ ಅಫ್ಘಾನಿಸ್ತಾನವನ್ನು ವಶಪಡಿಸಿಕೊಂಡ ನಂತರ ಜೈಶಂಕರ್ ಮತ್ತು ಮುತ್ತಕಿ ನೇರವಾಗಿ ಮಾತನಾಡುತ್ತಿರುವುದು ಇದೇ ಮೊದಲು . ಈ ಮಾತುಕತೆಗಳು ಎರಡೂ ರಾಷ್ಟ್ರಗಳಿಗೆ ಮತ್ತು ಪ್ರಾದೇಶಿಕ ಸ್ಥಿರತೆಗೆ ಕಾರ್ಯತಂತ್ರದ ಮಹತ್ವವನ್ನು ಹೊಂದಿವೆ.

ತಾಲಿಬಾನ್ ಆಳ್ವಿಕೆಯಲ್ಲಿರುವ ಅಫ್ಘಾನಿಸ್ತಾನವು ಐಸಿಸ್-ಕೆ, ತೆಹ್ರಿಕ್-ಇ-ತಾಲಿಬಾನ್ ಪಾಕಿಸ್ತಾನ್ (ಟಿಟಿಪಿ) ಮತ್ತು ಅಲ್-ಖೈದಾದಂತಹ ಉಗ್ರಗಾಮಿ ಗುಂಪುಗಳಿಗೆ ಕೇಂದ್ರವಾಗಿ ಉಳಿದಿದೆ. ಜೊತೆಗೆ, ಅಫ್ಘಾನಿಸ್ತಾನವು ಚೀನಾಕ್ಕೆ ಹತ್ತಿರವಾಗುತ್ತಿದೆ, ಚೀನಾ ಕಂಪನಿಗಳಿಗೆ ಗಣಿಗಾರಿಕೆ ಗುತ್ತಿಗೆಗಳನ್ನು ಪಾಕಿಸ್ತಾನ ನೀಡಿದೆ ಎಂದು ಮೂಲಗಳು ತಿಳಿಸಿವೆ.

ಪುಟ 2

## ಹೊನ್ನಾವರ ರೈತರಿಂದ ಪಾಕ್‌ಗೆ ರಫ್ತಾಗುತ್ತಿದ್ದ ವೀಳ್ಯದೆಲೆ ನಿರ್ಬಂಧ

**ಕಾರವಾರ:** ಪಹಲ್ಗಾಮ್ ಉಗ್ರರ ನರಮೇಧದ ನಂತರ ಪಾಕ್ ವಿರುದ್ಧ ಭಾರತ ಹಲವು ರೀತಿಯ ಕ್ರಮಗಳನ್ನು ಜರುಗಿಸಿದೆ. ಪಾಕ್ ಧ್ವಜ, ಸರಕುಗಳ ಮಾರಾಟ ನಿಲ್ಲಿಸುವಂತೆ ಇ-ಕಾಮರ್ಸ್ ಕಂಪನಿಗಳಿಗೆ ವಾರ್ನಿಂಗ್ ಸಹ ಕೊಟ್ಟಿದೆ. ಈ ಬೆನ್ನಲ್ಲೇ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರದ ರೈತರು ಪಾಕಿಸ್ತಾನಕ್ಕೆ ರಫ್ತಾಗುತಿದ್ದ ವೀಳ್ಯದೆಲೆ ಉತ್ಪನ್ನಕ್ಕೆ ಶಾಶ್ವತವಾಗಿ ನಿರ್ಬಂಧ ಹೇರಲು ನಿರ್ಧರಿಸಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರದ ಶರಾವತಿ ನದಿ ಪಾತ್ರದ ರೈತರಿಂದ ದೆಹಲಿ ವರ್ತಕರು ವೀಳ್ಯದೆಲೆ ಖರೀದಿಸಿ ಪಾಕಿಸ್ತಾನಕ್ಕೆ ರಫ್ತು ಮಾಡುತಿದ್ದರು. ಆದರೀಗ ನಮಗೆ ನಷ್ಟವಾದರೂ ಪರ್ವಾಗಿಲ್ಲ ಪಾಕಿಸ್ತಾನಕ್ಕೆ ವೀಳ್ಯದೆಲೆ ಕಳುಹಿಸುವುದನ್ನ ನಿರ್ಬಂಧ ಮಾಡ್ತೀವಿ ಅಂತ ಒಕ್ಕೊರಲಿನಿಂದ ಹೇಳ್ತಿದ್ದಾರೆ.

ಹೊನ್ನಾವರದ ಶರಾವತಿ ನದಿ ತೀರ ಭಾಗದಲ್ಲಿ ಬೆಳೆಯುವ ವೀಳ್ಯದೆಲೆ ದೇಶ-ವಿದೇಶಗಳಲ್ಲೂ ಹೆಸರುವಾಸಿ. ರಾಣಿ ವೀಳ್ಯದೆಲೆ ಎಂದೇ ಪ್ರಸಿದ್ಧಿ



ಪಡೆದಿರುವ ಇಲ್ಲಿನ ವೀಳ್ಯದೆಲೆ ಹೆಚ್ಚು ಕಾಲ ಬಾಳಿಕೆ, ವಿಶೇಷ ಕಾರ ಮತ್ತು ಸ್ವಾದ ಹೊಂದಿದೆ. ಈ ವೀಳ್ಯೆದೆಲೆಗೆ ಪಾಕಿಸ್ತಾನವೇ ದೊಡ್ಡ ಮಾರುಕಟ್ಟೆಯಾಗಿದೆ.

ಈ ಮೊದಲು ಮುಂಬೈ ಮಾರುಕಟ್ಟೆ ಮೂಲಕ ಪಾಕಿಸ್ತಾನಕ್ಕೆ ವೀಳ್ಯದೆಲೆ ರಫ್ತಾಗುತಿತ್ತು. ನಂತರ ದೆಹಲಿ ಮಾರುಕಟ್ಟೆ ಮೂಲಕ ಪಾಕಿಸ್ತಾನಕ್ಕೆ ರಫ್ತಾಗುತಿತ್ತು. ಐತಿಹಾಸಿಕ ರಫ್ತು ವಹಿವಾಟು ಹೊಂದಿದ್ದ ಈ ವೀಳ್ಯದೆಲೆ ಪಾಕಿಸ್ತಾನಿಯರ ಅಚ್ಚುಮೆಚ್ಚು ಕೂಡ ಆಗಿತ್ತು.

ಪುಟ 2

## ಹಳದಿ ಮಾರ್ಗಕ್ಕೆ 3ನೇ ರೈಲು ಜೂನ್‌ನಲ್ಲಿ ಸಂಚಾರ ಸಾಧ್ಯತೆ

**ಬೆಂಗಳೂರು:** ಹಳದಿ ಮಾರ್ಗಕ್ಕೆ 3ನೇ ರೈಲು ಸಿದ್ಧಗೊಂಡಿದ್ದು, ಇದೇ ಜೂನ್‌ನಲ್ಲಿ ಸಂಚಾರ ಆರಂಭಿಸುವ ಸಾಧ್ಯತೆ ಇದೆ. ನಮ್ಮ ಮೆಟ್ರೋ ಅಳದಿ ಮಾರ್ಗಕ್ಕೆ ಪಶ್ಚಿಮ ಬಂಗಾಳದ ಟಿಟಾಗಢದಿಂದ ಒಂದು ಸೆಟ್ ರೈಲು ಬೋಗಿಗಳು ಬೆಂಗಳೂರಿಗೆ ಆಗಮಿಸಿವೆ.

ಅಂತಿಮ ಪರೀಕ್ಷೆಗಳನ್ನು ಪೂರ್ಣಗೊಳಿಸಲು ಬಿಎಂಆರ್‌ಸಿಎಲ್ ಸಿದ್ಧತೆ ನಡೆಸಿದೆ. ಅಂತಿಮ ಪರೀಕ್ಷೆ ಪೂರ್ಣಗೊಳಿಸಿ ಇನ್ನೊಂದು ತಿಂಗಳಲ್ಲಿ ಮೆಟ್ರೊ ಸಂಚಾರ ಆರಂಭಿಸಲು ಯೋಜಿಸಿದೆ.

ಹೆಬ್ಬಗೋಡಿಯಲ್ಲಿರುವ ನಮ್ಮ ಮೆಟ್ರೊ ಡಿಪೊಗೆ ಎಲ್ಲ ಆರು ಕೋಚ್‌ಗಳು ತಲುಪಿವೆ. ಬೃಹತ್ ಲಾರಿಯಿಂದ ಇಳಿಸಿ ಜೋಡಣೆ ಮಾಡಲಾಗಿದೆ. ಬೊಮ್ಮಸಂದ್ರ, ಆರ್ .ವಿ. ರಸ್ತೆ ನಡುವಿನ 18.8 ಕಿ.ಮೀ. ಉದ್ದದ ಮಾರ್ಗ ಇದಾಗಿದೆ.

ರೈಲು ಸಂಚಾರ ಆರಂಭಗೊಳ್ಳಲು ಕನಿಷ್ಠ ಮೂರು ರೈಲುಗಳ ಅವಶ್ಯಕತೆ ಇತ್ತು. ಚಾಲಕರಹಿತ ಎಂಜಿನ್ ಹೊಂದಿರುವ ಪ್ರೊಟೋಟೈಪ್ ಎರಡು ರೈಲುಗಳು ಪೂರೈಕೆಯಾಗಿ, ಮೂರನೇ ರೈಲಿಗಾಗಿ ಕಾಯಲಾಗಿತ್ತು.



ಇದೀಗ ಮೂರೂ ರೈಲುಗಳು ಪೂರೈಕೆಯಾಗಿವೆ.

ಪರೀಕ್ಷೆಗಳು ನಡೆದ ಬಳಿಕ ಪ್ರತಿ 30 ನಿಮಿಷಕ್ಕೆ ಒಂದು ರೈಲು ಸಂಚರಿಸಲಿದೆ. ರೈಲುಗಳ ಸಂಖ್ಯೆ ಹೆಚ್ಚಳವಾದಂತೆ ಟ್ರಿಪ್‌ಗಳ ನಡುವಿನ ಅವಧಿ ಕಡಿಮೆಯಾಗಲಿದೆ. ಈ ಮಾರ್ಗಕ್ಕೆ ಒಟ್ಟು 14 ರೈಲುಗಳ ಅಗತ್ಯವಿದೆ. ಪ್ರತಿ 15 ನಿಮಿಷಗಳಿಗೆ ಒಂದು ರೈಲು ಸಂಚರಿಸಲು 8 ರೈಲುಗಳು ಇರಬೇಕಿದೆ.

## ಬ್ಲಡ್ ಬ್ಯಾಂಕ್‌ಗಳ ಕಳ್ಳಾಟ

### ಮನಸೋ ಇಚ್ಛೆ ಹಣ ಸುಲಿಗೆ, ಹದ್ದಿನ ಕಣ್ಣಿಟ್ಟ ಡ್ರಗ್ ಕಂಟ್ರೋಲ್ ಬೋರ್ಡ್!

**ಬೆಂಗಳೂರು:** ಆರೋಗ್ಯ ಇಲಾಖೆ ಕಳೆದ ಕೆಲವು ತಿಂಗಳನಿಂದ ಜನರ ಆರೋಗ್ಯದ ಬಗ್ಗೆ ಸಾಕಷ್ಟು ನಿಗಾವಹಿಸಲಾಗಿತ್ತು. ಅಪಾಯಕಾರಿಯಾದ ಕಲರ್, ರಾಸಾಯನಿಕಗಳ ಬಳಕೆಗೆ ಕಡಿವಾಣ



ಸೇರಿದ್ದಂತೆ ಹಲವು ಆಹಾರ ಪದಾರ್ಥಗಳ ಸ್ಯಾಂಪಲ್ಸ್ ಸಂಗ್ರಹಿಸಿ ಟೆಸ್ಟ್ ಮಾಡಲು ಮುಂದಾಗಿತ್ತು. ಈ ನಡುವೆ ಆರೋಗ್ಯ ಇಲಾಖೆ ಮತ್ತೊಂದು ಪ್ರಯೋಗಕ್ಕೂ ಮುಂದಾಗಿದೆ. ಅದೇನೇಂದರೆ ರಕ್ತ ನಿಧಿ ಘಟಕಗಳಲ್ಲಿ ಹೆಚ್ಚು ಹಣ ಸುಲಿಗೆ ಮಾಡುತ್ತಿರುವ ಬಗ್ಗೆ ಡ್ರಗ್ ಕಂಟ್ರೋಲ್ ಬೋರ್ಡ್‌ಗೆ ಸಾಲು ಸಾಲು ದೂರುಗಳು ಬಂದಿವೆ. ಹಾಗಾಗಿ ಬ್ಲಡ್ ಘಟಕಗಳಿಗೆ ಭೇಟಿ ನೀಡಿ ವರದಿ ಸಂಗ್ರಹಿಸಲು ಮುಂದಾಗಿದೆ. ಇತ್ತಿಚ್ಚಿಗೆ ರಕ್ತ ನಿಧಿ ಘಟಕಗಳಲ್ಲಿ ಸ್ವಚ್ಛತೆ ಇರಲ್ಲ, ರಕ್ತ ಸಂಗ್ರಹ ಘಟಕದಲ್ಲಿ ಯಾವುದೇ ರೂಲ್ಸ್ ಫಾಲೋ ಆಗುತ್ತಿಲ್ಲ. ರಕ್ತ ಸಂಗ್ರಹ ನಿಧಿ ಘಟಕಗಳಲ್ಲಿ ಕಳ್ಳಾಟ ಶುರುವಾಗಿದೆ ಅಂತಾ ದೂರುಗಳು ಕೇಳಿ ಬಂದಿದ್ದವು. ಹೀಗಾಗಿ ಆರೋಗ್ಯ ಇಲಾಖೆ ರಕ್ತ ಸಂಗ್ರಹ ಘಟಕಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡುತ್ತಿದೆ. ಜನರಿಂದ ಕ್ಯಾಂಪ್‌ಗಳ ಮೂಲಕ ಸಂಗ್ರಹವಾದ ಬ್ಲಡ್ ಎಲ್ಲಿ ಹೋಗುತ್ತಿದೆ. ರಕ್ತ ನಿಧಿ ಘಟಕಗಳಲ್ಲಿ ಯಾವೆಲ್ಲಾ ಮುನ್ನೆಚ್ಚರಿಕೆ ವಹಿಸಲಾಗಿದೆ. ಸ್ವಚ್ಛತೆ, ಶುಚಿತ್ವ ಹೇಗಿದೆ. ಪುಟ 2

## ಹತ್ಯೆಯಾದ ಅಪ್ರಾಪ್ತ ಬಾಲಕಿ ಮನೆಗೆ ಸಂಸದ ಡಾ.ಮಂಜುನಾಥ್ ಭೇಟಿ, ಸಾಂತ್ವನ

**ರಾಮನಗರ:** ಬಿಡದಿಯ ಭದ್ರಾಪುರ ಗ್ರಾಮದ ಅಪ್ರಾಪ್ತ ಬಾಲಕಿ ಹತ್ಯೆ ಪ್ರಕರಣ ಹಿನ್ನೆಲೆ ಇಂದು ಭದ್ರಾಪುರ ಗ್ರಾಮಕ್ಕೆ ಸಂಸದ ಡಾ.ಮಂಜುನಾಥ್ ಭೇಟಿ ನೀಡಿ ಮೃತ ಬಾಲಕಿ ಕುಟುಂಬಕ್ಕೆ ಸಾಂತ್ವನ ಹೇಳಿದ್ದಾರೆ. ಮೃತ ಬಾಲಕಿ ತಾಯಿಗೆ ಧೈರ್ಯ ತುಂಬಿದ ಸಂಸದರು, ಘಟನೆ ಕುರಿತು ಪೊಲೀಸರಿಂದಲೂ ಮಾಹಿತಿ ಸಂಗ್ರಹಿಸಿದ್ದಾರೆ. ವಿಕಲಚೇತನ ಬಾಲಕಿ ಹತ್ಯೆಗೆ ವಿಷಾದ ವ್ಯಕ್ತಪಡಿಸಿದ ಸಂಸದರು, ಈ ಬಗ್ಗೆ ಕೂಲಂಕಷವಾಗಿ ತನಿಖೆ ನಡೆಸುವಂತೆ ಪೊಲೀಸರಿಗೆ ಸೂಚನೆ ನೀಡಿದರು. ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಅವರು, 14 ವರ್ಷದ ಬಾಲಕಿಯನ್ನ ಹತ್ಯೆ ಮಾಡಿರೋದು ವಿಕೃತಿ. ಯಾವ ಕಾರಣಕ್ಕೆ ಹತ್ಯೆಯಾಗಿದೆ ಎಂಬುದು ಮರಣೋತ್ತರ ವರದಿ ಹಾಗೂ ಎಫ್‌ಎಸ್‌ಎಲ್ ವರದಿಯಲ್ಲಿ ಬಹಿರಂಗವಾಗಬೇಕಿದೆ. ಈಗಾಗಲೇ ಎರಡು–ಮೂರು ತಂಡಗಳ ರಚನೆ ಮಾಡಿಕೊಂಡು ಪೊಲೀಸರು ತನಿಖೆ ಮಾಡುತ್ತಿದ್ದಾರೆ. ಬಾಲಕಿ ಸಾವಿಗೆ ನ್ಯಾಯ ಒದಗಿಸುವ ಕೆಲಸ ಆಗಬೇಕು. ಗ್ರಾಮಕ್ಕೆ ಕೆಲ ಮೂಲಭೂತ ಸೌಕರ್ಯಗಳ ಕೊರತೆ ಇದೆ. ಅದನ್ನೂ ಸರಿಪಡಿಸುವ ನಿಟ್ಟಿನಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇವೆ ತಿಳಿಸಿದರು.



## ದೇಶದ ವಿರುದ ಮಾತಾಡಿದ್ರೆ ಜನ ನಿಮ್ಮ ನಾಲಿಗೆ ಇಲ್ಲದಂತೆ ಮಾಡ್ಬಹುದು

**ಬೆಂಗಳೂರು:** ಕಾಂಗ್ರೆಸ್ ನಾಯಕರ ಅಪಕ್ವ ಹೇಳಿಕೆಗಳಿಗೆ ನಾನು ಉತ್ತರ ಕೊಡುವ ಅವಶ್ಯಕತೆ ಇಲ್ಲ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದ್ದಾರೆ. ಬೆಂಗಳೂರಿನಲ್ಲಿ ಅವರು ಮಾಧ್ಯಮಗಳ ಜೊತೆ ಮಾತನಾಡಿದರು. ಈ ವೇಳೆ, ಕೆಲವರ ಪ್ರಶ್ನೆಗಳು ಪಾಕಿಸ್ತಾನದ ಪರವಾಗಿವೆ. ನಿನ್ನೆ ತಾನೇ ಮೂವರು ಸತ್ತು ಬಿದ್ದಿದ್ದಾರೆ ಅಲ್ಲವೇ? ನಿಮಗೆ ಕಣ್ಣು ಕಾಣಲಿಲ್ಲವೇ? ನಿಮಗೇನಾದರೂ ಆಪರೇಷನ್ ಆಗಿದೆಯೇ? ನಿಮಗೆಲ್ಲ ವಿಶೇಷ ಆಸ್ಪತ್ರೆ ತೆರೆಯಬೇಕಿದೆ ಎಂದು ವ್ಯಂಗ್ಯವಾಡಿದ್ದಾರೆ. ಅವರ ಸ್ಥಾನದಲ್ಲಿ ನಾನು ಇದ್ದರೆ ಪಕ್ವತೆ ಇಲ್ಲದ ಪ್ರಶ್ನೆ ಕೇಳುತ್ತಿರಲಿಲ್ಲ. ದೇಶದ ವಿರುದ್ಧ ಮಾತನಾಡಿದರೆ ಜನರು ನಿಮ್ಮ ನಾಲಿಗೆ ಇಲ್ಲದಂತೆ ಮಾಡಬಹುದು ಎಂದು ಕಾಂಗ್ರೆಸ್ ನಾಯಕರಿಗೆ ಎಚ್ಚರಿಕೆ ನೀಡಿದ್ದಾರೆ.



## ಬಿಸಿಜಿ ಲಸಿಕೆಯನು ಹಾಕಿಸಿಕೊಳ್ಳಿ; ಡಾ.ಭೀಮರಾವ್

**ವಿಜಯಪುರ:** 60 ವರ್ಷದ ಮೇಲ್ಪಟ್ಟ ಹಿರಿಯ ನಾಗರೀಕರಾಗಿದ್ದು ಮಧುಮೇಹ, ಟಿಬಿ ಇರುವ ವ್ಯಕ್ತಿಯ ನಿಕಟ ಸಂಪರ್ಕಿತರು, ಅಪೌಷ್ಟಿಕ ವ್ಯಕ್ತಿಗಳು, ಪ್ರಸ್ತುತ ಅಥವಾ ಹಿಂದಿನ ಧೂಮಪಾನಿಗಳು ತಪ್ಪದೇ ಸ್ಥಳೀಯ ಸರಕಾರಿ ಕ್ಲಿನಿಕಲ್ ಅಥವಾ ಆರೋಗ್ಯ ಕೇಂದ್ರದ ಆಸ್ಪತ್ರೆಯಲ್ಲಿ ಬಿಸಿಜಿ ಲಸಿಕೆಯನ್ನು ಹಾಕಿಸಿಕೊಳ್ಳಿ ಎಂದು ಡಾ.ಭೀಮರಾವ್ ತಿಳಿಸಿದರು. ಇವರು ಪಟ್ಟಣದ ಪುರಸಭಾ ರೋಜಗಾರ್ ಇಲಾಖೆಯ ಪಕ್ಕದಲ್ಲಿರುವ ಕ್ಲಿನಿಕ್‌ನಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ಲಸಿಕೆಯನ್ನು ಹಾಕಿ ಮಾತನಾಡುತ್ತಿದ್ದರು. ಪಟ್ಟಣ ಹಾಗೂ ಗ್ರಾಮಾಂತರ ಜನರು ತಪ್ಪದೇ ಲಸಿಕೆಯನ್ನು ಪಡೆದುಕೊಳ್ಳಿ. ಇದರಿಂದ ಮುಂಬರುವ ಯಾವುದೇ ಕಾಯಿಲೆಗಳನ್ನು ತಡೆಯಲು ಸಾಮರ್ಥ್ಯ ಹೆಚ್ಚುತ್ತದೆ. ಇಂದು ಪ್ರಪಂಚದಲ್ಲಿ ಕ್ಷಯ ರೋಗವು ಸೋಂಕಿತರಲ್ಲಿ ಹೆಚ್ಚು ಮರಣವನ್ನುಂಟು ಮಾಡುತ್ತಿದೆ ಎಂದು ತಿಳಿಸಿದರು. ಇದು ಕುಟುಂಬದಲ್ಲಿ ಆರ್ಥಿಕ ಸಂಕಷ್ಟವನ್ನುಂಟು ಮಾಡುತ್ತದೆ ತಪ್ಪದೇ ಲಸಿಕೆಯನ್ನು ಪಡೆದುಕೊಳ್ಳಿ ಎಂದರು.



### ನಕ್ಸಲರ ವಿರುದ್ಧ ಕಾರ್ಯಾಚರಣೆ ವೇಳೆ ಜೇನು ದಾಳಿ

# ಬೆಂಗ್ಳೂರಲ್ಲಿ ಪಳಗಿದ್ದ ಸ್ನಿಫರ್ ಡಾಗ್ ಸಾವು

**ರಾಯ್ಪುರ್:** ಛತ್ತೀಸ್‌ಗಢ ತೆಲಂಗಾಣ ಗಡಿಯಲ್ಲಿ ನಕ್ಸಲರ ವಿರುದ್ಧ ನಡೆದ ಕಾರ್ಯಾಚರಣೆಯ ವೇಳೆ ಜೇನುನೊಣಗಳ ದಾಳಿಗೆ ಸಿಆರ್‌ಪಿಎಫ್ ಪಡೆಯಲ್ಲಿದ್ದ ಸ್ನಿಫರ್ ಶ್ವಾನ ಸಾವನ್ನಪ್ಪಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೊರ್ಗೋಟಾಲು ಬೆಟ್ಟಗಳಲ್ಲಿ ಏ.27 ರಂದು ನಡೆದ ಅತಿದೊಡ್ಡ ಮಾವೋವಾದಿ ವಿರೋಧಿ ಕಾರ್ಯಾಚರಣೆಯ ವೇಳೆ ಈ ಘಟನೆ ನಡೆದಿದೆ. ಕಾರ್ಯಾಚರಣೆ ವೇಳೆ, ಎರಡು ವರ್ಷದ ಹೆಣ್ಣುನಾಯಿ ರೋಲೋ ಮೇಲೆ ಜೇನುನೊಣಗಳು ದಾಳಿ ನಡೆಸಿದ್ದವು. ದಾಳಿಯಿಂದ ಗಾಯಗೊಂಡಿದ್ದ ರೋಲೋಗೆ ಸ್ಥಳದಲ್ಲಿ ಚಿಕಿತ್ಸೆ ನೀಡಲಾಯಿತು. ಹೆಚ್ಚಿನ ಚಿಕಿತ್ಸೆಗಾಗಿ ಕರೆತರುವಾಗ, ಮಾರ್ಗ ಮಧ್ಯೆ ಅದು ಸಾವನ್ನಪ್ಪಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜೇನು ದಾಳಿ ನಡೆದ ವೇಳೆ, ರೋಲೋಗೆ ಸಿಆರ್‌ಪಿಎಫ್ ಸಿಬ್ಬಂದಿ ಪಾಲಿಥಿನ್ ಹಾಳೆಯಿಂದ ಮುಚ್ಚಿದ್ದರು. ಆದರೂ ಸಹ ಜೇನುನೊಣಗಳು ಒಳಗೆ ಹೋಗಿ ಅದನ್ನು ಕಚ್ಚಿದವು. ಇದರಿಂದ ಕಿರಿಕಿರಿಯಾಗಿ ಅದು ಹೊರಗೆ ಬಂದಿತ್ತು. ಈ ವೇಳೆ, ಜೇನುನೊಣಗಳು ಮತ್ತಷ್ಟು ದಾಳಿ ಮಾಡಿದವು ಎಂದು ಹಿರಿಯ ಅಧಿಕಾರಿಯೊಬ್ಬರು ಹೇಳಿಕೊಂಡಿದ್ದಾರೆ.

ಕಾರ್ಯಾಚರಣೆಯಲ್ಲಿ ರೋಲೋ, ಸ್ಫೋಟಕಗಳು ಮತ್ತು ಸುಧಾರಿತ ಸ್ಫೋಟಕ ಸಾಧನಗಳನ್ನು ಪತ್ತೆಹಚ್ಚುಲು ನೆರವಾಗುತ್ತಿತ್ತು. ಮೇ 11 ರಂದು ಮುಕ್ತಾಯಗೊಂಡ 21 ದಿನಗಳ ಈ ಕಾರ್ಯಾಚರಣೆಯಲ್ಲಿ ರೋಲೋ ಪಾತ್ರ ಬಹಳ ಮುಖ್ಯವಾಗಿತ್ತು. ಸಿಆರ್‌ಪಿಎಫ್ ಡಿಜಿ, ಮರಣೋತ್ತರವಾಗಿ ಶ್ವಾನಕ್ಕೆ ಪದಕವನ್ನು ನೀಡಿದ್ದಾರೆ.

ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ಛತ್ತೀಸ್ ಗಢ ಪೊಲೀಸ್ ಘಟಕಗಳ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ 31 ಮಾವೋವಾದಿಗಳನ್ನು ಹತ್ಯೆಗೈಯ್ಯಲಾಗಿತ್ತು. ಈ ವೇಳೆ ಒಟ್ಟು 18 ಸೈನಿಕರು ಗಾಯಗೊಂಡಿದ್ದರು. ಬೆಲ್ಜಿಯಂ ಶೆಫರ್ಡ್ ಶ್ವಾನ ರೋಲೋ, ಬೆಂಗಳೂರಿನ ಬಳಿಯ ಸಿಆರ್‌ಪಿಎಫ್ ಶ್ವಾನ ತರಬೇತಿ ಕೇಂದ್ರದಲ್ಲಿ ಪಳಗಿತ್ತು. ಕಳೆದ ವರ್ಷ ಏಪ್ರಿಲ್‌ನಲ್ಲಿ ಛತ್ತೀಸ್ ಗಢದಲ್ಲಿ ಮಾವೋವಾದಿ ವಿರೋಧಿ ಕಾರ್ಯಾಚರಣೆಗಾಗಿ ಅದನ್ನು ನಿಯೋಜಿಸಲಾಗಿತ್ತು.





## 13 ಎಟಿಎಂ ದೋಚಿದ್ದ ಖದೀಮನಿಗೆ ಪೊಲೀಸರಿಂದ ಗುಂಡೇಟು

**ಬಳ್ಳಾರಿ:** ಎರಡು ಕೊಲೆ ಹಾಗೂ 13 ಎಟಿಎಂ ಕಳ್ಳತನ ಸೇರಿದಂತೆ ಸುಮಾರು 30 ಪ್ರಕರಣಗಗಳಲ್ಲಿ ಭಾಗಿಯಾಗಿದ್ದ ಕುಖ್ಯಾತ ಕಳ್ಳನಿಗೆ ಸಿರುಗುಪ್ಪ ಪೊಲೀಸರು ಗುಂಡೇಟು ನೀಡಿದ್ದಾರೆ. ಆರೋಪಿ ಅಮರೇಶ್ ಗುಂಡೇಟು ತಿಂದ ಆರೋಪಿಯಾಗಿದ್ದಾನೆ.



ಆರೋಪಿಯನ್ನು ಪ್ರಕರಣವೊಂದರ ಸ್ಥಳ ಮಹಜರಿಗೆ ಕರೆದೊಯ್ದಿದ್ದಾಗ ಕಾನ್ಸ್‌ಟೇಬಲ್ ಮೇಲೆ ಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ್ದಾನೆ. ಈ ವೇಳೆ, ಸಿರುಗುಪ್ಪ ಸಿಪಿಐ ಹನುಮಂತಪ್ಪ, ಗಾಳಿಯಲ್ಲಿ ಗುಂಡು ಹಾರಿಸಿ ಎಚ್ಚರಿಕೆ ನೀಡಿದ್ದಾರೆ. ಆರೋಪಿ ಇದನ್ನು ಲೆಕ್ಕಿಸದೇ ಹಲ್ಲೆ ನಡೆಸಿ, ಪರಾರಿಯಾಗಲು ಯತ್ನಿಸಿದ್ದ. ಆಗ ಆತ್ಮರಕ್ಷಣೆಗಾಗಿ ಆರೋಪಿ ಕಾಲಿಗೆ ಗುಂಡು ಹಾರಿಸಿ ಬಂಧಿಸಲಾಗಿದೆ. ಆರೋಪಿ ಅಮರೇಶ್ ಕರ್ನಾಟಕ ಹಾಗೂ ಆಂದ್ರದ ಎರಡೂ ರಾಜ್ಯಗಳಲ್ಲಿ ಕಳ್ಳತನ ಮಾಡುವಾಗ ಕೊಲೆ ಮಾಡಿದ್ದ. ಈತನ ಮೇಲೆ ಎರಡು ಕೊಲೆ, 6 ಡಕಾಯಿತಿ, 13 ಎಟಿಎಂ ಕಳ್ಳತನದಲ್ಲಿ ಭಾಗಿಯಾದ ಆರೋಪಗಳಿವೆ. ಘಟನೆಯಲ್ಲಿ ಪೇದೆ ವಿರೂಪಾಕ್ಷ ಗೌಡ ಹಾಗೂ ಮಾರುತಿಯವರಿಗೆ ಗಾಯಗಳಾಗಿದ್ದು, ಅವರಿಗೆ ಬಳ್ಳಾರಿಯ ಟ್ರಾಮಾ ಕೇರ್ ಸೆಂಟರ್‌ನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

## ಹಂಪಿ ಮೇಲೆ ವಿಶೇಷ ನಿಗಾವಹಿಸಿದ ಕೇಂದ್ರ, ರಾಜ್ಯ ಸರ್ಕಾರ

**ಬಳ್ಳಾರಿ:** ಭಾರತ–ಪಾಕಿಸ್ತಾನ ಗಡಿಯಲ್ಲಿ ಉದ್ವಿಗ್ನ ವಾತಾವರಣ ಹಿನ್ನೆಲೆ ದಕ್ಷಿಣ ಕಾಶಿ, ಯುನೆಸ್ಕೋ ವಿಶ್ವಪಾರಂಪರಿಕ ತಾಣ ಹಂಪಿಯ ಮೇಲೆ ಕೇಂದ್ರ, ರಾಜ್ಯ ಸರ್ಕಾರ ವಿಶೇಷ ನಿಗಾವಹಿಸಿದ್ದು, ಹೆಚ್ಚಿನ ಭದ್ರತೆ ಒದಗಿಸಲಾಗಿದೆ.

ಹಂಪಿಗೆ ಬರುವ ಎಲ್ಲಾ ವಾಹನಗಳ ತಪಾಸಣೆ ಮಾಡಲಾಗುತ್ತಿದ್ದು, ಪ್ರತಿಯೊಬ್ಬ ಪ್ರವಾಸಿಗನ ಪರಿಶೀಲನೆ ನಡೆಸಲಾಗುತ್ತಿದೆ. ಜೊತೆಗೆ ಹಂಪಿಗೆ ಬರುವ ಮಾರ್ಗಗಳಲ್ಲಿ 4 ಚೆಕ್‌ಪೋಸ್ಟ್‌ಗಳನ್ನು ನಿರ್ಮಾಣ ಮಾಡಲಾಗಿದೆ. 24 ಗಂಟೆಗಳ ಕಾಲ ಎರಡು ಚೆಕ್‌ಪೋಸ್ಟ್‌ಗಳು ಕಾರ್ಯ ನಿರ್ವಹಿಸುತ್ತಿದ್ದು, ಕಲ್ಲಿನ ತೇರಿನ ಬಳಿ ಹಗಲು ಹೊತ್ತಿನಲ್ಲಿ ಚೆಕ್‌ಪೋಸ್ಟ್ ಕಾರ್ಯನಿರ್ವಹಿಸುತ್ತಿದೆ.

ಇನ್ನೂ ಪೊಲೀಸರು ಗಸ್ತು ವಾಹನಗಳ ಸಂಖ್ಯೆಯನ್ನು ಹೆಚ್ಚಿಸಿದ್ದು, ತಪಾಸಣೆಗಾಗಿ 4 ಮೆಟಲ್ ಡಿಟೆಕ್ಟರ್ ಅಳವಡಿಸಿದ್ದಾರೆ. ದೇಶ–ವಿದೇಶಗಳಿಂದ ಆಗಮಿಸುವ ಪ್ರವಾಸಿಗರನ್ನು ತಪಾಸಣೆ ಮಾಡುವಂತೆ ಕೇಂದ್ರ, ರಾಜ್ಯ ಸರ್ಕಾರ ಸೂಚನೆ ನೀಡಿದ್ದು, ಹೆಚ್ಚಿನ ಭದ್ರತೆ ನೀಡಲಾಗಿದೆ.





## ಪ್ರಧಾನಿ ಮೋದಿ, ರಫೆಲ್ ಯುದ್ಧ ವಿಮಾನದ ಬಗ್ಗೆ ಅವಹೇಳನಕಾರಿ ಪೋಸ್ಟ್ ಯುವಕ ಅರೆಸ್ಟ್

**ರಾಯಚೂರು:** ಪ್ರಧಾನಿ ನರೇಂದ್ರ ಮೋದಿ ಹಾಗೂ ರಫೆಲ್ ಯುದ್ಧ ವಿಮಾನದ ಬಗ್ಗೆ ಅವಹೇಳನಕಾರಿ ಪೋಸ್ಟ್ ಹಂಚಿಕೊಂಡಿದ್ದ ಹಿನ್ನೆಲೆ ಯುವಕನೋರ್ವನನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ಜಿಲ್ಲೆಯ ಸಿಂಧನೂರು ತಾಲೂಕಿನ ಕೆ.ಹೊಸಳ್ಳಿ ಗ್ರಾಮದ ಯುವಕ ಅಜ್ಮೀರ್ ಎಂದು ಗುರುತಿಸಲಾಗಿದ್ದು, ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿ ಪೋಸ್ಟ್‌ನ್ನು ಹರಿಬಿಟ್ಟಿದ್ದ. ಕುದುರೆ ಗಾಡಿಯೊಂದರ ಮೇಲೆ ಅಳುತ್ತಿರುವ ಪ್ರಧಾನಿ ಮೋದಿಯನ್ನು ಕೂರಿಸಿದ್ದು, ಅದರಲ್ಲಿ ರಫೆಲ್ ಯುದ್ಧ ವಿಮಾನವನ್ನು ತೆಗೆದುಕೊಂಡು ಹೋಗುತ್ತಿರುವ ರೀತಿಯಲ್ಲಿ ಫೋಟೋವನ್ನು ಎಡಿಟ್ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದ. ಜಾಲತಾಣಗಳಲ್ಲಿ ಹರಿದಾಡುತ್ತಿದ್ದಂತೆ ಪೊಲೀಸರು ಅಜ್ಮೀರ್‌ನನ್ನು ಬಂಧಿಸಿದ್ದಾರೆ. ಸದ್ಯ ಈ ಸಂಬಂಧ ತುರವಿಹಾಳ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.



### ಬಾವಿಗೆ ಹಾರಿದ ತಂದೆ, ರಕ್ಷಣೆಗೆ ಹೋದ ಪುತ್ರ

# ಇಬ್ಬರೂ ದುರಂತ ಅಂತ್ಯ

**ಉಡುಪಿ:** ಬಡತನ ಮತ್ತು ಸಾಲದ ಸುಳಿಗೆ ಸಿಲುಕಿ ಮನನೊಂದು ಬಾವಿಗೆ ಹಾರಿದ ಅಪ್ಪನ ಜೊತೆ, ರಕ್ಷಿಸಲು ಹೋದ ಮಗನೂ ಸಾವನ್ನಪ್ಪಿರುವ ಘಟನೆ ಉಡುಪಿಯ ಕೋಟೇಶ್ವರದಲ್ಲಿ ನಡೆದಿದೆ. ಪತಿ ಹಾಗೂ ಮಗನನ್ನು ರಕ್ಷಿಸಲು ಮುಂದಾದ ಪತ್ನಿ ಕೂಡ ಗಂಭೀರ ಸ್ಥಿತಿಯಲ್ಲಿ ಆಸ್ಪತ್ರೆ ಸೇರಿದ್ದಾರೆ.

ಕೋಟೇಶ್ವರದ ಅಂಕದಕಟ್ಟೆ ಪೆಟ್ರೋಲ್ ಬಂಕ್ ನಲ್ಲಿ ಕೆಲಸ ಮಾಡುತ್ತಿದ್ದ ಮಾಧವ ದೇವಾಡಿಗ ಹಲವಾರು ಕಡೆ ಸಾಲ ಮಾಡಿದ್ದರು. ಬಡ್ಡಿ ಕಟ್ಟಲಾರದೆ, ಸಾಲ ಪಡೆದ ಹಣ ತೀರಿಸಲಾಗದೆ ಪರಿತಪಿಸುತ್ತಿದ್ದರು. ಇಂದು ಬೆಳಗಿನ ಜಾವ ಮನೆಯಲ್ಲಿ ಮಲಗಿದ್ದ ಮಾಧವ ದೇವಾಡಿಗ ಬಾವಿಗೆ ಹಾರಿ ಆತ್ಮಹತ್ಯೆ ಯತ್ನಿಸಿದ್ದಾರೆ. ಈ ವಿಚಾರ ತಿಳಿದ ಮಗ ಪ್ರಸಾದ, ತಂದೆಯ ರಕ್ಷಣೆಗಾಗಿ ಬಾವಿಗೆ ಹಾರಿದ್ದಾನೆ. ಇಬ್ಬರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ.

ತಾರಾ ದೇವಾಡಿಗ ಬಾವಿಗೆ ಹಾರಿ ಇಬ್ಬರನ್ನು ರಕ್ಷಣೆ ಮಾಡಲು ಮುಂದಾಗಿದ್ದಾರೆ. ಅಷ್ಟರಲ್ಲಿ ಪತಿ ಮತ್ತು ಮಗ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದರು. ತಾಯಿ ತಾರಾ ದೇವಾಡಿಗ ಅವರಿಗೆ ಈಜು



ಬರುತ್ತಿದ್ದ ಕಾರಣ, ಬಾವಿಯೊಳಗಿದ್ದ ಪೈಪ್ ಮೂಲಕ ರಕ್ಷಣೆ ಪಡೆದಿದ್ದಾರೆ. ಅಕ್ಕಪಕ್ಕದ ಮನೆಯವರು ಕೂಡಲೇ ಅಗ್ನಿಶಾಮಕದಳಕ್ಕೆ ಫೋನ್ ಮಾಡಿದ್ದಾರೆ. ಅಗ್ನಿಶಾಮಕ ದಳದವರು ತಾರಾ ದೇವಾಡಿಗ ಅವರನ್ನು ರಕ್ಷಣೆ ಮಾಡಿದ್ದಾರೆ. ಕೋಟ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸಾಲದ ಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂಬ ಪ್ರಾಥಮಿಕ ವರದಿ ಇದೆ. ಕುಂದಾಪುರ ಸರ್ಕಾರಿ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆದಿದೆ. ಖಾಸಗಿ ಆಸ್ಪತ್ರೆಯಲ್ಲಿ ತಾರಾ ದೇವಾಡಿಗ ಅವರಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಪ್ರಕರಣದ ತನಿಖೆ ಪ್ರಗತಿಯಲ್ಲಿದೆ.





## ಆಪರೇಷನ್ ಸಿಂಧೂರ ಸಕ್ಸಸ್ ಬಿಜೆಪಿಯಿಂದ ಬೃಹತ್ ತಿರಂಗಾ ಯಾತ್ರೆ

**ಬೆಂಗಳೂರು:** ಆಪರೇಷನ್ ಸಿಂಧೂರ ಸಕ್ಸಸ್ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ರಾಜ್ಯ ಬಿಜೆಪಿಯಿಂದ ಬೃಹತ್ ತಿರಂಗಾ ಯಾತ್ರೆ ನಡೆಯಿತು.

ಮಲ್ಲೇಶ್ವರದ ಗುಂಡೂರಾವ್ ಆಟದ ಮೈದಾನದಿಂದ 18ನೇ ಕ್ರಾಸ್ ಆಟದ ಮೈದಾನದ ವರೆಗೆ 1.5 ಕಿ.ಮೀ ಬಿಜೆಪಿ ತಿರಂಗಾ ಯಾತ್ರೆ ನಡೆಸಲಾಯಿತು. ಭಾರತೀಯ ಸೈನಿಕರ ಪರವಾಗಿ ಪಕ್ಷಾತೀತವಾಗಿ ನಡೆಸಿದ ಈ ತಿರಂಗಾ ಯಾತ್ರೆಯಲ್ಲಿ ಸಾವಿರಾರು ಜನ ರಾಷ್ಟ್ರಧ್ವಜ ಹಿಡಿದು ಭಾಗವಹಿಸುವ ಮೂಲಕ ದೇಶಾಭಿಮಾನ ಮೆರೆದರು.

ತಿರಂಗಾ ಯಾತ್ರೆ ವೇಳೆ 9 ಅಡಿ ಅಗಲ, 1,500 ಅಡಿ ಉದ್ದದ ರಾಷ್ಟ್ರಧ್ವಜದ ಮೆರವಣಿಗೆ ನಡೆಸಲಾಯಿತು. ಮಲ್ಲೇಶ್ವರದ 18 ನೇ ಕ್ರಾಸ್ ಆಟದ ಮೈದಾನ ಮುಟ್ಟಿದ ಬಳಿಕ 205 ಅಡಿ ಅಗಲ, 630 ಅಡಿ ಉದ್ದದ ಮತ್ತೊಂದು ಬೃಹತ್ ರಾಷ್ಟ್ರಧ್ವಜದ ಪ್ರದರ್ಶನ ನಡೆಯಿತು. ಈ ಧ್ವಜದ ಸುತ್ತಲೂ ಮೆರವಣಿಗೆ ನಡೆಸಿದ ಅತೀ ಉದ್ದದ ರಾಷ್ಟ್ರಧ್ವಜ ಹಿಡಿದು ನಿಂತ ವಿದ್ಯಾರ್ಥಿಗಳ ಪರೇಡ್ ಬಹಳ ಆಕರ್ಷಣೀಯವಾಗಿತ್ತು. ಪ್ರಚಾರ ವಾಹನಕ್ಕೆ ಅಳವಡಿಸಿದ್ದ ಸೈನಿಕ ವೇಷಧಾರಿಯಾಗಿ ಕೈಯಲ್ಲಿ ಬಂದೂಕು ಹಿಡಿದು ನಿಂತಿರುವ ಮೋದಿ ಕಟೌಟ್ ಎಲ್ಲರ ಗಮನ ಸೆಳೆಯಿತು. ಬಿಜೆಪಿ ನಾಯಕರಾದ ಬಿಜೆಪಿ ರಾಜ್ಯ ಉಸ್ತುವಾರಿ ರಾಧಾ ಮೋಹನ ದಾಸ್ ಅಗರವಾಲ್, ಅಶೋಕ್, ಅಶ್ವಥ್ ನಾರಾಯಣ್, ಸಿಟಿ ರವಿ, ಮುನಿರತ್ನ, ಬೈರತಿ ಬಸವರಾಜು, ಗೋಪಾಲಯ್ಯ, ಮುನಿಸ್ವಾಮಿ ಮತ್ತಿತರರು ಹೆಜ್ಜೆ ಹಾಕಿದರು. ಮಾಜಿ ಸೈನಿಕರು, ಪ್ರಮುಖ ಗಣ್ಯರು, ವಿದ್ಯಾರ್ಥಿಗಳು, ವಿವಿಧ ಸಂಘಟನೆಗಳ ಸದಸ್ಯರು, ನಾಗರಿಕ ಸಮಿತಿ ಸದಸ್ಯರು, ಸಾರ್ವಜನಿಕರು ಪಾಲ್ಗೊಂಡಿದ್ದರು.

## ಭಾರತ-ಅಫ್ಘಾನಿಸ್ತಾನದ ಸಂಬಂಧ ಹಾಳು ಮಾಡಲು ಪಾಕ್‌ಗೆ ಬಿಡೋದಿಲ್ಲ

ಲಷ್ಕರ್–ಎ–ತೊಯ್ಬಾ (ಎಲ್‌ಇಟಿ) ಮತ್ತು ಜೈಶ್–ಎ–ಮೊಹಮ್ಮದ್ (ಜೆಇಎಂ) ನಂತಹ ಗುಂಪುಗಳು ಸೇರಿದಂತೆ ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಗೆ ಅಫ್ಘಾನ್ ಪ್ರದೇಶವನ್ನು ಬಳಸದಂತೆ ತಡೆಯಲು ತಾಲಿಬಾನ್ ಬದ್ಧವಾಗಿದೆ ಎಂದು ಮೂಲಗಳು ತಿಳಿಸಿವೆ. ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ಆಪರೇಷನ್ ಸಿಂಧೂರ್ ಸಮಯದಲ್ಲಿ ಪಾಕಿಸ್ತಾನ ಸೃಷ್ಟಿಸಿದ ಅಂತರವನ್ನು ಕಡಿಮೆ ಮಾಡುವ ಗುರಿಯನ್ನು ಈ ಚರ್ಚೆಗಳು ಹೊಂದಿದ್ದವು. ಪಾಕಿಸ್ತಾನವು ತಮ್ಮ ದೇಶಗಳ ನಡುವೆ ಭಿನ್ನಾಭಿಪ್ರಾಯಗಳನ್ನು ಸೃಷ್ಟಿಸಲು ಬಿಡುವುದಿಲ್ಲ ಎಂದು ಇಬ್ಬರೂ ನಾಯಕರು ಪರಸ್ಪರ ಭರವಸೆ ನೀಡಿದರು.

ಭಾರತೀಯ ಕ್ಷಿಪಣಿ ಅಫ್ಘಾನಿಸ್ತಾನವನ್ನು ಹೊಡೆದುರುಳಿಸಿದೆ ಎಂಬ ಪಾಕಿಸ್ತಾನದ ಹೇಳಿಕೆಯ ನಂತರ, ಕಾಬೂಲ್ ಅವುಗಳನ್ನು ಸುಳ್ಳು ಎಂದು ನಿರಾಕರಿಸಿದೆ. ಪಾಕಿಸ್ತಾನದ ಆರೋಪಗಳು ಆಧಾರರಹಿತ ಎಂದು ಅಫ್ಘಾನ್ ರಕ್ಷಣಾ ಸಚಿವಾಲಯದ ವಕ್ತಾರ ಎನ್ನೈತುಲ್ಲಾ ಖವರ್ಜ್ಮಿ ಹೇಳಿದ್ದಾರೆ.

ಅಫ್ಘಾನಿಸ್ತಾನ ಸುರಕ್ಷಿತ ಮತ್ತು ಸುಭದ್ರವಾಗಿದೆ. ಅಂತಹ ಯಾವುದೇ ಘಟನೆ ನಡೆದಿಲ್ಲ ಎಂದು ಅಫ್ಘಾನ್ ರಕ್ಷಣಾ ಸಚಿವಾಲಯದ ವಕ್ತಾರರನ್ನು ಉಲ್ಲೇಖಿಸಿ ಖಾಮಾ ಪ್ರೆಸ್ ವರದಿ ಮಾಡಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಖಂಡಿಸಿದ್ದಕ್ಕಾಗಿ ಅವರಿಗೆ ಧನ್ಯವಾದಗಳು. ಅಫ್ಘಾನಿಸ್ತಾನದ ಜನರೊಂದಿಗೆ ನಮ್ಮ ಸಾಂಪ್ರದಾಯಿಕ ಸ್ನೇಹ ಮತ್ತು ಅವರ ಅಭಿವೃದ್ಧಿ ಅಗತ್ಯಗಳಿಗೆ ನಿರಂತರ ಬೆಂಬಲದ ಕುರಿತು ಮಾತುಕತೆ ನಡೆಸಲಾಯಿತು. ಉಭಯ ದೇಶಗಳ ಸಹಕಾರವನ್ನು ಮುಂದಕ್ಕೆ ಕೊಂಡೊಯ್ಯುವ ಮಾರ್ಗಗಳು ಮತ್ತು ವಿಧಾನಗಳ ಕುರಿತು ಚರ್ಚಿಸಲಾಯಿತು ಮುತ್ತಕಿ ಎಂದು ಬರೆದುಕೊಂಡಿದ್ದಾರೆ.

## ಮಾಜಿ ಸೈನಿಕನ ಹತ್ಯೆ

ಇತ್ತ ಪತಿಯನ್ನ ಕೊಂದಿದ್ದ ಮಾಯಾದೇವಿ ಠಾಣೆಗೆ ಬಂದು ನಾಪತ್ತೆ ಆಗಿದ್ದಾರೆಂದು ದೂರು ನೀಡಿದ್ದಳು. ದೂರಿನ ಅನ್ವಯ ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ಶುರು ಮಾಡಿದ್ದರು. ಪ್ರಾಥಮಿಕ ವಿಚಾರಣೆ ವೇಳೆ ಮಾಯಾದೇವಿ, ನನ್ನ ಪತಿ ಮಗಳನ್ನು ಕರೆದುಕೊಂಡು ಬರಲು ಬಿಹಾರದ ಬಕ್ಸಾರ್ ರೈಲ್ವೆ ನಿಲ್ದಾಣಕ್ಕೆ ಹೋಗಿದ್ದರು, ವಾಪಸ್ ಮನೆಗೆ ಬರಲಿಲ್ಲ. ಅವರ ಫೋನ್ ಕೂಡ ಸ್ವಿಚ್ ಆಫ್ ಆಗಿದೆ ಅಂತ ಕಥೆ ಕಟ್ಟಿದ್ದಳು. ಆದ್ರೆ, ಮೃತದೇಹ ಪತ್ತೆಯಾದ ನಂತರ ಅನುಮಾನಗೊಂಡ ಪೊಲೀಸರು ಮತ್ತೆ ಪತ್ನಿಯನ್ನ ವಿಚಾರಣೆಗೆ ಒಳಪಡಿಸಿದಾಗ ನಾಟಕ ಬಯಲಾಯಿತು.

ಪ್ರಿಯಕರನೊಂದಿಗೆ ಸೇರಿ ಕೊಲೆ ಮಾಡಿದ್ದಲ್ಲದೇ ಪತಿಯ ತಲೆಯನ್ನ ಘಾಘರ್ ನದಿಯಲ್ಲಿ ಎಸೆದಿದ್ದಾಗಿ ಒಪ್ಪಿಕೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಕರಣ ಸಂಬಂಧ ತನಿಖೆ ಮುಂದುವರಿದಿದೆ.

## ಎಲ್ಲೆಲ್ಲಿ ಹಾದುಹೋಗಲಿದೆ ಬೆಂಗಳೂರು

**ಮೊದಲನೇ ಪುಟದಿಂದ...**

## ತುಮಕೂರು ಮೆಟ್ರೋ?

ಮಾದಾವರ ನಿಲ್ದಾಣದಿಂದ ಮಾಕಳಿ, ದಾಸನಪುರ, ನೆಲಮಂಗಲ, ವೀವರ್ ಕಾಲೋನಿ, ನೆಲಮಂಗಲ ವಿಶ್ವೇಶ್ವರಪುರ, ನೆಲಮಂಗಲ ಟೋಲ್ ಗೇಟ್, ಬೂದಿಹಾಳ್, ಟಿ.ಬೇಗೂರು, ತಿಪ್ಪಗೊಂಡನಹಳ್ಳಿ, ಕುಲವನಹಳ್ಳಿ, ಮಹಿಮಾಪುರ, ಬಿಲ್ಲನಕೋಟೆ, ಸೋಂಪುರ ಕೈಗಾರಿಕಾ ಪ್ರದೇಶ, ದಾಬಸ್‌ಪೇಟೆ, ನಲ್ಲಯನಪಾಳ್ಯ ಚಿಕ್ಕಹಳ್ಳಿ, ಹಿರೇಹಳ್ಳಿ ಕೈಗಾರಿಕಾ ಪ್ರದೇಶ, ಪಂಡಿತನಹಳ್ಳಿ ಕ್ಯಾತ್ಸಂದ್ರ ಬೈಪಾಸ್, ಕ್ಯಾತ್ಸಂದ್ರ, ಎಸ್‌ಐಟಿ, ತುಮಕೂರು ಬಸ್ ನಿಲ್ದಾಣ, ಟೂಡಾ ಲೇಔಟ್ ಹಾಗೂ ನಾಗಣ್ಣನ ಪಾಳ್ಯಕ್ಕೆ ಕೊನೆಗೊಂಡು ಶಿರಾ ಗೇಟ್ ವರೆಗೆ ಈ ಮಾರ್ಗ ಹಾದು ಹೋಗಲಿದೆ. ಇದರಿಂದ ತುಮಕೂರು ರಸ್ತೆಯ ಅಸಂಖ್ಯಾತ ಪ್ರಯಾಣಿಕರಿಗೆ ಪ್ರಯೋಜನವಾಗಲಿದೆ.

ಒಟ್ಟಿನಲ್ಲಿ ಬೆಂಗಳೂರು ತುಮಕೂರು ಮೆಟ್ರೋ ಮಾರ್ಗದ ಕಾರ್ಯಸಾಧ್ಯತಾ ಪರೀಕ್ಷೆಯ ವರದಿಯನ್ನು ಬಿಎಂಆರ್‌ಸಿಎಲ್ ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ್ದು, ಸದ್ಯದಲ್ಲೇ ರಾಜ್ಯ ಸರ್ಕಾರವು ಗ್ರೀನ್ ಸಿಗ್ನಲ್ ನೀಡುವ ಸಾಧ್ಯತೆಯಿದೆ. ಅದಾದ ನಂತರ ಕೇಂದ್ರದ ಅನುಮೋದನೆ ದೊರೆಯಬೇಕಾಗುತ್ತದೆ. ಅಂತಿಮವಾಗಿ ಕೇಂದ್ರ, ಸರ್ಕಾರ ಒಪ್ಪಿಗೆ ನೀಡುವುದಷ್ಟೆ ಬಾಕಿ.

## ಹೊನ್ನಾವರ ರೈತರಿಂದ ಪಾಕ್‌ಗೆ ರಫ್ತಾಗುತ್ತಿದ್ದ ವೀಳ್ಯದೆಲೆ ನಿರ್ಬಂಧ

ಹಾಗಾಗಿಯೇ ಇಲ್ಲಿನ ರೈತರು ಪ್ರತಿ ಎಕರೆಗೆ ಕನಿಷ್ಠ 3 ಲಕ್ಷ ರೂ.ನಷ್ಟು ಲಾಭ ಗಳಿಸುತ್ತಿದ್ದರು. ಇದೀಗ ರೈತರ ಈ ನಿರ್ಧಾರದಿಂದ ಒಂದು ಎಲೆ 3 ರೂ. 30 ಪೈಸೆಗೆ ಕುಸಿದಿದೆ.

ಸದ್ಯ ಕೋಲ್ಕತ್ತಾ, ಉತ್ತರ ಪ್ರದೇಶ ಮಾರುಕಟ್ಟೆಗಳಿಗೆ ಮಾತ್ರ ಎಲೆಯನ್ನ ಸರಬರಾಜು ಮಾಡಲಾಗುತ್ತಿದೆ. ಇತ್ತ ದೆಹಲಿ ವರ್ತಕರ ಜೊತೆಗೆ ಪಾಕಿಸ್ತಾನಕ್ಕೆ ರಫ್ತು ಮಾಡುವ ದಳ್ಳಾಳಿಗಳಿಗೂ ಶಾಶ್ವತ ನಿರ್ಬಂಧ ಹೇರಿದ್ದಾರೆ.

## ಅಂಗಾಂಗ ದಾನ ಧಾರವಾಡ ಜಿಲ್ಲೆಗೆ ದೇಶದಲ್ಲೇ 2ನೇ ಸ್ಥಾನ

ವೆಬ್‌ಸೈಟ್ ನಲ್ಲಿ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳುವವರು, ''ಒಂದು ವೇಳೆ ಮೆದುಳು ನಿಷ್ಕ್ರಿಯಗೊಂಡರೆ ನಾನು ನನ್ನ ಅಂಗಾಂಗ ಹಾಗೂ ಅಂಗಾಂಶಗಳನ್ನು ದಾನ ಮಾಡಲು ಸಿದ್ಧನಿದ್ದೇನೆ'' ಎಂದು ವಾಗ್ದಾನ ಮಾಡಬೇಕಾಗುತ್ತದೆ. ಒಂದು ವೇಳೆ ಹಾಗೇನಾದರೂ ಮೆದುಳು ನಿಷ್ಕ್ರಿಯಗೊಂಡರೆ ಆ ವ್ಯಕ್ತಿಯ ವಿವಿಧ ಅಂಗಾಂಶ ಹಾಗೂ ಅಂಗಾಂಗಳನ್ನು ಅಗತ್ಯವಿರುವ ವ್ಯಕ್ತಿಗೆ ನೀಡಿ ಕಸಿ ಮಾಡಿ ಆತನನ್ನು ಬದುಕಿಸಬಹುದಾಗಿದೆ.

ಧಾರವಾಡದಲ್ಲಿ 8,177 ಮಂದಿಯಿಂದ ಅಂಗಾಂಗ ದಾನಕ್ಕೆ ನೋಂದಣಿ ಏಪ್ರಿಲ್ ತಿಂಗಳ ಅಂತ್ಯದವರೆಗೆ ಕರ್ನಾಟಕದಲ್ಲಿ 35,868 ಜನರು ಅಂಗಾಂಗ ದಾನಕ್ಕೆ ಒಪ್ಪಿ, ಸ್ವಯಂಪ್ರೇರಿತವಾಗಿ ನೋಂದಣಿ ಮಾಡಿಸಿದ್ದಾರೆ. ಅದರಲ್ಲಿ ಧಾರವಾಡ ಜಿಲ್ಲೆಯ 8,177 ಜನರು ಅಂಗಾಂಗ ಹಾಗೂ ಅಂಗಾಂಶಗಳ ದಾನಕ್ಕೆ ನೋಂದಣಿ ಮಾಡಿಸಿದ್ದಾರೆ. ಇದರಿಂದಾಗಿ ಧಾರವಾಡ ಜಿಲ್ಲೆ ದೇಶದಲ್ಲೇ ಎರಡನೆಯ ಜಿಲ್ಲೆಯಾಗಿದ್ದರೆ, ರಾಜ್ಯದಲ್ಲಿ ಮೊದಲ ಸ್ಥಾನದಲ್ಲಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್. ಎಂ. ಹೊನಕೇರಿ ತಿಳಿಸಿದ್ದಾರೆ.

ಆರೋಗ್ಯ ಇಲಾಖೆಯಿಂದ ಅಂಗಾಂಗ ದಾನದ ಬಗ್ಗೆ ಜಾಗೃತಿ ಕಾರ್ಯಕ್ರಮ

ಅಂಗಾಂಗ ದಾನದ ಬಗ್ಗೆ ಆನ್‌ಲೈನ್‌ನಲ್ಲಿಯೂ ನೋಂದಣಿ ಮಾಡಬಹುದು ಎಂಬುದು ಅನೇಕರಿಗೆ ಗೊತ್ತಿಲ್ಲ. ಆದರೆ, ಧಾರವಾಡ ಜಿಲ್ಲೆಯಲ್ಲಿ ಆರೋಗ್ಯ ಇಲಾಖೆ ಈ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಿದೆ. ಜತೆಗೆ ಗ್ರಾಮೀಣ ಪ್ರದೇಶಗಳಲ್ಲಿ ಜಾಥಾ, ಆಶಾ ಕಾರ್ಯಕರ್ತರು, ತಾಲೂಕು ಮಟ್ಟದ ಅಧಿಕಾರಿಗಳ ಶ್ರಮದಿಂದಾಗಿ ಈ ಸಾಧನೆ ಮಾಡಲು ಸಾಧ್ಯವಾಗಿದೆ.

ಒಟ್ಟಿನಲ್ಲಿ ದೇಶ ಹಾಗೂ ರಾಜ್ಯಮಟ್ಟದಲ್ಲಿ ಇದೀಗ ಧಾರವಾಡ ಜಿಲ್ಲೆ ಅಂಗಾಂಗ ಹಾಗೂ ಅಂಗಾಂಶ ದಾನದಲ್ಲಿ ಬಹಳ ಎತ್ತರದ ಸ್ಥಾನದಲ್ಲಿರೋದು ಹೆಮ್ಮೆಯ ಸಂಗತಿಯೇ ಸರಿ.

## 327 ಕೋಟಿ ವೆಚ್ಚದ ನವಲಗುಂದ ಬೈಪಾಸ್ ರಸ್ತೆ ಕಾಮಗಾರಿಗೆ ಕೇಂದ್ರ ಅಸ್ತು

ರಾಜ್ಯ ಸರ್ಕಾರ ಟೆಂಡರ್ ಕರೆದು ಕಾರ್ಯಾರಂಭ ಮಾಡುವ ಹಂತ ತಲುಪಿದೆ ಎಂದು ತಿಳಿಸಿದ್ದಾರೆ.

ಈ ಬೈಪಾಸ್ ಸಂಬಂಧ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯಕ್ಕೆ ಸಲ್ಲಿಸಿದ್ದ ಜೋಡಣೆ ಮತ್ತು ಡಿಪಿಆರ್(ವಿವರವಾದ ಯೋಜನಾ ವರದಿ) ಅನ್ನು ಅಲೈನ್‌ಮೆಂಟ್ ಅಪ್ರೂವಲ್ ಕಮಿಟಿ ಅನುಮೋದನೆ ನೀಡಿದೆ. ನವಲಗುಂದ ಪಟ್ಟಣಕ್ಕೆ 10.575 ಕಿ.ಮೀ. ವಿಸ್ತೀರ್ಣದ ಬೈಪಾಸ್ ರಸ್ತೆ ನಿರ್ಮಾಣವಾಗಲಿದೆ ಎಂದು ಹೇಳಿದ್ದಾರೆ.

ಬೆಣ್ಣೆಹಳ್ಳ ಮತ್ತು ಅದನ್ನು ಸೇರುವ ಸಣ್ಣ ನಾಲಾಗಳು ಮಳೆಗಾಲದಲ್ಲಿ ತುಂಬಿ ಹರಿದು ಪ್ರವಾಹ ಪರಿಸ್ಥಿತಿ ಎದುರಾಗುತ್ತಿತ್ತು. ಇದರಿಂದ ಅಪಾರ ಕೃಷಿ ಭೂಮಿಯಲ್ಲಿ ಬೆಳೆ ಹಾನಿ ಸಂಭವಿಸುತ್ತಿತ್ತು ಮತ್ತು ಅನೇಕ ಕಡೆ ಸಂಪರ್ಕ ಕಡಿತಗೊಳ್ಳುತ್ತಿತ್ತು. ಇದನ್ನೆಲ್ಲ ಗಮನಿಸಿ ಶಾಶ್ವತ ಪರಿಹಾರ ಎನ್ನುವಂತೆ ಬೈಪಾಸ್ ರಸ್ತೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರದ ಮಟ್ಟದಲ್ಲಿ ನಡೆಸಿದ ಪ್ರಯತ್ನಕ್ಕೆ ಇದೀಗ ಫಲ ಸಿಕ್ಕಿದೆ. ಅಲೈನ್‌ಮೆಂಟ್ ಅಪ್ರೂವಲ್ ಕಮಿಟಿ ಅನುಮತಿ ನೀಡಿದೆ ಎಂದು ಸಚಿವ ಜೋಶಿ ತಿಳಿಸಿದ್ದಾರೆ.

ಹೆದ್ದಾರಿಯು ನವಲಗುಂದ ಪಟ್ಟಣದ ಮಧ್ಯ ಭಾಗದಿಂದ ಹಾದು ಹೋಗುವ ಕಾರಣ ಟ್ರಾಫಿಕ್ ಸಮಸ್ಯೆಗಳಿಂದಾಗಿ ಪಟ್ಟಣಿಗರು ರೋಸಿ ಹೋಗಿದ್ದರು. ಹೀಗಾಗಿ ಬೈಪಾಸ್ ರಸ್ತೆ ನಿರ್ಮಾಣಕ್ಕೆ ಬಹು ವರ್ಷಗಳಿಂದಲೂ ಇದ್ದ ಬೇಡಿಕೆಗೆ ಪ್ರಧಾನಿ ನರೇಂದ್ರ, ಮೋದಿ ಅವರ ಮಾರ್ಗದರ್ಶನದಂತೆ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಸ್ಪಂದಿಸಿದ್ದಾರೆ. ಈ ಮೂಲಕ ಜನರ ಆಶಯ ಸಾಕಾರಗೊಂಡಿದೆ ಎಂದು ಸಚಿವರು ಸಂತಸ ವ್ಯಕ್ತಪಡಿಸಿದ್ದಾರೆ.

ಉತ್ತರ ಕರ್ನಾಟಕದ ಆರಾಧ್ಯ ದೈವ ಸವದತ್ತಿ ಯಲ್ಲಮ್ಮ ದೇವಸ್ಥಾನ




ಸೇರಿದಂತೆ ವಿವಿಧ ಐತಿಹಾಸಿಕ, ಧಾರ್ಮಿಕ ನಗರಗಳಿಗೆ ಸಂಪರ್ಕ ಜೋಡಿಸುತ್ತದೆ ನವಲಗುಂದ ಪಟ್ಟಣ. ಹೀಗಾಗಿ ಈ ಮೂಲಕ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ದಟ್ಟಣೆ ಅಧಿಕವಾಗಿರುತ್ತದೆ. ಬೈಪಾಸ್ ರಸ್ತೆ ನಿರ್ಮಾಣದಿಂದ ಪ್ರಯಾಣಿಕರು ಮತ್ತು ಸ್ಥಳೀಯ ನಿವಾಸಿಗಳಿಗೂ ಅನುಕೂಲವಾಗಲಿದೆ ಎಂದಿದ್ದಾರೆ.

ಕಳೆದ 10 ವರ್ಷಗಳ ಅವಧಿಯಲ್ಲಿ ಧಾರವಾಡ ಲೋಕಸಭಾ ಕ್ಷೇತ್ರದ ಸಂಪೂರ್ಣ ಚಿತ್ರಣವೇ ಬದಲಾಗಿದೆ. ಆ ಮಟ್ಟದ ಅಭಿವೃದ್ಧಿ ಕಾರ್ಯಗಳನ್ನು ನಡೆಸಲಾಗಿದೆ. ಪ್ರಧಾನಿ ನರೇಂದ್ರ, ಮೋದಿ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಹೆದ್ದಾರಿಗಳ ಅಭಿವೃದ್ಧಿಗೆ ಸದಾ ಅಗತ್ಯ ನೆರವು ನೀಡುತ್ತಿದ್ದಾರೆಂದು ಈರ್ವರಿಗೂ ಜೋಶಿ ಅಭಿನಂದನೆ ಸಲ್ಲಿಸಿದ್ದಾರೆ.

ಶೀಘ್ರ ಕಾಮಗಾರಿಗೆ ಒತ್ತಾಯ:

ನವಲಗುಂದ ಬೈಪಾಸ್ ನಿರ್ಮಾಣ ಸಂಬಂಧ ಈಗಾಗಲೇ ಡಿಪಿಆರ್ ಸಿದ್ಧಗೊಂಡಿದ್ದು, ರಾಜ್ಯ ಸರ್ಕಾರ ಶೀಘ್ರವೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿಗಳಿಗೆ ತ್ವರಿತ ಚಾಲನೆ ನೀಡಬೇಕೆಂದು ಜೋಶಿ ಒತ್ತಾಯಿಸಿದ್ದಾರೆ.

# ಪರಿಶಿಷ್ಟ ಜಾತಿ ಒಳಮೀಸಲಾತಿ ಸಮೀಕ್ಷೆ ಪ್ರಗತಿ ಪರಿಶೀಲನೆ

**ಚಾಮರಾಜನಗರ:** ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಜಾರಿ ಸಂಬಂಧ ಉಪವರ್ಗೀಕರಣ ಕೈಗೊಳ್ಳಲು ಅವಶ್ಯವಿರುವ ದತ್ತಾಂಶ ಸಂಗ್ರಹಕ್ಕಾಗಿ ನಡೆಸಲಾಗುತ್ತಿರುವ ಸಮೀಕ್ಷೆಯ ಕುರಿತ ಪ್ರಗತಿ ಪರಿಶೀಲನೆಯು ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಮೇಜರ್ ಪಿ. ಮಣಿವಣ್ಣನ್ ಅವರ ಸಮ್ಮುಖದಲ್ಲಿ ಇಂದು ನಡೆಯಿತು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮೀಕ್ಷೆ ಸಂಬಂಧ ಪ್ರಗತಿಯ ವಿವರವನ್ನು ಪರಾಮರ್ಶಿಸಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಸಮೀಕ್ಷಾ ಕಾರ್ಯ ಸಂಬಂಧ ಕೈಗೊಳ್ಳಲಾಗಿರುವ ಕ್ರಮಗಳು ಹಾಗೂ ಈವರೆಗಿನ ಪ್ರಗತಿ ಕುರಿತು ಮಾಹಿತಿ ಪಡೆದರು.

ಸಮಾಜ ಕಲ್ಯಾಣ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಮೇಜರ್ ಪಿ. ಮಣಿವಣ್ಣನ್ ಅವರು ಮಾತನಾಡಿ ಚಾಮರಾಜನಗರ ಜಿಲ್ಲೆಗೆ ಇಂದು ಆಗಮಿಸಿ ನಾನೂ ಸಹ ಸಮೀಕ್ಷೆ ಕಾರ್ಯ ನಡೆಸುತ್ತಿರುವ ಸ್ಥಳಕ್ಕೆ ಖುದ್ದು ಭೇಟಿ



ಪರಿಶೀಲಿಸಿದ್ದೇನೆ. ಯಾವುದೇ ಸಮಸ್ಯೆ ಕಂಡುಬಂದಿಲ್ಲ. ಸಮೀಕ್ಷೆ ಸುಗಮವಾಗಿ ನಡೆಯುತ್ತಿದೆ ಎಂದರು.

ರಾಜ್ಯದಲ್ಲಿ ಈಗಾಗಲೇ 17 ಲಕ್ಷ ಪರಿಶಿಷ್ಟ ಜಾತಿಯ ಮನೆಗಳಿಗೆ ಭೇಟಿ ನೀಡಿ ಸಮೀಕ್ಷೆ ನಡೆಸಲಾಗಿದೆ. ಒಟ್ಟಾರೆ 22 ಲಕ್ಷ ಪರಿಶಿಷ್ಟ ಜಾತಿಯವರ ಮನೆಗಳು ಇರಬಹುದೆಂದು ಅಂದಾಜಿಸಲಾಗಿದೆ. ಇನ್ನು ಒಂದುವಾರದಲ್ಲಿ ಸಮೀಕ್ಷೆ ಪೂರ್ಣವಾಗಲಿದೆ ಎಂದರು.

ಸಮೀಕ್ಷೆ ಸಂಬಂಧ ಯಾವುದೇ ಮಾಹಿತಿ ಸಂದೇಹಗಳಿದ್ದಲ್ಲಿ ಸಹಾಯವಾಣಿ ಸಂಪರ್ಕಿಸಬಹುದು. ಜಿಲ್ಲೆಯಲ್ಲಿಯೂ ಸಹಾಯವಾಣಿ ಲಭ್ಯವಿದೆ. ರಾಜ್ಯಮಟ್ಟದಲ್ಲಿಯೂ ಸಹಾಯವಾಣಿ ಸಂಖ್ಯೆ 9481359000 ಇದ್ದು 24★7 ಅವಧಿಯಲ್ಲಿಯೂ ಕಾರ್ಯನಿರ್ವಹಿಸಲಿದೆ. ಯಾವುದೇ ಸಮಯದಲ್ಲಿ ಸಹಾಯವಾಣಿಗೆ ಕರೆ ಮಾಡಿದರೆ ಸ್ವೀಕರಿಸಿ ಸ್ಪಂದಿಸಲಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಮೇಜರ್ ಪಿ. ಮಣಿವಣ್ಣನ್ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ ಸಮೀಕ್ಷೆ ನಡೆಯುತ್ತಿರುವ ಸ್ಥಳಗಳಿಗೆ ತಾವು ಸಹ ಭೇಟಿ ನೀಡಿ ಪರಿಶೀಲಿಸಿದ್ದೇನೆ. ಶಿಕ್ಷಕರು ಗಣತಿದಾರರಾಗಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅಧಿಕಾರಿಗಳು ಮೇಲ್ವಿಚಾರಣೆ ಮಾಡುತ್ತಿದ್ದು ಸಮೀಕ್ಷೆ ಕಾರ್ಯದಲ್ಲಿ ಮಾರ್ಗದರ್ಶನ ಮಾಡುತ್ತಿದ್ದಾರೆ ಎಂದರು.

ಸಭೆಗೆ ವಿವರ ನೀಡಿದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಮುನಿರಾಜು ಅವರು ಜಿಲ್ಲೆಯಲ್ಲಿ 1,135 ಗಣತಿದಾರರು ಸಮೀಕ್ಷೆ ನಡೆಸುತ್ತಿದ್ದಾರೆ. ಜಿಲ್ಲೆಯಲ್ಲಿ 58,485 ಪರಿಶಿಷ್ಟ ಜಾತಿಯವರ ಕುಟುಂಬಗಳಿವೆ. 1,86,389 ಪರಿಶಿಷ್ಟಜಾತಿಯಲ್ಲದವರ ಕುಂಟುಂಬಗಳಿವೆ. ಈಗಾಗಲೇ 39,791 ಪರಿಶಿಷ್ಟ ಜಾತಿಯವರ ಮನೆಗಳ ಸರ್ವೆ ಕಾರ್ಯ ಪೂರ್ಣವಾಗಿದೆ. 1,56,528 ಪರಿಶಿಷ್ಟಜಾತಿಯಲ್ಲದವರ ಮನೆಗಳ ಭೇಟಿ ಕಾರ್ಯ ಪೂರ್ಣವಾಗಿದೆ. ಒಟ್ಟಾರೆ ಶೇ. 68ರಷ್ಟು ಸಮೀಕ್ಷಾ ಕಾರ್ಯ ಮುಗಿದಿದೆ. ನಿಗದಿತ ವೇಳೆಗೆ ಶೇ. 100ರಷ್ಟು ಸರ್ವೆ ಕಾರ್ಯ ಪೂರ್ಣವಾಗಲಿದೆ ಎಂದರು.

ಶಾಸಕರಾದ ಹೆಚ್.ಎಂ. ಗಣೇಶ್ ಪ್ರಸಾದ್, ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ನಗರಸಭೆ ಅಧ್ಯಕ್ಷರಾದ ಸುರೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

ಸಭೆಗೂ ಮೊದಲು ಸಮಾಜ ಕಲ್ಯಾಣ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಮೇಜರ್ ಪಿ. ಮಣಿವಣ್ಣನ್ ಅವರು ಕೊಳ್ಳೇಗಾಲ ತಾಲೂಕಿನ ಸತ್ತೇಗಾಲ, ಇತರೆ ಭಾಗಗಳಿಗೆ ಭೇಟಿ ನೀಡಿ ಸಮೀಕ್ಷಾ ಕಾರ್ಯವನ್ನು ಖುದ್ದು ವೀಕ್ಷಿಸಿದರು.

## ವಿದ್ಯಾವಾರಿಧಿ ಶಾಲೆಯ ಸಾಧನೆ ಪ್ರಶಂಸಿಸಿದ ಸಚಿವ ಪರಮೇಶ್ವರ್

**ಹುಳಿಯಾರು:** ಶೈಕ್ಷಣಿಕ ಕ್ಷೇತ್ರದಲ್ಲಿ ಹುಳಿಯಾರಿನ ವಿದ್ಯಾವಾರಿಧಿ ಇಂಟರ್ ನ್ಯಾಷನಲ್ ಸ್ಕೂಲ್ ಹಾಗೂ ಕಾಲೇಜು ಇತ್ತೀಚಿನ ದಿನಗಳಲ್ಲಿ ಮಾಡುತ್ತಿರುವ ಸಾಧನೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ಅವರು ಮುಕ್ತ ಕಂಠದಿಂದ ಪ್ರಶಂಸಿಸಿದರು. ಹುಳಿಯಾರಿನ ಇಂದಿರಾ ಕ್ಯಾಂಟಿನ್ ಉದ್ಘಾಟನಾ ಸಂದರ್ಭದಲ್ಲಿ ಹಾಗೂ ವಿದ್ಯಾವಾರಿಧಿ ಇಂಟರ್ ನ್ಯಾಷನಲ್ ಸ್ಕೂಲ್‌ಗೆ ಭೇಟಿ ನೀಡಿದ ಸಂದರ್ಭದಲ್ಲೂ ಸಹ ಫಲಿತಾಂಶದ ಬಗ್ಗೆ ಮೆಚ್ಚುಗೆಯ ಮಾತಾಡಿದರು. ಸಿಬಿಎಸ್‌ಸಿ ಪಠ್ಯಕ್ರಮದ 10 ನೇ ತರಗತಿ ಪರೀಕ್ಷೆಯಲ್ಲಿ ಈ ಹಿಂದೆ ಈ ಶಾಲೆಯ ವಿದ್ಯಾರ್ಥಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿರುವುದು ಹಾಗೂ ಪ್ರಸಕ್ತ ಸಾಲಿನ ಪಿಯುಸಿಯಲ್ಲಿ ವಿಜ್ಞಾನ ವಿಷಯದಲ್ಲಿ ಜಿಲ್ಲೆಗೆ ಮೊದಲ ರ್‍ಯಾಂಕ್ ಬಂದಿರುವುದು ಕೇಳಿ ಅಚ್ಚರಿಯಾಯಿತು. ನಾನೂ ಸಹ ಶಿಕ್ಷಣ ಸಂಸ್ಥೆಗಳನ್ನು ನಡೆಸುತ್ತಿದ್ದವನಾಗಿ ಹೇಳುತ್ತೇನೆ ವಿದ್ಯಾವಾರಿಧಿ ಶಾಲೆಯ ಸಾಧನೆ ಮೆಚ್ಚುವಂತದ್ದು ಎಂದರಲ್ಲದೆ ಸಾಧನೆ ಮಾಡಿದ ವಿದ್ಯಾರ್ಥಿಗಳು ಹಾಗೂ ಸಾಧನೆಗೆ ಸಹಕಾರ ನೀಡಿದ ಆಡಳಿತ ಮಂಡಳಿ ಮತ್ತು ಶಿಕ್ಷಕರು ಅಭಿನಂದನಾರ್ಹರು ಎಂದರು. ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಚಿಕ್ಕನಾಯಕನಹಳ್ಳಿ ತಾಲೂಕು ತುಮಕೂರು ಮತ್ತು ಮಧುಗಿರಿ ಎರಡೂ ಶೈಕ್ಷಣಿಕ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದೆ. ಇದನ್ನು ಗಮನಿಸಿದರೆ ಚಿಕ್ಕನಾಯಕನಹಳ್ಳಿ ವಿದ್ಯಾರ್ಥಿಗಳು ಎಷ್ಟು ಬುದ್ಧಿವಂತರೆಂಬುದನ್ನು ಸಾಬೀತು ಪಡಿಸುತ್ತಿದೆ ಎಂದರಲ್ಲದೆ ಈ ಫಲಿತಾಂಶ ಹೀಗೆಯೇ ಮುಂದುವರೆಯಲಿ ಎಂದು ಆಶಿಸಿದರಲ್ಲದೆ ಉತ್ತಮ ಫಲಿತಾಂಶ ಬರಲು ಪ್ರೇರೆಪಿಸಿದ ಶಾಸಕರು ಹಾಗೂ ಶಿಕ್ಷಣ ಇಲಾಖೆ, ಶಿಕ್ಷಕರನ್ನು ಅಭಿನಂಧಿಸುವುದಾಗಿ ತಿಳಿಸಿದರು. ಶಾಸಕ ಸಿ.ಬಿ.ಸುರೇಶ್ ಬಾಬು, ಮಾಜಿ ಶಾಸಕ ಕೆ.ಎಸ್.ಕಿರಣ್‌ಕುಮಾರ್, ಜಿಲ್ಲಾಧಿಕಾರಿ ಶುಭಕಲ್ಯಾಣ್, ವಿದ್ಯಾವಾರಿಧಿ ಶಾಲೆಯ ಕಾರ್ಯದರ್ಶಿ ಕವಿತಾಕಿರಣ್, ಆಡಳಿತಾಧಿಕಾರಿ ಅಮಿತ್, ಪ್ರಾಚಾರ್ಯ ರಂಗನಾಥ್, ಪೋಷಕರಾದ ಲಾಯರ್ ಸತೀಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



## ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಸನ್ಮಾನ

**ಚಾಮರಾಜನಗರ:** ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಜಿಲ್ಲೆಯ 10 ವಿದ್ಯಾರ್ಥಿಗಳನ್ನು ನಗರದಲ್ಲಿ ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಸನ್ಮಾನಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಜಿಲ್ಲಾ ಉಸ್ತುವಾರಿ ಸಚಿವರು ಎಸ್.ಎಸ್.ಎಲ್.ಸಿಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಶಾಲು ಹೊದಿಸಿ, ಹಾರ ಹಾಕಿ, ಫಲ ತಾಂಬೂಲ ನೀಡಿ ಗೌರವಿಸಿದರು. ಮುಂದಿನ ವಿದ್ಯಾರ್ಥಿ ಜೀವನದಲ್ಲಿಯೂ ಇನ್ನೂ ಹೆಚ್ಚಿನ ಸಾಧನೆ ಮಾಡುವಂತೆ ಸಚಿವರು ಹಾರೈಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ರಾಮಚಂದ್ರರಾಜೇ ಅರಸ್, ಇತರರು ಇದ್ದರು.

ಗುಂಡ್ಲುಪೇಟೆ ತಾಲೂಕಿನ ಆದರ್ಶ ವಿದ್ಯಾಲಯದ ಹರ್ಷಿಣಿ.ಎಂ, ರಾಜೇಶ್ವರಿ, ಕೊಳ್ಳೇಗಾಲದ ಶ್ರೀ ವಾಸವಿ ವಿದ್ಯಾ ಕೇಂದ್ರ ಇಂಗ್ಲೀಷ್ ಮಾಧ್ಯಮದ ಪ್ರೌಢಶಾಲೆಯ ಶರ್ಮಿಳಾ.ಆರ್, ಬೀಬಿ ಸೂಫಿಯಾ, ಚಾಮರಾಜನಗರದ ಆದರ್ಶ ವಿದ್ಯಾಲಯದ ಪೂಜಾ. ಎನ್, ಯಶಸ್ವಿನಿ.ಜೆ, ಹನೂರಿನ ಕ್ರಿಸ್ತರಾಜ ಪ್ರೌಢಶಾಲೆಯ ಕೃತಿಕ್.ಎಲ್, ಹಿತಶ್ರೀ. ಜಿ, ಕೊಳ್ಳೇಗಾಲ ಆದರ್ಶ ವಿದ್ಯಾಲಯದ ಗಾನವಿ.ಆರ್, ಕೊಳ್ಳೇಗಾಲ ತಾಲೂಕು ಕಾಮಗೆರೆಯ ಸಂತ ಫ್ರಾನ್ಸಿಸ್ ಗ್ಸೇವಿಯರ್ ಪ್ರೌಢಶಾಲೆಯ ರಿತು ನಿಸ್ಸಿ.ಎ.ಕೆ, ಅವರು ಸನ್ಮಾನ ಸ್ವೀಕರಿಸಿದರು.



## ಕೃಷಿ ವಿಜ್ಞಾನ ವಿಶ್ವವಿದ್ಯಾಲಯ ಧಾರವಾಡದ 38ನೇ ಘಟಿಕೋತ್ಸವದಲ್ಲಿ ವಿದ್ಯಾರ್ಥಿಗಳಿಗೆ ರಾಜ್ಯಪಾಲರ ಕರೆ

# ಕೃಷಿ ಪ್ರಗತಿಗೆ ಆದ್ಯತೆ ನೀಡಿ

**ಧಾರವಾಡ / ಬೆಂಗಳೂರು:** ಕೃಷಿ ಆಧಾರಿತ ಸ್ಟಾರ್ಟ್‌ಅಪ್‌ಗಳು ಭಾರತದ ಆರ್ಥಿಕತೆಯನ್ನು ಕ್ರಾಂತಿಗೊಳಿಸಬಲ್ಲವು, ಸಾವಯವ ಉತ್ಪನ್ನಗಳ ಮಾರ್ಕೆಟಿಂಗ್, ಫಾರ್ಮ್-ಟು-ಮಾರ್ಕೆಟ್ ಮಾದರಿ, ಕೋಲ್ಡ್ ಚೈನ್ ಮ್ಯಾನೇಜ್‌ಮೆಂಟ್ ಮತ್ತು ಕೃಷಿ-ಪ್ರವಾಸೋದ್ಯಮದಂತಹ ಹಲವು ಕ್ಷೇತ್ರಗಳು ಯುವಕರಿಗಾಗಿ ಕಾಯುತ್ತಿವೆ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟರು.

ಕೃಷಿ ವಿಜ್ಞಾನ ವಿಶ್ವವಿದ್ಯಾಲಯ ಧಾರವಾಡದ 38ನೇ ಘಟಿಕೋತ್ಸವದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯುವಜನತೆ ಸ್ಟಾರ್ಟ್‌ಅಪ್ ಇಂಡಿಯಾ, ಡಿಜಿಟಲ್ ಇಂಡಿಯಾ, ಆತ್ಮನಿರ್ಭರ್ ಭಾರತ್ ನಂತಹ ಯೋಜನೆಗಳ ಸದುಪಯೊಗಪಡೆಸಿಕೊಂಡು ಕೃಷಿ ಕ್ಷೇತ್ರದ ಅಭಿವೃದ್ಧಿಯಲ್ಲಿ ಪಾಲುದಾರರಾಗಬೇಕು ಎಂದು ಕರೆ ನೀಡಿದರು. ಭಾರತ ಕೃಷಿ ಪ್ರಧಾನ ದೇಶ. ಇಂದಿಗೂ ನಮ್ಮ ಜನಸಂಖ್ಯೆಯ ಶೇಕಡ 60ಕ್ಕೂ ಹೆಚ್ಚು ಜನರು ನೇರವಾಗಿ ಅಥವಾ ಪರೋಕ್ಷವಾಗಿ ಕೃಷಿಯನ್ನು ಅವಲಂಬಿಸಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಕೃಷಿ ವಿಶ್ವವಿದ್ಯಾಲಯಗಳ ಪಾತ್ರವು ಕೇವಲ ಶೈಕ್ಷಣಿಕವಾಗಿರದೆ ರಾಷ್ಟ್ರೀಯ ಅಭಿವೃದ್ಧಿಯೊಂದಿಗೆ ಆಳವಾಗಿ ಸಂಬಂಧ ಹೊಂದಿದೆ. ಯುವ ವಿಜ್ಞಾನಿಗಳು, ಸಂಶೋಧಕರು ಮತ್ತು ಉದ್ಯಮಿಗಳಿಂದ ನಮ್ಮ ಕೃಷಿ ಕ್ಷೇತ್ರವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಬಹುದು. ಭಾರತೀಯ ಕೃಷಿ ಇಂದು ಅನೇಕ ಸವಾಲುಗಳನ್ನು ಎದುರಿಸುತ್ತಿದೆ, ಹವಾಮಾನ ಬದಲಾವಣೆ, ನೀರಿನ ಬಿಕ್ಕಟ್ಟು, ಮಣ್ಣಿನ ಫಲವತ್ತತೆಯ ಕುಸಿತ ಮತ್ತು ರೈತರ ಆದಾಯದಲ್ಲಿ ಅಸ್ಥಿರತೆ. ಇವೆಲ್ಲವುಗಳಿಗೆ ಪರಿಹಾರ ತಾಂತ್ರಿಕ ದಕ್ಷತೆ,




ವೈಜ್ಞಾನಿಕ ಚಿಂತನೆ ಮತ್ತು ಹೊಸತನದಿಂದ ಮಾತ್ರ ಸಾಧ್ಯ ಎಂದು ಹೇಳಿದರು.

ಕೃಷಿಯು ಡೇಟಾ ಅನಾಲಿಟಿಕ್ಸ್, ಡ್ರೋನ್ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆಯಂತಹ ಸುಧಾರಿತ ವಿಭಾಗಗಳಿಗೆ ಸಂಪರ್ಕ ಹೊಂದಿದೆ. ಸ್ಮಾರ್ಟ್ ಅಗ್ರಿಕಲ್ಚರ್ ಪರಿಕಲ್ಪನೆಯು ಈಗ ರೂಪುಗೊಳ್ಳುತ್ತಿದೆ. ಕೃಷಿ ವಿ?ಯದಲ್ಲಿ ಪದವಿ ಪಡೆದ ಯುವಕರ ಸಹಭಾಗಿತ್ವದಿಂದ ಮಾತ್ರ ಇದು ಸಾಧ್ಯವಾಗುತ್ತಿದೆ. ಪ್ರಯೋಗಾಲಯಗಳಿಂದ ಹೊರಬರುವ ಸಂಶೋಧನೆಯು ಹೊಲಗಳನ್ನು ತಲುಪಿದಾಗ ಮಾತ್ರ ಯಶಸ್ವಿಯಾಗುತ್ತದೆ, ಅದರ ಪ್ರಯೋಜನಗಳನ್ನು ಸಣ್ಣ ರೈತನಿಗೆ ಅವನದೇ ಭಾ?ಯಲ್ಲಿ ವಿವರಿಸಬೇಕು. ವಿದ್ಯಾರ್ಥಿಗಳೇ, ನಿಮ್ಮ ಜ್ಞಾನವನ್ನು ರೈತರ ಕಲ್ಯಾಣ, ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಗಾಗಿ ಬಳಸಬೇಕೆಂದು ತಿಳಿಸಿದರು.

ಕೃಷಿಯಲ್ಲಿ ನಾವೀನ್ಯತೆ, ಮೌಲ್ಯವರ್ಧನೆ ಮತ್ತು ಮಾರುಕಟ್ಟೆ ಸಂಪರ್ಕ ಸಾಧ್ಯವಿರುವ ಗ್ರಾಮಗಳನ್ನು ಜ್ಞಾನ ಗ್ರಾಮಗಳನ್ನಾಗಿ ಮಾಡಿ. ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಮೇಲಿನ ರೈತರ ಅವಲಂಬನೆಯನ್ನು ಕಡಿಮೆ ಮಾಡುವ ಅವಶ್ಯಕತೆಯಿದೆ, ರಾಸಾಯನಿಕ ಗೊಬ್ಬರಗಳು ಮತ್ತು ಕೀಟನಾಶಕಗಳ ಅತಿಯಾದ ಬಳಕೆಯಿಂದ ಮಣ್ಣು, ನೀರು ಮತ್ತು ಆಹಾರವನ್ನು ಕಲುಷಿತಗೊಳಿಸುತ್ತಿದೆ ಮತ್ತು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಸುರಕ್ಷಿತ ಆಹಾರವನ್ನು ಉತ್ಪಾದಿಸಲು ಸಾವಯವ ಕೃಷಿ, ನೈಸರ್ಗಿಕ ಕೃಷಿಯಂತಹ ಕೃಷಿ ಪದ್ಧತಿಗಳನ್ನು ಉತ್ತೇಜಿಸಬೇಕಾಗಿದೆ. ಇದರಿಂದ ಉತ್ಪಾದನೆ ಹೆಚ್ಚುತ್ತದೆ ಮತ್ತು ಪರಿಸರ ಸಂರಕ್ಷಣೆಗೂ ಸಹಕಾರಿಯಾಗುತ್ತದೆ ಎಂದು ಅವರು ಹೇಳಿದರು.

ಘಟಿಕೋತ್ಸವದಲ್ಲಿ ಎನ್.ಚೆಲುವರಾಯಸ್ವಾಮಿ, ಮುಖ್ಯ ಅತಿಥಿ ಡಾ.ಶ್ರೀನಿವಾಸ್ ರಾವ್, ಕುಲಪತಿ ಡಾ.ಪಿ.ಎಲ್. ಪಾಟೀಲ್ ಮುಂತಾದ ಗಣ್ಯರು ಉಪಸ್ಥಿತರಿದ್ದರು.

## ಯಾವುದೇ ಸಂಸ್ಥೆ 'ಪ್ರೆಸ್ ಕೌನ್ಸಿಲ್' ಪದ, ಚಿಹ್ನೆ ಮತ್ತು ಲಾಂಛನ ಬಳಕೆ ಮಾಡುವುದು ನಿಷಿದ್ಧ

**ಬೆಂಗಳೂರು:** ಪ್ರೆಸ್ ಕೌನ್ಸಿಲ್ ಆಫ್ ಇಂಡಿಯಾವು ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಶಾಸನಬದ್ಧ ಸಂಸ್ಥೆಯಾಗಿದೆ. ಪತ್ರಿಕಾ ಸ್ವಾತಂತ್ರ್ಯವನ್ನು ಸಂರಕ್ಷಿಸುವ ಮತ್ತು ನಿರ್ವಹಿಸುವ ಸಂಬಂಧ ಪ್ರೆಸ್ ಕೌನ್ಸಿಲ್ ಆಕ್ಟ್ 1978 ರ ಅಡಿಯಲ್ಲಿ ಈ ಸಂಸ್ಥೆಯನ್ನು ನವದೆಹಲಿಯ ಲೋಧಿ ರಸ್ತೆಯ ಸಿಜಿಓ ಸಂಕೀರ್ಣದ ಸೂಚನಾ ಭವನದಲ್ಲಿ ಸ್ಥಾಪಿಸಲಾಗಿದೆ. ಇದು ಯಾವುದೇ ರಾಜ್ಯ ಶಾಖೆಯನ್ನು ಹೊಂದಿಲ್ಲ ಮತ್ತು ಅದರ ಪರವಾಗಿ ಕಾರ್ಯ ನಿರ್ವಹಿಸಲು ಇತರೆ ಯಾವುದೇ ಸಂಸ್ಥೆಯನ್ನು ಅಧಿಕೃತಗೊಳಿಸಿರುವುದಿಲ್ಲ ಅಥವಾ ರಚಿಸಿರುವುದಿಲ್ಲ. ಇತರ ಪತ್ರಿಕಾ ಸಂಸ್ಥೆಗಳಿಂದ ''ಪ್ರೆಸ್ ಕೌನ್ಸಿಲ್'' ಪದವನ್ನು ಬಳಸಿಕೊಂಡಿರುವ ನಿದರ್ಶನಗಳಿದ್ದು, ಇದು ಪ್ರೆಸ್ ಕೌನ್ಸಿಲ್ ಆಫ್ ಇಂಡಿಯಾದ ಸಾಂಸ್ಥಿಕ ಮೌಲ್ಯವವನ್ನು ಕಳೆದುಕೊಂಡಿರುವುದು ಮಾತ್ರವಲ್ಲದೇ ಪ್ರೆಸ್ ಕೌನ್ಸಿಲ್ ಆಫ್ ಇಂಡಿಯಾದ ವಿಶಿಷ್ಟ ಡೊಮೇನ್ ಮತ್ತು ಶೀರ್ಷಿಕೆಯನ್ನು ಉಲ್ಲಂಘಿಸಿದಂತಾಗುವುದು. ಪ್ರೆಸ್ ಕೌನ್ಸಿಲ್ ಅಥವಾ ಅದರ ಹಿಂದಿ ಸಮಾನವಾದ 'ಭಾರತೀಯ ಪ್ರೆಸ್ ಪರಿಷತ್' ಅನ್ನು ಬಳಸಿಕೊಂಡು ಯಾವುದೇ ಸ್ಥಳೀಯ ಅಥವಾ ಸರ್ಕಾರಿ ಸಂಘ/ಸಂಸ್ಥೆಯ ನೋಂದಣಿಯನ್ನು ನಿಷೇಧಿಸಲು/ ಸರಿಪಡಿಸಲು ಅಗತ್ಯ ಸಲಹೆಯನ್ನು ಮಾತ್ರ ನೀಡಬಹುದಾಗಿದೆ. ಕೇಂದ್ರ ಸರ್ಕಾರದ ಅನುಮತಿಯಿಲ್ಲದೆ, 'ಪ್ರೆಸ್ ಕೌನ್ಸಿಲ್' ಪದ, ಚಿಹ್ನೆ, ಲಾಂಛನವನ್ನು ಬೇರೆ ಯಾವುದೇ ಸಂಸ್ಥೆ ಬಳಕೆ ಮಾಡುವುದು ಅನುಚಿತ ಬಳಕೆಯ ತಡೆಗಟ್ಟುವಿಕೆ ಕಾಯ್ದೆ (is in violation of the section 3 read with entry 7(ii)of the Emblem and Names (prevention of improper Use) Act, 1950 ರ ಪ್ರಕಾರ ಉಲ್ಲಂಘನೆಯಾಗುತ್ತದೆ ಎಂದು ಕೇಂದ್ರ ಕಾನೂನು ವ್ಯವಹಾರಗಳ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

## ಸಭಾಧ್ಯಕ್ಷರ ಅಧಿಕಾರ ಮತ್ತು ನಿಯಮಗಳನ್ನು ಪರಿಶೀಲಿಸಲು ಸಮಿತಿ ರಚನೆ

**ಬೆಂಗಳೂರು:** ಲೋಕಸಭಾಧ್ಯಕ್ಷರು 2025ನೇ ಏಪ್ರಿಲ್ 21 ರಿಂದ ಜಾರಿಗೆ ಬರುವಂತೆ ಸಂವಿಧಾನದ ಹತ್ತನೇ ಅನುಸೂಚಿ ಅಡಿಯಲ್ಲಿ ಸಭಾಧ್ಯಕ್ಷರ ಅಧಿಕಾರಗಳನ್ನು ಮತ್ತು ಅದರ ಅಡಿಯಲ್ಲಿ ರಚಿಸಲಾದ ನಿಯಮಗಳನ್ನು ಪರಿಶೀಲಿಸಲು ಸಭಾಧ್ಯಕ್ಷರ ಸಮಿತಿ ರಚಿಸಿದ್ದಾರೆ. ಈ ಸಮಿತಿಯ ಅಧ್ಯಕ್ಷರಾಗಿ ಮಹಾರಾಷ್ಟ್ರ ವಿಧಾನಸಭೆಯ ಸಭಾಧ್ಯಕ್ಷರಾದ ರಾಹುಲ್ ನಾರ್ವೇಕರ್ ಹಾಗೂ ಸದಸ್ಯರುಗಳಾಗಿ ಒಡಿಶಾ ವಿಧಾನಸಭೆಯ ಸಭಾಧ್ಯಕ್ಷರಾದ ಶ್ರೀಮತಿ ಸುರಮ ಪಾದಿ, ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್ ಮತ್ತು ನಾಗಲ್ಯಾಂಡ್ ವಿಧಾನಸಭೆಯ ಸಭಾಧ್ಯಕ್ಷರಾದ ಷರಿಂಗೈನ್ ಲಾಂಗ್ ಕುಮೆರ್ ಅವರನ್ನು ನೇಮಿಸಲಾಗಿದೆ ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿ ಶ್ರೀಮತಿ ಎಂ.ಕೆ.ವಿಶಾಲಾಕ್ಷಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಮನಿರ್ದೇಶನಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ಸರ್ಕಾರದ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆಯಿಂದ 2024-25ನೇ ಸಾಲಿನಲ್ಲಿ ಪರಿಸರ ಸಂರಕ್ಷಣೆ ಮತ್ತು ಪರಿಸರ ವ್ಯವಸ್ಥಾಪನೆಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿ ಹಾಗೂ ಸಂಸ್ಥೆಗಳಿಂದ (ಸರ್ಕಾರಿ/ ಸರ್ಕಾರೇತರ ಸಂಸ್ಥೆಗಳು/ ಕಂಪನಿಗಳು/ ಟ್ರಸ್ಟ್‌ಗಳು) ರಾಜ್ಯ ಪರಿಸರ ಪ್ರಶಸ್ತಿಗಳಿಗಾಗಿ ಅರ್ಜಿಗಳನ್ನು / ನಾಮನಿರ್ದೇಶನಗಳನ್ನು ಆಹ್ವಾನಿಸಿದೆ.

ಪ್ರಶಸ್ತಿಯು ತಲಾ ಒಂದು ಲಕ್ಷ ರೂ. ನಗದು ಹಾಗೂ ಪ್ರಶಸ್ತಿ ಪ್ರಮಾಣ ಪತ್ರವನ್ನು ಒಳಗೊಂಡಿರುತ್ತದೆ.

ರಾಜ್ಯ ಪರಿಸರ ಪ್ರಶಸ್ತಿಗಾಗಿ ಅರ್ಜಿ / ನಾಮ ನಿರ್ದೇಶನ ಸಲ್ಲಿಸ ಬಯಸುವವರು ಪರಿಸರ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯ ಬಗ್ಗೆ ವಿವರವಾದ ಮಾಹಿತಿಯನ್ನು ತಮ್ಮ ಲೆಟರ್ ಹೆಡ್ ಮೂಲಕ ಭರ್ತಿ ಮಾಡಿ ಅರ್ಜಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಜೀವಿ ಪರಿಸ್ಥಿತಿ ಮತ್ತು ಪರಿಸರ), ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಕೊಠಡಿ ಸಂಖ್ಯೆ 709, 7ನೇ ಮಹಡಿ, ಬಹುಮಹಡಿಗಳ ಕಟ್ಟಡ, 4ನೇ ಹಂತ, ಬೆಂಗಳೂರು-560001 ಇವರಿಗೆ 2025ನೇ ಮೇ 31ರ ಒಳಗಾಗಿ ಸಲ್ಲಿಸುವುದು.

ಹೆಚ್ಚಿನ ವಿವರಗಳಿಗಾಗಿಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತ್ ಕಛೇರಿ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಎಲ್ಲಾ ಪ್ರಾದೇಶಿಕ ಕಛೇರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪರಿಸರ ಭವನ, ನಂ.49, ಚರ್ಚ್ ಸ್ಟ್ರೀಟ್ ರೋಡ್, ಬೆಂಗಳೂರು- 560 001, ಮಹಾ ನಿರ್ದೇಶಕರು, ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋದನಾ ಸಂಸ್ಥೆ, ಹಸಿರು ಭವನ, ದೊರೆಸಾನಿ ಪಾಳ್ಯ ಫಾರೆಸ್ಟ್ ಕ್ಯಾಂಪಸ್, ವಿನಾಯಕ ನಗರ ಸರ್ಕಲ್ ಜೆ.ಪಿ.ನಗರ 5ನೇಫೇಸ್ ಬೆಂಗಳೂರು-560 078, ಸದಸ್ಯ ಕಾರ್ಯದರ್ಶಿ, ಕರ್ನಾಟಕ ಜೀವ ವೈವಿಧ್ಯ ಮಂಡಳಿ, ನೆಲಮಹಡಿ, ವನವಿಕಾಸ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-560003, ಕಛೇರಿಗಳನ್ನು ಅಥವಾ https://forest.karnataka.gov.in, www.kspcb.gov.in, www.karnataka.gov.in/empri ಮತ್ತು https://kbbwebportal.karnataka.gov.in ಸಂಪರ್ಕಿಸಬಹುದು

ವಿಶೇಷ ಸೂಚನೆ: ಪ್ರಶಸ್ತಿಗಾಗಿ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಹಿಂತಿರುಗಿಸಲಾಗುವುದಿಲ್ಲ). ಅರ್ಜಿಗಳನ್ನು ಸಾಮಾನ್ಯ ಅಂಚೆ / ನೋಂದಾಯಿತ ಅಂಚೆ ಸ್ವೀಕೃತಿ /ಸ್ಪೀಡ್ ಪೋಸ್ಟ್ ಅಥವಾ ಕೊರಿಯರ್ ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿದಾರರು ಅಥವಾ ಅವರ ಸಂಬಂಧಿಕರು ಅಥವಾ ಅವರ ಪರಿಚಯಸ್ಥರು ವೈಯಕ್ತಿಕವಾಗಿ ತರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಸರ್ಕಾರದ ಅಧೀನ ಕಾರ್ಯದರ್ಶಿ ಬಿ.ಎನ್ ಪ್ರವೀಣ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಮರ್ಥ್ಯ ವೃದ್ಧಿ ಕಾರ್ಯಕ್ರಮಕ್ಕೆ ಚಾಲನೆ

**ಬೆಂಗಳೂರು:** ಭಾರತ ಚುನಾವಣಾ ಆಯೋಗದಿಂದ ಇಂದು ನವದೆಹಲಿಯ ಇಂಡಿಯಾ ಇಂಟರ್ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಡೆಮಾಕ್ರಸಿ ಅಂಡ್ ಎಲೆಕ್ಷನ್ ಮ್ಯಾನೇಜ್‌ಮೆಂಟ್‌ನಲ್ಲಿ ಬಿಹಾರ, ಹರಿಯಾಣ ಮತ್ತು ದೆಹಲಿಯ ಎನ್‌ಸಿಟಿ ಯ ಹೊಸ ಬ್ಯಾಚ್‌ನ ಕ್ಷೇತ್ರ ಮಟ್ಟದ ಚುನಾವಣಾ ಅಧಿಕಾರಿಗಳಿಗೆ ಹಮ್ಮಿಕೊಳ್ಳಲಾದ ಎರಡು ದಿನಗಳ ಸಾಮರ್ಥ್ಯ ವೃದ್ಧಿ ಕಾರ್ಯಕ್ರಮಕ್ಕೆ ಭಾರತದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರು ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಒಟ್ಟು 371 ಚುನಾವಣಾ ಅಧಿಕಾರಿಗಳಲ್ಲಿ ಬಿಹಾರದಿಂದ 306 ಬೂತ್ ಮಟ್ಟದ ಅಧಿಕಾರಿಗಳು, ಹರಿಯಾಣದಿಂದ 30 ಚುನಾವಣಾ ನೋಂದಣಾಧಿಕಾರಿಗಳು ಮತ್ತು ಬೂತ್ ಮಟ್ಟದ ಮೇಲ್ವಿಚಾರಕರು, ದೆಹಲಿಯ ಎನ್.ಸಿ.ಟಿ ಯಿಂದ 35 ಚುನಾವಣಾ ನೋಂದಣಾಧಿಕಾರಿಗಳು ಮತ್ತು ಬೂತ್ ಮಟ್ಟದ ಮೇಲ್ವಿಚಾರಕರು ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಪ್ರಸ್ತುತ ಬ್ಯಾಚ್ ಸೇರಿದಂತೆ, 2,600 ಕ್ಕೂ ಹೆಚ್ಚು ಕ್ಷೇತ್ರ ಅಧಿಕಾರಿಗಳಿಗೆ ನವದೆಹಲಿಯಲ್ಲಿ ಭಾರತ ಚುನಾವಣಾ ಆಯೋಗವು ಕಳೆದ ಎರಡು ತಿಂಗಳುಗಳಲ್ಲಿ ತರಬೇತಿ ನೀಡಿದೆ ಎಂದು ತಿಳಿಸಿದರು.

ಮನೆ-ಮನೆ ಪರಿಶೀಲನೆಯ ಸಮಯದಲ್ಲಿ ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ ಬೂತ್ ಮಟ್ಟದ ಅಧಿಕಾರಿಗಳಿಗೆ ಶೀಘ್ರದಲ್ಲೇ ಪ್ರಮಾಣಿತ ಗುರುತಿನ ಚೀಟಿಗಳನ್ನು ನೀಡಲಾಗುವುದು. ಈ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಆಯಾ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ಇತರ ಬೂತ್ ಮಟ್ಟದ ಅಧಿಕಾರಿಗಳಿಗೆ ಮತ್ತಷ್ಟು ತರಬೇತಿ ನೀಡಲಿದ್ದಾರೆ ಎಂದು ತಿಳಿಸಿದರು.

1950 ರ ಜನತಾ ಪ್ರಾತಿನಿಧ್ಯ ಕಾಯ್ದೆ, 1960 ರ ಮತದಾರರ ನೋಂದಣಿ ನಿಯಮಗಳು, 1961 ರ ಚುನಾವಣಾ ನಡವಳಿಕೆ ನಿಯಮಗಳು ಮತ್ತು ಕಾಲಕಾಲಕ್ಕೆ ಭಾರತ ಚುನಾವಣಾ ಆಯೋಗವು ಹೊರಡಿಸಿದ ಸೂಚನೆಗಳ ಪ್ರಕಾರ ಅವರು ಕಟ್ಟುನಿಟ್ಟಾಗಿ ಕಾರ್ಯನಿರ್ವಹಿಸಬೇಕೆಂದು ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ತಿಳಿಸಿದರು.

ಮತದಾರರ ನೋಂದಣಿ, ನಮೂನೆ ನಿರ್ವಹಣೆ ಮತ್ತು ಚುನಾವಣಾ ಕಾರ್ಯವಿಧಾನಗಳ ಕ್ಷೇತ್ರಮಟ್ಟದ ಅನುಷಾನದ ಕ್ಷೇತ್ರಗಳಲ್ಲಿ ಭಾಗವಹಿಸುವವರ ಪ್ರಾಯೋಗಿಕ ತಿಳುವಳಿಕೆಯನ್ನು ಹೆಚ್ಚಿಸಲು ಈ ತರಬೇತಿಯನ್ನು ವಿನ್ಯಾಸಗೊಳಿಸಲಾಗಿದೆ. 1950 ರ ಆರ್‌ಪಿ ಕಾಯ್ದೆಯ ಸೆಕ್ಷನ್ 24(ಎ) ಅಡಿಯಲ್ಲಿ ಡಿಎಂ/ ಜಿಲ್ಲಾ ಕಲೆಕ್ಟರ್/ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ಮತ್ತು ಸೆಕ್ಷನ್ 24(ಬಿ) ಅಡಿಯಲ್ಲಿ ರಾಜ್ಯ/ಕೇಂದ್ರಾಡಳಿತ ಪ್ರದೇಶದ ಮುಖ್ಯ ಚುನಾವಣಾ ಅಧಿಕಾರಿ ಅವರೊಂದಿಗೆ ಕ್ರಮವಾಗಿ ಪ್ರಕಟಿಸಲಾದ ಅಂತಿಮ ಮತದಾರರ ಪಟ್ಟಿಯ ವಿರುದ್ಧದ ಮೊದಲ ಮತ್ತು ಎರಡನೇ ಮೇಲ್ಮನವಿಗಳ ನಿಬಂಧನೆಗಳೊಂದಿಗೆ ಪರಿಚಿತರಾಗಿರುತ್ತಾರೆ.

## ಕಡೆಗೂ ಪತ್ತೆಯಾದ ಬಾಡಿಗೆ ವಸೂಲಾತಿಯ ಡಿಸಿಬಿ ರಿಜಿಸ್ಟರ್

**ಹುಳಿಯಾರು :** ಹುಳಿಯಾರು ಪಟ್ಟಣ ಪಂಚಾಯಿತಿ ಕಾರ್ಯಾಲಯಕ್ಕೆ ಸೇರಿದ ಮಳಿಗೆಗಳ ಬಾಡಿಗೆ ವಸುಲಾತಿಯ ಜಮಾ ಖರ್ಚಿನ ಪುಸ್ತಕ ಅಂದರೆ ಬೇಡಿಕೆ- ವಸೂಲಿ- ಬಾಕಿ ವಹಿ ನಮೂದಿಸುವ ಡಿಸಿಬಿ ರಿಜಿಸ್ಟರ್ ಕಡೆಗೂ ಪತ್ತೆಯಾಗಿದೆ.

ಹೌದು ಇತ್ತೀಚಿಗಷ್ಟೇ ಕೆಲವೊಂದು ಮಳಿಗೆಗಳಿಗೆ ಬಾಡಿಗೆ ಬಾಕಿ ಇದೆ ಎಂದು ಪಟ್ಟಣ ಪಂಚಾಯಿತಿ ನೋಟಿಸ್ ನೀಡಿದ ಹಿನ್ನೆಲೆಯಲ್ಲಿ ಬಾಡಿಗೆದಾರರು ಬಾಡಿಗೆ ಪಾವತಿಸಿದ್ದರು ಸಹ ಜಮಾ ಖರ್ಚು ಮಾಡಿಲ್ಲ. ಪಂಚಾಯಿತಿಯವರು ನಿರ್ವಹಣೆ ಮಾಡಬೇಕಾಗಿರುವ ಡಿಸಿಬಿ ರಿಜಿಸ್ಟರ್ ತೋರಿಸಿ, ಅದರಲ್ಲಿ ಬಾಡಿಗೆ ಬಾಕಿ ಇದ್ದಲ್ಲಿ ಕಟ್ಟುತ್ತೇವೆ ಎಂದು ಬಾಡಿಗೆದಾರರು ಪಟ್ಟು ಹಿಡಿದಿದ್ದರು.

ಆದರೆ ಡಿಸಿಬಿ ರಿಜಿಸ್ಟರ್ ಆಡಿಟ್‌ಗೆಕೊಟ್ಟಿದ್ದೇವೆಂದು ಹೇಳಿದ್ದರು. ಅಲ್ಲದೆ ಡಿಸಿಬಿ ರಿಜಿಸ್ಟರ್ ಬದಲಿಗೆ ಬಿಲ್ ಕಲೆಕ್ಟರ್ ಲಾಂಗ್ ನೋಟ್ ಬುಕ್‌ನಲ್ಲಿ ಬರೆದುಕೊಂಡು ಜಮ ಖರ್ಚು ನಿರ್ವಹಿಸುತ್ತಿದ್ದರು. ಇದು ಹಲವಾರು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿತ್ತು. ಈ ಬಗ್ಗೆ ಪತ್ರಿಕೆಯಲ್ಲಿ ಮಳಿಗೆಗಳ ಬಾಡಿಗೆ ಸಂಗ್ರಹ ಪುಸ್ತಕ ನಾಪತ್ತೆ ಎಂದು ವಿಶೇಷ ವರದಿ ಪ್ರಕಟಿಸಲಾಗಿತ್ತು. ಪತ್ರಿಕೆ ವರದಿಯಿಂದ ಎಚ್ಚೆತ್ತ ಪಂಚಾಯ್ತಿ ಸಿಬ್ಬಂದಿ ಈಗ ಪುಸ್ತಕ ಸಿಕ್ಕಿದೆ ಎಂದು ಬಾಡಿಗೆದಾರರಿಗೆ ತಂದು ತೋರಿಸಿದ್ದಾರೆ. ಆದರೆ ಹಾಲಿ ಡಿಸಿಬಿ ರಿಜಿಸ್ಟರ್ ಗಮನಿಸಿದಲ್ಲಿ ಪರಿಪೂರ್ಣವಾಗಿ ನಿರ್ವಹಿಸದಿರುವುದು ಕಂಡು ಬರುತ್ತದೆ. ಸದ್ಯಕ್ಕೆ ಸಿಕ್ಕಿರುವ ಡಿಸಿಬಿ ರಿಜಿಸ್ಟರ್‌ನಲ್ಲಿ 2019 ರಿಂದ 22 ರವರೆಗೆ ಮಾತ್ರ ಜಮಾ ಖರ್ಚು ನಮೂದಾಗಿದೆ. 22-23, 23-24, 24-25 ನೇ ಸಾಲಿನ ಬೇಡಿಕೆ /ವಸೂಲಿ ಬಗ್ಗೆ ಏನ್ನೊಂದು ನಮೂದು ಮಾಡಿಲ್ಲ.

ಅಲ್ಲದೆ 2019 ರ ಹಿಂದೆ ಎಷ್ಟು ಬಾಡಿಗೆ ಸಂಗ್ರಹವಾಗಿದೆ, ಎಷ್ಟು ಬಾಕಿ ಉಳಿದಿದೆ ಎಂಬ ಯಾವುದೇ ಮಾಹಿತಿ ಇಲ್ಲ. ಹಾಗಾಗಿ ಮಳಿಗೆಗಳ ಬಾಡಿಗೆ ಸಂಗ್ರಹದಲ್ಲಿಯೂ ಏನೋ ಗೋಲ್ ಮಾಲ್ ನಡೆದಿದೆ ಎಂಬ ಅನುಮಾನವನ್ನು ಈ ಪುಸ್ತಕ ಸತ್ಯವಾಗಿಸುತ್ತಿದೆ. ಅಲ್ಲದೆ ಪಾವತಿ ಮಾಡಿರುವ ಹಣದ ರಸೀತಿ ತಂದರಷ್ಟೆ ಜಮಾ ಮಾಡುತ್ತೇವೆ ಎಂದು ಈಗಲೂ ಹೇಳುತ್ತಿರುವುದು ಪಂಚಾಯ್ತಿಯ ಕಾರ್ಯವೈಕರಿಗೆ ಸಾಕ್ಷ್ಯಿಯಾಗಿದೆ. ಸದ್ಯ ಈಗಲಾದರೂ ಡಿಸಿಬಿ ರಿಜಿಸ್ಟರ್ ಪುಸ್ತಕವನ್ನು ತೋರಿಸಿದ್ದಾರೆ. ಇನ್ನಾದರೂ ವ್ಯವಸ್ಥಿತವಾಗಿ ನಿರ್ವಹಿಸಿ ಆಯಾ ತಿಂಗಳು ಜಮಾ ಖರ್ಚನ್ನು ನಮೂದಿಸಿದಲ್ಲಿ ಪ್ರತಿಯೊಬ್ಬ ಬಾಡಿಗೆದಾರರ ಬಾಡಿಗೆ ಎಷ್ಟಿದೆ ಎಂದು ತಿಳಿಯುತ್ತದೆ ಇದನ್ನು ಆದರಿಸಿ ವಸೂಲಾತಿ ಮಾಡುವುದರ ಮೂಲಕ ಪಂಚಾಯಿತಿಗೆ ಬರಬೇಕಾದ ಹಣವನ್ನು ಕ್ರೂಢೀಕರಿಸಿಕೊಳ್ಳಬಹುದಾಗಿದೆ. ಬಾಡಿಗೆ ವಸೂಲಾತಿ ಕುಂಟಿತವಾಗಿದ್ದಲ್ಲಿ ಕ್ರಮವಹಿಸಲು ಅನುಕೂಲವಾಗುತ್ತದೆ. ಆದರೆ ಡಿಸಿಬಿ ವಹಿಯಲ್ಲಿ ಸರಿಯಾದ ಬಾಕಿ ವಿವರವನ್ನು ದಾಖಲಿಸದಿರುವುದರಿಂದ ಸಾಕಷ್ಟು ನ್ಯೂನತೆಗಳಿದೆ. ಇದರಿಂದಾಗಿ ಸ್ಥಳೀಯ ಸಂಸ್ಥೆಗಳಿಗೆ ಆದಾಯ ಮೂಲವಾಗಬೇಕಾದ ವಾಣಿಜ್ಯ ಸಂಕೀರ್ಣಗಳು ಹೊರೆಯಾಗಿ ಪರಿಣಮಿಸುವಂತಾಗಿದೆ.

### ನಿರ್ವಹಣೆ ಇಲ್ಲದೆ ಪುಸ್ತಕ ಆಡಿಟ್‌ಗೆ ಏಕೆ?

**ಅಧಿಕೃತ ಡಿಸಿಬಿ ಪುಸ್ತಕದಲ್ಲಿ 2022 ರಿಂದ ಇತ್ತೀಚಿನ ವರ್ಷದವರೆವಿವೆ ಮಳಿಗೆಗಳ ಬಾಡಿಗೆಯ ಬಗ್ಗೆ ನಿರ್ವಹಣೆಯನ್ನೇ ಮಾಡಿಲ್ಲ. ಹೀಗಿರುವಾಗ ಪುಸ್ತಕ ನಾಪತ್ತೆಯಾಗಿರುವ ಬಗ್ಗೆ ಮುಖ್ಯಾಧಿಕಾರಿಗಳನ್ನು ಪ್ರಶ್ನಿಸಿದರೆ ಆಡಿಟ್‌ಗೆ ಕೊಟ್ಟಿರುವುದಾಗಿ ಹೇಳಿದ್ದರು. ಪ್ರಸಕ್ತ ಸಾಲಿನ ಆಡಿಟ್ ಮಾಡಿಸುತ್ತಿದ್ದಾರೋ ಅಥವಾ ಕಳೆದ ಐದಾರು ವರ್ಷಗಳ ಆಡಿಟ್ ಮಾಡಿಸುತ್ತಿದ್ದಾರೋ ತಿಳಿಯದಾಗಿದೆ. ಪ್ರತಿವರ್ಷ ಆಡಿಟ್ ಮಾಡಿಸುವುದು ನಿಯಮ ಆದರೆ 2022 ರಿಂದ ಬಾಡಿಗೆ ವಸೂಲಿ, ಬಾಕಿ ಯಾವುದನ್ನೂ ನಮೂದಿಸದಿದ್ದರೆ ಆಡಿಟ್ ಮಾಡುವುದಾದರೂ ಏನಿದೆ. ಬಾಡಿಗೆ ವಸೂಲಾತಿ ವಿವರ ಆಡಿಟ್‌ಗೆ ಬಾರದಿದ್ದರೆ ಇವರೆಷ್ಟು ನ್ಯಾಯಸಮ್ಮತವಾಗಿ ಆಡಿಟ್ ಮಾಡಿಸುತ್ತಿದ್ದಾರೆ ಎನ್ನುವ ಅನೇಕ ಪ್ರಶ್ನೆಗಳು ಹುಟ್ಟುತ್ತವೆ.**

## ಪರಿಶಿಷ್ಟ ಜಾತಿ / ಉಪ ಜಾತಿಗಳ ಸಮಗ್ರ ಸಮೀಕ್ಷೆ : 2025ರ ಕುರಿತು ಪತ್ರಿಕಾ ಗೋಷ್ಠಿ

**ಬೆಂಗಳೂರು:** ರಾಜ್ಯದಲ್ಲಿ ಸರ್ಕಾರದ ವತಿಯಿಂದ ಪರಿಶಿಷ್ಟ ಜಾತಿ / ಉಪ ಜಾತಿಗಳ ಸಮಗ್ರ ಸಮೀಕ್ಷೆಯನ್ನು 2025ನೇ ಮೇ 5 ರಿಂದ ನಡೆಸಲಾಗುತ್ತಿದ್ದು, ಈ ಸಂಬಂಧ ಪರಿಶಿಷ್ಟ ಜಾತಿ ಒಳ ಮೀಸಲಾತಿಯ ಏಕಸದಸ್ಯ ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ಡಾ. ಹೆಚ್.ಎನ್. ನಾಗಮೋಹನ್ ದಾಸ್ ಅವರು 2025ನೇ ಮೇ 16 ರಂದು ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಸಮಿತಿ ಕೊಠಡಿ ಸಂ. 313 ರಲ್ಲಿ ಪತ್ರಿಕಾ ಗೋಷ್ಠಿಯನ್ನು ನಡೆಸಲಿದ್ದಾರೆ.

**ನಗರಸಭಾ ಕಾರ್ಯಾಲಯ ಮಾದನಾಯಕನಹಳ್ಳಿ**
ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ-562123
ದೂರವಾಣಿ ಸಂಖ್ಯೆ: 080-23718487
ಇ-ಮೇಲ್: itstaff_ulb_mnhalli@yahoo.com

ಸಂಖ್ಯೆ: ಮಾ.ನ.ಕಾ/ತಾ.ಶಾ-1/ಸಿ.ಆರ್/06/2025-26 ದಿನಾಂಕ: 14.05.2025

**ಅಲ್ಪಾವಧಿ ಟೆಂಡರ್ ಪ್ರಕಟಣೆ (2ನೇ ಕರೆ)**
**(Through GOK e-Procurement Portal www.kppp.karnataka.gov.in only)**

2021-22ನೇ ಸಾಲಿನ 15ನೇ ಹಣಕಾಸು ಅನಿರ್ಬಂದಿತ ಅನುದಾನದಡಿ ಈ ಕೆಳಕಂಡ ಕಾಮಗಾರಿಯನ್ನು ನಿರ್ವಹಿಸಲು ಸಂಬಂಧಪಟ್ಟ ಟೆಂಡರ್ ಡಾಕ್ಯೂಮೆಂಟ್‌ನ ಷರತ್ತು ಹಾಗೂ ಸೂಚನೆಗೊಳಪಟ್ಟು ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ. **INDENT No: DMA/2025-26/RD/WORK_INDENT39613/Call-2.** ಅಂದಾಜು ಮೊತ್ತ ರೂ. **15.00 ಲಕ್ಷ**, ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: **23.05.2025 ಸಂಜೆ 17.30 ಗಂಟೆಯವರೆಗೆ**, ಬಿಡ್ ತೆರೆಯುವ ದಿನಾಂಕ: **26.05.2025 ಬೆಳಿಗ್ಗೆ 11.00 ಗಂಟೆಗೆ.** ಹೆಚ್ಚಿನ ವಿವರಗಳನ್ನು ಕಛೇರಿ ತಾಂತ್ರಿಕ ಶಾಖೆಯಿಂದ ಪಡೆಯಬಹುದಾಗಿದೆ. ಯಾವುದೇ ತಿದ್ದುಪಡಿಗಳಿದ್ದಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ನಲ್ಲಿ ಮಾತ್ರ ತಿಳಿಸಲಾಗುವುದು.

ಸಹಿ/- ಪೌರಾಯುಕ್ತರು,
ನಗರಸಭೆ, ಮಾದನಾಯಕನಹಳ್ಳಿ

ವಾಸಾಸಂಇ/ವಾಪ್ರಾ/672/2025-26

**ನಗರಸಭೆ ಕಾರ್ಯಾಲಯ ನೆಲಮಂಗಲ**
ನೆಲಮಂಗಲ, ಬೆಂಗಳೂರು ಗ್ರಾಮಾಂತರ ಜಿಲ್ಲೆ-562123, ದೂರವಾಣಿ: 080-27722135,
Email : itstaff_ulb_nelamangala@yahoo.com

ಸಂಖ್ಯೆ: ನಸನೆ/ತಾಂತ್ರಿಕ(ವಿ)/ಟೆಂಡರ್/45/2025-26 ದಿನಾಂಕ: 14.05.2025

**ಟೆಂಡರ್ ಪ್ರಕಟಣೆ (ಕೆಪಿಪಿಪಿ ಪೋರ್ಟಲ್ ಮೂಲಕ ಮಾತ್ರ)**
**(ಸ್ಟಾಂಡರ್ಡ್ ಡಾಕ್ಯೂಮೆಂಟ್ KC ನಿಬಂಧನೆಗಳಂತೆ ಅರ್ಜಿ ಆಹ್ವಾನಿಸಲಾಗಿದೆ)**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನೆಲಮಂಗಲ ನಗರಸಭೆ ವ್ಯಾಪ್ತಿಯಲ್ಲಿ 2025-26ನೇ ಸಾಲಿನ ನೀರು ಸರಬರಾಜು ವಿಭಾಗಕ್ಕೆ ಹೊರಗುತ್ತಿಗೆ ಆಧಾರದ ಮೇಲೆ ವಾಲ್ವ್ ಮೆನ್‌ಗಳು ಹಾಗೂ ಪ್ಲಂಬರ್ ಗಳನ್ನು ಸರಬರಾಜು ಮಾಡಲು ವಾರ್ಷಿಕ ನಿರ್ವಹಣೆಗೆ ಟೆಂಡರ್ ಕೈಗೊಳ್ಳಲು ಒಟ್ಟು ಮೊತ್ತ **ರೂ: 41.65 ಲಕ್ಷ**ಗಳ ಕೈಗೊಳ್ಳುವ ಕಾಮಗಾರಿಗಳ ಐಟಂವಾರು ಮತ್ತು ಕೆಪಿಪಿಪಿ ಪೋರ್ಟಲ್‌ನ ಏಕ ಲಕೋಟೆ ಪದ್ಧತಿಯಲ್ಲಿ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ ಅರ್ಹ ಗುತ್ತಿಗೆದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ. ಇ-ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ **https://kppp.karnataka.gov.in** ಮೂಲಕ ಟೆಂಡರ್ ಸಲ್ಲಿಸುವುದು.
ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ: (As per KPPP Portal ಘಂಟೆಯವರೆಗೆ) ಟೆಂಡರ್ ತೆರೆಯುವ ದಿನಾಂಕ: (As per KPPP Portal) ಹೆಚ್ಚಿನ ವಿವರಗಳಿಗಾಗಿ ನಗರಸಭೆಯ ತಾಂತ್ರಿಕ ಶಾಖೆಯನ್ನು ಸಂಪರ್ಕಿಸುವುದು.

| ಸಹಿ/- | ಸಹಿ/- | ಸಹಿ/- | ಸಹಿ/- |
|---|---|---|---|
| ಮಾನ್ಯ ಅಧ್ಯಕ್ಷರು ನಗರಸಭೆ, ನೆಲಮಂಗಲ | ಮಾನ್ಯ ಉಪಾಧ್ಯಕ್ಷರು ನಗರಸಭೆ, ನೆಲಮಂಗಲ | ಮಾನ್ಯ ಸ್ಥಾಯಿ ಸಮಿತಿ ಅಧ್ಯಕ್ಷರು ನಗರಸಭೆ, ನೆಲಮಂಗಲ | ಪೌರಾಯುಕ್ತರು ನಗರಸಭೆ, ನೆಲಮಂಗಲ |

ವಾ.ಸಾ.ಸಂ.ಇ/ವಾಪ್ರ/685/ಎಸ್‌ಎಸ್‌ಸಿ/2025-26

## ಇಂದು ಚಾಮರಾಜೇಶ್ವರ ದೇಗುಲ ಆವರಣದಲ್ಲಿ ಅಣಕು ಪ್ರದರ್ಶನ

**ಚಾಮರಾಜನಗರ:** ಆಪರೇಷನ್ ಅಭ್ಯಾಸ್ ಅಣಕು ಪ್ರದರ್ಶನವನ್ನು (ಮಾಕ್ ಡ್ರಿಲ್) ಮೇ 16ರಂದು ಸರಿಯಾಗಿ ಸಂಜೆ 6 ಗಂಟೆಗೆ ನಗರದ ಚಾಮರಾಜೇಶ್ವರ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ತುರ್ತು ಸಂದರ್ಭ ಅವಘಡಗಳು ಸಂಭವಿಸಿದ ಸಮಯದಲ್ಲಿ ಜನರು ಗಾಬರಿ ಅಥವಾ ಆತಂಕಕ್ಕೆ ಒಳಗಾಗದಂತೆ ಆತ್ಮವಿಶ್ವಾಸ ತುಂಬಿ ಅರಿವು ಮೂಡಿಸುವ ಉದ್ದೇಶದಿಂದ ಅಣಕು ಪ್ರದರ್ಶನವನ್ನು ನಡೆಸಲಾಗುತ್ತದೆ. ಇದು ಅಣಕು ಕಾರ್ಯಾಚರಣೆ ಮಾತ್ರವಾಗಿದ್ದು ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ. ಜಿಲ್ಲಾಡಳಿತದೊಂದಿಗೆ ಸಹಕಾರ ನೀಡಬೇಕು. ನಗರದ ಚಾಮರಾಜೇಶ್ವರ ದೇವಾಲಯದಲ್ಲಿ ಅಣಕು ಕಾರ್ಯಾಚರಣೆ (ಮಾಕ್ ಡ್ರಿಲ್) ಪ್ರದರ್ಶನ ಕೈಗೊಂಡು ಜಾಗೃತಿ ಮೂಡಿಸಲಾಗುತ್ತದೆ. ಈ ಅಣಕು ಕಾರ್ಯಾಚರಣೆಗೆ ಪೊಲೀಸ್ ಇಲಾಖೆ, ಅಗ್ನಿಶಾಮಕ ದಳ, ಹೋಂ ಗಾರ್ಡ್, ವೈದ್ಯಕೀಯ ತಂಡ, ಸಾರಿಗೆ ತಂಡ, ಕಂಟ್ರೋಲ್ ರೂಂ, ಇನ್ನಿತರ ತಂಡಗಳನ್ನು ರಚಿಸಲಾಗಿದ್ದು ಸಂಬಂಧಪಟ್ಟ ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದಾರೆ. ತುರ್ತು ಸಂದರ್ಭದಲ್ಲಿ ನಾಗರಿಕರನ್ನು ರಕ್ಷಿಸುವ ವೇಳೆ ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ, ಗಾಯಗೊಂಡವರಿಗೆ ಆಸ್ಪತ್ರೆಗೆ ದಾಖಲು ಮಾಡುವ ಬಗ್ಗೆ, ಪ್ರಥಮ ಚಿಕಿತ್ಸೆ, ಅಗ್ನಿಶಾಮಕ, ಪೊಲೀಸರು, ಇನ್ನಿತರ ಅಧಿಕಾರಿಗಳ ಕರ್ತವ್ಯ ಇನ್ನಿತರ ಕಾರ್ಯ ಚಟುವಟಿಕೆಗಳನ್ನು ಅಣಕು ಪ್ರದರ್ಶನದ ಮೂಲಕ ನಡೆಸಿ ಅರಿವು ಉಂಟು ಮಾಡಲಾಗುತ್ತದೆ. ಜನರ ರಕ್ಷಣೆಗೆ ಕೈಗೊಳ್ಳಲಾಗುವ ಸುರಕ್ಷತಾ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಮಾಕ್‌ಡ್ರಿಲ್ ಮುಖಾಂತರ ತಿಳಿವಳಿಕೆ ನೀಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ತಿಳಿಸಿದ್ದಾರೆ.

## ಗ್ರಾಹಕರ ಸಂವಾದ ಸಭೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ವಿಭಾಗ ವ್ಯಾಪ್ತಿಯ ಬೆ.ವಿ.ಕಂ, ಉಪ ವಿಭಾಗ ಕಚೇರಿಗಳಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಹಾಗೂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ರವರ ಅಧ್ಯಕ್ಷತೆಯಲ್ಲಿ ಮೇ 17 ರಂದು ಮಧ್ಯಾಹ್ನ 3 ಗಂಟೆಗೆ ಗ್ರಾಹಕರ ಸಂವಾದ ಸಭೆ ಏರ್ಪಡಿಸಲಾಗಿದ್ದು, ಆಯಾ ಉಪವಿಭಾಗ ವ್ಯಾಪ್ತಿಗೆ ಒಳಪಡುವ ಗ್ರಾಹಕರು ಸಭೆಗೆ ಹಾಜರಾಗಿ, ವಿದ್ಯುತ್ ಸರಬರಾಜಿಗೆ ಸಂಬಂಧಪಟ್ಟಂತೆ ಏನಾದರೂ ಕುಂದುಕೊರತೆಗಳು ಇದ್ದಲ್ಲಿ ಕಾನೂನಾತ್ಮಕವಾಗಿ ಪರಿಹರಿಸಿಕೊಳ್ಳಬಹುದೆಂದು ಚಿಕ್ಕಬಳ್ಳಾಪುರ ಬೆವಿಕಂ, ಕಾರ್ಯನಿರ್ವಾಹಕ ಇಂಜಿನಿಯರ್ ಪಿ.ಜಿ.ರಮೇಶ್ ಕುಮಾರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಗುಡಿಬಂಡೆ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗಗಳಿಗೆ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಜೂನ್ 16 ರೊಳಗೆ ಸಲ್ಲಿಸಬಹುದು. ವಿದ್ಯಾರ್ಥಿಗಳುhttps://shp.karnataka.gov.in/bcwd ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.inಅನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.comಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು.

## ಐಟಿಐ ಕೋರ್ಸ್‌ಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2025-26 ನೇ ಸಾಲಿನ ಐಟಿಐ (ಕೈಗಾರಿಕಾ ತರಬೇತಿ ಸಂಸ್ಥೆ) ಹಾಗೂ ಟಾಟಾ ಟೆಕ್ನಾಲಜಿ ಲಿಮಿಟೆಡ್ ರವರ ಸಹಭಾಗಿತ್ವದಲ್ಲಿ ಅನುಷ್ಠಾನಗೊಂಡಿರುವ ಕೋರ್ಸ್ ಗಳ ಪ್ರವೇಶಕ್ಕಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಶಿಡ್ಲಘಟ್ಟ ತಿಪ್ಪೇನಹಳ್ಳಿ ಇಲ್ಲಿ ವಿವಿಧ ವೃತ್ತಿಗಳಿಗೆ ಎಸ್ ಎಸ್ ಎಲ್ ಸಿ ಪಾಸ್ / ಪಿಯುಸಿ ಫೇಲ್ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.ಅರ್ಜಿಗಳನ್ನು ಮೇ 28 ರವರೆಗೂ ಹಾಗೂ ಆಫ್ ಲೈನ್ ಮೂಲಕ ಆಗಸ್ಟ್ 31 ರವರೆಗೆ ಈ ಸಂಸ್ಥೆಯು 6 ಕಿಲೋ ಮೀಟರ್ ದೂರದಲ್ಲಿ ಮಲ್ಲೇನಹಳ್ಳಿ ಕೈಗಾರಿಕಾ ಪ್ರದೇಶ ಹೊಂದಿದ್ದು ಇಲ್ಲಿ ಪಿಯುಸಿ ಮತ್ತು ಡಿಗ್ರಿ ತರಬೇತಿದಾರರಿಗೆ ಐಟಿಐ ತರಬೇತಿದಾರರಿಗೆ ಅವಕಾಶಗಳು ಹೆಚ್ಚು ಇದ್ದು ತರಬೇತಿ ಪಡೆಯುವ ಎಲ್ಲಾ ತರಬೇತಿದಾರರಿಗೂ ಪ್ರತಿಷ್ಠಿತ ಕಂಪನಿಗಳಲ್ಲಿ ಉದ್ಯೋಗ ಕೊಡಿಸಲಾಗುವುದು ಮತ್ತು ಈ ಸಂಸ್ಥೆಗೆ ಕೆಸ್.ಆರ್.ಟಿ.ಸಿ ವತಿಯಿಂದ ವಿಶೇಷ ಬಸ್ ಸೌಲಭ್ಯ ಇರುತ್ತದೆ. ಸಂಸ್ಥೆಯಲ್ಲಿ ಆನ್ ಲೈನ್ ಅರ್ಜಿ ಉಚಿತವಾಗಿ ಭರ್ತಿ ಮಾಡಿಕೊಡಲಾಗುವುದು. ಪ್ರವೇಶ ಶುಲ್ಕ ಕೇವಲ ರೂ 1200/-ಗಳು ಮಾತ್ರ ಆಸಕ್ತ ಅಭ್ಯರ್ಥಿಗಳು ಖುದ್ದಾಗಿ ಸಂಸ್ಥೆಗೆ ಹಾಜರಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 8970542043, 8095481336 ಸಂಪರ್ಕಿಸಿ.

# ಅಲ್ಪಸಂಖ್ಯಾತರಿಗೆ ಸರ್ಕಾರದ ಸೌಲಭ್ಯತಲುಪಿಸಿ

**ಮಂಡ್ಯ:** ಸರ್ಕಾರದಿಂದಅಲ್ಪಸಂಖ್ಯಾತರ ನೀಡಲಾಗುವ ಸೌಲಭ್ಯಗಳನ್ನು ಸಕಾಲಕ್ಕೆ ಅರ್ಹ ಫಲಾನುಭವಿಗಳಿಗೆ ತಲುಪಿಸಿ ಎಂದುಜಿಲ್ಲಾಧಿಕಾರಿಡಾಕುಮಾರಅವರು ಹೇಳಿದರು

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಪ್ರಧಾನ ಮಂತ್ರಿಗಳ ಅಲ್ಪಸಂಖ್ಯಾತರ 15 ಅಂಶಗಳ ಅನುಷ್ಠಾನ ಸಭೆಯಅಧ್ಯಕ್ಷತೆ ವಹಿಸಿ ಮಾತನಾಡಿದಅವರು ಅಲ್ಪಸಂಖ್ಯಾತರಕಲ್ಯಾಣಕ್ಕಾಗಿ ಅನೇಕ ಕಾರ್ಯಕ್ರಮಗಳನ್ನು ಸರ್ಕಾರ ನೀಡುತ್ತಿದೆ, ಸಾರ್ವಜನಿಕರುಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ 62 ಅಲ್ಪಸಂಖ್ಯಾತಉರ್ದು ಅಂಗನವಾಡಿಗಳಿದ್ದು ಸುಮಾರು 5296 ಮಕ್ಕಳ ಹಾಜರಾಗುತ್ತಿದ್ದಾರೆ, ವಿದೇಶಿ ವಿಧ್ಯಾಭ್ಯಾಸಅರಿವು ಸಾಲ ಯೋಜನೆಯಡಿಜಿಲ್ಲೆಯಲ್ಲಿಇಬ್ಬರೂಫಲಾನುಭವಿಗಳಿದ್ದಾರೆ, ಶ್ರಮ ಶಕ್ತಿ ಸಾಲ ಯೋಜನೆಯಡಿ 24 ಜನ ಫಲಾನುಭವಿಗಳಿಗೆದ್ದಾರೆ, ಸ್ವಾವಲಂಬಿ ಸಾರಥಿಯೋಜನೆಯಡಿ 9 ಜನ ಫಲಾನುಭವಿಗಳಿಗೆದ್ದಾರೆ



ಎಂದು ಮಾಹಿತಿ ತಿಳಿಸಿದರು. 2024-25 ನೇ ಸಾಲಿನಲ್ಲಿಜಿಲ್ಲೆಯಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲೆಗಳ 1 ರಿಂದ 10 ತರಗತಿಯಲ್ಲಿಒಟ್ಟು 98,247 ಅಲ್ಪಸಂಖ್ಯಾತ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ, 2024-25 ನೇ ಸಾಲಿನಲ್ಲಿ 8079 ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಶಾಲೆಗಳಿಗೆ ದಾಖಲಾಗಿದ್ದಾರೆ, ಜಿಲ್ಲೆಯಲ್ಲಿ 56 ಉರ್ದು ಶಾಲೆಗಳಿವೆ ಎಂದು ತಿಳಿಸಿದರು. ಸರ್ಕಾರದ ಯೋಜನೆಗಳ ಕುರಿತುಅಲ್ಪಸಂಖ್ಯಾತರಲ್ಲಿ ಮಾಹಿತಿಯಕೊರತೆಇದೆ, ಅಧಿಕಾರಿಗಳು ವಿಶೇಷ ಕಾರ್ಯಕ್ರಮಗಳನ್ನು ರೂಪಿಸಿ ಸರ್ಕಾರದಿಂದಅಲ್ಪಸಂಖ್ಯಾತರಿಗೆ ನೀಡಲಾಗುವ ಯೋಜನೆಗಳನ್ನುಕುರಿತುಜಾಗೃತಿಮೂಡಿಸಬೇಕುಎಂದರು.

ಸಭೆಯಲ್ಲಿಅಪರ ಪೊಲೀಸ್ ವರಿಷ್ಠಾಧಿಕಾರಿತಿಮ್ಮಯ್ಯ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ.ಲಕ್ಷ್ಮಿ, ಅಲ್ಪಸಂಖ್ಯಾತರಕಲ್ಯಾಣಇಲಾಖೆಯಅಧಿಕಾರಿ ಮಧುಶ್ರೀ, ಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಡಾ. ಕೆ.ಮೋಹನ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಶಿವರಾಮೇಗೌಡ ಸೇರಿದಂತೆಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿದ್ಯಾರ್ಥಿನಿಲಯ ಪ್ರವೇಶಕ್ಕಾಗಿ ಅರ್ಜಿ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗಗಳಿಗೆ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಜೂನ್ 16 ರೊಳಗೆ ಸಲ್ಲಿಸಬಹುದು.

ವಿದ್ಯಾರ್ಥಿಗಳು https://shp.karnataka.gov.in/bcwdಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.iಅನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8050770004 ಮತ್ತು 8050770005 ಸಂಪರ್ಕಿಸಬಹುದು.

# ಜಿಲ್ಲಾಡಳಿತದಿಂದ ಶ್ರೀ ಭಗೀರಥ ಜಯಂತಿ

**ಚಿಕ್ಕಬಳ್ಳಾಪುರ:** ಶ್ರೀ ಭಗೀರಥ ತಮ್ಮ ಪೂರ್ವಜರಿಗೆ ಸದ್ಗತಿ ದೊರಕಿಸಿಕೊಡುವುದಕ್ಕಾಗಿ ದೇವಗಂಗೆಯನ್ನೇ ಭೂಲೋಕಕ್ಕೆ ತರಲು ಮಹರ್ಷಿ ಭಗೀರಥ ಮಾಡಿದ ನಿರಂತರ ಪ್ರಯತ್ನ ಎಲ್ಲರಿಗೂ ಮಾದರಿ, ಈ ನಿರಂತರ ಪ್ರಯತ್ನದ ಮಾರ್ಗವನ್ನು ಸಾಮಾಜಿಕ ಸೇವೆ ನೀಡುವ ಗುರಿಗಾಗಿ ನಾವುಗಳು ಜೀವನದಲ್ಲಿ ಅಳವಡಿಸಿಕೊಂಡರೆ ಎಲ್ಲರಿಗೂ ಒಳಿತಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ಎನ್. ಭಾಸ್ಕರ್ ಅವರು ತಿಳಿಸಿದರು

ಗುರುವಾರ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವದಲ್ಲಿ ಹಮ್ಮಿಕೊಂಡಿದ್ದ ಶ್ರೀಭಗೀರಥ ಜಯಂತಿ''ಯ ಕಾರ್ಯಕ್ರಮದಲ್ಲಿ ಶ್ರೀಭಗೀರಥರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಭಗೀರಥನು ಇಕ್ಷ್ವಾಕು ರಾಜವಂಶ ದಿಲೀಪ ರಾಜನ ಮಗನಾಗಿ ಜನಿಸಿದನು. ಭಗೀರಥ ಶಿವನನ್ನು ಕುರಿತು ತಪಸ್ಸು ಮಾಡಿದಾಗ ಶಿವ ಪ್ರತ್ಯಕ್ಷನಾಗಿ ಭಗೀರಥರ ಕೋರಿಕೆಯಂತೆ ಗಂಗೆಯು ಆಕಾಶದಿಂದ ಧುಮ್ಮಿಕ್ಕಿದಳು. ಶಿವನ ಜಟೆಯಲ್ಲಿ ಧರಿಸಿದ ಗಂಗೆಯು ಭೂಮಿಗಿಳಿದು ಭಗೀರಥನ ರಥದ ಹಿಂದೆ ಹರಿಯುತ್ತಾ ಹೊರಟಳು. ಮುಟ್ಟಿದ ಜಾಗವನ್ನೆಲ್ಲಾ ಪವಿತ್ರಗೊಳಿಸುತ್ತಾ ಭಗೀರಥನ ತಂದೆ ತಾತಂದಿರಿಗೆ ಸ್ವರ್ಗ ಪ್ರಾಪ್ತಿಯಾಗುವ ಹಾಗೆ ಮಾಡಿದಳು ಎಂಬ ಪ್ರತೀತಿ ಇದೆ. ಯಾವುದೇ ಕಾರ್ಯ ವನ್ನು ಆರಂಭಿಸಿದ ಮೇಲೆ ಅದು ಎಷ್ಟೇ ಬಾರಿ ವಿಫಲ ಆದರೂ ತಮ್ಮ ಗುರಿಯನ್ನು ಬದಲಾವಣೆ ಮಾಡಬಾರದು, ಏಕಾಗ್ರತೆಯಿಂದ ಆ ಕೆಲಸ ಪೂರ್ಣ ಮಾಡಲು ನಿರಂತರ ಪ್ರಯತ್ನ ಮಾಡಬೇಕು ಎಂಬ ಭಗೀರಥರ ಆದರ್ಶಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಂಡು ಜೀವನ



ಸಾಗಿಸಬೇಕು. ಪ್ರಯತ್ನವನ್ನು ಪದೇ ಪದೇ ಮಾಡುತ್ತಿದ್ದರೆ ತಕ್ಕ ಪ್ರತಿಫಲ ಸಿಗುತ್ತದೆ ಅದಕ್ಕೆ ನಮಗೆಲ್ಲ ಸ್ಪಷ್ಟ ಉದಾಹರಣೆಯೇ ಭಗೀರಥ. ಅದಕ್ಕಾಗಿಯೇ ಭಗೀರಥ ಪ್ರಯತ್ನಎಂಬ ಮಾತು ಜನಜನಿತವಾಗಿದೆ. ಕಪಿಲ ಮಹರ್ಷಿ ಕೋಪಾಗ್ನಿಗೆ ತುತ್ತಾಗಿ ಬೂದಿಯಾದ ಪೂರ್ವಜರಿಗೆ ಸದ್ಗತಿ ದೊರಕಿಸಿಕೊಡಲು ಅವರು ನಡೆಸಿದ ನಿರಂತರ ಪ್ರಯತ್ನ ಇಂದಿನ ಪೀಳಿಗೆಗೆ ಮಾದರಿಯಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಅವರು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಯಾಗಿ ಭೂಮಾಪನ ಇಲಾಖೆಯ ನಿವೃತ ಜಂಟಿ ನಿರ್ದೇಶಕ ವಿ ಅಜ್ಜಪ್ಪ ರವರು ಮತನಾಡಿ ಇದು ಜ್ಞಾನದ ಯುಗವಾಗಿರುವುದರಿಂದ ಎಲ್ಲರೂ ಶಿಕ್ಷಣದ ಕಡೆ ಮುಖ ಮಾಡಬೇಕು. ನಾವು ನಮ್ಮ ಜೀವನದಲ್ಲಿ ಮುಖ್ಯವಾಗಿ ಎರಡು ರೀತಿಯ ಅಧಿಕಾರವನ್ನು ಪಡೆದುಕೊಳ್ಳಲು ಎಲ್ಲರೂ ಪ್ರಯತ್ನ ಮಾಡುತ್ತಾರೆ. ಒಂದು ರಾಜಕೀಯ ಅಧಿಕಾರ ಮತ್ತೊಂದು ನೌಕರಶಾಹಿ ಅಧಿಕಾರ. ಅಧಿಕಾರ ಪಡೆಯುವ ಶಕ್ತಿ ನಮ್ಮಲ್ಲಿಯೇ ಇದೆ. ಉತ್ತಮ ಶಿಕ್ಷಣವನ್ನು ಪಡೆದು, ಉತ್ತಮವಾದ ಹುದ್ದೆಗಳನ್ನು ಅಲಂಕರಿಸಲು ನಿರಂತರ ಪ್ರಯತ್ನ ಮಾಡಿದರೆ ಅದು ನಿಜವಾದ ಭಗೀರಥನ ಪ್ರಯತ್ನ ಆಗುತ್ತದೆ ಈ ನಿಟ್ಟಿನಲ್ಲಿ ಸಮುದಾಯದ ವಿದ್ಯಾರ್ಥಿಗಳು ಪ್ರಯತ್ನ ಮಾಡಬೇಕು ಎಂದು ಕಿವಿ ಮಾತು ಹೇಳಿದರು.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಭಗೀರಥ ಸಮುದಾಯ ಭವನ ಕಟ್ಟಲು ಒಂದು ಎಕರೆ ಜಾಗ ಮಂಜೂರು ಮಾಡಲು ಸಮುದಾಯದವರು ಜಿಲ್ಲಾಡಳಿತಕ್ಕೆ ಈ ವೇಳೆ ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸದ ಮಕ್ಕಳಿಗೆ ಹಾಗೂ ಸಮುದಾಯದ ಹಿರಿಯ ಮುಖಂಡರಿಗೆ ಸನ್ಮಾನಿಸಿ ಪ್ರತಿಭ ಪುರಸ್ಕಾರ ಮಾಡಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಎನ್ ರಮೇಶ್, ತಹಸಿಲ್ದಾರ್ ಅನಿಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಿ.ಎಂ ರವಿಕುಮಾರ್, ಸಮುದಾಯದ ಮುಖಂಡರಾದ ಬಿ.ವೆಂಕಟೇಶ್ , ಎನ್ ಜಯರಾಮ್, ವೆಂಕಟಕೃಷ್ಣ, ಮುನಿರಾಜು, ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ತಾಲ್ಲೂಕು ಮಟ್ಟದ ಸಲಹಾ ಸಮಿತಿಗೆ ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಸೌಲಭ್ಯ ಹಾಗೂ ಮೀಸಲಾತಿಯನ್ನು ಕಲ್ಪಿಸಲು ತಾಲ್ಲೂಕು ಮಟ್ಟದ ಸಲಹಾ ಸಮಿತಿಗೆ ನಾಮ ನಿರ್ದೇಶಿತ ಸದಸ್ಯರನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ವಾಸವಾಗಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ಅಲೆಮಾರಿ,ಅರೆ ಅಲೆಮಾರಿ ಸಮುದಾಯಕ್ಕೆ ಸೇರಿರುವ ಆಸಕ್ತಿಯುಳ್ಳವರು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಚಿಕ್ಕಬಳ್ಳಾಪುರ ತಾಲ್ಲೂಕು, ಚಿಕ್ಕಬಳ್ಳಾಪುರ ಇಲ್ಲಿ ಅರ್ಜಿಯನ್ನು ಪಡೆದು ದಿನಾಂಕ:02-06-2025ರ ಸಂಜೆ 5.30ರೊಳಗೆ ಅರ್ಜಿಯನ್ನು ಭರ್ತಿ ಮಾಡಿ ಈ ಕಚೇರಿಗೆ ಸಲ್ಲಿಸತಕ್ಕದ್ದು.

**ಮಾನ ದಂಡಗಳು:** ನಾಮ ನಿರ್ದೇಶನ ಬಯಸುವ ವ್ಯಕ್ತಿಯು ಚಿಕ್ಕಬಳ್ಳಾಪುರ ಜಿಲ್ಲೆ/ಚಿಕ್ಕಬಳ್ಳಾಪುರ ತಾಲ್ಲೂಕಿನವರಾಗಿರತಕ್ಕದ್ದು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ಅಲೆಮಾರಿ/ಅರೆ ಅಲೆಮಾರಿ ಸಮುದಾಯಕ್ಕೆ ಸೇರಿದವರಾಗಿರಬೇಕು ಮತ್ತು ಅದೇ ಜಿಲ್ಲೆ/ತಾಲ್ಲೂಕಿನಲ್ಲಿ ಕನಿಷ್ಠ 15 ವರ್ಷ ವಾಸವಾಗಿರತ್ತದ್ದು. ಕನಿಷ್ಟ 35 ವರ್ಷದಿಂದ ಗರಿಷ್ಠ 65 ವರ್ಷ ವಯೋಮಿತಿ ಒಳಗಿರತಕ್ಕದ್ದು. ಕನಿಷ್ಠ ಎಸ್.ಎಸ್.ಎಲ್.ಸಿ ಯವರೆಗೆ ವಿದ್ಯಾಭ್ಯಾಸ ಹೊಂದಿರತಕ್ಕದ್ದು. ಚಿಕ್ಕಬಳ್ಳಾಪುರ ತಾಲ್ಲೂಕಿನ ಸಮಗ್ರ ಮಾಹಿತಿ ಹಾಗೂ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರು ವಾಸಿಸುವ ಸ್ಥಳ, ಅವರುಗಳ ಆರ್ಥಿಕ/ಸಾಮಾಜಿಕ/ಶೈಕ್ಷಣಿಕ ಸ್ಥಿತಿಗತಿ, ಕೈಗೊಳ್ಳುತ್ತಿರುವ ಉದ್ಯೋಗ ಇತ್ಯಾದಿ ಅಂಕಿ ಅಂಶಗಳ ಮಾಹಿತಿ ತಿಳಿದಿರಬೇಕು. ಆಯ್ಕೆಯಾಗುವ ವ್ಯಕ್ತಿಯು ರಾಜ್ಯದ ಅಲೆಮಾರಿ ಜನಾಂಗದವರಿಗೆ ಇಲಾಖೆಯಿಂದ ಲಭ್ಯವಾಗುತ್ತಿರುವ ಮೀಸಲಾತಿ ಸೌಲಭ್ಯ ಹಾಗೂ ಕಲ್ಯಾಣ ಕಾರ್ಯಕ್ರಮಗಳ ಮಾಹಿತಿ ಹೊಂದಿರತಕ್ಕದ್ದು. ಆಯ್ಕೆಯಾಗುವ ವ್ಯಕ್ತಿಯು ಯಾವುದೇ ರೀತಿಯ ಕ್ರಿಮಿನಲ್ ಮೊಕ್ಕದ್ದಮೆಗಳನ್ನು ಎದುರಿಸುತ್ತಿರಬಾರದು ಹಾಗೂ ದಂಡ/ಜುಲ್ಮಾನೆ/ಶಿಕ್ಷೆ ಅನುಭವಿಸಿರಬಾರದು. ಈ ಕುರಿತು ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರಿಂದ ಪೋಲೀಸ್ ಪರಿಶೀಲನಾ ವರದಿಯನ್ನು ಸಲ್ಲಿಸುವುದು. ಆಯ್ಕೆ ಸಮಿತಿಯು ತಾಲ್ಲೂಕು ಮಟ್ಟದಲ್ಲಿ ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯಾಗಿದ್ದು, ಅಂತಹ ಸಮಿತಿಗೆ ಸರಳ, ಸಾರ್ವಜನಿಕ ಹಾಗೂ ಇತರರೊಂದಿಗೆ ಗೌರವಾನ್ವಿತವಾಗಿ ವರ್ತಿಸುವಂತಹ ವಿವೇಕವುಳ್ಳ ಪ್ರಜ್ಞಾವಂತರಾಗಿರತಕ್ಕದ್ದು. ಈ ಆಯ್ಕೆಯು ನೇಮಕಗೊಂಡ ದಿನಾಂಕದಿಂದ ಸಲಹಾ/ಪರಿಶೀಲನಾ ಸಮಿತಿಯ ಕಾಲಾವಧಿಯವರೆಗೆ ಇದ್ದು, ಸಮಿತಿಯ ವಿಸ್ತರಿತ ಅವಧಿಗೆ ವಿಸ್ತರಿಸಲ್ಪಡುವುದಿಲ್ಲ. ಈ ಅವಧಿಯಲ್ಲಿ ಸತತ 03 ಸಭೆಗಳಿಗೆ ಗೈರು ಹಾಜರಾದಲ್ಲಿ ಮತ್ತು ಆಯ್ಕೆ ಸಮಿತಿಯ ಅಧ್ಯಕ್ಷರು/ಸದಸ್ಯರೊಂದಿಗೆ ಅನುಚಿತವಾಗಿ ವಿಸ್ತರಿಸಿದಲ್ಲಿ ವಜಾ ಮಾಡಲಾಗುವುದು.

## ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗಗಳಿಗೆ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಜೂನ್ 16 ರೊಳಗೆ ಸಲ್ಲಿಸಬಹುದು. ವಿದ್ಯಾರ್ಥಿಗಳು https://shp.karnataka.gov.in/bcwd ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in ಅನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಶ್ರೀ.ಡಿ.ದೇವರಾಜು ಅರಸು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕಾರ್ಖಾನೆ ಪೇಟೆ, ಚಿಕ್ಕಬಳ್ಳಾಪುರ ಟೌನ್ ನ ನಿಲಯದ ಮೇಲ್ವಿಚಾರಕರು/ಸಿಬ್ಬಂದಿ ವಿ.ಎನ್.ವೇಣು- 9901714317, ರಾಜೇಶ್ ಎಸ್-8618451128, ವಿಜಯ್ ಕುಮಾರ್-9141729012 ಗೆ ಸಂಪರ್ಕಿಸಬಹುದು.

## ಮಕ್ಕಳ ಕಲ್ಯಾಣ ಸಮಿತಿ ಸಭೆ

**ಚಿಕ್ಕಬಳ್ಳಾಪುರ:** ಬೆಂಗಳೂರು ನಗರ (ಕೇಂದ್ರ) ಜಿಲ್ಲೆಯ ಮಕ್ಕಳ ಕಲ್ಯಾಣ ಸಮಿತಿ-2 ಕಾರ್ಯಕಲಾಪಗಳನ್ನು ಮಕ್ಕಳ ಹಿತದೃಷ್ಟಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಯ ಮಕ್ಕಳ ಕಲ್ಯಾಣ ಸಮಿತಿಯು ಹೆಚ್ಚುವರಿಯಾಗಿ ಕಾರ್ಯ ನಿರ್ವಹಿಸಲು ಮಾನ್ಯ ನಿರ್ದೇಶಕರು ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು ರವರು ಆದೇಶಿಸಿರುತ್ತಾರೆ. ಆದ ಕಾರಣ ಮಕ್ಕಳ ಕಲ್ಯಾಣ ಸಮಿತಿಯು ಮೇ-2025 ರ ಮಾಹೆಯಿಂದ ವಾರದಲ್ಲಿ ಮಂಗಳವಾರ, ಗುರುವಾರ ಮತ್ತು ಶನಿವಾರದಂದು ಸರ್ಕಾರಿ ಬಾಲಕಿಯರ ಬಾಲಮಂದಿರ ಡ್ರೀಮ್ ಸಿಟಿ ಲೇಔಟ್, ಬಿಬಿ ರಸ್ತೆ, ಚಿಕ್ಕಬಳ್ಳಾಪುರ ಇಲ್ಲಿ ನಡೆಯಲು ಉದ್ದೇಶಿಸಲಾಗಿದೆ. ಅದರಂತೆ ಎಲ್ಲಾ ಅಧಿಕಾರಿಗಳು, ಸಾರ್ವಜನಿಕರ ಗಮನಕ್ಕೆ ತಂದು ಮಕ್ಕಳ ಹಿತದೃಷ್ಟಿಯಿಂದ ಮುಂದಿನ ಪುನರ್ವಸತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅನುಕೂಲವಾಗುವಂತೆ ಸಹಕರಿಸಬೇಕೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರಸಭೆ ಉಪಾಧ್ಯಕ್ಷ ನಾಗರಾಜ್ ಹುಟ್ಟುಹಬ್ಬ ಆಚರಣೆ

**ಚಿಕ್ಕಬಳ್ಳಾಪುರ:** 5ನೇ ವಾರ್ಡಿನ ನಗರಸಭಾ ಸದಸ್ಯ ಹಾಗೂ ನಗರಸಭೆ ಉಪಾಧ್ಯಕ್ಷ ಜೆ ನಾಗರಾಜ್ ಅವರಿಗೆ ಇಂದು 48ನೇ ಹುಟ್ಟುಹಬ್ಬದ ಸಂಭ್ರಮ,ವಾರ್ಡ್ ನಿವಾಸಿಗಳ, ಸ್ನೇಹಿತರ,ಅಭಿಮಾನಿಗಳ ವಲಯದಿಂದ ಅವರಿಗೆ ಶುಭಾಶಯಗಳ ಮಹಾಪುರವೆ ಹರಿದು ಬಂದಿದ್ದು,ಹುಟ್ಟು ಹಬ್ಬದ ಶುಭಾಶಯ ಕೋರಿದ ಎಲ್ಲರ ಪ್ರೀತಿಗೆ ನಾನು ಎಂದೆಂದಿಗೂ ಅಭಾರಿಯಾಗಿರುತ್ತೇನೆ,

ಜವಾಬ್ದಾರಿಯುತ ಸ್ಥಾನದಲ್ಲಿರುವ ನನಗೆ ಜನರ ಸಮಸ್ಯೆಗಳಿಗೆ ಸ್ಪಂದಿಸಿ ಸೂಕ್ತ ಪರಿಹಾರ ಒದಗಿಸುವುದೆ ನನ್ನ ಮುಖ್ಯ ಉದ್ದೇಶ,ನನ್ನ ಕಾರ್ಯವೈಖರಿಯಿಂದ ಜನರ ಪ್ರೀತಿಗೆ ಪಾತ್ರನಾಗಿದ್ದೇನೆ ಅವರ ಪ್ರೀತಿಗೆ ಬೆಲೆ ಕಟ್ಟಲಾಗದು,ಎಂದು ಬರ್ತಡೇ ಬಾಯ್ ನಗರಸಭೆ ಉಪಾಧ್ಯಕ್ಷ ಜೆ ನಾಗರಾಜ್ ತಿಳಿಸಿದ್ದಾರೆ.

ಇಂದು ನಗರಸಭೆ ಉಪಾಧ್ಯಕ್ಷ ಜೆ ನಾಗರಾಜ್ 48ನೇ ವರ್ಷಕ್ಕೆ ಕಾಲಿಟ್ಟದ್ದು ನಗರಸಭೆ ಆವರಣದಲ್ಲಿ ಪೌರಕಾರ್ಮಿಕರು,5ನೇ ವಾರ್ಡ್ ನಿವಾಸಿಗಳು, ಜೆ ನಾಗರಾಜ್ ಅವರ ಹುಟ್ಟುಹಬ್ಬದ ಅಂಗವಾಗಿ ಕೇಕ್ ಕತ್ತರಿಸಿ ದೇವರು ಅವರಿಗೆ ಆರೋಗ್ಯ ಆಯಸ್ಸು ನೀಡಲಿ ರಾಜಕೀಯವಾಗಿ ಉನ್ನತ ಸ್ಥಾನಕ್ಕೆ ಬೆಳೆಯಲಿ ನಿರಂತರವಾಗಿ ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದಾರೆ,ಇದಲ್ಲದೆ ನಗರದ ಸಿ ಎಸ್ ಐ ಆಸ್ಪತ್ರೆಯಲ್ಲಿ ಕೂಡ ಸಿಬ್ಬಂದಿ ವರ್ಗದವರು ಜೆ



ನಾಗರಾಜ್ ಅವರಿಗೆ ಹುಟ್ಟುಹಬ್ಬದ ಶುಭಾಶಯ ಕೋರಿ ಸನ್ಮಾನಿಸಿ ಗೌರವಿಸಿದರು,ನಂತರ ಆಂಜನೇಯ ಸ್ವಾಮಿ ದೇವಸ್ಥಾನ,ನಗರದ ಎಂ ಜಿ ರಸ್ತೆಯಲ್ಲಿರುವ ಮಿಸ್ಕೀನ್ ಶಾ ಸೈಲಾನಿ ದರ್ಗಾಗೆ ಬೇಟಿ ನೀಡಿದ ಜೆ ನಾಗರಾಜ್ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬರ್ತಡೇ ಬಾಯ್ ಜೆ.ನಾಗರಾಜ್ ರಾಜಕೀಯವಾಗಿ ಈ ಮಟ್ಟಕ್ಕೆ ಬೆಳೆಯಲು ವಾರ್ಡಿನ ನಿವಾಸಿಗಳು ಹಾಗೂ ಸಂಸದ ಡಾ ಕೆ ಸುಧಾಕರ್ ಕಾರಣ ಎಂದಿಗೂ ಇವರ ಪ್ರೀತಿಗೆ ಅಭಾರಿಯಾಗಿರುತ್ತೇನೆ,ಪ್ರತಿ ದಿನದ ವಾಡಿಕೆಯಂತೆ ಇಂದು ಕೂಡ ಶ್ವಾನ ಗಳಿಗೆ ವಾನರು ಗಳಿಗೆ ಹೊಟ್ಟೆ ತುಂಬಿಸುವು ಸಲುವಾಗಿ ಬಿಸ್ಕಟ್ ಹಾಗೂ ಹಣ್ಣು ನೀಡಿದ್ದೇನೆ,ನಗರಸಭೆ ಸದಸ್ಯನಾಗಿ ವಾರ್ಡ್ ನಿವಾಸಿಗಳ ಸಮಸ್ಯೆಗಳನ್ನು ಪರಿಹರಿಸಲು ಪ್ರಥಮ ಆದ್ಯತೆ ನೀಡಲಾಗಿದೆ ಇನ್ನೂ ಉಪಾಧ್ಯಕ್ಷ ಸ್ಥಾನ ಅಲಂಕರಿಸದ ಮೇಲೆ ಇನ್ನು ಜವಾಬ್ದಾರಿ ಹೆಚ್ಚಾಗಿದೆ ಪ್ರತಿ ವಾರ್ಡ್ ನಿವಾಸಿಗಳ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳಲಾಗಿದ್ದು ಜನರ ಪ್ರೀತಿಗೆ ಪಾತ್ರನಾಗಿದ್ದೇನೆ ಜನರ ಮನಸ್ಸಿನಲ್ಲಿ ಜಾಗ ಮಾಡಿದ್ದುಇಂದು ನನ್ನ ಹುಟ್ಟು ಹಬ್ಬದಂದು ಕೇವಲ ವಾರ್ಡ್ ನಿವಾಸಿಗಳಲ್ಲದೆ ನಗರಾಧ್ಯಾಂತ ಜನರು ಶುಭಾಶಯಗಳು ಕೋರಿತ್ತಿದ್ದು ಅವರ ಪ್ರೀತಿ ಎಂದಿಗೂ ಅಭಾರಿಯಾಗಿರುತ್ತೇನೆ ಇನ್ನೂ ಜನರಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಜೊತೆಗೆ ನಗರಸಭೆ ಆಸ್ತಿಗಳನ್ನ ಉಳಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.ಈ ಸಂದರ್ಭದಲ್ಲಿ ಸಭಾಪಾಲಕರು ಸ್ಯಾಮ್ಸನ್,ರಿತೀಶ್ ಜಾನ್ಸನ್,ಸ್ವಾಮಿ ದಾಸ್,ಸಾಮ್ಯುಯೆಲ್ ಸಂದೀಪ್ ,ಸಂತೋಷ,ಇತರರು ಹಾಜರಾದ್ದರು.

# ನೇರ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಕೈಮಗ್ಗ ಮತ್ತು ಜವಳಿ ಇಲಾಖೆಯ ವತಿಯಿಂದ 2025-26 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ ನೇರವಾಗಿ 02 ನೇ ವರ್ಷದ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಪ್ರವೇಶಕ್ಕಾಗಿ 10 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ವ್ಯಾಸಂಗ ಮಾಡುವ ಸಮಯದಲ್ಲಿ ಅವರಿಗೆ ಪ್ರತಿ ತಿಂಗಳು ರೂ.2,500/- ರಂತೆ ಶಿ?ವೇತನ ನೀಡಲಾಗುವುದು ಹಾಗೂ ಆಯ್ಕೆಯಾದ ಅಭ್ಯರ್ಥಿಗಳಿಗೆ ಆಯಾಯ ಐ.ಐ.ಹೆಚ್.ಟಿ ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುತ್ತದೆ.ವಿದ್ಯಾರ್ಹತೆ: ಗಣಿತ, ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರದೊಂದಿಗೆ 10+2 ಪರೀಕ್ಷೆಯಲ್ಲಿ ಅಥವಾ ಯಾವುದೇ ಜವಳಿ ವಿಭಾಗದ ವೃತ್ತಿಪರ ವಿಭಾಗದಲ್ಲಿ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಅಥವಾ 10ನೇ ತರಗತಿ ತೇರ್ಗಡೆ+(2 ವರ್ಷಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶಕ್ಕೆ ಅಥವಾ 10+2 ಪಾಸ್+(2 ವ?ಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶ ಪಡೆಯಲು ಅರ್ಹರಾಗಿರಬೇಕು. ಜವಳಿ ವಿಭಾಗದ ವೃತ್ತಿಪರ ಸ್ಟ್ರೀಮ್ ನಲ್ಲಿ 10+2 ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಐ.ಐ.ಹೆಚ್.ಟಿ ನಡೆಸುವ ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರದಲ್ಲಿ ಬ್ರಿಡ್ಜ್ ಕೋರ್ಸ್‌ನ್ನು ಅಭ್ಯಾಸ ಮಾಡಬೇಕು. ಜುಲೈ 01,2025 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 25 ವರ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 27 ವರ್ಷ ವಯೋಮಿತಿಯನ್ನು ಹೊಂದಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೂಡೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ. 2025-26 ನೇ ಸಾಲಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷದ ಡಿಪ್ಲೋಮಾ ಕೋರ್ಸ್ ಗೆ ನೇರ ಪ್ರವೇಶಕ್ಕಾಗಿ ಲಭ್ಯವಿರುವ ಅಭ್ಯರ್ಥಿಗಳ ಸಂಖ್ಯೆ ಮತ್ತು ಸಂಸ್ಥೆಗಳ ವಿವಿರ: ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ - ಬೆಟಗೇರಿ( ಕರ್ನಾಟಕ), 02 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ , ಸೇಲಂ (ತಮಿಳುನಾಡು), 03 ಅಭ್ಯರ್ಥಿಗಳು, ಎಸ್. ಪಿ.ಕೆ. ಎಂ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ ಆಂಧ್ರಪ್ರದೇಶ), 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು(ಕೇರಳ), 02 ಅಭ್ಯರ್ಥಿಗಳು ಒಟ್ಟು10 ಅಭ್ಯರ್ಥಿಗಳಿಗೆ ಅವಕಾಶವಿದ್ದು, ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್ ಕರೆಯಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ https://khtigadag.ac.in/Lateralentryadmissionform.pdf ಮೂಲಕ ಡೌನ್ಲೋಡ್ ಮಾಡಿಕೊಂಡು ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಪ್ರಾಂಶುಪಾಲರು ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪುರ ಗದಗ-ಬೆಟಗೇರಿ ಇವರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ನರಸಾಪುರ ಗದಗ- ಬೆಟಗೇರಿ ಕಚೇರಿ ದೂ. ಸಂ: 08372-297221 ಮೋ.ನಂ.9449162822 ಅಥವಾ ಉಪ ನಿರ್ದೇಶಕರ ಕಚೇರಿ ಕೈಮಗ್ಗ ಮತ್ತು ಜವಳಿ ಇಲಾಖೆ ಸಿ.ಟಿ.ಐ.ಕಟ್ಟಡ ಸೈಯಾಜಿ ರಾವ್ ರಸ್ತೆ ಜಿಲ್ಲಾ ಪಂಚಾಯತ್ ಮೈಸೂರು ದೂ. ಸಂ: 0821-2441353 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್‌ನ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐತಿಹಾಸಿಕ ದಾಖಲೆ, ಬಿತ್ತಿಪತ್ರ, ನಾಣ್ಯಗಳ ಪ್ರದರ್ಶನ

**ಮಂಡ್ಯ:** ಸರ್ಕಾರಿ ಮಹಿಳಾ ಕಾಲೇಜು ಮಂಡ್ಯ ಇಲ್ಲಿಇತಿಹಾಸ ಸ್ನಾತಕ ಮತ್ತು ಸ್ನಾತಕೋತ್ತರ ವಿಭಾಗದ ವತಿಯಿಂದ ಹಮ್ಮಿಕೊಂಡಿದ್ದಒಂದು ದಿನದ ಐತಿಹಾಸಿಕ ದಾಖಲೆಗಳು ಬಿತ್ತಿ ಪತ್ರ ಪ್ರದರ್ಶನ ಹಾಗೂ ನಾಣ್ಯಗಳ ಪ್ರದರ್ಶನವನ್ನುಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ.ಗುರುರಾಜ ಪ್ರಭು ಕೆ ರವರು ಮತ್ತು ಮಂಡ್ಯಜಿಲ್ಲೆಯ ಪ್ರಸಿದ್ಧ ನಾಣ್ಯ ಸಂಗ್ರಹಕಾರರಾದ ಮಧುಕರ್ ರವರು ಹಳೆಯ ಕಾಲದಚಿನ್ನದ ನಾಣ್ಯಗಳನ್ನು ಪ್ರದರ್ಶನ ಮಾಡುವುದರ ಮೂಲಕ ಕಾರ್ಯಕ್ರಮವನ್ನುಉದ್ಘಾಟನೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಧುಕರ್‌ರವರು ವಿದ್ಯಾರ್ಥಿಗಳು ಇಂತಹಆರೋಗ್ಯಕರ ಹವ್ಯಾಸಗಳನ್ನು ಬೆಳೆಸಿಕೊಳ್ಳುವುದರ ಮೂಲಕ ಇತಿಹಾಸದ ಬಗ್ಗೆ ಕುತೂಹಲವನ್ನು ಹಾಗೂ ಅಧ್ಯಯನವನ್ನು ಮಾಡಬೇಕುಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ನಾಣ್ಯಗಳು ಆಯಕಾಲದಆರ್ಥಿಕ ಸ್ಥಿತಿಗಳು ಸಾಮಾಜಿಕ ಮತ್ತು ಸಾಂಸ್ಕೃತಿಕ ವಿಷಯಗಳ ಮೇಲೆ ಬೆಳಕು ಚೆಲ್ಲುತ್ತವೆ. ಇತಿಹಾಸವನ್ನುಕಟ್ಟಲು ನಾಣ್ಯಗಳು ಪ್ರಾಥಮಿಕ ಆಕರಗಳಾಗುತ್ತವೆ ಆದುದರಿಂದ ವಿದ್ಯಾರ್ಥಿಗಳಾದ ತಾವುಇಂತಹ ವಿಶೇಷ ಹವ್ಯಾಸಗಳನ್ನು ಬೆಳೆಸಿಕೊಳ್ಳುವುದರ ಮೂಲಕ ತಮ್ಮ ಬದುಕನ್ನು ಕಟ್ಟಿಕೊಳ್ಳಬೇಕು ಎಂದು ವಿವರಿಸಿದರು .

ಈ ಸಂದರ್ಭದಲ್ಲಿ ಸ್ನಾತಕ ವಿಭಾಗದ ಮುಖ್ಯಸ್ಥರಾದ ಪ್ರೊಫೆಸರ್‌ಕೃಷ್ಣೇಗೌಡರವರು ಮಾತನಾಡಿಇತಿಹಾಸಒಂದು ವಿಜ್ಞಾನ ಹೆಚ್ಚು ಅಲ್ಲಕಡಿಮೆಯೂಅಲ್ಲಎನ್ನುವ ಹೇಳಿಕೆಯನ್ನು ನೀಡುವುದರ ಮೂಲಕ ವೈಜ್ಞಾನಿಕ ತಳಹದಿಯ ಮೇಲೆ ಇತಿಹಾಸ ನಿಂತಿದೆ ಆಧಾರಗಳು ಇಲ್ಲದೆಇತಿಹಾಸವನ್ನುರಚಿಸಲು ಸಾಧ್ಯವಿಲ್ಲ ಆದುದರಿಂದ ಹಳೆಯ ತಾಳೆಗರಿಗಳು ಸ್ಮಾರಕಗಳು ನಾಣ್ಯಗಳು ಮೊದಲಾದವುಗಳನ್ನು ಸಂರಕ್ಷಿಸ ಬೇಕಾಗಿದ್ದುಇತಿಹಾಸ ವಿದ್ಯಾರ್ಥಿಗಳ ಪ್ರಮುಖಕರ್ತವ್ಯಎಂದು ಸಲಹೆ ನೀಡಿದರು.



ಕಾಲೇಜಿನ ಪ್ರಾಂಶುಪಾಲರಾದಡಾ.ಗುರುರಾಜ ಪ್ರಭು ಕೆ ಅವರುಅಧ್ಯಕ್ಷತೆ ವಹಿಸಿ ಇತಿಹಾಸವನ್ನು ಪುನರ್ ನಿರ್ಮಿಸುವಲ್ಲಿ ಮತ್ತುಇತಿಹಾಸವನ್ನು ಮುಂದಿನ ಜನಾಂಗಕ್ಕೆಕೊಂಡೊಯ್ಯುವಲ್ಲಿ ವಿದ್ಯಾರ್ಥಿಯುವಕರ ಪಾತ್ರವನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಚೋಳರ ಕಾಲದ ನಾಣ್ಯಗಳಿಂದ ಹಿಡಿದು ಹಿಂದಿನವರೆಗೆ ನಾಣ್ಯಗಳು ಬೆಳೆದು ಬಂದ ಬಗೆ ವಿವಿಧ ಮಾದರಿಯ ನೋಟುಗಳು ವಿದೇಶಿ ನೋಟುಗಳು ಚಿನ್ನ ಮತ್ತು ಬೆಳ್ಳಿಯ ನಾಣ್ಯಗಳು ಮೊದಲಾದವುಗಳನ್ನು ಪ್ರದರ್ಶಿಸಲಾಯಿತು ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಅತ್ಯಂತಕುತೂಹಲದಿಂದ ಪ್ರದರ್ಶನದಲ್ಲಿ ಭಾಗವಹಿಸಿದರು.

ಈ ಪ್ರದರ್ಶನದಲ್ಲಿ 1940 ರಿಂದ ಪ್ರಸ್ತುತದವರೆಗೂ ಹಳೆಯ ವಾರಪತ್ರಿಕೆಗಳು ದಿನಪತ್ರಿಕೆಗಳನ್ನು ಪ್ರದರ್ಶಿಸಲಾಯಿತು 1947ರ ಸ್ವಾತಂತ್ರ್ಯ ದಿನಾಚರಣೆಯ ದಿನದ ಪತ್ರಿಕೆ,ಗಣರಾಜ್ಯ ದಿನದ ಪತ್ರಿಕೆ, ಕರ್ನಾಟಕಏಕೀಕರಣದ ಪತ್ರಿಕೆ, ಮೊದಲಾದ ಮಹತ್ವದ ದಿನದ ಪತ್ರಿಕೆಯ ಮುಖಪುಟಗಳನ್ನು ವಿದ್ಯಾರ್ಥಿಗಳು ಕುತೂಹಲದಿಂದ ನೋಡಿದರು.ಈ ಸಂದರ್ಭದಲ್ಲಿ ಪ್ರಜಾಮತ, ಸಂಜೆಯಕರ್ನಾಟಕ, ನಂದ ಗೋಕುಲ,ನವಜೀವನ, ಯುಗವಾಣಿ,ಸಂಯುಕ್ತಕರ್ನಾಟಕ, ತಾಯಿನುಡಿ, ನವಯುಗ, ಪ್ರಜಾವಾಣಿ ಮೊದಲಾದ ಹಳೆಯ ಪತ್ರಿಕೆಗಳನ್ನು ಪ್ರದರ್ಶನ ಮಾಡಲಾಯಿತು. ಐತಿಹಾಸಿಕ ದಾಖಲೆಗಳಾದ ತಾಳೆಗರಿ ಹಾಗೂ ಕೋರ ಬಟ್ಟೆಯಿಂದ ನಿರ್ಮಿತವಾದ ಹಳೆಯ ದಾಖಲೆಯನ್ನು ಪ್ರದರ್ಶಿಸಲಾಯಿತು. ಹಾಗೂ ವಿದ್ಯಾರ್ಥಿನಿಯರಿಂದ ಭಾರತದಇತಿಹಾಸದ ವಿವಿಧ ಮಾದರಿಗಳನ್ನು ಪೋಸ್ಟರ್ಗಳನ್ನು ರಚಿಸಿ ಅದರ ಮಹತ್ವವನ್ನು ವಿದ್ಯಾರ್ಥಿಗಳು ಪ್ರಸ್ತುತಪಡಿಸಿದರು ಹಾಗೂ ಕ್ರೆಡಿಟ್‌ಆಫ್ ವಾರ್‌ಎನ್ನುವಗೋಡೆ ಬರಹದ ಮೂಲಕ ಹಲವು ಮಹನೀಯರ ಶಾಂತಿ ಸಾರುವ ಹೇಳಿಕೆಗಳು ಮತ್ತುಯುದ್ಧದ ಭೀಬತ್ಸ ಚಿತ್ರಗಳನ್ನು ಪ್ರದರ್ಶಿಸಿ ಜಗತ್ತಿಗೆ ಶಾಂತಿಯ ಮಹತ್ವವನ್ನು ಸಾರಿದರು. ಸಂದರ್ಭದಲ್ಲಿಕಾಲೇಜಿನ ಹಿರಿಯ ಪ್ರಾಧ್ಯಾಪಕರಾದಡಾ. ಶಿವರಾಮು ಎಸ್ ರವರುಇತಿಹಾಸವನ್ನುಕಟ್ಟುವಲ್ಲಿ ದಾಖಲೆಗಳ ಮಹತ್ವವನ್ನು ತಿಳಿಸಿದರು ಕಾರ್ಯಕ್ರಮದಲ್ಲಿಇತಿಹಾಸ ವಿಭಾಗದಡಾ. ಕವಿತಾರವರು. ಶಾಂತರಾಜು ಟಿ ಎನ್,ಹಿರಿಯ ಪ್ರಾಧ್ಯಾಪಕರಾದ ಭರತ್‌ರಾಜ್, ಪದ್ಮನಾಭ ಕೆ ಎ. ಆಂಗ್ಲ ಭಾಷಾ ವಿಭಾಗದ ಪ್ರಸನ್ನಕುಮಾರ್ ಕೆಎಂ ಅವರು ಹಾಜರಿದ್ದರು.

# ಜ್ಯೋತಿರ್ಲಿಂಗಗಳ ಪುಣ್ಯ ದರ್ಶನದಿಂದ ಜೀವನ ಬದಲು

**ಚಾಮರಾಜನಗರ:** ಜಗತ್ತಿನಲ್ಲಿ ಅನೇಕರು ಅನೇಕ ರೀತಿಯಲ್ಲಿ ಪರಮಾತ್ಮನ ಬಗ್ಗೆ ವಿಚಾರವನ್ನು ತಿಳಿಸುತ್ತಾರೆ ಆದರೆ ಈಶ್ವರೀಯ ವಿಶ್ವವಿದ್ಯಾಲಯದವರು ಒಬ್ಬ ಪರಮಾತ್ಮನ ಯತಾರ್ಥ ಪರಿಚಯದ ಬಗ್ಗೆ ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯ ದರ್ಶನದ ಮೂಲಕ ಅರಿವು ಮೂಡಿಸುತ್ತಿದ್ದಾರೆ ಎಂದು ಮಾಜಿ ಶಾಸಕಿ ಪರಿಮಳ ನಾಗಪ್ಪರವರು ಅಭಿಪ್ರಾಯ ಪಟ್ಟರು.

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ರಮಾಪುರ ಗ್ರಾಮದಲ್ಲಿ ಒಂದು ವಾರ ನಡೆಯುವ ಗ್ರಾಮ ದೇವತೆ ಅಕ್ಕ ಮಾರಮ್ಮನವರ ಜಾತ್ರಾ ಮಹೋತ್ಸವದ ಪ್ರಯುಕ್ತ, ಅಂತರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ವತಿಯಿಂದ ಆಯೋಜಿಸಲಾಗಿರುವ ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯ ದರ್ಶನ, ಚೈತನ್ಯ ದೇವಿಯರ ಪುಣ್ಯ ದರ್ಶನ, ಹಾಗೂ ಉದ್ಭವಲಿಂಗ ದರ್ಶನದ ಮೇಳವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಭಾರತದ ಮೂಲೆ ಮೂಲೆಯಲ್ಲಿರುವ ದ್ವಾದಶ ಜೋತಿರ್ಲಿಂಗಗಳ ಮಾದರಿಯನ್ನು ಒಂದೇ ವೇದಿಕೆಯಲ್ಲಿ ಗ್ರಾಮೀಣ ಜನತೆಗೆ ಹತ್ತಿರದಿಂದ ಪುಣ್ಯ ದರ್ಶನ ಮಾಡಿಸಿ ಅವರಲ್ಲಿ ಮಾನವೀಯ ಮೌಲ್ಯಗಳ ಜಾಗೃತಿಯನ್ನು ಮೂಡಿಸುತ್ತಿರುವ ಈಶ್ವರೀಯ ವಿಶ್ವವಿದ್ಯಾಲಯದ ಶ್ಲಾಘನೀಯ ಕಾರ್ಯ ಎಂದು ಪ್ರಶಂಸಿದರು. ಇಲ್ಲಿ ಸರ್ವ ಧರ್ಮದವರಿಗೂ ಒಬ್ಬನೇ ಭಗವಂತ, ಭಗವಂತ ಒಬ್ಬ ನಾಮ ಹಲವು,ಈಶ್ವರ್ ಏಕ್ ಮಹಿಮಾ ಅನೇಕ್, ಸಬ್ಕಾ ಮಾಲಿಕ್ ಏಕ ಹೈ, ಈ ಸಿದ್ದಾಂತ ಎಲ್ಲರಿಗೂ ಪೂರಕವಾಗಿದೆ ಎಂದರು



ಸ್ವಾಮಿ ವಿವೇಕಾನಂದ ಸದ್ಭಾವನಾ ರಾಜ್ಯ ಪ್ರಶಸ್ತಿ ಪುರಸ್ಕೃತೆ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ಮಾತನಾಡಿ ಇಡೀ ಜಗತ್ತಿನಲ್ಲಿ ಭಗವಂತನಿಗಿಂತ ಅತಿ ದೊಡ್ಡದಾದಂತ ಕಾರ್ಯ ಯಾರಿಂದಲೂ ಸಹ ಮಾಡಲು ಸಾಧ್ಯವಿಲ್ಲ ಈ ಪತಿತ ಜಗತ್ತನ್ನು ಪಾವನ ಜಗತ್ತು ದೈವೀ ಮೌಲ್ಯಗಳ ಜಗತ್ತನ್ನಾಗಿ ಪರಿವರ್ತಿಸಿ. ಒಂದೇ ರಾಜ್ಯ ಒಂದೇ ಭಾಷೆ ಒಬ್ಬರ ಕೈಯಲ್ಲಿ ಆಡಳಿತ ಇರುವ ರಾಜ್ಯ ಯಾವುದನ್ನು ಗಾಂಧೀಜಿಯವರು ಕನಸು ಕಂಡಿದ್ದರು ರಾಮರಾಜ್ಯ ಎಂದು ಅದನ್ನ ಬೈಬಲ್ನಲ್ಲಿ ದೇವರ ರಾಜ್ಯ ಅಥವಾ ಪ್ಯಾರಡೈಸ್ ಕುರಾನ್ ನಲ್ಲಿ ಜನ್ನತ್ ಅಥವಾ ಅಲ್ಲನ ಹೂದೋಟ ಅದನ್ನೇ ಹಿಂದುಗಳು ಸ್ವರ್ಗ ವೈಕುಂಠ ಲಕ್ಷ್ಮಿ ನಾರಾಯಣರ ರಾಜ್ಯ ಎಂದು ಕರೆಯುತ್ತಾರೆ. ಅಂತಹ ಶಾಂತಿಯ ಜಗತ್ ನಿರ್ಮಾಣದ ಕರ್ತವ್ಯವನ್ನು ಮಾಡಿದುದರ ಸ್ಮಾರಕವಾಗಿಯೇ ನಾವು ಭಾರತದ್ಯಂತ ದ್ವಾದಶ ಜ್ಯೋತಿರ್ಲಿಂಗಗಳನ್ನ ಸ್ಮಾರಕ ರೂಪದಲ್ಲಿ ಕಾಣಬಹುದಾಗಿದೆ ಅದನ್ನು ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಜನತೆಗೆ ಆಧ್ಯಾತ್ಮ ಜ್ಞಾನವನ್ನು ಚಿತ್ರಗಳ ಮೂಲಕ ಮನದಟ್ಟು ಮಾಡುವ ನಿಟ್ಟನಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಜಿಲ್ಲಾ ಸಂಚಾಲಕಿ ರಾಜ ಯೋಗಿನಿ ಬ್ರಹ್ಮಾಕುಮಾರಿ ಪ್ರಭಾಮಣೀಜೀ ಆಶೀರ್ವಚನ ನೀಡಿ ಇಲ್ಲಿ ಬಂದಿರುವರೆಲ್ಲರೂ ಸಾವಿರ ಸಾವಿರ ಸಂಖ್ಯೆಯಲ್ಲಿ ಈ ಜ್ಯೋತಿ ಲಿಂಗ ದರ್ಶನ ಮಾಡಿಸುವುದರ ಮೂಲಕ ಸಹಕಾರಿಗಳಾಗುತ್ತೀರಾ ಎಂದು ಶುಭ ಕೋರಿದರು. ಈ ಓಂ ಶಾಂತಿ ಮಂಟಪದಲ್ಲಿ ಪ್ರತಿನಿತ್ಯ ಸಾಂಸ್ಕೃತಿಕ ಕಾರ್ಯಕ್ರಮ ನವ ಚೈತನ್ಯ ದುರ್ಗೆಯರ ಪುಣ್ಯ ದರ್ಶನ ಹಾಗೂ ಉದ್ಭವ ಲಿಂಗದ ದರ್ಶನ, ದ್ವಾದಶ ಜ್ಯೋತಿರ್ ಲಿಂಗಗಳ ಪುಣ್ಯ ದರ್ಶನ ಚಿತ್ರ ಪಠಗಳ ಮೂಲಕ ವಿಶ್ವ ದರ್ಶನ ಪ್ರದರ್ಶನ ಮಾಡಿಸಲಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಓಂ ಶಾಂತಿ ನ್ಯೂಸ್ ಸರ್ವಿಸ್ ನ ಬಿ ಕೆ ಮಂಜುನಾಥ ಆರಾಧ್ಯ, ಬಿಂದು, ಶಾಂಭವಿ, ಪುಷ್ಪ, ಸಂತೋಷ ಶ್ರೀನಿವಾಸ ಶಂಕರ ಗಿರೀಶ ನಾಗರಾಜ ಊರಿನ ಪ್ರಮುಖರು ಹಾಜರಿದ್ದರು.

# ಇಂಧನ ಸಚಿವ ಕೆ.ಜೆ ಜಾರ್ಜ್ ಅಣಕು ಶವಯಾತ್ರೆ ನಡೆಸಿ ಪ್ರತಿಭಟನೆ



**ಚಾಮರಾಜನಗರ:** ಸ್ಮಾರ್ಟ್ ಮೀಟರ್ ಅಳವಡಿಕೆ ಹಾಗೂ ರೈತರ ಬೇಡಿಕೆ ಈಡೇರಿಕೆ ಆಗ್ರಹಿಸಿದ ರೈತರು ಇಂಧನ ಸಚಿವ ಕೆ.ಜೆ ಜಾರ್ಜ್ ರವರ ಅಣಕು ಶವಯಾತ್ರೆ ನಡೆಸಿ ಪ್ರತಿಭಟನೆ ನಡೆಸಿದರು.

ಚಾಮರಾಜನಗರದ ಶ್ರೀ ಚಾಮರಾಜೇಶ್ವರ ದೇವಾಲಯ ಮುಂಭಾಗದಲ್ಲಿ ಸಮಾವೇಶಗೊಂಡ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು, ಅಲ್ಲಿಂದ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ಅಣುಕು ಶವಯಾತ್ರೆ ನಡೆಸಿ ಪಚ್ಚಪ್ಪ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಸೆಸ್ಕ್ ಕಚೇರಿಗೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿದರು. ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸಂಘದ ರಾಜ್ಯ ಉಪಾಧ್ಯಕ್ಷ ಡಾ.ಗುರುಪ್ರಸಾದ್ ಮಾತನಾಡಿ, ರೈತರ ಕೃಷಿ ಪಂಪ್ಸೆಟ್ಗಳಿಗೆ ಸ್ಮಾರ್ಟ್ ಕಾರ್ಡ್, ಡಿಜಿಟಲ್ ಮೀಟರ್ ಅಳವಡಿಸಲು ರಾಜ್ಯ ಸರ್ಕಾರ 10 ಸಾವಿರ ಠೇವಣಿ ನಿಗಧಿಪಡಿಸಿರುವುದನ್ನು ಹಿಂಪಡೆಯಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸಲು ಮಾಡಿರುವ ಯತ್ನವನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿದರು. ರೈತರಿಗೆ ವಿದ್ಯುತ್ ಪರಿಕರಗಳನ್ನು ಅಕ್ರಮ ಸಕ್ರಮ ಅಡಿಯಲ್ಲಿ ಈ ಹಿಂದೆ ನೀಡುತ್ತಿದ್ದಂತೆ ರೈತರ ಉಚಿತ ವಿದ್ಯುತ್ ನೀಡಬೇಕು. ವಿದ್ಯುತ್ ಸಂಪರ್ಕಕ್ಕೆ ರೈತರ ಆಧಾರ್ ಜೋಡಣೆ ಮಾಡುವುದನ್ನು ನಿಲ್ಲಿಸಬೇಕು. ಜಮೀನಿನಲ್ಲಿ ವಾಸವಾಗಿರುವ ರೈತರಿಗೆ, ಹೈನುಗಾರಿಕೆ ಮಾಡುವವರಿಗೆ ಸಂಜೆ 6 ಗಂಟೆಯಿಂದ ಬೆಳಗ್ಗೆ 6 ಗಂಟೆಯವರೆಗೆ ವಿದ್ಯುತ್ ನೀಡಬೇಕು ಎಂದರು.

ಸರ್ಕಾರದ ಶೀಘ್ರ ಯೋಜನೆಯಡಿಯಲ್ಲಿ ಟಿಸಿಗಳನ್ನು ಮಾತ್ರ ನೀಡಲಿದ್ದು ಉಳಿದ ಕಂಬ ಮತ್ತು ವೈರ್ಗಳನ್ನು ರೈತರು ಸ್ವಂತ ಖರ್ಚಿನಿಂದ ಮಾಡಿಸಲು ಸಾಧ್ಯವಿಲ್ಲ. ಆದ್ದರಿಂದ ಸರ್ಕಾರವೇ ಉಚಿತವಾಗಿ ನೀಡಬೇಕು ಎಂದು ಒತ್ತಾಯಿಸಿ ಚೆಸ್ಕಾಂ ಇಇ ಮನವಿ ಸಲ್ಲಿಸಿದರು.

ಅಣುಕು ಶವಯಾತ್ರೆ ನಡೆಸದಂತೆ ಪೊಲೀಸರು ಪ್ರತಿಭಟನಾಕಾರರನ್ನು ತಡೆಯಲು ಮುಂದಾದಾಗ ಕೆಲಕಾಲ ರೈತಸಂಘದ ಮುಖಂಡರು ಹಾಗೂ ಪೊಲೀಸರ ನಡುವೆ ಮಾತಿನ ಚಕಮಕಿ ನಡೆಯಿತು.

ಪ್ರತಿಭಟನೆಯಲ್ಲಿ ಸಂಘದ ಜಿಲ್ಲಾಧ್ಯಕ್ಷ ಮಾಡಹಳ್ಳಿ ಮಹದೇವಪ್ಪ, ಪ್ರಧಾನ ಕಾರ್ಯದರ್ಶಿ ಕುಂದಕೆರೆ ಸಂಪತ್ತು, ಗುಂಡ್ಲುಪೇಟೆ ತಾಲೂಕು ಅಧ್ಯಕ್ಷ ಮಹೇಶ್, ಮುಖಂಡರಾದ ಹಿರಿಕಾಟಿ ಚಿಕ್ಕಣ್ಣ, ನಾಗರಾಜು, ಕಲ್ಲುರ ಪ್ರಕಾಶ್, ಮಹೇಶ್, ಋಷಿ, ಮಾಧು, ಲಿಂಗಸ್ವಾಮಿ, ರವಿ, ಗೋವಿಂದ, ಮಹದೇವಮೂರ್ತಿ, ಸುರೇಶ್, ಶಿವಪಾದ ಸೇರಿದಂತೆ ಇತರರು ಭಾಗವಹಿಸಿದ್ದರು.

# ಶೀಘ್ರ ಪನ್ನೀರ್ ಘಟಕ ಸ್ಥಾಪನೆ

## ನಂದಿನಿ ಇಡ್ಲಿ, ದೋಸೆ ಹಿಟ್ಟು ಉದ್ಘಾಟಿಸಿ ಮೈಮುಲ್ ಅಧ್ಯಕ್ಷ ಚೆಲುವರಾಜು

**ಮೈಸೂರು:** ಶೀಘ್ರವೇ ಮೈಸೂರಿನಲ್ಲಿ ಪನ್ನೀರ್ ಘಟಕವನ್ನು ನಿರ್ಮಿಸುವ ಮೂಲಕ ರೈತರಿಗೆ ನೆರವಾಗಲಾಗುವುದು ಎಂದು ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ನಿಯಮಿತದ ಅಧ್ಯಕ್ಷ ಆರ್.ಚೆಲುವರಾಜು ಹೇಳಿದರು.

ಮೈಸೂರಿನ ಖಾಸಗಿ ಹೋಟೆಲ್ ನಲ್ಲಿ ಮೈಸೂರು ಹಾಲು ಉತ್ಪಾದಕರ ಒಕ್ಕೂಟದಿಂದ ಸಂಪ್ರದಾಯದೊಂದಿಗೆ ಬೆಸದ ರುಚಿ ದ್ಯೇಯದೊಂದಿಗೆ ಆಯೋಜಿಸಿದ್ದ ಇಡ್ಲಿ ಮತ್ತು ದೋಸೆ ಹಿಟ್ಟಿನ ಪ್ಯಾಕೆಟ್ ಅನ್ನು ಮಾರುಕಟ್ಟೆಗೆ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಕೆಎಂಎಫ್ ನ ಉತ್ಪನ್ನಗಳಾದ ದೋಸೆ ಹಿಟ್ಟು ಹಾಗೂ ಇಡ್ಲಿ ಹಿಟ್ಟನ್ನು ಬಿಡುಗಡೆ ಮಾಡಿದ್ದೇವೆ. ಹಾಲು, ಮೊಸರು ಉತ್ಪನ್ನಗಳ ಜತೆಗೆ 70ಕ್ಕೂ ಹೆಚ್ಚು ಉತ್ಪನ್ನಗಳಿವೆ. ರಾಜ್ಯದ ಮೂಲೆ ಮೂಲೆಗಳಲ್ಲಿಯೂ ಕೂಡ ಬಹಳ ಯಶಸ್ವಿಯಾಗಿ ಮಾರಾಟ ಆಗುತ್ತಿದೆ ಎಂದರು

ರೈತರ ಪರವಾಗಿ ರೈತರ ಬೆನ್ನಲುಬಾಗಿರುವ ಕೆಎಂಎಫ್ ಹಾಲು ಮತ್ತು ಮೊಸರನ್ನೇ ಮಾರಾಟ ಮಾಡಿದರೆ ತುಂಬಾ ಕಷ್ಟವಾಗುತ್ತದೆ. ಮೈಸೂರಿನಲ್ಲಿ 9ಲಕ್ಷ ಲೀಟರ್ ಹಾಲು, ರಾಜ್ಯದಲ್ಲಿ 1ಕೋಟಿ ಗೂ ಹೆಚ್ಚು ಹಾಲು ಉತ್ಪಾದನೆ ಆಗುತ್ತಿದೆ. ಇದರಲ್ಲಿ ರಾಜ್ಯದಲ್ಲಿ 50ಲಕ್ಷ ಲೀಟರ್ ಹಾಲು ಮಾತ್ರ ಮಾರಾಟ ಆಗುತ್ತಿದೆ. ಬೇರೆ ಬೇರೆ ರಾಜ್ಯಗಳಲ್ಲಿಯೂ ಮಾರಾಟ ಮಾಡುತ್ತಿದ್ದೇವೆ. ಜಿಲ್ಲೆಯಲ್ಲೂ ಐದು ಹಾಲಿನ ಉಪ ಉತ್ಪನ್ನಗಳ ಮೂಲಕ ಬೇರೆ ಜಿಲ್ಲೆಗಳಲ್ಲಿ ಮಾರಾಟ ಮಾಡುತ್ತಿದ್ದೇವೆ. ಇದರೊಟ್ಟಿಗೆ ಟೆಟ್ರೋ ಪ್ಯಾಕ್ ಘಟಕ ಪ್ರಾರಂಭಿಸಿ ಹಾಲಿನ ಪುಡಿ ಶೇಖರಿಸುವ ಕೆಲಸ ಮಾಡಿದ್ದೇವೆ ಎಂದರು.

9ಲಕ್ಷ ಹಾಲು ಉತ್ಪಾದನೆಯಲ್ಲಿ 3ಲಕ್ಷ ಹಾಲು ಮೊಸರು, 1ಲಕ್ಷದ ಐವತ್ತು ಸಾವಿರ ಇತರ ಉತ್ಪನ್ನಗಳು ಸೇರಿ ಬೇರೆ ರೂಪದಲ್ಲಿ ಮಾರಾಟ ಮಾಡುತ್ತಿದ್ದೇವೆ. ಉಳಿದ ಹಾಲಿನ ಪೌಡರ್ ಮಾರಾಟ ಮಾಡಬೇಕಾಗಿದೆ. ಈ ಕಾರಣದಿಂದ ಪನ್ನೀರ್ ಘಟಕ ಮಾಡಲು ಮಂಡಳಿ ತೀರ್ಮಾನಿಸಿದೆ. ಮೈಮುಲ್ ರೈತರಿಗೆ ಅನುಕೂಲ ಆಗಬೇಕು. ರೈತರ ಸಂಸ್ಥೆ ಆಗಿರುವುದರಿಂದ ಮಾರುಕಟ್ಟೆಯಿಂದ ಹೆಚ್ಚಿನ ಲಾಭಾಂಶ ನಿರೀಕ್ಷಿಸದೇ ಗ್ರಾಹಕರ ಹಿತ ದೃಷ್ಟಿ ಮತ್ತು ನೈಸರ್ಗಿಕ ದೃಷ್ಟಿಯಿಂದ ಬಹಳ ಕೆಲಸ ಮಾಡುತ್ತಿದ್ದೇವೆ. ಗ್ರಾಹಕರು ನಂದಿನಿ ಬ್ರಾಂಡ್ ಎಂದರೆ ನಂಬಿಕೆಯಿಂದ ಪಡೆಯುತ್ತಿದ್ದಾರೆ. ರೈತರ ಸಂಸ್ಥೆಯಾಗಿರುವುದರಿಂದ ಸಾರ್ವಜನಿಕರ ಜತೆಗೆ ರೈತರು ಸಹ ನಂದಿನಿ ಉತ್ಪನ್ನಗಳನ್ನೇ ಬಳಸಬೇಕಿದೆ ಎಂದರು. ಒಕ್ಕೂಟದ ನಿರ್ದೇಶಕ ಬಿ. ಎನ್. ಸದಾನಂದ ಮಾತನಾಡಿ, ಇಂದಿನ ಒತ್ತಡದ ಜೀವನದಲ್ಲಿ ಹಿಂದಿನ ಮಾದರಿಯಲ್ಲಿ ತಯಾರಿಸಲು ಆಗುತ್ತಿಲ್ಲ, ಹೀಗಾಗಿ ಒತ್ತಡದ ಜೀವನಕ್ಕೆ ನಂದಿನಿ ಉತ್ಪನ್ನವನ್ನು ನೀಡಬೇಕು ಎಂಬ ಉದ್ದೇಶದಿಂದ ದಿಟ್ಟ ಹೆಜ್ಜೆಯನ್ನಿಟ್ಟು ಇಡ್ಲಿ ಹಾಗೂ ದೋಸೆ ಹಿಟ್ಟು ಅನಾವರಣ ಮಾಡಲಾಗಿದೆ. ಪಾರಂಪರಿಕ ಶೈಲಿಯ ಪದ್ಧತಿ ಉತ್ಪನ್ನಗಳನ್ನು ಅನಾವರಣ ಮಾಡಲಾಗಿದೆ. ಖಾಸಗಿ ಕಂಪನಿಯ ಹಾಲು ಉತ್ಪನ್ನಗಳು ಲಾಭ ಮೂಲ ಉದ್ದೇಶದಿಂದ ಮಾಡಿದ್ದಾರೆ. ನಮ್ಮ ಒಕ್ಕೂಟದಿಂದ ಆರೋಗ್ಯಕ್ಕೆ ಮೊದಲ ಆದ್ಯತೆ ನೀಡಿ, ನಂತರ ಲಾಭಕ್ಕೆ ಆದ್ಯತೆ ನೀಡಲಾಗಿದೆ ಎಂದರು.

ಒಕ್ಕೂಟದ ನಿರ್ದೇಶಕ ಎ. ಟಿ. ಸೋಮಶೇಖರ್ ಮಾತನಾಡಿ, ಮಾದ್ಯಮಗಳಲ್ಲಿ ಯುದ್ಧದ ವಿಚಾರ ಹೆಚ್ಚು ಚರ್ಚೆ ಆಗುತ್ತಿದೆ. ಆದರೆ, ನಿಜಕ್ಕೂ ಎರಡನೇ ಯುದ್ಧ ನಡೆಯುತ್ತಿರುವುದು ಆಹಾರ ಪದಾರ್ಥಗಳ ಯುದ್ಧವಾಗಿದೆ. ಇಂದು ಕಲಬೆರಕೆ ಆಹಾರ ಮಾರಾಟ ಆಗುತ್ತಿದ್ದು, ಇಂತಹ ಸಂಧರ್ಭದಲ್ಲಿ ನಂದಿನಿ ಹಾಲು ಉತ್ಪನ್ನಗಳು ಗುಣಮಟ್ಟದಲ್ಲಿ ತಯಾರು ಮಾಡಿ ಮಾರಾಟ ಮಾಡಲಾಗುತ್ತಿದೆ. ಈ ಬಗ್ಗೆ ಹೆಚ್ಚು ಜನರಿಗೆ ತಲುಪಿಸುವ ಕೆಲಸ ಮಾಡಬೇಕಿದೆ ಎಂದು ಹೇಳಿದರು. ವ್ಯವಸ್ಥಾಪಕ ನಿರ್ದೇಶಕ ಸುರೇಶ್ ನಾಯ್ಕ್ ಕೆ. ಎನ್. ಮಾರ್ಕೆಟಿಂಗ್ ಮ್ಯಾನೇಜರ್ ಎಚ್. ಕೆ. ಜಯಶಂಕರ್, ನಿರ್ದೇಶಕರಾದ ಎ.ಟಿ. ಸೋಮಶೇಖರ್, ಕೆ.ಜಿ. ಮಹೇಶ್, ಕೆ. ಉಮಾಶಂಕರ್, ಸಿ ಓಂ ಪ್ರಕಾಶ್, ಕೆ. ಈರೇಗೌಡ, ದ್ರಾಕ್ಷಯಿಣಿ ಬಸವರಾಜಪ್ಪ, ಲೀಲಾ ಬಿಕೆ ನಾಗರಾಜು, ನೀಲಾಂಬಿಕೆ ಮಹೇಶ್ ಕುರಹಟ್ಟಿ, ಶಿವಗಾಮಿ ಷಣ್ಮುಗಂ, ಗುರುಸ್ವಾಮಿ ಬಿ, ಬಿ.ಎ. ಪ್ರಕಾಶ್, ಎ.ಬಿ. ಮಲ್ಲಿಕಾ ರವಿಕುಮಾರ್, ಡೈರಿ ವ್ಯವಸ್ಥಾಪಕರಾದ ಬಿ ಎಲ್ ಶ್ವೇತಾ, ಉಪ ವ್ಯವಸ್ಥಾಪಕರು ವಿತ್ತ ಸಿ ಬಬಿತಾರವರು ಹಾಗೂ ಆಡಳಿತ ಮಂಡಳಿ ಸದಸ್ಯರು ಮತ್ತು ನೌಕರವೃಂದದವರು ಉಪಸ್ಥಿತರಿದ್ದರು.



### ಮಾರುಕಟ್ಟೆಯಲ್ಲಿ ಲಭ್ಯ

**ಮೈಸೂರು: ಅಕ್ಕಿ, ಉದ್ದಿನ ಬೇಳೆ, ಮೆಂತ್ಯೆ, ಉಪ್ಪು, ಆರ್.ಓ.ನೀರು ಹಾಗೂ ವೇ ಪೌಡರ್ ಅನ್ನು ಬಳಸಿ ಇಡ್ಲಿ ಹಾಗೂ ದೋಸೆ ಹಿಟ್ಟು ತಯಾರು ಮಾಡಲಾಗುತ್ತಿದೆ. ಸಂಪ್ರದಾಯಿಕವಾದ ಈ ತಿಂಡಿಗೆ ಯಾವುದೇ ಸೋಡಾ ಬಳಸುವುದಿಲ್ಲ, ಯಾವುದೇ ಸಂರಕ್ಷಕಗಳನ್ನು ಸೇರಿಸಲಾಗಿಲ್ಲ. ಆರೋಗ್ಯಕರ ಮತ್ತು ರುಚಿಕರವಾಗಿದೆ. 450 ಗ್ರಾಂ.ಗೆ 40 ರೂ. ಹಾಗೂ 900 ಗ್ರಾಂ. ಗೆ 80ರೂ. ನಿಗಧಿ ಪಡಿಸಲಾಗಿದೆ. ಇದರೊಟ್ಟಿಗೆ ಹಾಲಿನ ಪೆಡಾ, ಮೈಸೂರು ಪಾಕ್, ಕ್ಯಾಷ್ಯೂ ಬರ್ಫಿ, ಕೇಸರಿ ಪೇಡಾ, ಗೋಧಿ ಲಾಡಿನ ಉಪ ಉತ್ಪನ್ನಗಳನ್ನು ಸಹ ಮಾರುಕಟ್ಟೆಯಲ್ಲಿ ಸಿಗಲಿದೆ.**



ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ರವರ 63ನೇ ಹುಟ್ಟುಹಬ್ಬದ ಪ್ರಯುಕ್ತ ಕರ್ನಾಟಕ ರಾಜ್ಯ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಮೈಸೂರು ಮೃಗಾಲಯದಲ್ಲಿ ಆಫ್ರಿಕನ್ ಸಿಂಹ ದತ್ತು ಪಡೆದರು. ಮಂಜುನಾಥ್ ಗೌಡ ರವರ ನೇತೃತ್ವದಲ್ಲಿ ಒಂದು ವರ್ಷಕ್ಕೆ ದತ್ತು ಪಡೆದಿದ್ದು, ಪ್ರತಿ ವರ್ಷ ದತ್ತು ನವೀಕರಣಕ್ಕೆ ನಿರ್ಧರಿಸಿದೆ. ವರ್ಷಕ್ಕೆ ದತ್ತು ಮೊತ್ತ ಎರಡು ಲಕ್ಷ ರೂಪಾಯಿ. ಈ ಸಂದರ್ಭದಲ್ಲಿ ಕೆಆರ್ ಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷ ಹೊಯ್ಸಳ ಹಾಗೂ ಮೈಸೂರು ಸಿಟಿ ಯೂಥ್ ಕಾಂಗ್ರೆಸ್ ನೌಫಿಲ್ಅಹಮದ್ ಮತ್ತು ಯುವ ಕಾಂಗ್ರೆಸ್ ಸದಸ್ಯರು ಎಲ್ಲರೂ ಭಾಗಿಯಾಗಿದ್ದರು.

# ಡಿಪ್ಲೋಮಾ ಕೋರ್ಸ್‌ಗೆ ಅರ್ಜಿ ಆಹ್ವಾನ

**ಮೈಸೂರು:** ಕೈಮಗ್ಗ ಮತ್ತು ಜವಳಿ ಇಲಾಖೆಯ ವತಿಯಿಂದ 2025-26 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 3 ವರ್ಷದ ಡಿಪ್ಲೋಮಾ(ಡಿ.ಹೆಚ್.ಟಿ.ಟಿ) ಕೋರ್ಸ್ ಕಲಿಕೆಗಾಗಿ 39 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ವ್ಯಾಸಂಗ ಮಾಡುವ ಸಮಯದಲ್ಲಿ ಅವರಿಗೆ ಪ್ರತಿ ತಿಂಗಳು ರೂ.2,500/- ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುತ್ತದೆ. ಎಸ್. ಎಸ್. ಎಲ್. ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಜುಲೈ 1,2025 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25 ರ ವಯೋಮಿತಿ ಹೊಂದಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೃಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತದೆ. 2025-26 ನೇ ಸಾಲಿಗೆ ಮೂರು ವರ್ಷದ ಡಿಪ್ಲೊಮಾ ಕೋರ್ಸ್ ಗಾಗಿ ಲಭ್ಯವಿರುವ ಅಭ್ಯರ್ಥಿಗಳ ಸಂಖ್ಯೆ ಮತ್ತು ಸಂಸ್ಥೆಗಳ ವಿವರ: ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ - ಬೆಟಗೇರಿ( ಕರ್ನಾಟಕ), 22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ , ಸೇಲಂ (ತಮಿಳುನಾಡು), 12 ಅಭ್ಯರ್ಥಿಗಳು, ಎಸ್. ಪಿ.ಕೆ.ಎಂ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ ಆಂಧ್ರಪ್ರದೇಶ), 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು(ಕೇರಳ), 02 ಅಭ್ಯರ್ಥಿಗಳು ಒಟ್ಟು 39 ಅಭ್ಯರ್ಥಿಗಳಿಗೆ ಅವಕಾಶವಿದ್ದು, ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್ ಕರೆಯಲಾಗುತ್ತದೆ.ಆಸಕ್ತ ಅಭ್ಯರ್ಥಿಗಳು ವೆಬ್ ಸೈಟ್ https://khtigadag.ac.in/AdmissionForm.pdf ಮೂಲಕ ಡೌನ್ಲೋಡ್ ಮಾಡಿಕೊಂಡು ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಪ್ರಾಂಶುಪಾಲರು ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪುರ ಗದಗ-ಬೆಟಗೇರಿ ಇವರಿಗೆ ಸಲ್ಲಿಸಬೇಕು ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ನರಸಾಪುರ ಗದಗ-ಬೆಟಗೇರಿ ಕಚೇರಿ ದೂ. ಸಂ: 08372-297221 ಮೋ.ನಂ.9449162822 ಸಂಪರ್ಕಿಸಿ.

## ಪಿ.ಹೆಚ್.ಡಿ ಪದವಿಗೆ ಅಂಗೀಕಾರ

**ಮೈಸೂರು:** ವಿದ್ಯಾಶಂಕರ ಅವರು ಡಾ. ಜಿ ಹೇಮಂತ ಕುಮಾರ್ ಅವರ ಮಾರ್ಗದರ್ಶನದಲ್ಲಿ "DETECTION AND CLASSIFCATION OF LEAF IN A VIEDO" ಎಂಬ ಮಹಾಪ್ರಬಂಧವನ್ನು ಗಣಕವಿಜ್ಞಾನ ವಿಷಯದಲ್ಲಿ ಸಂಶೋಧನೆ ನಡೆಸಿರುತ್ತಾರೆ ಮತ್ತು ಅಭ್ಯರ್ಥಿಯು ಮಹಾ ಪ್ರಬಂಧವನ್ನು ಆಂಗ್ಲ ಭಾಷೆಯಲ್ಲಿ ಸಿದ್ಧಪಡಿಸಿರುತ್ತಾರೆ. ಅಭ್ಯರ್ಥಿಯು ಸದರಿ ಪಿಹೆಚ್‌ಡಿ ಪದವಿಯನ್ನು ಮುಂದೆ ನಡೆಯುವ ವಾರ್ಷಿಕ ಘಟಿಕೋತ್ಸವದಲ್ಲಿ (ಖುದ್ದಾಗಿ/ಗೈರುಹಾಜರಿಯಲ್ಲಿ) ಪಡೆಯಬಹುದಾಗಿದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವ (ಪರೀಕ್ಷಾಂಗ) ಪ್ರೊ.ಎನ್ ನಾಗರಾಜ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

**ಮೈಸೂರು:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ 2025-26ನೇ ಸಾಲಿಗೆ ಹುಣಸೂರು ತಾಲ್ಲೂಕಿನ ಪರಿಶಿಷ್ಟ ವರ್ಗದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು, ಮೆಟ್ರಿಕ್ ಪೂರ್ವ/ನಂತರದ ವಿದ್ಯಾರ್ಥಿನಿಲಯಗಳಿಗೆ ವಿದ್ಯಾರ್ಥಿಗಳ ಪ್ರವೇಶಾತಿ ಕಲ್ಪಿಸುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ. ಈ ವಿದ್ಯಾ ಸಂಸ್ಥೆಗಳಲ್ಲಿ ಉಚಿತವಾಗಿ ಊಟ-ವಸತಿ, ವರ್ಷಕ್ಕೆ 2 ಜೊತೆ ಸಮವಸ್ತ್ರ, ಶೂ-ಸಾಕ್ಸ್, ಸ್ವೆಟರ್, ಟೈ-ಬೆಲ್ಟ್, ಲೇಖನಾ ಸಾಮಾಗ್ರಿಗಳು, ಪ್ರತಿ ಮಾಹೆ ಶುಚಿ ಸಂಭ್ರಮ ಕಿಟ್, ನಿಯಮಿತವಾಗಿ ಆರೋಗ್ಯ ತಪಾಸಣೆ, ತರಬೇತಿ ಪಡೆದ ನುರಿತ ಶಿಕ್ಷಕರಿಂದ ಪಾಠ ಪ್ರವಚನ, ಸ್ಮಾರ್ಟ್‌ಕ್ಲಾಸ್, ಕಂಪ್ಯೂಟರ್ ಲ್ಯಾಬ್, ಗ್ರಂಥಾಲಯ ಸೌಲಭ್ಯ, ಒಳಾಂಗಣ-ಹೊರಾಂಗಣಾ ಕ್ರೀಡಾ ಸಾಮಾಗ್ರಿಗಳು, ಉತ್ತಮ ಪಿಠೋಪಕರಣ, ಬಿಸಿ ನೀರಿಗೆ ಸೋಲಾರ್ ವ್ಯವಸ್ಥೆ, ಬೆಳಕಿನ ವ್ಯವಸ್ಥೆ, ಅಂಶಕಾಲಿಕ ಬೋಧಕರ ವ್ಯವಸ್ಥೆ, ಇತ್ಯಾದಿ ಸೌಕರ್ಯಗಳನ್ನು ಒದಗಿಸಲಾಗುತ್ತದೆ. ಆಸಕ್ತ ವಿದ್ಯಾರ್ಥಿಗಳು ಸರ್ಕಾರಿ ಪರಿಶಿಷ್ಟ ವರ್ಗದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ ನಲ್ಲೂರು ಪಾಲ, ಹುಣಸೂರು ತಾಲ್ಲೂಕು. ಸರ್ಕಾರಿ ಪರಿಶಿಷ್ಟ ವರ್ಗದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ ನಾಗಪುರ, ಹುಣಸೂರು ತಾಲ್ಲೂಕು. ಸರ್ಕಾರಿ ಪರಿಶಿಷ್ಟ ವರ್ಗದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ ವೀರನಹೊಸಹಳ್ಳಿ, ಹುಣಸೂರು ತಾಲ್ಲೂಕು. ಸರ್ಕಾರಿ ಪರಿಶಿಷ್ಟ ವರ್ಗದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ ಕೊಳವಿಗೆ, ಹುಣಸೂರು ತಾಲ್ಲೂಕು. ಸರ್ಕಾರಿ ಪರಿಶಿಷ್ಟ ವರ್ಗದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ ಶೆಟ್ಟಳ್ಳಿ, ಹುಣಸೂರು ತಾಲ್ಲೂಕು. ಸರ್ಕಾರಿ ಪರಿಶಿಷ್ಟ ವರ್ಗದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ ನೇರಳಕುಪ್ಪೆ, ಹುಣಸೂರು ತಾಲ್ಲೂಕು. ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ ಹುಣಸೂರು ಟೌನ್. ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಹುಣಸೂರು ಟೌನ್. ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ ನಾಗಪುರ, ಹುಣಸೂರು ತಾಲ್ಲೂಕು. ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಹನಗೋಡು, ಹುಣಸೂರು ತಾಲ್ಲೂಕು. ಪರಿಶಿಷ್ಟ ವರ್ಗದ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ಹುಣಸೂರು ಟೌನ್ ಈ ಸಂಸ್ಥೆಗಳ ಮುಖ್ಯಶಿಕ್ಷಕರುಗಳು/ನಿಲಯ ಮೇಲ್ವಿಚಾರಕರುಗಳನ್ನು ಸಂಪರ್ಕಿಸಿ ದಾಖಲಾತಿ ಸೌಲಭ್ಯವನ್ನು ಪಡೆದುಕೊಳ್ಳಬಹುದಾಗಿದೆ ಎಂದು ಹುಣಸೂರು ತಾಲ್ಲೂಕಿನ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ವಿದ್ಯುತ್ ವ್ಯತ್ಯಯ

**ಮೈಸೂರು:** ಮೇ 17 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯ ವರೆಗೆ ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ 66/11 ಕೆ.ವಿ ದಟ್ಟಗಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 1ನೇ ತ್ರೈಮಾಸಿಕ ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿರುವುದರಿಂದ ಈ ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ವ್ಯತ್ಯಯವಾಗಲಿರುವ ಪ್ರದೇಶಗಳು: ದಟ್ಟಗಳ್ಳಿ 3ನೇ ಹಂತ, ತ್ರಿವೇಣಿ ಸೂಪರ್ ಮಾರ್ಕೆಟ್ ಏರಿಯಾ, ಕದಂಬ ಬೇಕರಿ ಏರಿಯಾ, ದಟ್ಟಗಳ್ಳಿ 'ಐ'ಬ್ಲಾಕ್, ಮುಡಾ ಎಂಪ್ಲಾಯಿಸ್‌ಲೇಔಟ್, ಆಂದೋಲನ ವೃತ್ತ, ಸಬ್ ರಿಜಿಸ್ಟ್ರಾರ್ ಆಫೀಸ್, ಕನಕದಾಸನಗರ, ಆದಿತ್ಯ ಸರ್ಕಲ್, ಸೋಮನಾಥನಗರ, ಮಹಾಲಕ್ಷ್ಮೀ ಬಡಾವಣೆ ಕೇರ್ಗಳ್ಳಿ, ಕಲ್ಕಿ ಬಡಾವಣೆ, ನಂದಿ ಸರ್ಕಲ್ ದಟ್ಟಗಳ್ಳಿ, ಜೋಡಿ ಬೇವಿನಮರ ದಟ್ಟಗಳ್ಳಿ, ರಾಮಕೃಷ್ಣನಗರ, ಆರ್.ಟಿ ನಗರ, ಲಿಂಗಾಂಬುದಿ ಪಾಳ್ಯ, ಯೂನಿವರ್ಸಿಟಿ ಲೇಔಟ್, ವಾಸು ಲೇಔಟ್, ಕೆಬ್ಲಾಕ್ ಆರ್.ಕೆ. ನಗರ, ಮೂಗನಹುಂಡಿ, ನಗರ್ತಹಳ್ಳಿ, ದೇವಗಳ್ಳಿ, ಬಲ್ಲಳ್ಳಿ, ಅನಗಳ್ಳಿ, ತಿಬ್ಬಯ್ಯನಹುಂಡಿ, ಬೀರಿಹುಂಡಿ ಐ.ಪಿ ಲಿಮಿಟ್ಸ್ ಚಾವಿಸನಿನಿ ಮುಖ್ಯ ಇಂಜಿನಿಯರ್ ಕಛೇರಿ, ಹೆಲ್ತಿ ಸಿಟಿ, ಕಾರ್ತಿಕ ಬಡಾವಣೆ ಐ ಬ್ಲಾಕ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕೆಂದು ಚಾ.ವಿ.ಸ.ನಿ.ನಿ.,ಯ ವಿ.ವಿ.ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ.), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶತಾಯುಷಿ ಜಯಲಕ್ಷ್ಮಿ ನಿಧನ

**ಮೈಸೂರು:** ಕೆ.ಆರ್.ರಸ್ತೆಯಲ್ಲಿರುವ ಸಾಧನಹಳ್ಳಿ ಶ್ರೀ ಸಪ್ತರ್ಷಿಗುರುಕುಲ ಸೇವಾಶ್ರಮದ ನಿವಾಸಿ ಶತಾಯುಷಿಷ ಜಯಲಕ್ಷ್ಮಿ, ವಯಸ್ಸು 111 ವರ್ಷ ವಯೋಸಹಜಖಾಯಿಲೆಯಿಂದ ನಿನ್ನೆಆಶ್ರಮದಲ್ಲಿ ನಿಧನ ಹೊಂದಿರುತ್ತಾರೆ.ಇವರಿಗೆ ಶ್ರೀ ಸಪ್ತರ್ಷಿಗುರುಕುಲ ಸೇವಾಶ್ರಮದ ಸಂಸ್ಥಾಪಕರಾದ ಶೀ ಅಭಿನವರಾಮಾನುಜಜೀಯರ್ ಸೇರಿದಂತೆ 2 ಗಂಡು ಮಕ್ಕಳು ಹಾಗೂ 3 ಜನ ಹೆಣ್ಣು ಮಕ್ಕಳು ಹಾಗೂ ಮೊಮ್ಮಕ್ಕಳನ್ನು ಅಗಲಿದ್ದಾರೆ.ಇವರ ನಿಧನಕ್ಕೆಆಶ್ರಮದ ಭಕ್ತಾಧಿಗಳು ಅಪಾರ ಬಂಧುಬಳಗ ಸಂತಾಪ ವ್ಯಕ್ತಪಡಿಸಿದ್ದಾರೆ.ಮೃತರಅಂತ್ಯಕ್ರಿಯೆ ಸೇವಾಶ್ರಮದತೋಟದಲ್ಲಿ ನೆರವೇರಿತು.

# ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ಪರಿಹಾರ ಕಂಡುಕೊಡಲು ಕ್ರಮ ವಹಿಸಲಾಗುವುದು: ಜೆ.ಲಕ್ಷ್ಮಿಕಾಂತ ರೆಡ್ಡಿ

**ಮೈಸೂರು:** ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ಪರಿಹಾರ ಕಂಡುಕೊಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ಜಿ. ಲಕ್ಷ್ಮಿಕಾಂತ ರೆಡ್ಡಿ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ರೈತರ ಕುಂದುಕೊರತೆಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿ ಮನೆಗೂ ನೀರು ಎಂಬುದು ಭಾರತ ಸರ್ಕಾರದ ಜಲ ಶಕ್ತಿ ಸಚಿವಾಲಯವು 2019 ರಲ್ಲಿ ಜಲ ಜೀವನ್ ಮಿಷನ್ ಅಡಿಯಲ್ಲಿ ಪ್ರಾರಂಭಿಸಿದ ಯೋಜನೆಯಾಗಿದ್ದು, 2024 ರ ವೇಳೆಗೆ ಪ್ರತಿ ಗ್ರಾಮೀಣ ಮನೆಗಳಿಗೆ ಪ್ರತಿ ದಿನ ನಿಯಮಿತವಾಗಿ ಟ್ಯಾಪ್ ನೀರನ್ನು ಒದಗಿಸುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದ ಜಿಲ್ಲಾಧಿಕಾರಿಗಳು ಜೀವನ್ ಮಿ?ನ್ ಯೋಜನೆಯ ಕಾಮಗಾರಿಗಳು ಸಮರ್ಪಕವಾಗಿ ರೀತಿಯಲ್ಲಿ ಆಗುತ್ತಿಲ್ಲ ಎಂಬ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಜನಜೀವನ ಮಿಷನ್ ಯೋಜನೆಯಡಿ ಕುಡಿಯುವ ನೀರಿನ ಕಾಮಗಾರಿ ಮಾರ್ಗ ಸೂಚಿ ಪ್ರಕಾರ ಸರಿಯಾಗಿ ಕಾಮಗಾರಿ ನಡೆಯುತ್ತಿರುವ ಬಗ್ಗೆ ಅಗತ್ಯ ಕ್ರಮ ವಹಿಸಲು ಜಿಲ್ಲಾ ಪಂಚಾಯತ್ ಅಧಿಕಾರಿಗಳಿಗೆ ಸೂಚಿಸಿದರು. ಶುದ್ಧ ಕುಡಿಯುವ ನೀರಿನ ಘಟಕ ಸರಿಯಾಗಿ ನಿರ್ವಹಣೆ ಮಾಡಲು ಅಗತ್ಯ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಕೃಷಿ ಚಟುವಟಿಕೆಗಳ ವೆಚ್ಚಕ್ಕೆ ಬ್ಯಾಂಕ್‌ಗಳಲ್ಲಿ ಚಿನ್ನ ಅಡವಿಟ್ಟು ಸಾಲ ಪಡೆದು ಬೇಸಾಯ ಮಾಡುತ್ತಾರೆ. ಈ ಸಂಬಂಧ ಬಡ್ಡಿ ಪಾವತಿ ಎಂಬ ವಿಷಯಕ್ಕೆ ಸಂಬಂಧಿಸಿದಂತೆ ಲೀಡ್ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕರು ಮಾತನಾಡಿ ಆರ್.ಬಿ.ಐ ಮಾರ್ಗಸೂಚಿ ಪ್ರಕಾರ ಬ್ಯಾಂಕ್ ಗಳು ಕಾರ್ಯನಿರ್ವಹಣೆ ಮಾಡುತ್ತಿದ್ದು ಈ ಬಗ್ಗೆ ರೈತರಿಗೆ ಸಂಪೂರ್ಣವಾದ ಮಾಹಿತಿ ನೀಡಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

ಕಬ್ಬು ಬೆಳೆಗಾರರ ಸಮಸ್ಯೆ ಬಗೆಹರಿಸಲು ಕಾರ್ಖಾನೆಯ ಮಾಲೀಕರ ಸಭೆ ಕರೆದು ಅವರ ಸಮಸ್ಯೆಗಳನ್ನು ಬಗೆಹರಿಸಲು ಮುಂದಾಗಬೇಕು.ಎರಡು ಸಕ್ಕರೆ ಕಾರ್ಖಾನೆಗಳಾದ ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಹಾಗೂ ಬಣ್ಣಾರಿಯಮ್ಮ ಸಕ್ಕರೆ ಕಾರ್ಖಾನೆಯಲ್ಲಿನ ಸಮಸ್ಯೆಗಳ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಬೇಕು ಎಂದು ರೈತ ಮುಖಂಡರು ಸಭೆಯಲ್ಲಿ ಮನವಿ ಮಾಡಿದರು.

ಇದಕ್ಕೆ ಸ್ಪಂದಿಸಿದ ಮಾತನಾಡಿದ ಜಿಲ್ಲಾಧಿಕಾರಿಗಳು ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆ ಆರಂಭಕ್ಕೆ ಒಪ್ಪಂದ ಆಗಿದೆ. ಈ ವರ್ಷ ಕಾರ್ಖಾನೆ ಆರಂಭ ಆಗುತ್ತದೆ. ಬಣ್ಣಾರಿಯಮ್ಮ ಸಕ್ಕರೆ ಕಾರ್ಖಾನೆ ನಡೆಯುತ್ತಿದ್ದು ಅಲ್ಲಿನ ಸಮಸ್ಯೆಗಳ ಬಗ್ಗೆ ಸಮಿತಿಯನ್ನು ರಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ ವಿತರಣೆ ಮಾಡುವುದು ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳ ಜವಾಬ್ದಾರಿ ಆಗಿರುತ್ತದೆ. ಕಳಪೆ ಬಿತ್ತನೆ ಬೀಜ ವಿತರಣೆ ಕಂಡುಬಂದರೆ ರೈತರು ತಕ್ಷಣ ಗಮನಕ್ಕೆ ತಂದರೆ ಶೀಘ್ರವಾಗಿ ಅಧಿಕಾರಿಗಳ ಮೂಲಕ ಪರಿಶೀಲನೆ ಮಾಡಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಕೆರೆಗಳ ಒತ್ತುವರಿ ತೆರವು, ಕೆರೆಗಳ ಹೂಳೆತ್ತುವುದು, ಫಸಲ್ ಭೀಮ ಯೋಜನೆ ತೋಟಗಾರಿಕೆ ಇಲಾಖೆ ಬೆಳೆಗಳಿಗೆ ವಿಸ್ತರಣೆ, ಸಮರ್ಪಕವಾಗಿ ಮಣ್ಣಿನ ಫಲವತ್ತತೆ ಪರೀಕ್ಷೆ ಮಾಡುವಂತೆ ಹಾಗೂ ಕೃಷಿ ಇಲಾಖೆ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಬೆಳೆಗಳ ಬಗ್ಗೆ ಸಮರ್ಪಕವಾಗಿ ಮಾಹಿತಿ ನೀಡುವ ಈ ಎಲ್ಲಾ ಕುರಿತು ಅಗತ್ಯ ಕ್ರಮ ವಹಿಸುವಂತೆ ರೈತ ಮುಖಂಡರು ಸಭೆಯಲ್ಲಿ ಒತ್ತಾಯಿಸಿದರು.

ರಸ್ತೆ ಬದಿಯಲ್ಲಿ ನಡೆಯುವ ಗಿಡಗಳನ್ನು ನೆಟ್ಟು ಅದರ ನಿರ್ವಹಣೆ ಮಾಡಲಾಗುತ್ತಿದೆ. ವೈಜ್ಞಾನಿಕವಾಗಿ ಸಸಿ ನಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ ಬಸವರಾಜು ಸಭೆಯಲ್ಲಿ ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್.ಬಸವರಾಜು, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣಂ ರಾಜು, ಸವಿತಾ, ಜಂಟಿ ಕೃಷಿ ನಿರ್ದೇಶಕ ರವಿ ಉಪಸ್ಥಿತರಿದ್ದರು.

# ಗ್ರೇಟ್ ಮೈಂಡ್ಸ್ ಚೆಸ್ ಅಕಾಡೆಮಿ ಸರಸ್ವತಿಪುರಂದಲ್ಲಿ ಮೇ 23ರಂದು ಹೊಸ ಶಾಖೆಯನ್ನು ಪ್ರಾರಂಭ

**ಮೈಸೂರು:** ಗ್ರೇಟ್ ಮೈಂಡ್ಸ್ ಚೆಸ್ ಅಕಾಡೆಮಿ (GMCA) ತನ್ನ ಹೊಸ ಆಫ್ಲೈನ್ ತರಬೇತಿ ಕೇಂದ್ರವನ್ನು ಮೇ 23ರಂದು ಸರಸ್ವತಿಪುರಂದಲ್ಲಿ ಉದ್ಘಾಟಿಸಲಿದೆ. ಈ ಅಕಾಡೆಮಿಗೆ ನೇತೃತ್ವ ವಹಿಸುವವರು ಕರ್ನಾಟಕದ ಮೊದಲ ಗ್ರಾಂಡ್ಮಾಸ್ಟರ್ ಶ್ರೀ ತೇಜ್ ಕುಮಾರ್ ಎಮ್. ಎಸ್., ಅವರು ಮೆಂಟರ್ ಮತ್ತು ಮುಖ್ಯ ಕೋಚ್ ಆಗಿ ಕಾರ್ಯನಿರ್ವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಪತ್ರಕರ್ತರ ಭವನದಲ್ಲಿ ಮಾತನಾಡಿದ ತೇಜ್ ಕುಮಾರ್ ರವರು ಸರ್ಕಾರಿ ಶಾಲೆಗಳಲ್ಲಿ ಸಹಕಾರ ನೀಡಿದರೆ ತರಬೇತಿ ನೀಡಲಾಗುತ್ತದೆ ಮತ್ತು ಅಕಾಡೆಮಿ ದಿನವಿಡೀ ತೆರೆದಿರುತ್ತದೆ ಮತ್ತು ಆರಂಭಿಕ, ಮಧ್ಯಮ ಹಾಗೂ ಉನ್ನತ ಮಟ್ಟದ ಆಟಗಾರರಿಗೆ ರಚನೆಯುಳ್ಳ ತರಬೇತಿ ಕಾರ್ಯಕ್ರಮಗಳನ್ನು ನೀಡಲಿದೆ. ಎಲ್ಲಾ ತರಬೇತಿ ಮಾದರಿಗಳು ಮತ್ತು ಪಾಠಸಾಮಗ್ರಿಗಳನ್ನು GM ತೇಜ್ ಕುಮಾರ್ ಅವರಿಂದ ವಿನ್ಯಾಸಗೊಳಿಸಲಾಗಿದೆ, ಉನ್ನತ ಗುಣಮಟ್ಟದ ಮತ್ತು ವೈಯಕ್ತಿಕ ಧ್ಯೇಯಪೂರ್ಣ ಶಿಕ್ಷೆಯನ್ನು ನೀಡಲು.

ಈ ವರ್ಷಗಳ ಹಿಂದೆ GMCA ಹಲವು ಶ್ರೇಷ್ಠ ಚೆಸ್ ಆಟಗಾರರನ್ನು ತಯಾರಿಸಿದೆ, ಅವರು ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ.



ಇವರಲ್ಲಿ ಆದ್ಯಾ ಗೌಡ, ಅಧಿರಾಜ್ ಮಿತ್ರ, ಪ್ರಸಿದ್ಧಿ ಭಟ್, ಕೌಸ್ತುಭ್ ತೇಜ್ ಕುಮಾರ್ ಮತ್ತು ಕೌಶಿ ಕುಲಕರ್ಣಿ ಪ್ರಮುಖರು, ಅವರು ನಿರಂತರವಾಗಿ ಗಮನಾರ್ಹ ಸಾಧನೆ ತೋರಿದ್ದಾರೆ.

ಹೊಸ ಶಾಖೆಯ ಆರಂಭವು ಪ್ರಾದೇಶಿಕ ಮಟ್ಟದಲ್ಲಿ ಯುವ ಪ್ರತಿಭೆಯನ್ನು ಬೆಳೆಸುವ ಮತ್ತು ಚೆಸ್ನಲ್ಲಿನ ಶ್ರೇಷ್ಠತೆಯನ್ನು ಉತ್ತೇಜಿಸುವ ಉಒಅಂ ಯ ಉದ್ದೇಶದಲ್ಲಿ ಮಹತ್ತರ ಹಂತವಾಗಿದೆ.ಇದೇ ಸಂದರ್ಭದಲ್ಲಿ ಜಯಶ್ರೀ ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಯುವಕರ ಕೌಶಲ್ಯಕ್ಕಾಗಿ ಎಐ ಕಾರ್ಯಕ್ರಮ

ಕ್ಯಾಪ್ಜೆಮಿನಿ, ನಾಸ್ಕಾಮ್ ಫೌಂಡೇಶನ್ನ ಸಹಯೋಗದೊಂದಿಗೆ, ತಮ್ಮ ಕೌಶಲ್ಯಕ್ಕಾಗಿ ಎಐ ಕಾರ್ಯಕ್ರಮದ ಮೂಲಕ 700 ಕ್ಕೂ ಹೆಚ್ಚು ಅನನುಕೂಲಕರ ಯುವಕರಿಗೆ ಯಶಸ್ವಿಯಾಗಿ ಕೌಶಲ್ಯ ಮತ್ತು ಪ್ರಮಾಣೀಕರಣ ನೀಡಿದೆ. ಭಾರತವು ಎಐ- ಚಾಲಿತ ಭವಿಷ್ಯದತ್ತ ವೇಗವಾಗಿ ಸಾಗುತ್ತಿರುವಾಗ, ಎಐ ಸಾಮರ್ಥ್ಯಗಳಲ್ಲಿ ಪ್ರವೀಣರಾದ ಕಾರ್ಯಪಡೆಯ ಬೇಡಿಕೆ ಬೆಳೆಯುತ್ತಲೇ ಇದೆ. ಕ್ಯಾಪ್ಜೆಮಿನಿ ಮತ್ತು ನಾಸ್ಕಾಮ್ ಫೌಂಡೇಶನ್ ಪಾಲುದಾರಿಕೆಯು ಯುವಜನರಿಗೆ ಉತ್ಪಾದಕ ಎಐ, ರೊಬೊಟಿಕ್ಸ್, ಫಿನ್ಟೆಕ್ ಮತ್ತು ಹೆಚ್ಚಿನವುಗಳಲ್ಲಿ ಸುಧಾರಿತ ಕೌಶಲ್ಯಗಳನ್ನು ಒದಗಿಸುವ ಮೂಲಕ ಈ ಬೇಡಿಕೆಯನ್ನು ಪೂರೈಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ದೆಹಲಿ ಎನ್ಸಿಆರ್ ಮತ್ತು ಬೆಂಗಳೂರಿನಲ್ಲಿ ಜಾರಿಗೆ ತರಲಾದ ಈ ಕಾರ್ಯಕ್ರಮವು 140 ಗಂಟೆಗಳ ತಾಂತ್ರಿಕ ತರಬೇತಿ ಮತ್ತು 60 ಗಂಟೆಗಳಿಗೂ ಹೆಚ್ಚು ಮೃದು ಕೌಶಲ್ಯ ಅಭಿವೃದ್ಧಿಯನ್ನು ಒಳಗೊಂಡ ಸಮಗ್ರ 200 ಗಂಟೆಗಳ ತರಬೇತಿಯನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ. ಈ ಉಪಕ್ರಮವು ಕ್ಯಾಪ್ಜೆಮಿನಿ ಡಿಜಿಟಲ್ ಅಕಾಡೆಮಿ ಕಾರ್ಯಕ್ರಮದ ಮೇಲೆ ನಿರ್ಮಿಸಲ್ಪಟ್ಟಿದೆ, ಇದು ಭಾರತದಾದ್ಯಂತ ಸಾವಿರಾರು ಯುವಕರಿಗೆ ಹೆಚ್ಚಿನ ಬೇಡಿಕೆಯ ಡಿಜಿಟಲ್ ಕೌಶಲ್ಯಗಳಲ್ಲಿ ತರಬೇತಿ ನೀಡುತ್ತದೆ, ತಂತ್ರಜ್ಞಾನದಲ್ಲಿ ವೃತ್ತಿಜೀವನಕ್ಕೆ ಅವಕಾಶಗಳನ್ನು ಸೃಷ್ಟಿಸುತ್ತದೆ. ಅಕಾಡೆಮಿಗಳು ಕೌಶಲ್ಯ, ಕೌಶಲ್ಯವರ್ಧನೆ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಉದ್ಯೋಗಾವಕಾಶದ ಮೇಲೆ ಕೇಂದ್ರೀಕರಿಸುತ್ತವೆ, ಕೆಲಸವನ್ನು ಭದ್ರಪಡಿಸಿಕೊಳ್ಳಲು ಅಗತ್ಯವಾದ ಜ್ಞಾನ ಮತ್ತು ಸಾಮರ್ಥ್ಯಗಳೊಂದಿಗೆ ಕಲಿಯುವವರನ್ನು ಸಿದ್ಧಪಡಿಸುವ ಗುರಿಯನ್ನು ಹೊಂದಿವೆ. ಈ ವ್ಯಾಪಕ ತರಬೇತಿಯ ಪರಿಣಾಮವಾಗಿ, ಕಲಿಯುವವರು ವಿವಿಧ ಸಂಸ್ಥೆಗಳಲ್ಲಿ ಅಮೂಲ್ಯವಾದ ಕೌಶಲ್ಯ ಮತ್ತು ಉದ್ಯೋಗಾವಕಾಶಗಳನ್ನು ಪಡೆದಿದ್ದಾರೆ. ಕ್ಯಾಪ್ಜೆಮಿನಿಯ ಭಾರತದ ಸಿಇಒ ಅಶ್ವಿನ್ ಯಾರ್ಡಿ, ಎಐ ಕೆಲಸದ ದಿಟ್ಟ ಹೊಸ ಯುಗವನ್ನು ರೂಪಿಸುತ್ತಿದೆ – ಅಲ್ಲಿ ನಾವೀನ್ಯತೆ, ಸೇರ್ಪಡೆ ಮತ್ತು ಮಾನವ ಸಾಮರ್ಥ್ಯವು ಒಟ್ಟಿಗೆ ಅಭಿವೃದ್ಧಿ ಹೊಂದುತ್ತದೆ. ಕ್ಯಾಪ್ಜೆಮಿನಿಯ ಡಿಜಿಟಲ್ ಅಕಾಡೆಮಿಯ ಮೂಲಕ, ನಾಸ್ಕಾಮ್ ಫೌಂಡೇಶನ್ನ ಸಹಭಾಗಿತ್ವದಲ್ಲಿ, ನಾವು ಡಿಜಿಟಲ್ ಅಂತರವನ್ನು ನಿವಾರಿಸುತ್ತಿದ್ದೇವೆ – ಅರ್ಥಪೂರ್ಣ ವೃತ್ತಿಜೀವನಕ್ಕಾಗಿ ಉದ್ಯಮ-ಸಂಬಂಧಿತ ಎಐ ಮತ್ತು ತಂತ್ರಜ್ಞಾನ ಕೌಶಲ್ಯಗಳೊಂದಿಗೆ ಯುವಕರನ್ನು ಸಜ್ಜುಗೊಳಿಸುತ್ತಿದ್ದೇವೆ. ಈ ಉಪಕ್ರಮವು ನಮ್ಮ ಉದ್ಯೋಗಿ ಸ್ವಯಂಸೇವಕರ ಉತ್ಸಾಹದಿಂದ ಕೂಡಿದೆ, ಅವರು ಕಲಿಯುವವರಿಗೆ ಮಾರ್ಗದರ್ಶನ ನೀಡುತ್ತಾರೆ ಸಮಗ್ರ ಬೆಳವಣಿಗೆಗೆ ನಮ್ಮ ಬದ್ಧತೆಯನ್ನು ಬಲಪಡಿಸುತ್ತಾರೆ. ನಮ್ಮ ಮೊದಲ ಪದವೀಧರರ ಸಮೂಹಕ್ಕೆ ಅಭಿನಂದನೆಗಳು ? ಭವಿಷ್ಯವನ್ನು ಮುನ್ನಡೆಸುವುದು ಮತ್ತು ಪರಿವರ್ತಿಸುವುದು ನಿಮ್ಮದಾಗಿದೆ!'' ಎಂದು ಹೇಳಿದರು.

## ಮೊಟ್ಟೆ ಬೋಂಡಾ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಮೊಟ್ಟೆ- 5 ಕಡಲೆ ಹಿಟ್ಟು ಅಕ್ಕಿ ಹಿಟ್ಟು - 2 ಚಮಚ ಸೋಡಾ ಪುಡಿ ಉಪ್ಪು ಖಾರದ ಪುಡಿ ಅರಶಿಣ ಗರಂ ಮಸಾಲೆ ಶುಂಠಿ ಬೆಳ್ಳುಳ್ಳಿ ಪೇಸ್ಟ್ ಹಸಿ ಮೆಣಸು ಎಣ್ಣೆ

### ಮಾಡುವ ವಿಧಾನ

ಮೊದಲು 5 ರಿಂದ 6 ಮೊಟ್ಟೆಯನ್ನು ಬೇಯಿಸಿಕೊಳ್ಳಿ. ನಂತರ ಮೊಟ್ಟೆಯ ಸಿಪ್ಪೆ ತೆಗೆದು ಮಧ್ಯದಲ್ಲಿ ಕತ್ತರಿಸಿಕೊಳ್ಳಬೇಕು. ಕೆಲವರು ಇಡೀ ಮೊಟ್ಟೆಯ ಬೋಂಡಾ ಮಾಡುತ್ತಾರೆ. ಹೀಗೆ ಮಾಡೋದ್ರಿಂದ ಸಿಡಿಯಬಹುದು. ಈಗ ಒಂದು ಬೌಲ್ ತೆಗೆದುಕೊಂಡು ಅದಕ್ಕೆ ಕಡಲೆ ಹಿಟ್ಟು, ಅಕ್ಕಿ ಹಿಟ್ಟು, ಉಪ್ಪು, ಸೋಡಾ ಪುಡಿ, ಖಾರದ ಪುಡಿ, ಅರಶಿನ ಪುಡಿ, ಗರಂ ಮಸಾಲೆ, ಶುಂಠಿ ಬೆಳ್ಳುಳ್ಳಿ ಪೇಸ್ಟ್ ಸಹ ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. ನಂತರ ಸ್ವಲ್ಪ ಸ್ವಲ್ಪ ನೀರು ಹಾಕಿಕೊಳ್ಳುತ್ತಾ ಈ ಹಿಟ್ಟು ಮಿಕ್ಸ್ ಮಾಡಿಕೊಳ್ಳಿ. ಒಂದು ಹದಕ್ಕೆ ಬರುವವರೆಗೂ ಮಿಕ್ಸ್ ಮಾಡಿ. ತುಂಬಾನೆ ತೆಳುವಾಗಿ ಹಿಟ್ಟು ಮಾಡಿಕೊಳ್ಳಬೇಡಿ. ಈಗ ಒಲೆ ಮೇಲೆ ಬಾಣಲೆ ಇಟ್ಟು ಅದಕ್ಕೆ ಎಣ್ಣೆ ಹಾಕಿ ಕಾಯಲು ಬಿಡಿ. ಇನ್ನೊಂದು ಕಡೆ ಹಿಟ್ಟಿನೊಳಗೆ ಮೊಟ್ಟೆಗಳನ್ನು ಹಾಕಿಕೊಳ್ಳಿ. ಮೊಟ್ಟೆಗೆ ಸರಿಯಾಗಿ ಹಿಟ್ಟು ಹಿಡಿಯುವಂತೆ ಮಾಡಿಕೊಂಡು ನಂತರ ನಿಧಾನವಾಗಿ ಎಣ್ಣೆಯಲ್ಲಿ ಇದನ್ನು ಬಿಡಬೇಕು. ಹಾಕಿದ ತಕ್ಷಣ ತಿರುಗಿಸಲು ಹೋಗಬೇಡಿ. 3ರಿಂದ 4 ನಿಮಿಷ ಒಂದು ಕಡೆ ಬೇಯಿಸಿದ ಬಳಿಕ ತಿರುಗಿಸಿಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ಈ ಅದ್ಭುತ ರುಚಿಯ ಮೊಟ್ಟೆ ಬೋಂಡಾ ರೆಡಿಯಾಗುಯತ್ತದೆ.

## ಮದುವೆಯಾಗದೇ ತಂದೆಯಾದ ಇಬ್ರಾಹಿಂ!



ಸೈಫ್ ಅಲಿ ಖಾನ್ ಅವರ ಪುತ್ರ ಮತ್ತು ನಟ ಇಬ್ರಾಹಿಂ ಅಲಿ ಖಾನ್ ಸದಾ ಸುದ್ದಿಯಲ್ಲಿರುತ್ತಾರೆ. 'ನದಾನಿಯನ್' ಚಿತ್ರದ ಮೂಲಕ ಬಾಲಿವುಡ್ ಗೆ ಪಾದಾರ್ಪಣೆ ಮಾಡಿದ ಇಬ್ರಾಹಿಂ, ತಮ್ಮ ವೈಯಕ್ತಿಕ ಜೀವನದಿಂದಲೂ ಸುದ್ದಿಯಲ್ಲಿದ್ದಾರೆ. ಈಗ ಮತ್ತೊಮ್ಮೆ ಅವರ ವೈಯಕ್ತಿಕ ಜೀವನಕ್ಕೆ ಸಂಬಂಧಿಸಿದ ಒಂದು ಸಿಹಿ ಸುದ್ದಿ ಅಭಿಮಾನಿಗಳ ಹೃದಯ ಗೆದ್ದಿದೆ. ವಾಸ್ತವವಾಗಿ, ಇಬ್ರಾಹಿಂ ಅಲಿ ಖಾನ್ ಇತ್ತೀಚೆಗೆ ತಮ್ಮ ಕುಟುಂಬಕ್ಕೆ ಒಬ್ಬ ವಿಶೇಷ ಸದಸ್ಯರನ್ನು ಕರೆತಂದರು.. ಈ ಸದಸ್ಯರ ಹೆಸರು 'ಬಾಂಬಿ ಖಾನ್'. ಮತ್ತು ಇಬ್ರಾಹಿಂ ಬಾಂಬಿ ಖಾನ್ ಜೊತೆಗಿನ ಫೋಟೋವನ್ನು ಹಂಚಿಕೊಂಡು.. ತನ್ನ ಮಗಳು ಎಂದು ಕೂಡ ಹೇಳಿದ್ದಾರೆ.. ಹಾಗಾಗಿ ಈಗ ಅವರು 24 ನೇ ವಯಸ್ಸಿನಲ್ಲಿ ತಂದೆಯಾಗಿದ್ದಾರೆ.

ಇಬ್ರಾಹಿಂ ಇತ್ತೀಚೆಗೆ ತಮ್ಮ ಇನ್ಸ್ಟಾಗ್ರಾಮ್‌ನಲ್ಲಿ ಬಾಂಬಿ ಜೊತೆಗಿನ ಕೆಲವು ಫೋಟೋಗಳನ್ನು ಹಂಚಿಕೊಂಡಿದ್ದಾರೆ ಮತ್ತು ಹೃದಯಸ್ಪರ್ಶಿ ಸಂದೇಶವನ್ನೂ ಬರೆದಿದ್ದಾರೆ. ಈ ಫೋಟೋಗಳಲ್ಲಿ ಇಬ್ರಾಹಿಂ ಮತ್ತು ಬಾಂಬಿ ನಡುವಿನ ಪ್ರೀತಿ ಸ್ಪಷ್ಟವಾಗಿ ಗೋಚರಿಸುತ್ತದೆ. ಹಾಗಾದರೆ ಈ ಬಾಂಬಿ ಒಂದು ಪುಟ್ಟ ನಾಯಿಮರಿ. ಈ ಸುಂದರ ಕ್ಷಣವನ್ನು ಹಂಚಿಕೊಳ್ಳುತ್ತಾ, ಇಬ್ರಾಹಿಂ ಬಾಂಬಿ ತನ್ನ ಜೀವನದಲ್ಲಿ ಹೇಗೆ ಬಂದನೆಂದು ಹೇಳಿದ್ದಾನೆ. ಅವರು ತಮ್ಮ ಸಾಮಾಜಿಕ ಮಾಧ್ಯಮದಲ್ಲಿ ಒಂದು ದೊಡ್ಡ ಪೋಸ್ಟ್ ಅನ್ನು ಹಂಚಿಕೊಂಡಿದ್ದಾರೆ.

ನಾನು ಚಿತ್ರೀಕರಣದ ಸಮಯದಲ್ಲಿ, ಈ ಪುಟ್ಟ ನಾಯಿಮರಿ ನನ್ನ ಬಳಿಗೆ ಬಂದು ನನ್ನ ತೊಡೆಯ ಮೇಲೆ ಕುಳಿತಿತು. ಅದರ ನಂತರ, ಅದು ನನ್ನೊಂದಿಗೆ ಆಟವಾಡಲು ಪ್ರಾರಂಭಿಸಿತು.. ಆಗ ನಮ್ಮಿಬ್ಬರ ನಡುವಿನ ಸಂಬಂಧವು ವರ್ಷಗಳ ಕಾಲ ಮುಂದುವರೆದಂತೆ ನನಗೆ ತುಂಬಾ ಅಂಟಿಕೊಂಡಿತು.. ಆ ಕ್ಷಣದಿಂದ ಬಾಂಬಿ ನನ್ನ ಹೃದಯವನ್ನು ಗೆದ್ದಿದ್ದಾಳೆ.. ಈಗ ಅವಳು ನನಗೆ ಕೇವಲ ನಾಯಿಯಲ್ಲ, ಬದಲಾಗಿ ನನ್ನ ಮಗಳು ಎಂದು ಇಬ್ರಾಹಿಂ ಹೇಳಿದರು.

ಸಾಕುಪ್ರಾಣಿಯನ್ನು ಮನೆಗೆ ತರುವ ನಿರ್ಧಾರ ಸುಲಭವಲ್ಲ ಎಂದು ಸಹ ಇಬ್ರಾಹಿಂ ಹೇಳಿದರು. ವಿಶೇಷವಾಗಿ ಕುಟುಂಬದಲ್ಲಿ ಇದಕ್ಕೆ ವಿರೋಧ ಇದ್ದಾಗ. ಅವರ ತಾಯಿ ಅಮೃತಾ ಸಿಂಗ್ ಸ್ಪಷ್ಟವಾಗಿ ಈ ಅದನ್ನು ಮನೆಗೆ ತರಲು ನಿರಾಕರಿಸಿದ್ದರು. ಆದರೆ ಇಬ್ರಾಹಿಂ ಬಿಟ್ಟುಕೊಡಲಿಲ್ಲ ಮತ್ತು ಬಾಂಬಿಯನ್ನು ಮನೆಗೆ ಕರೆತರಲು ಸಾಧ್ಯವಿರುವ ಎಲ್ಲವನ್ನೂ ಮಾಡಿದರು. ಕೊನೆಗೆ, ಅವನು ತನ್ನ ನಿರ್ಧಾರಕ್ಕೆ ಬದ್ಧನಾಗಿ ಬಾಂಬಿಯನ್ನು ಮನೆಗೆ ಕರೆದುಕೊಂಡು ಹೋದನು. ಆದ್ದರಿಂದ ಈ ರೀತಿಯಾಗಿ, ಒಬ್ಬ ಹೊಸ ಸದಸ್ಯ ಅವರ ಮನೆಗೆ ಪ್ರವೇಶಿಸಿದೆ..

ಇಬ್ರಾಹಿಂ ಅಲಿ ಖಾನ್ ಅವರ ಚಲನಚಿತ್ರಗಳ ಬಗ್ಗೆ ಹೇಳುವುದಾದರೆ, ಅವರು ಶೀಘ್ರದಲ್ಲೇ ಕಾಜೋಲ್ ಮತ್ತು ಪೃಥ್ವಿರಾಜ್ ಸುಕುಮಾರನ್ ಅವರೊಂದಿಗೆ 'ಸರ್ಜಮೀನ್' ಚಿತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇದಲ್ಲದೆ, ಅವರು ಕರಣ್ ಜೋಹರ್ ಅವರ ಮುಂದಿನ ಚಿತ್ರ 'ಸ್ಟೂಡೆಂಟ್ ಆಫ್ ದಿ ಇಯರ್ 3' ನಲ್ಲಿ ಶನಯಾ ಕಪೂರ್ ಜೊತೆ ಕಾಣಿಸಿಕೊಳ್ಳಲಿದ್ದಾರೆ.

## ಕೊಲೆಸ್ಟ್ರಾಲ್ ಲಕ್ಷಣ ನಿರ್ಲಕ್ಷಿಸಬೇಡಿ!

### ಹೆಲ್ತ್ ಟಿಪ್ಸ್

**ತೀವ್ರ ಆಯಾಸ:** ಬೆಳಿಗ್ಗೆ ಎದ್ದ ತಕ್ಷಣ ದಣಿವು ಅಥವಾ ಶಕ್ತಿಹೀನತೆಯ ಭಾವನೆ ಅಧಿಕ ಕೊಲೆಸ್ಟ್ರಾಲ್‌ನ ಸಂಕೇತವಾಗಿರಬಹುದು. ಕೊಲೆಸ್ಟ್ರಾಲ್ ರಕ್ತನಾಳಗಳಲ್ಲಿ ಸಂಗ್ರಹವಾದಾಗ, ರಕ್ತಪರಿಚಲನೆ ಕಡಿಮೆಯಾಗಿ, ದೇಹಕ್ಕೆ ಸಾಕಷ್ಟು ಆಮ್ಲಜನಕ ಸಿಗದಿರಬಹುದು, ಇದು ಆಯಾಸಕ್ಕೆ ಕಾರಣವಾಗುತ್ತದೆ.

ಕಾಲುಗಳಲ್ಲಿ ನೋವು ಅಥವಾ ಜುಮ್ಮೆನಿಸುವಿಕೆ:ಅಧಿಕ ಕೊಲೆಸ್ಟ್ರಾಲ್ ರಕ್ತನಾಳಗಳನ್ನು ಕಿರಿದಾಗಿಸುತ್ತದೆ, ಇದರಿಂದ ಕಾಲುಗಳಿಗೆ ರಕ್ತದ ಹರಿವು ಕಡಿಮೆಯಾಗುತ್ತದೆ. ಇದು ಬೆಳಿಗ್ಗೆ ಎದ್ದಾಗ ಕಾಲುಗಳಲ್ಲಿ ನೋವು, ಜುಮ್ಮೆನಿಸುವಿಕೆ ಅಥವಾ ಭಾರವಾದ ಭಾವನೆಗೆ ಕಾರಣವಾಗಬಹುದು.

ತಲೆನೋವು ಅಥವಾ ತಲೆತಿರುಗುವಿಕೆ:ಬೆಳಿಗ್ಗೆ ಎದ್ದಾಗ ತಲೆನೋವು ಅಥವಾ ತಲೆತಿರುಗುವಿಕೆ ಆಗಾಗ್ಗೆ ಕಾಣಿಸಿದರೆ, ಇದು ಕೊಲೆಸ್ಟ್ರಾಲ್‌ನಿಂದ ರಕ್ತನಾಳಗಳು ತಡೆಯಾಗಿರುವುದರ ಸೂಚನೆಯಾಗಿರಬಹುದು. ಇದು ಮೆದುಳಿಗೆ ರಕ್ತದ ಹರಿವನ್ನು ಕಡಿಮೆ ಮಾಡುತ್ತದೆ.

ಕಣ್ಣುಗಳ ಸುತ್ತ ಕಸಂತರ ಗುರುತುಗಳು:ಕೆಲವರಿಗೆ, ಕಣ್ಣುಗಳ ಸುತ್ತ ಹಳದಿ ಬಣ್ಣದ ಕೊಬ್ಬಿನ ಗುರುತುಗಳು (ಕ್ಸಾಂಥೆಲಾಸ್ಮಾ) ಕಾಣಿಸಿಕೊಳ್ಳಬಹುದು. ಇದು ಅಧಿಕ ಕೊಲೆಸ್ಟ್ರಾಲ್‌ನ ಸ್ಪಷ್ಟ ಲಕ್ಷಣವಾಗಿದೆ, ಇದನ್ನು ಬೆಳಿಗ್ಗೆ ಗಮನಿಸಬಹುದು.

ಎದೆಯಲ್ಲಿ ಭಾರವಾದ ಭಾವನೆ:ಹೃದಯಕ್ಕೆ ರಕ್ತದ ಹರಿವು ಕಡಿಮೆಯಾದಾಗ, ಬೆಳಿಗ್ಗೆ ಎದೆಯಲ್ಲಿ ಒತ್ತಡ ಅಥವಾ ಭಾರವಾದ ಭಾವನೆ ಕಾಣಿಸಿಕೊಳ್ಳಬಹುದು. ಇದು ಗಂಭೀರವಾದ ಹೃದಯ ಸಂಬಂಧಿ ಸಮಸ್ಯೆಗಳ ಎಚ್ಚರಿಕೆಯಾಗಿರಬಹುದು.

ಈ ಲಕ್ಷಣಗಳನ್ನು ನಿರ್ಲಕ್ಷಿಸುವುದು ಆರೋಗ್ಯಕ್ಕೆ ತೀವ್ರ ಹಾನಿಕಾರಕ. ಅಧಿಕ ಕೊಲೆಸ್ಟ್ರಾಲ್ ರಕ್ತನಾಳಗಳಲ್ಲಿ ಪ್ಲಾಕ್ ರಚನೆಗೆ ಕಾರಣವಾಗಿ, ಹೃದಯಾಘಾತ, ಪಾರ್ಶ್ವವಾಯು, ಮತ್ತು ಕಿಡ್ನಿ ಸಮಸ್ಯೆಗಳಿಗೆ ದಾರಿ ಮಾಡಿಕೊಡುತ್ತದೆ. ಆರಂಭಿಕ ರೋಗನಿರ್ಣಯ ಮತ್ತು ಚಿಕಿತ್ಸೆಯಿಂದ ಈ ಅಪಾಯಗಳನ್ನು ಗಣನೀಯವಾಗಿ ಕಡಿಮೆ ಮಾಡಬಹುದು. ಆದರೆ, ಲಕ್ಷಣಗಳನ್ನು ಗಂಭೀರವಾಗಿ ಪರಿಗಣಿಸದಿದ್ದರೆ, ಸಮಸ್ಯೆ ತೀವ್ರಗೊಂಡು ಜೀವಕ್ಕೆ ಅಪಾಯವನ್ನುಂಟುಮಾಡಬಹುದು.

ಅಧಿಕ ಕೊಲೆಸ್ಟ್ರಾಲ್‌ನ ಲಕ್ಷಣಗಳನ್ನು ಗುರುತಿಸಿದರೆ, ತಕ್ಷಣ ವೈದ್ಯರನ್ನು ಸಂಪರ್ಕಿಸಿ ರಕ್ತದ ಕೊಲೆಸ್ಟ್ರಾಲ್ ಪರೀಕ್ಷೆ ಮಾಡಿಸಿಕೊಳ್ಳಿ. ಆರೋಗ್ಯಕರ ಆಹಾರ ಪದ್ಧತಿಯನ್ನು ಅನುಸರಿಸಿ, ತೈಲಯುಕ್ತ ಆಹಾರ, ಸಕ್ಕರೆ ಮತ್ತು ಕೊಬ್ಬಿನ ಪದಾರ್ಥಗಳನ್ನು ಕಡಿಮೆ ಮಾಡಿ. ಫೈಬರ್ ಸಮೃದ್ಧ ಆಹಾರ, ಹಣ್ಣುಗಳು, ತರಕಾರಿಗಳು ಮತ್ತು ಒಮೆಗಾ-3 ಕೊಬ್ಬಿನಾಮ್ಲಗಳನ್ನು ಆಹಾರದಲ್ಲಿ ಸೇರಿಸಿಕೊಳ್ಳಿ. ನಿಯಮಿತ ವ್ಯಾಯಾಮ, ಒತ್ತಡ ನಿರ್ವಹಣೆ ಮತ್ತು ಧೂಮಪಾನ ತ್ಯಜಿಸುವುದು ಕೊಲೆಸ್ಟ್ರಾಲ್ ಮಟ್ಟವನ್ನು ನಿಯಂತ್ರಣದಲ್ಲಿಡಲು ಸಹಾಯ ಮಾಡುತ್ತದೆ.ಅಧಿಕ ಕೊಲೆಸ್ಟ್ರಾಲ್‌ನ ಬೆಳಿಗ್ಗೆಯ ಲಕ್ಷಣಗಳಾದ ಆಯಾಸ, ಕಾಲು ನೋವು, ತಲೆನೋವು, ಮತ್ತು ಎದೆಯ ಒತ್ತಡವನ್ನು ಸಾಮಾನ್ಯ ಎಂದು ಕಡೆಗಣಿಸಬೇಡಿ. ಇವು ನಿಮ್ಮ ದೇಹದ ಎಚ್ಚರಿಕೆಯ ಸಂಕೇತಗಳಾಗಿರಬಹುದು. ಆರಂಭಿಕ ಕ್ರಮಗಳಿಂದ ಈ ಸಮಸ್ಯೆಯನ್ನು ನಿಯಂತ್ರಿಸಬಹುದು ಮತ್ತು ಆರೋಗ್ಯಕರ ಜೀವನವನ್ನು ಕಾಪಾಡಿಕೊಳ್ಳಬಹುದು.

## ಬ್ಲಾಕ್ ಹೆಡ್ಸ್ ತೆಗೆದು ಹಾಕಲು ಮನೆಮದ್ದು

### ಬ್ಯೂಟಿ ಟಿಪ್ಸ್

ಬ್ಲಾಕ್ ಹೆಡ್ಸ್ ತೆಗೆದು ಹಾಕಲು ನೀವು ಮನೆಮದ್ದುಗಳ ಸಹಾಯ ಪಡೆಯಬಹುದು. ಇಂದು ನಾವು ನಿಮಗೆ ಕೆಲವು ಸುಲಭ ಮತ್ತು ಪರಿಣಾಮಕಾರಿ ಮನೆಮದ್ದುಗಳ ಮೂಲಕ ಬ್ಲಾಕ್ ಹೆಡ್ಸ್ ತೆಗೆಯುವ ಬಗ್ಗೆ ಹೇಳುತ್ತೇವೆ. ಅವುಗಳ ಸಹಾಯದಿಂದ ಬ್ಲಾಕ್ ಹೆಡ್ಸ್ ಸುಲಭವಾಗಿ ಮತ್ತು ಯಾವುದೇ ಹಾನಿಯಿಲ್ಲದಂತೆ ತೆಗೆದುಹಾಕಬಹುದು.ನಿಂಬೆಹಣ್ಣು ನೈಸರ್ಗಿಕ ಆಮ್ಲವನ್ನು ಹೊಂದಿರುತ್ತದೆ. ಇದು ಚರ್ಮದಿಂದ ಕೊಳೆಯನ್ನು ಸ್ವಚ್ಛಗೊಳಿಸುತ್ತದೆ. ಜೇನುತುಪ್ಪವು ನೈಸರ್ಗಿಕ ನಂಜು ನಿರೋಧಕವಾಗಿದೆ. ಬ್ಲಾಕ್ ಹೆಡ್ಸ್ ತೆಗೆದುಹಾಕಲು ಮೊದಲು ಒಂದು ಚಮಚ ನಿಂಬೆ ರಸವನ್ನು ತೆಗೆದುಕೊಂಡು ಅದರಲ್ಲಿ ಒಂದು ಚಮಚ ಜೇನುತುಪ್ಪವನ್ನು ಮಿಶ್ರಣ ಮಾಡಿ. ಈಗ ಅದನ್ನು ಮೂಗಿನ ಮೇಲೆ ಹಚ್ಚಿ 15-20 ನಿಮಿಷಗಳ ಕಾಲ ಬಿಡಿ. ನಂತರ ಉಗುರು ಬೆಚ್ಚಗಿನ ನೀರಿನಿಂದ ತೊಳೆಯಿರಿ. ಕಾಟನ್ ಬಟ್ಟೆಯಿಂದ ನಿಧಾನವಾಗಿ ಒರೆಸಿಕೊಳ್ಳಿ. ಅಡಿಗೆ ಸೋಡಾ ಪರಿಣಾಮಕಾರಿ ಎಕ್ಸ್‌ಫೋಲಿಯೇಟರ್ ಆಗಿದ್ದು, ಇದು ಸತ್ತ ಜೀವಕೋಶಗಳನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಅಂತಹ ಪರಿಸ್ಥಿತಿಯಲ್ಲಿ, ಒಂದು ಚಮಚ ಅಡಿಗೆ ಸೋಡಾದೊಂದಿಗೆ ಸ್ವಲ್ಪ ನೀರು ಬೆರೆಸಿ ಪೇಸ್ಟ್ ತಯಾರಿಸಿ. ಇದನ್ನು ಮೂಗಿಗೆ ಹಚ್ಚಿ ಲಘುವಾಗಿ ಮಸಾಜ್ ಮಾಡಿ 10 ನಿಮಿಷಗಳ ನಂತರ ತೊಳೆಯಿರಿ. ಇದು ಬ್ಲಾಕ್ ಹೆಡ್ಸ್‌ನ್ನು ಸಂಪೂರ್ಣವಾಗಿ ನಿವಾರಿಸುತ್ತದೆ. ಮೊಸರಿನಲ್ಲಿರುವ ಲ್ಯಾಕ್ಟಿಕ್ ಆಮ್ಲ ಮತ್ತು ಅರಿಶಿನದ ಬ್ಯಾಕ್ಟೀರಿಯಾ ವಿರೋಧಿ ಗುಣಗಳು ಬ್ಲಾಕ್ ಹೆಡ್ಸ್ ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಒಂದು ಚಮಚ ಮೊಸರಿನಲ್ಲಿ ಒಂದು ಚಿಟಿಕೆ ಅರಿಶಿನವನ್ನು ಬೆರೆಸಿ. ಈ ಪೇಸ್ಟ್ ಅನ್ನು ಮೂಗಿನ ಮೇಲೆ ಹಚ್ಚಿ 15 ನಿಮಿಷಗಳ ನಂತರ ತೊಳೆಯಿರಿ. ಕಾಟನ್ ಬಟ್ಟೆ ಬಳಸಿ ಒರೆಸಿಕೊಳ್ಳಿ. ಬ್ಲಾಕ್ ಹೆಡ್ಸ್ ಸಂಪೂರ್ಣ ನಿವಾರಣೆ ಆಗುವುದು.



ಮುಖಕ್ಕೆ ಹಬೆ ತೆಗೆದುಕೊಳ್ಳುವುದರಿಂದ ಚರ್ಮದ ರಂಧ್ರಗಳು ತೆರೆದು ಕೊಳಕು ಮತ್ತು ಎಣ್ಣೆ ಹೊರಬರಲು ಅನುವು ಮಾಡಿಕೊಡುತ್ತದೆ. ಒಂದು ಪಾತ್ರೆಯಲ್ಲಿ ನೀರನ್ನು ಕುದಿಸಿ ಮತ್ತು ಅದಕ್ಕೆ ಸ್ವಲ್ಪ ನಿಂಬೆ ಸಿಪ್ಪೆಯನ್ನು ಸೇರಿಸಿ. ನಿಮ್ಮ ಮುಖವನ್ನು ಟವಲ್ ನಿಂದ ಮುಚ್ಚಿ ಮತ್ತು ಹಬೆ ತೆಗೆದುಕೊಳ್ಳಿ. ಈ ಪ್ರಕ್ರಿಯೆಯನ್ನು ಸುಮಾರು 5-10 ನಿಮಿಷಗಳ ಕಾಲ ಮಾಡಿ. ಬಳಿಕ ಬ್ಲಾಕ್ ಹೆಡ್ಸ್ ರಿಮೂವಲ್ ಟೂಲ್‌ನಿಂದ ನಿಧಾನವಾಗಿ ಬ್ಲಾಕ್ ಹೆಡ್ಸ್ ತೆಗೆಯಿರಿ.

## ಎಲಿವೇಟ್ ಪ್ರೋಗ್ರಾಮ್ ಪ್ರಾರಂಭಿಸಿದ ಅಮೆಜಾನ್.ಇನ್

ಅಮೆಜಾನ್.ಇನ್ ಇಂದು ಅಮೆಜಾನ್ ಇನ್ ಫ್ಲುಯೆನ್ಸರ್ ಪ್ರೋಗ್ರಾಮ್ ನ ಭಾಗವಾಗಿರುವ ಕಂಟೆಂಟ್ ಕ್ರಿಯೇಟರ್‌ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಉದ್ದೇಶದಿಂದ ಎಲಿವೇಟ್ ಪ್ರೋಗ್ರಾಮ್ ಅನ್ನು ಪ್ರಾರಂಭಿಸಿದೆ. ಈ ಯೋಜನೆಯ ಮೂಲಕ ಕಂಟೆಂಟ್ ಕ್ರಿಯೇಟರ್ ಗಳಿಗೆ ಉನ್ನತ ಮಟ್ಟದ ನೆರವು, ಒಳನೋಟಗಳು ಮತ್ತು ಅವರ ಬದಲಾಗುತ್ತಿರುವ ಅಗತ್ಯಗಳು ಮತ್ತು ಆಕಾಂಕ್ಷೆಗಳಿಗೆ ತಕ್ಕಂತೆ ಸಹಾಯ ಒದಗಿಸಲಾಗುತ್ತಿದ್ದು, ಇದು ಕಂಟೆಂಟ್ ಕ್ರಿಯೇಟರ್ ಗಳನ್ನು ಸಬಲೀಕರಣಗೊಳಿಸುವ ಮೂಲಕ ಹೆಚ್ಚಿನ ಗಳಿಕೆ ಮಾಡುವ ಅವರ ಸಾಮರ್ಥ್ಯವನ್ನು ಹೊರತರುವ ಗುರಿಯನ್ನು ಹೊಂದಿದೆ.

ಎಲಿವೇಟ್ ಪ್ರೋಗ್ರಾಮ್ ಮೂಲಕ ಅರ್ಹ ಕಂಟೆಂಟ್ ಕ್ರಿಯೇಟರ್‌ಗಳು ಅಮೆಜಾನ್.ಇನ್ ನಲ್ಲಿ ತಮ್ಮ ವಿಸಿಬಿಲಿಟಿ ಹೆಚ್ಚಿಸಲು ಮತ್ತು ಗಳಿಕೆಯನ್ನು ಹೆಚ್ಚಿಸಲು ವಿನ್ಯಾಸಗೊಳಿಸಲಾದ ಹಲವಾರು ವಿಶೇಷ ಸೌಲಭ್ಯಗಳನ್ನು ಪಡೆಯುತ್ತಾರೆ. ಇವುಗಳಲ್ಲಿ ಪ್ರೀಮಿಯಂ ಅಕೌಂಟ್ ನೆರವು, ಹೆಚ್ಚುವರಿ ಕಮಿಷನ್ ಗಳಿಸುವ ಅವಕಾಶಗಳು, ಉನ್ನತ ಮೌಲ್ಯದ ಬ್ರ್ಯಾಂಡ್ ಗಳ ಜೊತೆ ಸಹಯೋಗ ಮಾಡುವ ಅವಕಾಶ ಮತ್ತು ಅಮೆಜಾನ್ ಲೈವ್ ನಲ್ಲಿ ಭಾಗವಹಿಸುವ ಅವಕಾಶ ಇತ್ಯಾದಿ ಸೇರಿವೆ. ಈ ಕಾರ್ಯಕ್ರಮವು ತಜ್ಞರ ನೇತೃತ್ವದ ಕಾರ್ಯಾಗಾರಗಳನ್ನು ನಡೆಸುವ ಮತ್ತು ವಿಶೇಷ ತರಬೇತಿ ಘಟಕಗಳನ್ನು ಒಳಗೊಂಡಿರುವ ಅತ್ಯುತ್ತಮ ವೇದಿಕೆಯಾಗಿರುವ ಕ್ರಿಯೇಟರ್ ಯೂನಿವರ್ಸಿಟಿಯ ಮೂಲಕ ನಿಯಮಿತವಾಗಿ ಕೌಶಲ್ಯ ವೃದ್ಧಿ ಮಾಡಿಕೊಳ್ಳುವ ಅವಕಾಶಗಳನ್ನು ಕೂಡ ಒದಗಿಸುತ್ತದೆ. ಈ ಸಂಪನ್ಮೂಲಗಳು ಕಂಟೆಂಟ್ ಕ್ರಿಯೇಟರ್ ಗಳಿಗೆ ತಮ್ಮ ಕಂಟೆಂಟ್ ತಂತ್ರಗಳನ್ನು ಉತ್ತಮಗೊಳಿಸಲು, ಡಿಜಿಟಲ್ ಟ್ರೆಂಡ್ ಗಳಲ್ಲಿ ಮುಂಚೂಣಿಯಲ್ಲಿರಲು ಮತ್ತು ಸುಸ್ಥಿರವಾಗಿ ಬೆಳವಣಿಗೆ ಹೊಂದಲು ಸಹಾಯ ಮಾಡುವ ಗುರಿಯನ್ನು ಹೊಂದಿವೆ. ಅತ್ಯುತ್ತಮ ಪರ್ಫಾರ್ಮೆನ್ಸ್ ನೀಡುವ ಕಂಟೆಂಟ್ ಕ್ರಿಯೇಟರ್ ಗಳು ಅವರ ಪರ್ಫಾರ್ಮೆನ್ಸ್ ಗೆ ತಕ್ಕಂತೆ ಇನ್ಸೆಂಟಿವ್ ಗಳನ್ನು ಪಡೆಯಲು ಅರ್ಹರಾಗಿರುತ್ತಾರೆ. ಇದರಿಂದ 10 ಪಟ್ಟು ಹೆಚ್ಚು ಗಳಿಕೆ (ಸರಾಸರಿ 3-5 ಪಟ್ಟು) ಮಾಡುವ ಸಾಮರ್ಥ್ಯ ಒದಗಿ ಬರುತ್ತದೆ. ಜೊತೆಗೆ ಪ್ರೀಮಿಯಂ ಉತ್ಪನ್ನಗಳ ಅವಕಾಶ ಮತ್ತು ಅಮೆಜಾನ್ ನ ಪ್ರೊಡಕ್ಷ್ ಸ್ಟುಡಿಯೋಗಳ ಬಳಕೆ ಮಾಡುವ ಅಕಾಶವನ್ನೂ ಪಡೆಯುತ್ತಾರೆ.

ಈ ಕುರಿತು ಮಾತನಾಡಿರುವ ಅಮೆಜಾನ್ ನ ಭಾರತ ಮತ್ತು ಉದಯೋನ್ಮುಖ ಮಾರುಕಟ್ಟೆಗಳ ಶಾಪಿಂಗ್ ಇನಿಶಿಯೇಟಿವ್ಸ್ ನ ನಿರ್ದೇಶಕ ಜಾಹೀದ್ ಖಾನ್ ಅವರು, ''ನಾವು ನಮ್ಮ ಇನ್ ಫ್ಲುಯೆನ್ಸರ್ ಗಳ ಸಮೂಹವನ್ನು ಬಹಳ ಗೌರವಿಸುತ್ತೇವೆ ಮತ್ತು ಈ ಎಲಿವೇಟ್ ಪ್ರೋಗ್ರಾಮ್ ಕಂಟೆಂಟ್ ಕ್ರಿಯೇಟರ್ ಗಳಿಗೆ ನಮ್ಮ ವೇದಿಕೆಯಲ್ಲಿ ಬೆಳೆಯಲು ಮತ್ತು ಯಶಸ್ವಿಯಾಗಲು ಅಗತ್ಯವಾದ ಟೂಲ್ ಗಳು ಮತ್ತು ನೆರವನ್ನು ಒದಗಿಸುವ ಅಮೆಜಾನ್ ನ ವಿಶಾಲ ಧ್ಯೇಯದ ಪ್ರಮುಖ ಹೆಜ್ಜೆಯಾಗಿದೆ. ಭಾರತ ಸರ್ಕಾರವು ಕಂಟೆಂಟ್ ಕ್ರಿಯೇಟರ್ ಆರ್ಥಿಕತೆಯನ್ನು ಬಲಪಡಿಸಲು 1 ಬಿಲಿಯನ್ ಡಾಲರ್ ನಿಧಿಯನ್ನು ಘೋಷಿಸಿದೆ ಮತ್ತು ಮುಂಬೈನಲ್ಲಿ ಇಂಡಿಯನ್ ಇನ್ ಸ್ಟಿಟ್ಯೂಟ್ ಆಫ್ ಕ್ರಿಯೇಟಿವ್ ಟೆಕ್ನಾಲಜೀಸ್ ಸ್ಥಾಪಿಸಿದೆ. ಡಿಜಿಟಲ್ ಕಂಟೆಂಟ್ ಕ್ರಿಯೇಟರ್‌ಗಳಿಗೆ ನೆರವು ಒದಗಿಸುವ ಸರ್ಕಾರದ ಉದ್ದೇಶವನ್ನು ಈ ನಡೆ ಸ್ಪಷ್ಟಪಡಿಸುತ್ತದೆ. ಅಮೆಜಾನ್.ಇನ್ ಈ ದೃಷ್ಟಿಕೋನಕ್ಕೆ ಪೂರಕವಾಗಿ ಕೆಲಸ ಮಾಡಲು ಹೆಮ್ಮೆ ಪಡುತ್ತದೆ. ಎಲಿವೇಟ್ ಪ್ರೋಗ್ರಾಮ್ ಮೂಲಕ, ಕಂಟೆಂಟ್ ಕ್ರಿಯೇಟರ್ ಗಳಿಗೆ ಅಮೆಜಾನ್.ಇನ್ ಸಂಸ್ಥೆಯು ಹೆಚ್ಚು ಗಳಿಕೆ ಮಾಡುವ ಅವಕಾಶಗಳು, ಪ್ರೀಮಿಯಂ ಸಂಪನ್ಮೂಲಗಳು ಮತ್ತು ಸುಸ್ಥಿರ ಉದ್ಯಮವನ್ನು ನಿರ್ಮಿಸಲು, ಗ್ರಾಹಕರ ಅನುಭವವನ್ನು ಸಮೃದ್ಧಗೊಳಿಸಲು ಮತ್ತು ಭಾರತದ ಹುಮ್ಮಸ್ಸಿನ ಡಿಜಿಟಲ್ ಕ್ಷೇತ್ರಕ್ಕೆ ಉತ್ತಮ ಕೊಡುಗೆ ನೀಡಲು ಬೇಕಾದ ಆಕರ್ಷಕ ವ್ಯವಸ್ಥೆಯನ್ನು ಕಲ್ಪಿಸಿ ಕೊಡುತ್ತಿದೆ'' ಎಂದು ಹೇಳಿದರು.

1 ಮಿಲಿಯನ್ ಗಿಂತಲೂ ಹೆಚ್ಚು ಫಾಲೋವರ್ ಗಳನ್ನು ಹೊಂದಿರುವ ಅಮೆಜಾನ್ ಇನ್‌ಫ್ಲುಯೆನ್ಸರ್ ಕಾರ್ಯಕ್ರಮದ ಅಗ್ರ ಹೋಮ್ ಲೈಫ್ ಸ್ಟೈಲ್ ಇನ್ ಫ್ಲುಯೆನ್ಸರ್ ಸೋನಿಕಾ ಖುರಾನಾ ಸೇಠಿ ಅವರು ಈ ಕುರಿತು ಮಾತನಾಡಿ, ''ಅಮೆಜಾನ್ ನ ಹೊಸ ಎಲಿವೇಟ್ ಪ್ರೋಗ್ರಾಮ್ ನನಗೆ ನಿಜಕ್ಕೂ ಗೇಮ್ ಚೇಂಜರ್ ಆಗಿದೆ. ನಾನು ಕಂಟೆಂಟ್ ಕ್ರಿಯೇಟರ್ ಆಗಿ ಕೆಲಸ ಪ್ರಾರಂಭಿಸಿದಾಗ ನಿಮ್ಮ ಕಂಟೆಟ್ ನಿಂದ ಹಣವನ್ನು ಗಳಿಸಬಹುದು ಎಂಬ ಬಗ್ಗೆ ನನಗೆ ಯಾವುದೇ ಕಲ್ಪನೆಯಿರಲಿಲ್ಲ. ಈ ಕುರಿತು ತಿಳಿಯಲು, ಅರ್ಥ ಮಾಡಿಕೊಳ್ಳಲು ನನಗೆ ಯಾವುದೇ ಸಹಾಯವೂ ದೊರಕಿರಲಿಲ್ಲ, ಮತ್ತು ನಾನು ಬಳಸಬಹುದಾದ ಟೂಲ್ ಗಳು ಅಥವಾ ಪಾಲಿಸಬೇಕಾದ ಉತ್ತಮ ರೀತಿನೀತಿಗಳ ಬಗ್ಗೆ ತಿಳಿದಿರಲಿಲ್ಲ. ಈಗ ಹೊಸ ಎಲಿವೇಟ್ ಪ್ರೋಗ್ರಾಮ್ ಮೂಲಕ, ನನಗೆ ಅಗತ್ಯವಿರುವ ಯಾವುದೇ ನೆರವನ್ನು ಪಡೆಯಲು ಅಕೌಂಟ್ ಮ್ಯಾನೇಜರ್ ರನ್ನು ಸಂಪರ್ಕಿಸಬಹುದು. ಅಲ್ಲದೇ ಮಾರಾಟವನ್ನು ಹೆಚ್ಚಿಸುವ ಅನೇಕ ಟೂಲ್ ಗಳೂ ಲಭ್ಯವಿವೆ. ಜೊತೆಗೆ ನಮಗೆ ದೊರೆಯುವ ಇನ್ ಸೆಂಟಿವ್ ಗಳು ಮತ್ತು ಉತ್ತಮ ಕಮಿಷನ್ ದರಗಳು ದೊಡ್ಡ ಮಟ್ಟಿನ ಪ್ರೇರಣೆ ಒದಗಿಸುತ್ತವೆ! ನನ್ನ 'ಅಮೆಜಾನ್ ಫೈಂಡ್ಸ್' ಸರಣಿಯು ಈಗಾಗಲೇ ನನ್ನ ಪೇಜ್ ನಲ್ಲಿ ಜನಪ್ರಿಯವಾಗಿದೆ, ಆದ್ದರಿಂದ ಎಲಿವೇಟ್ ಪ್ರೋಗ್ರಾಮ್ ಕುರಿತು ಎಕ್ಸೈಟ್ ಆಗಿದ್ದೇನೆ. ಈ ಕಾರ್ಯಕ್ರಮವು ನನಗೆ ಸರಿಯಾದ ಸಮಯದಲ್ಲಿ ಸಂಪನ್ಮೂಲಗಳು ಮತ್ತು ಮಾಹಿತಿಯನ್ನು ನೀಡುತ್ತಿರುವುದರಿಂದ ನನ್ನ ಪ್ರೇಕ್ಷಕರಿಗೆ ಇನ್ನಷ್ಟು ಉಪಯುಕ್ತ ಕಂಟೆಂಟ್ ಅನ್ನು ರಚಿಸಲು ನನಗೆ ಉತ್ಸಾಹವನ್ನು ನೀಡುತ್ತಿದೆ. ಎಲಿವೇಟ್ ಕಾರ್ಯಕ್ರಮವು ಅಮೆಜಾನ್ ನಲ್ಲಿ ನನ್ನ ಗಳಿಕೆಯನ್ನು ಗರಿಷ್ಠಗೊಳಿಸಲು ನನಗೆ ಅವಶ್ಯವಾಗಿ ನೆರವಾಗಲಿದೆ'' ಎಂದು ಹೇಳಿದರು.

ಕಳೆದ ಕೆಲವು ವರ್ಷಗಳಲ್ಲಿ ಅಮೆಜಾನ್ ಭಾರತದಲ್ಲಿ ಕಂಟೆಂಟ್ ಕ್ರಿಯೇಟರ್ ಗಳಿಗೆ ವಿವಿಧ ರೀತಿಯ ಪರಿಣಾಮಕಾರಿ ಯೋಜನೆಗಳ ಮೂಲಕ ತನ್ನ ನೆರವನ್ನು ಸ್ಥಿರವಾಗಿ ವಿಸ್ತರಿಸುತ್ತಾ ಬಂದಿದೆ. 2022ರಲ್ಲಿ, ಸಂಸ್ಥೆಯು ಅಮೆಜಾನ್ ಲೈವ್ ಅನ್ನು ಪರಿಚಯಿಸಿದ್ದು, ಇದು ಕಂಟೆಂಟ್ ಕ್ರಿಯೇಟರ್ ಗಳು ಗ್ರಾಹಕರೊಂದಿಗೆ ನೇರವಾಗಿ ಸಂವಹನ ನಡೆಸುವ, ಉತ್ಪನ್ನಗಳನ್ನು ಪ್ರದರ್ಶಿಸುವ, ಅದೇ ಸಮಯದಲ್ಲಿ ಪ್ರಶ್ನೆಗಳಿಗೆ ಉತ್ತರಿಸುವ ಮತ್ತು ಸಂವಾದಾತ್ಮಕ ಸೆಷನ್ ಗಳನ್ನು ನಡೆಸಲು ಅವಕಾಶ ಒದಗಿಸುವ ಮೂಲಕ ಹೊಸತನಕ್ಕೆ ನಾಂದಿ ಹಾಡಿತ್ತು. ಅಲ್ಲದೇ ಇದೊಂದು ಉತ್ತೇಜನಕಾರಿ ಲೈವ್ ಶಾಪಿಂಗ್ ಅನುಭವ ಒದಗಿಸುವ ವ್ಯವಸ್ಥೆಯಾಗಿದೆ. ಅಮೆಜಾನ್ ಇನ್ ಫ್ಲುಯೆನ್ಸರ್ ಕಾರ್ಯಕ್ರಮದ ಜೊತೆಗೆ ಕ್ರಿಯೇಟರ್ ಸೆಂಟ್ರಲ್ ಅನ್ನು ಆರಂಭಿಸಲಾಗಿದ್ದು, ಇದು ಕಂಟೆಂಟ್ ರಚನೆಗಾಗಿ ಟೂಲ್ ಗಳು ಮತ್ತು ಒಳನೋಟಗಳನ್ನು ನೀಡುವ ಅತ್ಯುತ್ತಮ ವ್ಯವಸ್ಥೆಯಾಗಿದೆ. ಈ ಪ್ರಯತ್ನಗಳು ಕಂಟೆಂಟ್ ಕ್ರಿಯೇಟರ್ ವಿಭಾಗದಲ್ಲಿ ಅಮೆಜಾನ್ ಣಾಡುತ್ತಿರುವ ನಿರಂತರ ಹೂಡಿಕೆಯನ್ನು ಪ್ರತಿಬಿಂಬಿಸುತ್ತವೆ. ಇದರಿಂದಾಗಿ 2024 ರಲ್ಲಿ ಕ್ರಿಯೇಟರ್ ಬೇಸ್ ನಲ್ಲಿ ವರ್ಷದಿಂದ ವರ್ಷಕ್ಕೆ ಶೇ.25ರಷ್ಟು ಅಭಿವೃದ್ಧಿ ಹೊಂದುವುದು ಸಾಧ್ಯವಾಗಿದೆ. ಒಟ್ಟು 60,000 ಕ್ಕಿಂತಲೂ ಹೆಚ್ಚು ಕ್ರಿಯೇಟರ್ ಗಳನ್ನು ಹೊಂದಲಾಗಿದೆ. ಎಲಿವೇಟ್ ಪ್ರೋಗ್ರಾಮ್ ಈ ಬಲವಾದ ಅಡಿಪಾಯದ ಮೇಲೆ ಆರಂಭವಾಗಿದ್ದು, ಕ್ರಿಯೇಟರ್ ಗಳಿಗೆ ತಮ್ಮ ಪ್ರಭಾವವನ್ನು ವಿಸ್ತರಿಸಲು, ತಮ್ಮ ವ್ಯಾಪಾರವನ್ನು ಬೆಳೆಸಲು ಮತ್ತು ಅಮೆಜಾನ್.ಇನ್ ನ ಲಕ್ಷಾಂತರ ಗ್ರಾಹಕರೊಂದಿಗೆ ಅತ್ಯುತ್ತಮ ಒಡನಾಟವನ್ನು ಹೊಂದಲು ಸಹಾಯ ಮಾಡುವ ಹೆಚ್ಚು ಸಮಗ್ರ ಮತ್ತು ವೈಯಕ್ತೀಕರಿಸಿದ ಬೆಂಬಲ ವ್ಯವಸ್ಥೆಯನ್ನು ಒದಗಿಸುತ್ತದೆ.

ಅಮೆಜಾನ್ ಇನ್ ಫ್ಲುಯೆನ್ಸರ್ ಕಾರ್ಯಕ್ರಮದಲ್ಲಿ ನಿಮ್ಮ ಅನುಭವವನ್ನು ದಾಟಿಸುವ ಅವಕಾಶದ ಕುರಿತು ಹೆಚ್ಚಿನ ಮಾಹಿತಿ ತಿಳಿಯಲು, amazon.in/elevateforcreators ಗೆ ಭೇಟಿ ನೀಡಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ತಾಯಿಯಿಂದ ಅನುಕೂಲ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಸ್ಥಿರಾಸ್ತಿಯಿಂದ ಲಾಭ, ಕೃಷಿಕರಿಗೆ ಅನುಕೂಲ.

**ವೃಷಭ:** ಸ್ವಂತ ಉದ್ಯಮ ವ್ಯಾಪಾರದಲ್ಲಿ ಕುಂಠಿತ, ಅಧಿಕ ಧೈರ್ಯ, ಆತುರ, ಮುಂಗೋಪ, ಬಂಧು ಬಾಂಧವರೊಂದಿಗೆ ಶತ್ರುತ್ವ, ಪತ್ರವ್ಯವಹಾರದಲ್ಲಿ ಅನುಕೂಲ.

**ಮಿಥುನ:** ಮಕ್ಕಳ ಭವಿಷ್ಯದ ಚಿಂತೆ, ಬಾಲಗ್ರಹ ದೋಷ, ಪ್ರೀತಿ ಪ್ರೇಮ ವಿಷಯದಲ್ಲಿ ಸಮಸ್ಯೆ, ಅನಿರೀಕ್ಷಿತ ಆರ್ಥಿಕ ಲಾಭ.

**ಕಟಕ:** ಸ್ವಂತ ವ್ಯಾಪಾರ ವ್ಯವಹಾರದಲ್ಲಿ ಲಾಭ, ತಾಯಿಯಿಂದ ಅನುಕೂಲ, ಉದ್ಯೋಗ ಲಾಭ, ಮಕ್ಕಳಿಂದ ಅಂತರ.

**ಸಿಂಹ:** ಅಧಿಕ ನಷ್ಟ, ಉದ್ಯೋಗದಲ್ಲಿ ಅವಕಾಶ ವಂಚಿತರಾಗುವಿರಿ, ಬಂಧುಗಳೊಂದಿಗೆ ಕಿರಿಕಿರಿ, ಆರ್ಥಿಕ ಮುಗ್ಗಟ್ಟು.

**ಕನ್ಯಾ:** ಮಹಿಳೆಯರಿಂದ ಅನುಕೂಲ, ಪ್ರಯಾಣದಿಂದ ಲಾಭ, ಆರೋಗ್ಯದಲ್ಲಿ ಚೇತರಿಕೆ.

**ತುಲಾ:** ಉದ್ಯೋಗದಲ್ಲಿ ಪ್ರಗತಿ, ಆರ್ಥಿಕ ಮುಗ್ಗಟ್ಟು, ವ್ಯಾಪಾರ ವ್ಯವಹಾರದಲ್ಲಿ ಎಳೆದಾಟ, ವಿದ್ಯಾಭ್ಯಾಸದಲ್ಲಿ ಅನುಕೂಲ.

**ವೃಶ್ಚಿಕ:** ಶುಭ ಕಾರ್ಯಗಳಲ್ಲಿ ಯಶಸ್ಸು, ಅನಿರೀಕ್ಷಿತ ಉದ್ಯೋಗ ಲಾಭ, ಸಂಗಾತಿಯಿಂದ ಅನುಕೂಲ, ಆರ್ಥಿಕವಾಗಿ ಚೇತರಿಕೆ.

**ಧನಸ್ಸು:** ಶತ್ರು ಕಾಟ, ಸೋಲು ನಷ್ಟ ನಿರಾಸೆ, ನೆಮ್ಮದಿ ಭಂಗ, ಉನ್ನತ ವಿದ್ಯಾಭ್ಯಾಸದಲ್ಲಿ ಅನುಕೂಲ.

**ಮಕರ:** ಪ್ರೀತಿ ಪ್ರೇಮ ಭಾವನೆಗಳಿಗೆ ಬಲಿ, ಸಂಗಾತಿಯೊಂದಿಗೆ ಕಿರಿ ಕಿರಿ, ಸ್ಥಿರಾಸ್ತಿ ವಿಷಯದಲ್ಲಿ ತಪ್ಪು ನಿರ್ಧಾರ, ಪಾಲುದಾರದಿಂದ ನಷ್ಟ.

**ಕುಂಭ:** ಸಾಲದ ಚಿಂತೆ, ಶತ್ರು ಕಾಟ, ಅನಾರೋಗ್ಯ, ನಿದ್ರಾ ಭಂಗ.

**ಮೀನ:** ಆಕಸ್ಮಿಕ ಲಾಭ, ಮಕ್ಕಳಿಂದ ಅನುಕೂಲ, ಕುಟುಂಬ ಸಹಕಾರ, ಆರ್ಥಿಕವಾಗಿ ಚೇತರಿಕೆ.

## ಅಂತರರಾಷ್ಟ್ರೀಯ ಬೆಳಕಿನ ದಿನ




ಪ್ರತಿ ವರ್ಷ ಮೇ 16 ರಂದು, ಪ್ರಪಂಚದಾದ್ಯಂತ ಜನರು ಅಂತರರಾಷ್ಟ್ರೀಯ ಬೆಳಕಿನ ದಿನವನ್ನು ಆಚರಿಸುತ್ತಾರೆ. ಈ ದಿನವು ಭೌತಶಾಸ್ತ್ರಜ್ಞ ಮತ್ತು ಎಂಜಿನಿಯರ್ ಥಿಯೋಡರ್ ಮೈಮನ್ ಅವರ ಮೊದಲ ಉತ್ಪಾದಕ ಲೇಸರ್ ಕಾರ್ಯಾಚರಣೆಯ ದಿನಾಂಕವನ್ನು ಗೌರವಿಸುತ್ತದೆ. ಯುನೆಸ್ಕೋದ ಅಂತರರಾಷ್ಟ್ರೀಯ ಮೂಲ ವಿಜ್ಞಾನ ಕಾರ್ಯಕ್ರಮ (ಐ.ಬಿ.ಎಸ್.ಪಿ.) ವಿಶ್ವಸಂಸ್ಥೆಯ ಪರವಾಗಿ ದಿನದ ಆಚರಣೆಯನ್ನು ಸಂಘಟಿಸುತ್ತದೆ. ಪ್ರತಿ ವರ್ಷ ಮೇ 16 ರಂದು ವಿಶ್ವಾದ್ಯಂತ ಬೆಳಕಿನ ಆಚರಣೆ ನಡೆಯುತ್ತದೆ. ಯುನೆಸ್ಕೋ, ಪೋಷಕ ಸಂಸ್ಥೆಯು ಅಂತರರಾಷ್ಟ್ರೀಯ ಬೆಳಕಿನ ದಿನದ ಆಚರಣೆಗೆ ಒಂದು ಥೀಮ್ ಅನ್ನು ನೀಡುತ್ತದೆ.

2015 ರಲ್ಲಿ, ಅಂತರರಾಷ್ಟ್ರೀಯ ಬೆಳಕಿನ ವರ್ಷವನ್ನು ಅಂತರರಾಷ್ಟ್ರೀಯ ಬೆಳಕಿನ ದಿನದಿಂದ ಆಚರಿಸಲಾಯಿತು. ಈ ದಿನವನ್ನು ರಷ್ಯಾದ ಒಕ್ಕೂಟ, ಘಾನಾ, ಮೆಕ್ಸಿಕೊ, ನ್ಯೂಜಿಲೆಂಡ್ ಮತ್ತು ಯುನೆಸ್ಕೋದ ಕಾರ್ಯಕಾರಿ ಮಂಡಳಿಯು ಪ್ರಸ್ತಾಪಿಸಿದವು. ನವೆಂಬರ್ 2017 ರಲ್ಲಿ, ಈ ಪ್ರಸ್ತಾವನೆಗೆ ಯುನೆಸ್ಕೋ ಸಾಮಾನ್ಯ ಸಮ್ಮೇಳನದಿಂದ ಅನುಮೋದನೆ ದೊರೆಯಿತು. ಯುನೆಸ್ಕೋದ ಕಾರ್ಯಕಾರಿ ಮಂಡಳಿಯು ತನ್ನ 200 ನೇ ಅಧಿವೇಶನದಲ್ಲಿ (200 EX/ನಿರ್ಧಾರ 27) ಅಂತರರಾಷ್ಟ್ರೀಯ ಬೆಳಕಿನ ದಿನವನ್ನು ಘೋಷಿಸಿತು. ದಾಖಲೆ 39 C/40 ರಲ್ಲಿ, 39 ನೇ ಸಾಮಾನ್ಯ ಸಮ್ಮೇಳನವು ಈ ಆಯ್ಕೆಯನ್ನು ಅನುಮೋದಿಸಿತು.

ನಂತರ ಮೇ 16, 2018 ರಂದು, ಭೌತಶಾಸ್ತ್ರಜ್ಞ ಮತ್ತು ಎಂಜಿನಿಯರ್ ಥಿಯೋಡರ್ ಮೈಮನ್ ಮೊದಲ ಲೇಸರ್ ಅನ್ನು ಯಶಸ್ವಿಯಾಗಿ ಚಿತ್ರೀಕರಿಸಿದ 1960 ರ ವಾರ್ಷಿಕೋತ್ಸವದಂದು, ಯುನೆಸ್ಕೋ ಮೊದಲ ಅಂತರರಾಷ್ಟ್ರೀಯ ಬೆಳಕಿನ ದಿನ ಕಾರ್ಯಕ್ರಮವನ್ನು ಆಯೋಜಿಸಿತು. ಅಂತರರಾಷ್ಟ್ರೀಯ ಬೆಳಕಿನ ದಿನವು ಅಂತರರಾಷ್ಟ್ರೀಯ ಯೋಜನೆಯಾಗಿದ್ದು, ಇದು ಬೆಳಕಿನ ನಿರಂತರ ಮೆಚ್ಚುಗೆ ಮತ್ತು ವಿಜ್ಞಾನ, ಸಂಸ್ಕೃತಿ, ಕಲೆಗಳು, ಶಿಕ್ಷಣ, ಸುಸ್ಥಿರ ಅಭಿವೃದ್ಧಿ ಮತ್ತು ಔಷಧ, ಸಂವಹನ ಮತ್ತು ಶಕ್ತಿಯಂತಹ ವೈವಿಧ್ಯಮಯ ಕೈಗಾರಿಕೆಗಳಲ್ಲಿ ಅದು ವಹಿಸುವ ಪಾತ್ರಕ್ಕಾಗಿ ವೇದಿಕೆಯನ್ನು ನೀಡುತ್ತದೆ. ಬೆಳಕಿನ ವಿಶಾಲ ವಿಷಯವು ವಿಜ್ಞಾನ, ತಂತ್ರಜ್ಞಾನ, ಕಲೆ ಮತ್ತು ಸಂಸ್ಕೃತಿಯು ಯುನೆಸ್ಕೋದ ಶಿಕ್ಷಣ, ಸಮಾನತೆ ಮತ್ತು ಶಾಂತಿಯ ಗುರಿಗಳ ಸಾಕ್ಷಾತ್ಕಾರಕ್ಕೆ ಹೇಗೆ ಕೊಡುಗೆ ನೀಡಬಹುದು ಎಂಬುದನ್ನು ಎತ್ತಿ ತೋರಿಸುವ ಚಟುವಟಿಕೆಗಳಲ್ಲಿ ಭಾಗವಹಿಸುವಿಕೆಯನ್ನು ಸಕ್ರಿಯಗೊಳಿಸುತ್ತದೆ.

# ದೇಶ-ವಿದೇಶ



## ವಕ್ಫ್ ಕಾಯ್ದೆ ಸಿಂಧುತ್ವ ಪ್ರಶ್ನಿಸುವ ಅರ್ಜಿಗಳನ್ನು ಪಟ್ಟಿ ಮಾಡಿದ ಸುಪ್ರೀಂಕೋರ್ಟ್



**ನವದೆಹಲಿ:** ವಕ್ಫ್ (ತಿದ್ದುಪಡಿ) ಕಾಯ್ದೆ 2025ರ ಸಿಂಧುತ್ವ ಪ್ರಶ್ನಿಸುವ ಅರ್ಜಿಗಳ ಕುರಿತು ಮಧ್ಯಂತರ ಪರಿಹಾರವನ್ನು ಪರಿಗಣಿಸುವ ವಿಷಯದ ಕುರಿತು ವಾದಗಳನ್ನು ಮೇ 20 ರಂದು ಆಲಿಸುವುದಾಗಿ ಸುಪ್ರೀಂ ಕೋರ್ಟ್ ಹೇಳಿದೆ. ಹಿಂದಿನ 1995 ರ ವಕ್ಫ್ ಕಾನೂನಿನ ನಿಬಂಧನೆಗಳನ್ನು ತಡೆ ಹಿಡಿಯುವ ಯಾವುದೇ ಅರ್ಜಿಯನ್ನು ಮುಂದಿನ ವಿಚಾರಣೆಯ ದಿನಾಂಕದಂದು ಪರಿಗಣಿಸುವುದಿಲ್ಲ ಎಂದು ಸುಪ್ರೀಂಕೋರ್ಟ್ ಹೇಳಿದೆ. ಭಾರತದ ಮುಖ್ಯ ನ್ಯಾಯಮೂರ್ತಿ ಬಿ ಆರ್ ಗವಾಯಿ ನೇತೃತ್ವದ ಮತ್ತು ನ್ಯಾಯಮೂರ್ತಿ ಆಗಸ್ಟೀನ್ ಜಾರ್ಜ್ ಮಸಿಹ್ ಅವರನ್ನೊಳಗೊಂಡ ಪೀಠವು ಕಾಯ್ದೆಯ ನಿಬಂಧನೆಗಳನ್ನು ತಡೆಹಿಡಿದ ಮಧ್ಯಂತರ ಆದೇಶದ ಪರವಾಗಿ ಮತ್ತು ವಿರುದ್ಧವಾಗಿ ಇಡೀ ದಿನ ವಾದಗಳನ್ನು ಆಲಿಸುವುದಾಗಿ ಹೇಳಿದೆ. ಕಾನೂನಿನ ಸಿಂಧುತ್ವ ಪ್ರಶ್ನಿಸುವ ಅರ್ಜಿದಾರರನ್ನು ಪ್ರತಿನಿಧಿಸುತ್ತಿರುವ ಹಿರಿಯ ವಕೀಲ ಕಪಿಲ್ ಸಿಬಲ್ ಮತ್ತು ಕೇಂದ್ರವನ್ನು ಪ್ರತಿನಿಧಿಸುತ್ತಿರುವ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರನ್ನು ಮೇ 19 ರೊಳಗೆ ತಮ್ಮ ಲಿಖಿತ ಟಿಪ್ಪಣಿಗಳನ್ನು ಸಲ್ಲಿಸುವಂತೆ ಪೀಠವು ಕೇಳಿತು. ವಿಚಾರಣೆಯನ್ನು ಮುಂದಿನ ವಾರಕ್ಕೆ ನಿಗದಿಪಡಿಸಬಹುದು. ಇದು ನ್ಯಾಯಾಧೀಶರಿಗೆ ಪ್ರಕರಣದ ದಾಖಲೆಗಳನ್ನು ಪರಿಶೀಲಿಸಲು ಸಾಕಷ್ಟು ಸಮಯವನ್ನು ಒದಗಿಸುತ್ತದೆ ಎಂದು ಇಬ್ಬರೂ ಹಿರಿಯ ವಕೀಲರು ಸೂಚಿಸಿದರು. ವಿಚಾರಣೆಯ ಸಮಯದಲ್ಲಿ ವಕೀಲ ವಿಷ್ಣು ಶಂಕರ್ ಜೈನ್, ವಕ್ಫ್ ಕಾಯ್ದೆ 1995ರ ನಿಬಂಧನೆಗಳನ್ನು ತಾವು ಪ್ರಶ್ನಿಸಿರುವುದಾಗಿ ಪೀಠದ ಮುಂದೆ ಮನವಿ ಸಲ್ಲಿಸಿದರು. ಹೊಸ ಅರ್ಜಿಯಲ್ಲಿ ತಮ್ಮ ಕಕ್ಷಿದಾರರು ವಕ್ಫ್ ತಿದ್ದುಪಡಿ ಕಾಯ್ದೆ 2025ರ ವಿವಿಧ ನಿಬಂಧನೆಗಳನ್ನು ಪ್ರಶ್ನಿಸಿದ್ದಾರೆ ಮತ್ತು ಅವರ ಕಕ್ಷಿದಾರರು 2025 ರಲ್ಲಿ ತಿದ್ದುಪಡಿ ಮಾಡಲಾದ ವಕ್ಫ್ ಕಾಯ್ದೆ 1995ರ ಕೆಲವು ನಿಬಂಧನೆಗಳಿಂದ ನೊಂದಿದ್ದಾರೆ. ಹೊಸ ಸಲ್ಲಿಕೆಗಳನ್ನು ಮಾಡಲು 30 ನಿಮಿಷಗಳ ಕಾಲಾವಕಾಶ ನೀಡುವಂತೆ ಪೀಠವನ್ನು ಕೋರಲಾಗಿದೆ ಎಂದು ಜೈನ್ ಹೇಳಿದರು.

## ನಾನು ಒಪ್ಪಂದ ಮಾಡಿದ್ದೇನೆ ಎಂದು ಹೇಳಲು ಇಷ್ಟಪಡುವುದಿಲ್ಲ: ಡೊನಾಲ್ಡ್ ಟ್ರಂಪ್



**ದೋಹಾ, ಕತಾರ್ :** ಭಾರತ ಮತ್ತು ಪಾಕಿಸ್ತಾನದ ನಡುವೆ ಶಾಂತಿ ಒಪ್ಪಂದವನ್ನು ತಾನು ಮಧ್ಯಸ್ಥಿಕೆ ಮಾಡಿದ್ದೇನೆ ಎಂದು ಹೇಳಿಕೊಂಡ ಕೆಲವೇ ದಿನಗಳ ನಂತರ, ಅಮೆರಿಕ ಸಂಯುಕ್ತ ಸಂಸ್ಥಾನದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈ ವಿಷಯದಲ್ಲಿ ತಮ್ಮ ನಿಲುವನ್ನು ಬದಲಾಯಿಸಿದ್ದಾರೆ. ಭಾರತವು ಈಗಾಗಲೇ ಈ ರೀತಿಯ ಯಾವುದೇ ಹೇಳಿಕೆಯನ್ನು ತಿರಸ್ಕರಿಸಿದ್ದು, ಎರಡೂ ದೇಶಗಳ ಮಿಲಿಟರಿ ಕಾರ್ಯಾಚರಣೆಯ ಮಹಾನಿರ್ದೇಶಕರ (ಡಿಜಿಎಂಓ) ನಡುವೆ ಮಾತ್ರ ಮಾತುಕತೆ ನಡೆದಿತ್ತು ಎಂದು ಸ್ಪಷ್ಟಪಡಿಸಿದೆ.

ಕತಾರ್‌ನ ದೋಹಾದಲ್ಲಿ ಅಮೆರಿಕ ಸೈನಿಕರು ಮತ್ತು ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಟ್ರಂಪ್, ತಮ್ಮ ಹಿಂದಿನ ಹೇಳಿಕೆಯಿಂದ ಹಿಂದೆ ಸರಿದರು. ನಾನು ಒಪ್ಪಂದ ಮಾಡಿದ್ದೇನೆ ಎಂದು ಹೇಳಲು ಇಷ್ಟಪಡುವುದಿಲ್ಲ, ಆದರೆ ಭಾರತ ಮತ್ತು ಪಾಕಿಸ್ತಾನದ ನಡುವಿನ ಸಮಸ್ಯೆಯನ್ನು ಶಾಂತಿಯುತವಾಗಿ ಬಗೆಹರಿಸಲು ನಾನು ಖಂಡಿತವಾಗಿಯೂ ಸಹಾಯ ಮಾಡಿದ್ದೇನೆ. ಕಳೆದ ವಾರ ಈ ಘರ್ಷಣೆ ತೀವ್ರವಾಗಿ ಉಲ್ಬಣಗೊಳ್ಳುತ್ತಿತ್ತು. ಒಂದು ಕ್ಷಣದಲ್ಲಿ ವಿಭಿನ್ನ ರೀತಿಯ ಕ್ಷಿಪಣಿಗಳು ಕಾಣಿಸಿಕೊಳ್ಳುವ ಸಾಧ್ಯತೆ ಇತ್ತು. ಆದರೆ ಈಗ ಎಲ್ಲವೂ ಶಾಂತವಾಗಿದೆ ಎಂದು ಭಾವಿಸುತ್ತೇನೆ. ಆದರೆ ಒಂದೆರಡು ದಿನಗಳಲ್ಲಿ ಇದು ಮತ್ತೆ ಉಲ್ಬಣಗೊಂಡರೆ, ಅದು ನನ್ನ ತಪ್ಪಲ್ಲ! ಎಂದು ಟ್ರಂಪ್ ಹೇಳಿದರು.

ನಾನು ಎರಡೂ ದೇಶಗಳೊಂದಿಗೆ ವ್ಯಾಪಾರದ ಬಗ್ಗೆ ಮಾತನಾಡಿದೆ. ಯುದ್ಧದ ಬದಲು ವ್ಯಾಪಾರ ಮಾಡೋಣ ಎಂದು ಸಲಹೆ ನೀಡಿದೆ. ಪಾಕಿಸ್ತಾನ ಮತ್ತು ಭಾರತ ಎರಡೂ ಇದಕ್ಕೆ ಸಂತೋಷ ವ್ಯಕ್ತಪಡಿಸಿವೆ. ಅವರು ಶಾಂತಿಯ ಹಾದಿಯಲ್ಲಿದ್ದಾರೆ ಎಂದು ಭಾವಿಸುತ್ತೇನೆ, ಎಂದರು.

ಟ್ರಂಪ್ ತಮ್ಮ ಭಾಷಣದಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಘರ್ಷವನ್ನು ಸಾವಿರ ವರ್ಷಗಳಿಂದ ನಡೆಯುತ್ತಿರುವ ಯುದ್ಧ ಎಂದು ವಿವರಿಸಿದರು. ಅವರು ಸಾವಿರ ವರ್ಷಗಳಿಂದ ಯುದ್ಧ ಮಾಡುತ್ತಿದ್ದಾರೆ. ಇದನ್ನು ಬಗೆಹರಿಸುವುದು ಕಷ್ಟದ ಕೆಲಸ. ಆದರೆ ನಾನು ಶಾಂತಿಗಾಗಿ ಪ್ರಯತ್ನಿಸಿದೆ, ಎಂದು ಅವರು ಹೇಳಿದರು.

## ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ FIR ದಾಖಲು

**ಬಿಹಾರ:** ಇಲ್ಲಿನ ದರ್ಭಾಂಗಾ ಜಿಲ್ಲೆಯ ಅಂಬೇಡ್ಕರ್ ಹಾಸ್ಟೆಲ್‌ನಲ್ಲಿ ಅನುಮತಿಯಿಲ್ಲದೆ 'ಶಿಕ್ಷಾ, ನ್ಯಾಯ ಸಂವಾದ' ಜನಸಂಪರ್ಕ ಕಾರ್ಯಕ್ರಮವನ್ನು ಆಯೋಜಿಸಿದ್ದಕ್ಕಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮತ್ತು 100ಕ್ಕೂ ಹೆಚ್ಚು ಪಕ್ಷದ ಕಾರ್ಯಕರ್ತರ ವಿರುದ್ಧ ಪೊಲೀಸರು ಗುರುವಾರ ಎರಡು ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಂಬೇಡ್ಕರ್ ಹಾಸ್ಟೆಲ್‌ನಲ್ಲಿ,



ಲೋಕಸಭೆಯ ವಿರೋಧ ಪಕ್ಷದ ನಾಯಕ ಕಾಂಗ್ರೆಸ್‌ನ ರಾಜ್ಯಾದ್ಯಂತ ಸಾರ್ವಜನಿಕ ಭಾಗವಹಿಸುವಿಕೆ ಅಭಿಯಾನದ ಭಾಗವಾಗಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಇದಕ್ಕೂ ಮೊದಲು, ಜಿಲ್ಲಾಡಳಿತ ಕಾರ್ಯಕ್ರಮಕ್ಕೆ ಅನುಮತಿ ನಿರಾಕರಿಸಿ, ಪರ್ಯಾಯ ಸ್ಥಳವನ್ನು ಪ್ರಸ್ತಾಪಿಸಿತು. ಕಾಂಗ್ರೆಸ್ ಈ ಸಲಹೆಯನ್ನು ತಿರಸ್ಕರಿಸಿತು. ಇದು ಬಿಕ್ಕಟ್ಟಿಗೆ ಕಾರಣವಾಯಿತು. ಆಡಳಿತ ಮತ್ತು ಭದ್ರತಾ ಸಿಬ್ಬಂದಿಯ ಆಕ್ಷೇಪಣೆಗಳ ಹೊರತಾಗಿಯೂ, ರಾಹುಲ್ ಗಾಂಧಿ ಬೇರೆ ಮಾರ್ಗದ ಮೂಲಕ ಹಾಸ್ಟೆಲ್ ಆವರಣವನ್ನು ಪ್ರವೇಶಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ದರ್ಭಾಂಗಾ ಜಿಲ್ಲಾಡಳಿತವು ''ಜಿಲ್ಲಾ ಕಲ್ಯಾಣ ಅಧಿಕಾರಿ (ಮ್ಯಾಜಿಸ್ಟೀರಿಯಲ್ ಅಧಿಕಾರ ಹೊಂದಿರುವವರು) ಲಹೇರಿಯಾಸರೈ ಪೊಲೀಸ್ ಠಾಣೆಯಲ್ಲಿ ಸಲ್ಲಿಸಿದ ದೂರಿನ ಆಧಾರದ ಮೇಲೆ ಮೊದಲ ಎಫ್‌ಐಆರ್ ದಾಖಲಿಸಲಾಗಿದೆ.ಅಂಬೇಡ್ಕರ್ ಹಾಸ್ಟೆಲ್‌ನಲ್ಲಿ ಕಾರ್ಯಕ್ರಮಕ್ಕೆ ಯಾವುದೇ ಅನುಮತಿ ನೀಡಲಾಗಿಲ್ಲ, ಆದರೆ ಅದನ್ನು ನಿಷೇಧಾಜ್ಞೆಗಳನ್ನು ಉಲ್ಲಂಘಿಸಿ ನಡೆಸಲಾಗಿದೆ ಎಂದು ತಿಳಿಸಿದೆ.ನಿಷೇಧಾಜ್ಞೆಗಳನ್ನು ಉಲ್ಲಂಘಿಸಿದ್ದಕ್ಕಾಗಿ ಡಜನ್ಗಟ್ಟಲೆ ಗುರುತಿಸಲಾಗದ ಜನರ ವಿರುದ್ಧ ಎರಡನೇ ಎಫ್‌ಐಆರ್ ದಾಖಲಿಸಲಾಗಿದೆ.

## ರಾಜಸ್ಥಾನ: ಇಂಡೋ-ಪಾಕ್ ಗಡಿ ಬಳಿ ಡ್ರೋನ್ ಪತ್ತೆ; BSF ನಿಂದ ಪರಿಶೀಲನೆ, ಸ್ಥಳದಲ್ಲಿ ತೀವ್ರ ಕಟ್ಟೆಚ್ಚರ



**ಜೈಪುರ:** ರಾಜಸ್ಥಾನದ ಶ್ರೀಗಂಗಾನಗರ ಜಿಲ್ಲೆಯ ಅನುಪ್ ಗಢದ ಭಾರತ-ಪಾಕಿಸ್ತಾನ ಗಡಿಯ ಬಳಿ ಅನುಮಾನಾಸ್ಪದ ಡ್ರೋನ್ ನಂತಹ ವಸ್ತು ಪತ್ತೆಯಾಗಿದ್ದು, ಭದ್ರತಾ ಸಂಸ್ಥೆಗಳು ಅಲರ್ಟ್ ಆಗಿದ್ದಾರೆ.

ಗುರುವಾರ ಇಂದು ಬೆಳಿಗ್ಗೆ 9.45ರ ಸುಮಾರಿಗೆ ಅನುಪ್ ಗಢ ಪ್ರದೇಶದ ಗ್ರಾಮಸ್ಥರು ಮಾನವರಹಿತ ವೈಮಾನಿಕ ವಾಹನವನ್ನು ಪತ್ತೆಹಚ್ಚಿದರು. ಅದನ್ನು ಗಮನಿಸಿದ ತಕ್ಷಣ ಸ್ಥಳೀಯ ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ಅನುಪ್‌ಗಢ ಸ್ಟೇಷನ್ ಹೌಸ್ ಆಫೀಸರ್ ಈಶ್ವರ್ ಜಂಗಿದ್ ಅವರು, ತಕ್ಷಣ ಗಡಿ ಭದ್ರತಾ ಪಡೆಗೆ ಮಾಹಿತಿ ನೀಡಿ ಪೊಲೀಸ್ ತಂಡದೊಂದಿಗೆ ಸ್ಥಳಕ್ಕೆ ಧಾವಿಸಿ, ಪರಿಶೀಲನೆ ನಡೆಸಿದ್ದಾರೆ.

ಬಿಎಸ್‌ಎಫ್ ವಶಕ್ಕೆ ಪಡೆದಿರುವ ಡ್ರೋನ್ 5ರಿಂದ 7 ಅಡಿ ಉದ್ದವಿದ್ದು ಬಹುತೇಕ ಹಾನಿಗೊಳಗಾಗಿದೆ. ಅದರ ಕ್ಯಾಮೆರಾ ಮಾಡ್ಯೂಲ್ ಮುರಿದಿದೆ ಎಂದು ತಿಳಿದುಬಂದಿದೆ.

ಡ್ರೋನ್ ಮೂಲ ಮತ್ತು ಉದ್ದೇಶವನ್ನು ನಿರ್ಧರಿಸಲು ತನಿಖೆ ನಡೆಯುತ್ತಿದೆ ಎಂದು ಅನುಪ್ ಗಢ ಸ್ಟೇಷನ್ ಹೌಸ್ ಆಫೀಸರ್ ಜಂಗೀದ್ ಅವರು ತಿಳಿಸಿದ್ದಾರೆ.

ನಾವು ಡ್ರೋನ್ ಅನ್ನು ವಶಪಡಿಸಿಕೊಂಡಿದ್ದೇವೆ. ಆ ಪ್ರದೇಶವನ್ನು ಸಂಪೂರ್ಣವಾಗಿ ಪರಿಶೀಲಿಸಲಾಗುತ್ತಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಬಾಂಬ್ ನಿಷ್ಕ್ರಿಯ ದಳವನ್ನು ಸಹ ಕರೆಯಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ.

ಡ್ರೋನ್ ಅನ್ನು ಅದರ ಮೂಲ ಮತ್ತು ಉದ್ದೇಶವನ್ನು ನಿರ್ಧರಿಸಲು ವಿಧಿವಿಜ್ಞಾನ ಮತ್ತು ತಾಂತ್ರಿಕ ವಿಶ್ಲೇಷಣೆಗೆ ಕಳುಹಿಸಲಾಗುವುದು ಎಂದು ತಿಳಿಸಿದ್ದಾರೆ. ಅನುಮಾನಾಸ್ಪದ ಡ್ರೋನ್ ಗಡಿಯಾಚೆಯಿಂದ ಬಂದಿದೆಯೇ ಅಥವಾ ಯಾವುದೇ ಕಾರ್ಯಾಚರಣೆ ಸಮಯದಲ್ಲಿ ನಮ್ಮ ಸೇನಾ ಪಡೆಗಳಿಂದಲೇ ಹಾರಿಸಲಾಗಿದೆಯೇ ಎಂಬುದು ಇನ್ನೂ ಖಚಿತವಾಗಿಲ್ಲ. ತನಿಖೆ ಪೂರ್ಣಗೊಳ್ಳುವವರೆಗೆ, ಇದಕ್ಕೆ ಪಾಕಿಸ್ತಾನ ಸಂಪರ್ಕ ಕುರಿತು ದೃಢೀಕರಿಸಲು ಸಾಧ್ಯವಿಲ್ಲ, ರಾಷ್ಟ್ರೀಯ ಭದ್ರತಾ ದೃಷ್ಟಿಕೋನದಿಂದ ಈ ವಿಷಯವನ್ನು ಅತ್ಯಂತ ಸೂಕ್ಷ್ಮತೆಯಿಂದ ಪರಿಗಣಿಸಲಾಗುತ್ತಿದೆ ಎಂದಿದ್ದಾರೆ.

### ಧ್ವಂಸಗೊಂಡ ಏರ್‌ಫೀಲ್ಡ್ ಮುಚ್ಚಿಕೊಳ್ಳಲು ಮೈದಾನದಲ್ಲಿ ಪಾಕ್ ಪ್ರಧಾನಿ ಸಂವಾದ

## ಮೋದಿಗೆ ಟಕ್ಕರ್ ಕೊಡಲು ಹೋಗಿ ನಗೆಪಾಟಲು

**ಇಸ್ಲಾಮಾಬಾದ್:** ಪ್ರಧಾನಿ ನರೇಂದ್ರ ಮೋದಿ ಭಾಷಣಕ್ಕೆ ಟಕ್ಕರ್ ಕೊಡಲು ಹೋಗಿ ಮತ್ತೆ ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ನಗೆಪಾಟಲಿಗೀಡಾದ್ದಾರೆ. ಧ್ವಂಸಗೊಂಡಿದ್ದ ಏರ್‌ಫೀಲ್ಡ್ ಮುಚ್ಚಿಕೊಳ್ಳಲು ಮೈದಾನದಲ್ಲಿ ಸಂವಾದ ನಡೆಸಿ ಟ್ರೋಲ್ ಆಗಿದ್ದಾರೆ.

ಭಾರತದ ಆದಂಪುರ ವಾಯುನೆಲೆಯನ್ನು ಧ್ವಂಸಗೊಳಿಸಿದ್ದೇವೆಂದು ಪಾಕ್ ಸುಳ್ಳು ಸುದ್ದಿ ಹರಿಬಿಟ್ಟಿತ್ತು. ಅದೇ ಸ್ಥಳಕ್ಕೆ ಭೇಟಿ ನೀಡಿ ಸೈನಿಕರೊಂದಿಗೆ ಮಾತನಾಡಿ ಪ್ರಧಾನಿ ಮೋದಿ ಅವರು ಪಾಕ್‌ಗೆ ತಿರುಗೇಟು ಕೊಟ್ಟಿದ್ದರು. ಈಗ ಭಾರತದ ವಿರುದ್ಧದ ಕಾರ್ಯಾಚರಣೆಯಲ್ಲಿ ಭಾಗಿಯಾದ ಸೈನಿಕರನ್ನು ಪಾಕ್ ಪ್ರಧಾನಿ ಭೇಟಿಯಾಗಿದ್ದಾರೆ. ಇದು ಪ್ರಧಾನಿ ಮೋದಿ ಅವರ ನಕಲು ಎಂದು ನೆಟ್ಟಿಗರು ಟ್ರೋಲ್ ಮಾಡುತ್ತಿದ್ದಾರೆ.



ಡ್ಯಾಮೇಜ್ ಆಗಿರುವ ಏರ್‌ಫೀಲ್ಡ್ ಮುಚ್ಚಿಕೊಳ್ಳಲು ಮೈದಾನದಂತಹ ಜಾಗದಲ್ಲಿ ಸೈನಿಕರ ಜೊತೆ ಶೆಹಬಾಜ್ ಷರೀಫ್ ಸಂವಾದ ನಡೆಸಿದ್ದಾರೆ. ಬಿದ್ದರೂ ಮೀಸೆ ಮಣ್ಣಾಗಿಲ್ಲ ಎಂಬಂತೆ ವರ್ತಿಸಿ ಸಂವಾದದ ವೀಡಿಯೋ ರಿಲೀಸ್ ಮಾಡಿದ್ದಾರೆ.

ಪ್ರಧಾನಿ ಮೋದಿ ಆದಂಪುರ ವಾಯುನೆಲೆಯಲ್ಲಿ ಸೈನಿಕರನ್ನುದ್ದೇಶಿಸಿ ಮಾತಾನಾಡಿ ಜೈಕಾರ ಕೂಗಿದ್ದರು. ಅದನ್ನು ಅನುಕರಿಸಲು ಹೋಗಿ ಪಾಕ್ ಪ್ರಧಾನಿ ನಗೆಪಾಟಲಿಗೀಡಾಗಿದ್ದಾರೆ. ಗುಡ್ಡಗಾಡು ಬೆಟ್ಟದ ಮಧ್ಯೆ ಕಾಣುವ ಮೈದಾನದಂತಹ ಜಾಗದಲ್ಲಿ ಪಾಕ್ ಪ್ರಧಾನಿ, ಪಾಕ್‌ನ ಸೇನಾ ಮುಖ್ಯಸ್ಥ ಘೋಷಣೆ ಕೂಗಿದ್ದಾರೆ.

ಡ್ಯಾಮೇಜ್ ಆಗಿರುವ ಏರ್‌ಪೀಲ್ಡ್‌ನಲ್ಲಿ ಸಂವಾದ ಮಾಡಿದರೆ ಮರ್ಯಾದೆ ಪೂರ್ತಿ ಹೋಗುತ್ತದೆ ಎಂದು ಪಾಕಿಸ್ತಾನ ಈ ಕಸರತ್ತು ಮಾಡಿದೆ.

## ಪಾಕ್ ಧ್ವಜಗಳನ್ನು ಮಾರಾಟ ಮಾಡದಂತೆ ಆನ್ ಲೈನ್ ಕಂಪೆನಿಗಳಿಗೆ ಆದೇಶ

**ಹೊಸದಿಲ್ಲಿ:** ಪಾಕಿಸ್ತಾನಿ ಧ್ವಜಗಳನ್ನು ಮಾರಾಟ ಮಾಡಿರುವ ಆನ್ ಲೈನ್ ಮಾರ್ಕೆಟಿಂಗ್ ಕಂಪೆನಿಗಳಾದ ಅಮೆಝಾನ್, ಫ್ಲಿಪ್‌ಕಾರ್ಟ್, ಯೂಬಯ್ ಇಂಡಿಯಾ, ಇಟಿಎಸ್‌ವೈ, ದಿ ಫ್ಲ್ಯಾಗ್ ಕಂಪೆನಿ ಹಾಗೂ ದಿ ಫ್ಲ್ಯಾಗ್ ಕಾರ್ಪೊರೇಶನ್ ಗೆ ಕೇಂದ್ರ ಗ್ರಾಹಕ ಸಂರಕ್ಷಣಾ ಪ್ರಾಧಿಕಾರ (ಸಿಸಿಪಿಎ) ನೋಟಿಸ್ ಜಾರಿಗೊಳಿಸಿದೆ. ಆನ್ ಲೈನ್ ಮಾರ್ಕೆಟಿಂಗ್



ಸಂಸ್ಥೆಗಳು ಇಂತಹ ಎಲ್ಲಾ ತರಹದ ಲಿಸ್ಟಿಂಗ್ ಗಳನ್ನು ತಕ್ಷಣವೇ ಕೈಬಿಡಬೇಕು ಹಾಗೂ ಭಾರತೀಯ ಕಾನೂನುಗಳ ಕಟ್ಟುನಿಟ್ಟಿನ ಅನುಸರಣೆಯಾಗುವಂತೆ ನೋಡಿಕೊಳ್ಳಬೇಕೆಂದು ಅದು ಆದೇಶಿಸಿದೆ. ಕೇಂದ್ರ ಗ್ರಾಹಕ ವ್ಯವಹಾರಗಳು ಹಾಗೂ ಆಹಾರ ಖಾತೆಯ ಸಚಿವ ಪ್ರಹ್ಲಾದ್ ಜೋಷಿ ಅವರು ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ಈ ರೀತಿಯ 'ಸಂವೇದನಾ ರಾಹಿತ್ಯ'ವನ್ನು ಸಹಿಸಲು ಸಾಧ್ಯವಿಲ್ಲವೆಂದು ಹೇಳಿದ್ದಾರೆ. ಪಾಕಿಸ್ತಾನಿ ಚಿಹ್ನೆಗಳ ಆನ್ ಲೈನ್ ಮಾರಾಟವನ್ನು ನಿಷೇಧಿಸುವಂತೆ ಆಗ್ರಹಿಸಿ ಅಖಿಲ ಭಾರತ ವರ್ತಕರ ಒಕ್ಕೂಟ (ಸಿಎಐಟಿ)ವು ಕೇಂದ್ರ ಗೃಹ ಸಚಿವ ಪಿಯೂಶ್ ಗೋಯಲ್ ಅವರಿಗೆ ಪತ್ರ ಬರೆದಿತ್ತು. 'ಆಪರೇಷನ್ ಸಿಂಧೂರ್' ಹಿನ್ನೆಲೆಯಲ್ಲಿ ರಾಷ್ಟ್ರೀಯ ಭದ್ರತಾ ವ್ಯವಸ್ಥೆಯನ್ನು ಬಿಗಿಗೊಳಿಸಿರುವ ನಡುವೆ ಈ ಪತ್ರವನ್ನು ಮಂಗಳವಾರ ಕಳುಹಿಸಿಕೊಡಲಾಗಿದೆ.

## ಮುತ್ತಿನ ನಗರಿಯಲ್ಲಿ ವಿಶ್ವಸುಂದರಿ ಸ್ಪರ್ಧೆ

**ಹೈದರಾಬಾದ್:** 2025 ರ ವಿಶ್ವ ಸುಂದರಿ ಸ್ಪರ್ಧೆ ಈ ಬಾರಿ ಭಾರತೀಯ ನೆಲದಲ್ಲಿ ನಡೆಯಲಿದೆ. ಮೇ 6-7 ರಂದು ನಡೆಯಲಿರುವ ಮಿಸ್ ವರ್ಲ್ಡ್ ಸ್ಪರ್ಧೆಯಲ್ಲಿ ಭಾಗವಹಿಸಲಿರುವ ವಿಶ್ವದ 109 ಸುಂದರಿಯರು ಹೈದರಾಬಾದ್ ತಲುಪಿದ್ದಾರೆ.



ಎಲ್ಲಾ ಸ್ಪರ್ಧಿಗಳು ಚಾರ್ಮಿನಾರ್‌ನಲ್ಲಿ ಪಾರಂಪರಿಕ ನಡಿಗೆ ಮಾಡಿ ಚೌಮೊಹಲ್ಲಾ ಅರಮನೆಯಲ್ಲಿ ಭೋಜನ ಮಾಡಿದರು. ಹೈದರಾಬಾದ್‌ನ ಕರಕುಶಲ ವಸ್ತುಗಳು ಮತ್ತು ಸಾಂಸ್ಕೃತಿಕ ಉತ್ಸವಗಳನ್ನು ಆನಂದಿಸಿದರು. ಇನ್ನು ವಾರಂಗಲ್ ನ ಸಾವಿರ ಕಂಬದ ದೇವಸ್ಥಾನ, ವಾರಂಗಲ್ ಕೋಟೆ ಮತ್ತು ರಾಮಪ್ಪ ದೇವಸ್ಥಾನಕ್ಕೆ ಭೇಟಿ ನೀಡಿದರು. ಇಲ್ಲಿ ಅವರು ಸಾಂಸ್ಕೃತಿಕ ಕೇಂದ್ರದಲ್ಲಿ ಪೆರಿನಿ ನೃತ್ಯ ಕಾರ್ಯಕ್ರಮದಲ್ಲಿ ಭಾಗಿಯಾಗಿ ಸಂತಸಪಟ್ಟರು.

72ನೇ ವಿಶ್ವಸುಂದರಿ ಸ್ಪರ್ಧೆಯ ಅಂತಿಮ ಪ್ರದರ್ಶನ ಮೇ 31 ರಂದು ಹೈದರಾಬಾದ್ ನ ಹೈಟೆಕ್ಸ್ ಪ್ರದರ್ಶನ ಕೇಂದ್ರದಲ್ಲಿ ನಡೆಯಲಿದೆ. ಮೇ 15 ರಂದು ಸ್ಪರ್ಧಿಗಳನ್ನು ಎರಡು ಗುಂಪುಗಳಾಗಿ ವಿಂಗಡಿಸಲಾಗುತ್ತದೆ. ಮೊದಲ ಗುಂಪು ಯಾದಗಿರಿಗುಟ್ಟ ದೇವಸ್ಥಾನಕ್ಕೆ ಭೇಟಿ ನೀಡಲಿದೆ ಮತ್ತು ಎರಡನೇ ಗುಂಪು ಪೋಚಂಪಲ್ಲಿಗೆ ಭೇಟಿ ನೀಡಲಿದೆ. ಅಲ್ಲಿ ಅವರು ಸ್ಥಳೀಯ ಕುಶಲಕರ್ಮಿಗಳ ಕರಕುಶಲ ವಸ್ತುಗಳ ಮಾದರಿಗಳನ್ನು ನೋಡುತ್ತಾರೆ. ಮೇ 16 ರಂದು ಎರಡು ಗುಂಪುಗಳು ವೈದ್ಯಕೀಯ ಪ್ರವಾಸೋದ್ಯಮ ಮತ್ತು ಪಿಲ್ಲಾಲಮರೀ ಆಲದ ಮರಕ್ಕೆ ಭೇಟಿ ನೀಡಲಿವೆ. ಮೇ 17 ರಂದು ಬೆಳಗ್ಗೆ ಗಚಿಬೌಲಿ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುವ ಮಿಸ್ ವರ್ಲ್ಡ್ ಸ್ಪೋರ್ಟ್ಸ್ ಫಿನಾಲೆಯಲ್ಲಿ ಎಲ್ಲ ಸ್ಪರ್ಧಿಗಳು ಭಾಗಿಯಾಗಲಿದ್ದಾರೆ. ನಂತರ ಮಧ್ಯಾಹ್ನ ಅವರು ರಾಮೋಜಿ ಫಿಲ್ಮ್ ಸಿಟಿಗೆ ಭೇಟಿ ನೀಡಲಿದ್ದಾರೆ. ಮೇ 18 ರಂದು ಪೊಲೀಸ್ ಕಮಾಂಡ್ ಸೆಂಟರ್ ಮತ್ತು ರಾಜ್ಯ ಸಚಿವಾಲಯದಲ್ಲಿ ಭಾನುವಾರ-ಫಂಡೆ ಕಾರ್ನಿವಲ್ ಆನಂದಿಸಲಿದ್ದಾರೆ. ಮೇ 20-21 ರಂದು, ಎಲ್ಲಾ ಸ್ಪರ್ಧಿಗಳು ಪ್ರಾದೇಶಿಕ ಫಾಸ್ಟ್ ಟ್ರ್ಯಾಕ್ ಟೀ ಹಬ್ ಮತ್ತು ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯವನ್ನು ಆನಂದಿಸುತ್ತಾರೆ. ಮೇ 21 ರಂದು ಎಲ್ಲಾ ಸ್ಪರ್ಧಿಗಳು ಶಿಲ್ಪರಾಮಂನಲ್ಲಿ ನಡೆಯುವ ಕಲೆ ಮತ್ತು ಕರಕುಶಲ ಉತ್ಸವದಲ್ಲಿ ಭಾಗವಹಿಸಲಿದ್ದಾರೆ.

## ಉಪಗ್ರಹ ಚಿತ್ರಣವು ಪಾಕ್ ಗೆ ಆಗಿರುವ ಹಾನಿಯನ್ನು ಸ್ಪಷ್ಟವಾಗಿ ತೋರಿಸುತ್ತದೆ: ಜೈಶಂಕರ್

**ನವದೆಹಲಿ:** ಭಾರತವು ಇತ್ತೀಚಿನ ಮಿಲಿಟರಿ ಕಾರ್ಯಾಚರಣೆಯಲ್ಲಿ ಗಡಿಯಾಚೆಗಿನ ಭಯೋತ್ಪಾದಕ ಶಿಬಿರಗಳನ್ನು ಯಶಸ್ವಿಯಾಗಿ ಗುರಿಯಾಗಿಸಿ, ಅವುಗಳ ಮೂಲಸೌಕರ್ಯವನ್ನು ಧ್ವಂಸಗೊಳಿಸಿದೆ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ತಿಳಿಸಿದ್ದಾರೆ. ಈ ಕಾರ್ಯಾಚರಣೆಯು ಭಯೋತ್ಪಾದಕರ ವಿರುದ್ಧ ಮಾತ್ರ ಗುರಿಯಾಗಿತ್ತು, ಪಾಕಿಸ್ತಾನದ ಸೇನೆಯ ವಿರುದ್ಧವಲ್ಲ ಎಂದು ಭಾರತವು ಮೊದಲಿನಿಂದಲೂ ಸ್ಪಷ್ಟವಾಗಿ ತಿಳಿಸಿತ್ತು ಎಂದು ಅವರು ಹೇಳಿದರು. ಜೈಶಂಕರ್ ಅವರು, ಭಾರತದ ಎಚ್ಚರಿಕೆಯ ಹೊರತಾಗಿಯೂ ಪಾಕಿಸ್ತಾನವು ಕಾರ್ಯಾಚರಣೆಯಲ್ಲಿ ಮಧ್ಯಪ್ರವೇಶಿಸಲು ಆಯ್ಕೆ ಮಾಡಿಕೊಂಡಿತು ಮತ್ತು ಇದರಿಂದಾಗಿ ಮೇ 10 ರ ಬೆಳಗ್ಗೆ ಗಣನೀಯ ನಷ್ಟವನ್ನು ಅನುಭವಿಸಿತು ಎಂದು ಬಹಿರಂಗಪಡಿಸಿದರು. ಉಪಗ್ರಹ ಚಿತ್ರಣವು ನಾವು ಉಂಟುಮಾಡಿದ ವ್ಯಾಪಕ ಹಾನಿಯನ್ನು ಮತ್ತು ಅವರು ಕಾರ್ಯಗತಗೊಳಿಸಿದ ಕನಿಷ್ಠ ಹಾನಿಯನ್ನು ಸ್ಪಷ್ಟವಾಗಿ ತೋರಿಸುತ್ತದೆ. ಯಾರು ಶಾಂತಿ ಒಪ್ಪಂದಕ್ಕೆ ಹೆಚ್ಚು ಉತ್ಸುಕರಾಗಿದ್ದರು ಎಂಬುದು ಸ್ಪಷ್ಟವಾಗಿದೆ, ಎಂದು ಜೈಶಂಕರ್ ತಿಳಿಸಿದರು. ಈ ಕಾರ್ಯಾಚರಣೆಯು ಯೋಜಿತ, ಗುರಿಮುಖೀ ಮತ್ತು ಭಯೋತ್ಪಾದಕ ಸಾಮರ್ಥ್ಯಗಳನ್ನು ಕುಗ್ಗಿಸುವಲ್ಲಿ ಯಶಸ್ವಿಯಾಗಿದೆ ಎಂದು ಅವರು ಪುನರುಚ್ಚರಿಸಿದರು. ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ಭಾರತದ ಕಠಿಣ ನಿಲುವನ್ನು ಮತ್ತು ಪ್ರಚೋದನೆಯಾದಾಗ ನಿರ್ಣಾಯಕವಾಗಿ ಕಾರ್ಯನಿರ್ವಹಿಸುವ ಸಿದ್ಧತೆಯನ್ನು ಜೈಶಂಕರ್ ಅವರ ಹೇಳಿಕೆಗಳು ಒತ್ತಿಹೇಳುತ್ತವೆ.

## ಪಾಕಿಸ್ತಾನದ ಯಾವುದೇ ಪರಮಾಣು ಸ್ಥಾವರದಿಂದ ವಿಕಿರಣ ಸೋರಿಕೆಯಾಗಿಲ್ಲ:IAEA



**ನವದೆಹಲಿ:** ಅಂತಾರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆಪಾಕಿಸ್ತಾನದ ಯಾವುದೇ ಪರಮಾಣು ಸ್ಥಾವರದಿಂದ ವಿಕಿರಣ ಸೋರಿಕೆ ಅಥವಾ ಬಿಡುಗಡೆಯಾಗಿಲ್ಲ ಎಂದು ಸ್ಪಷ್ಟಪಡಿಸಿದೆ.

IAEAಗೆ ಲಭ್ಯವಿರುವ ಮಾಹಿತಿಯ ಆಧಾರದ ಮೇಲೆ, ಪಾಕಿಸ್ತಾನದ ಯಾವುದೇ ಪರಮಾಣು ಸ್ಥಾವರದಿಂದ ವಿಕಿರಣ ಸೋರಿಕೆ ಅಥವಾ ಬಿಡುಗಡೆಯಾಗಿಲ್ಲ, ಎಂದು IAEA ವಕ್ತಾರರು ಪಿಟಿಐಗೆ ತಿಳಿಸಿದ್ದಾರೆ.ಈ ಮಧ್ಯೆ, ಭಾರತೀಯ ವಾಯುಪಡೆಯ ವಾಯು ಕಾರ್ಯಾಚರಣೆಗಳ ಮಹಾನಿರ್ದೇಶಕ ಏರ್ ಮಾರ್ಷಲ್ ಎ.ಕೆ. ಭಾರತಿ, ಪಾಕಿಸ್ತಾನದ ಪರಮಾಣು ಸ್ಥಾಪನೆಗಳಿರುವ ಕಿರಾನಾ ಬೆಟ್ಟಗಳ ಮೇಲೆ ಭಾರತ ದಾಳಿ ನಡೆಸಿದೆ ಎಂಬ ಸಲಹೆಗಳನ್ನು ಮೇ 12 ರಂದು ಮಾಧ್ಯಮದವರೊಂದಿಗೆ ಮಾತನಾಡುವಾಗ ತಳ್ಳಿಹಾಕಿದರು. ನಾವು ಕಿರಾನಾ ಬೆಟ್ಟಗಳ ಮೇಲೆ ದಾಳಿ ನಡೆಸಿಲ್ಲ, ಅಲ್ಲಿ ಏನೇ ಇದ್ದರೂ, ಎಂದು ಅವರು ಸ್ಪಷ್ಟಪಡಿಸಿದರು.

ಭಾರತದ ದಾಳಿಗಳು ಪಾಕಿಸ್ತಾನದ ಸರ್ಗೋಧಾದಲ್ಲಿರುವ ವಾಯುನೆಲೆಯ ಮೇಲೆ ನಡೆದಿದ್ದು, ಈ ವಾಯುನೆಲೆಯು ಕಿರಾನಾ ಬೆಟ್ಟಗಳ ಭೂಗತ ಪರಮಾಣು ಶೇಖರಣಾ ಸೌಲಭ್ಯಕ್ಕೆ ಸಂಬಂಧಿಸಿದೆ ಎಂಬ ಕೆಲವು ವರದಿಗಳು ಹೊರಬಿದ್ದಿವೆ.

## ಡ್ರೋನ್ ಪತ್ತೆ; ಭದ್ರತಾ ಸಂಸ್ಥೆಗಳಿಂದ ಕಟ್ಟೆಚ್ಚರ



**ಜೈಪುರ:** ಭಾರತ-ಪಾಕಿಸ್ತಾನ ಗಡಿಯ ರಾಜಸ್ಥಾನದ ಶ್ರೀ ಗಂಗಾನಗರ್ ಜಿಲ್ಲೆಯ ಹೊಲವೊಂದರಲ್ಲಿ ಗುರುವಾರ ಬೆಳಗ್ಗೆ ಡ್ರೋನ್ ಒಂದು ಪತ್ತೆಯಾಗಿದೆ.

ಈ ಹಿನ್ನೆಲೆಯಲ್ಲಿ ಪೊಲೀಸರು ಹಾಗೂ ಗಡಿ ಭದ್ರತಾ ಪಡೆ (ಬಿಎಸ್‌ಎಫ್)ಸಿಬ್ಬಂದಿ ಕಟ್ಟೆಚ್ಚರ ವಹಿಸಿದ್ದಾರೆ.

ಅನೂಪ್‌ಗಢ ಪ್ರದೇಶದ ಗ್ರಾಮಸ್ಥರು ಬೆಳಗ್ಗೆ ಸುಮಾರು 9.45ಕ್ಕೆ ಹೊಲದಲ್ಲಿ ಡ್ರೋನ್ ಅನ್ನು ನೋಡಿದ್ದಾರೆ ಹಾಗೂ ಕೂಡಲೇ ಸ್ಥಳೀಯ ಆಡಳಿತಕ್ಕೆ ಮಾಹಿತಿ ನೀಡಿದ್ದಾರೆ.

ಈ ಬಗ್ಗೆ ಅನೂಪ್‌ಗಢ ಪೊಲೀಸ್ ಠಾಣೆಯ ಅಧಿಕಾರಿ ಈಶ್ವರ್ ಜಾಂಗಿಡ್, ''ತಾನು ಬಿಎಸ್‌ಎಫ್‌ಗೆ ಮಾಹಿತಿ ನೀಡಿದೆ. ಅವರು ಪೊಲೀಸ್ ತಂಡದೊಂದಿಗೆ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು'' ಎಂದಿದ್ದಾರೆ.

ಈ ಡ್ರೋನ್ ಸರಿಸುಮಾರು 5-7 ಅಡಿ ಉದ್ದವಿದೆ. ಅದರ ಕ್ಯಾಮರಾ ಒಡೆದಿದೆ ಹಾಗೂ ಪ್ರತ್ಯೇಕಗೊಂಡಿದೆ ಎಂದು ಅವರು ತಿಳಿಸಿದ್ದಾರೆ. ''ನಾವು ಡ್ರೋನ್ ಅನ್ನು ವಶಕ್ಕೆ ತೆಗೆದುಕೊಂಡಿದ್ದೇವೆ. ಈ ಪ್ರದೇಶವನ್ನು ಕೂಲಂಕಷವಾಗಿ ಪರಿಶೀಲಿಸಲಾಗುತ್ತಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಬಾಂಬ್ ನಿಷ್ಕ್ರಿಯ ದಳವನ್ನು ಕೂಡ ಕರೆಸಲಾಗಿದೆ'' ಎಂದು ಜಾಂಗಿಡ್ ಹೇಳಿದ್ದಾರೆ.



## ಸಿಂಧೂ ನದಿ ಒಪ್ಪಂದ: ಚರ್ಚೆಗೆ ಮುಂದಾದ ಪಾಕ್

**ನವದೆಹಲಿ:** ಪಹಲ್ಗಾಮ್ ಉಗ್ರರ ದಾಳಿ ಬೆನ್ನಲ್ಲೇ ಪಾಕಿಸ್ತಾನದ ವಿರುದ್ಧ ಕಠಿಣ ಕ್ರಮ ತೆಗೆದುಕೊಂಡಿದ್ದ ಭಾರತ, 1960 ಸಿಂಧೂ ಜಲ ಒಪ್ಪಂದವನ್ನು ಅಮಾನತು ಮಾಡಿತ್ತು. ಇದೀಗ ಈ ನಿರ್ಧಾರವನ್ನು ಮತ್ತೊಮ್ಮೆ ಪರಿಶೀಲಿಸುವಂತೆ ಪಾಕಿಸ್ತಾನ ಮನವಿ ಮಾಡಿದ್ದು, ಈ ಒಪ್ಪಂದ ವಿಚಾರದಲ್ಲಿನ ಕಾಳಜಿ ಹಿನ್ನೆಲೆ ನವದೆಹಲಿಯೊಂದಿಗೆ ಚರ್ಚಿಸಲು ಇಚ್ಛೆ ವ್ಯಕ್ತಪಡಿಸಿದೆ ಎಂದು ಮೂಲಗಳು ತಿಳಿಸಿವೆ.

ಮೂಲಗಳ ಪ್ರಕಾರ, ಪಾಕಿಸ್ತಾನದ ಜಲ ಸಂಪನ್ಮೂಲ ಕಾರ್ಯದರ್ಶಿ ಸಯ್ಯದ್ ಅಲಿ ಮುರ್ತಝಾ, ಭಾರತ ಸರ್ಕಾರಕ್ಕೆ ಔಪಚಾರಿಕ ಪತ್ರ ಬರೆದಿದ್ದಾರೆ. ಭಾರತದ ಜಲ ಶಕ್ತಿ ಕಾರ್ಯದರ್ಶಿ ದೇಬಶ್ರೀ ಮುಖರ್ಜಿಗೆ ಪತ್ರ ಬರೆದಿದ್ದು, ಇದರಲ್ಲಿ ಪಾಕಿಸ್ತಾನ ಸರ್ಕಾರ ನವದೆಹಲಿ ಎತ್ತಿರುವ ನಿರ್ದಿಷ್ಟ ಆಕ್ಷೇಪದ ವಿರುದ್ಧ ಚರ್ಚೆಗೆ ಸಿದ್ಧ ಎಂದಿದ್ದಾರೆ.

ಅಲ್ಲದೇ ಭಾರತ ಯಾವುದೇ ಸೂಚನೆ ಇಲ್ಲದೇ ಏಕಪಕ್ಷೀಯವಾಗಿ ಯಾವ ಕಾನೂನಿನ ಆಧಾರದ ಮೇಲೆ ಈ ಕ್ರಮ ಕೈಗೊಂಡಿದೆ ಎಂದು ಅವರು ಪ್ರಶ್ನಿಸಿದ್ದಾರೆ.

ಈ ಎಲ್ಲದರ ಹೊರತಾಗಿ ಭಾರತ ತನ್ನ ನಿಲುವಿಗೆ ಬದ್ಧವಾಗಿದೆ. ಈ ಕುರಿತು ಜಲಶಕ್ತಿ ಸಚಿವಾಲಯದ ಅಧಿಕಾರಿಗಳನ್ನು ಸಂಪರ್ಕಿಸಲಾಯಿತಾದರೂ ಅವರು ಈ ಬೆಳವಣಿಗೆಗಳ ಕುರಿತು ಅಧಿಕೃತ ಹೇಳಿಕೆ ನೀಡಲು ನಿರಾಕರಿಸಿದ್ದಾರೆ. ಆದರೆ ಸರ್ಕಾರಿ ಮೂಲಗಳ ಪ್ರಕಾರ, ಭಾರತವೂ ಯಾವುದೇ ಬದಲಾವಣೆಗೆ ಸಿದ್ಧವಿಲ್ಲ ಎಂಬುದಾಗಿ ತಿಳಿದು ಬಂದಿದೆ. ಏಪ್ರಿಲ್ 24ರಂದು ಒಪ್ಪಂದ ಅಮಾನತು ಮಾಡುವ ಸಂಬಂಧ ಮುಖರ್ಜಿ ಬರೆದ ಪತ್ರದಲ್ಲಿ, ಪಾಕಿಸ್ತಾನದ ಈ ಮಾತುಕತೆಯನ್ನು ನಿರಾಕರಿಸಲಾಗಿದ್ದು, ಭಯೋತ್ಪಾದನೆಗೆ ಬೆಂಬಲ ನೀಡುವುದನ್ನು ಮುಂದುವರೆಸಿದ್ದು, ಒಪ್ಪಂದವನ್ನು ಉಲ್ಲಂಘಿಸಲಾಗಿದೆ ಎಂದು ತಿಳಿಸಲಾಗಿದೆ.

## ನೋಟ್ ಬ್ಯಾನ್ ಆದ್ರು ಹೋಟೆಲ್‌ನಲ್ಲಿ 18 ಲಕ್ಷ ರೂ. ಮೊತ್ತದ ಹಳೆಯ ಕರೆನ್ಸಿ ವಶ



**ದೆಹಲಿ:** ಕೇಂದ್ರ ಸರ್ಕಾರವು 500 ಮತ್ತು 1,000 ರೂ.ಗಳ ಮೇಲಿನ ಕಾನೂನು ಬದ್ಧತೆಯನ್ನು(ಲೀಗಲ್ ಟೆಂಡರ್) ಹಿಂತೆಗೆದುಕೊಂಡು, ರದ್ದತಿ ಘೋಷಿಸಿದೆ. ಈ ನಡುವೆ ನೋಟ್ ಬ್ಯಾನ್ ಆಗಿ ಒಂಬತ್ತು ವರ್ಷಗಳ ಬಳಿಕವೂ ಹರಿಯಾಣದ ಸೋನಿಪತ್‌ನ ಪೊಲೀಸರು ಬುಧವಾರ ಸುಮಾರು 18 ಲಕ್ಷ ರೂ. ಮೌಲ್ಯದ ಹಳೆಯ ಕರೆನ್ಸಿ ನೋಟುಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಇಲ್ಲಿನ ರಥಧಾನ ರಸ್ತೆಯಲ್ಲಿರುವ ಹೋಟೆಲ್‌ನಿಂದ 17.97 ಲಕ್ಷ ರೂ. ಮೌಲ್ಯದ 500 ಮತ್ತು 1000 ರೂ.ಗಳ ಹಳೆಯ ನೋಟುಗಳ ಬಂಡಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ನವದೆಹಲಿಯ ನಯ್ ಬಸ್ತಿ ನಿವಾಸಿ ಸುರೇಶ್ ಮತ್ತು ಉತ್ತರ ಪ್ರದೇಶದ ಬಾಗ್‌ಪತ್ ಜಿಲ್ಲೆಯ ಪಾವ್ಲಾ ಗ್ರಾಮದ ನಿವಾಸಿ ಪ್ರದೀಪ್ ಎಂಬ ಇಬ್ಬರು ಆರೋಪಿಗಳನ್ನು ಸೋನಿಪತ್ ಪೊಲೀಸರು ಬಂಧಿಸಿದ್ದಾರೆ.

ಕೆಲವರು ಹಳೆಯ ನೋಟುಗಳನ್ನು ಅಕ್ರಮವಾಗಿ ಹೊಸ ಕರೆನ್ಸಿಯಾಗಿ ಪರಿವರ್ತಿಸಲು ಪ್ರಯತ್ನಿಸುತ್ತಿದ್ದಾರೆ ಎಂಬ ಸುಳಿವು ಸಿಕ್ಕಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಈ ಮಾಹಿತಿ ಆಧಾರದ ಮೇಲೆ, ಪೊಲೀಸರು ರಥದಾನ ರಸ್ತೆಯಲ್ಲಿರುವ ಹೋಟೆಲ್ ಮೇಲೆ ದಾಳಿ ನಡೆಸಿದರು. ಶೋಧದ ಸಮಯದಲ್ಲಿ, ನಾವು ಹೆಚ್ಚಿನ ಸಂಖ್ಯೆಯ ಹಳೆಯ ನೋಟುಗಳನ್ನು ವಶಪಡಿಸಿಕೊಂಡಿದ್ದೇವೆ. ವಿಚಾರಣೆಯ ಸಮಯದಲ್ಲಿ ಆರೋಪಿಗಳು ಬ್ಯಾಂಕ್ ನೌಕರರು ಅಥವಾ ಅನಿವಾಸಿ ಭಾರತೀಯರ ಮೂಲಕ ಈ ನೋಟುಗಳನ್ನು ಹೊಸ ಕರೆನ್ಸಿಯಾಗಿ ಪರಿವರ್ತಿಸಲು ಯೋಜಿಸುತ್ತಿದ್ದೇವೆ ಎಂದು ಹೇಳಿದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನೋಟು ರದ್ದತಿಯ ನಂತರ ಹಳೆಯ ಕರೆನ್ಸಿ ದುರುಪಯೋಗ ತಡೆಗಟ್ಟಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸದರ್ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಸುಭಾಷ್ ಚಂದ್ರ ಹೇಳಿದ್ದಾರೆ. ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ ಮತ್ತು ಪ್ರಕರಣದ ಸಂಪೂರ್ಣ ತನಿಖೆ ನಡೆಸಲಾಗುತ್ತಿದೆ. ಈ ನೋಟುಗಳು ಎಲ್ಲಿಂದ ಬಂದವು ಮತ್ತು ಅವುಗಳನ್ನು ವಿನಿಮಯ ಮಾಡಿಕೊಳ್ಳುವ ಯೋಜನೆಯಲ್ಲಿ ಎಷ್ಟು ಜನರು ಭಾಗಿಯಾಗಿದ್ದಾರೆ ಎಂಬುದನ್ನು ಕಂಡು ಹಿಡಿಯಲು ಪೊಲೀಸರು ಪ್ರಯತ್ನಿಸುತ್ತಿದ್ದಾರೆ ಎಂದು ಅಧಿಕಾರಿ ಹೇಳಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ರೆಡ್ಡಿ ಮಗನ ಸಿನಿಮಾದಲ್ಲಿ ಶ್ರೀಲೀಲಾ 3 ವರ್ಷಗಳ ಬಳಿಕ ಕನ್ನಡಕ್ಕೆ ಬಂದ ನಟಿ

ಕನ್ನಡದ ನಟಿ ಶ್ರೀಲೀಲಾ ತೆಲುಗು, ಬಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಹೀಗಿರುವಾಗ 3 ವರ್ಷಗಳ ಬಳಿಕ ಮತ್ತೆ ಕನ್ನಡ ಸಿನಿಮಾದಲ್ಲಿ ಮಿಂಚಲು ರೆಡಿಯಾಗಿದ್ದಾರೆ. ಜನಾರ್ದನ ರೆಡ್ಡಿ ಪುತ್ರ ಕಿರೀಟಿಗೆ ನಾಯಕಿಯಾಗಿ ಮತ್ತೆ ಸ್ಯಾಂಡಲ್‌ವುಡ್‌ನಲ್ಲಿ ದರ್ಶನ ಕೊಡಲು ಸಜ್ಜಾಗಿದ್ದಾರೆ. ಶ್ರೀಲೀಲಾ ಮತ್ತು ಕಿರೀಟಿ ನಟನೆಯ 'ಜೂನಿಯರ್' ಪ್ಯಾನ್ ಇಂಡಿಯಾ ಲೆವೆಲ್‌ನಲ್ಲಿ ಬಿಡುಗಡೆಯಾಗಲಿದೆ. ಕನ್ನಡ, ತೆಲುಗು, ತಮಿಳು, ಮಲಯಾಳಂ ಹಾಗೂ ಹಿಂದಿ ಭಾಷೆಯಲ್ಲಿ 'ಜೂನಿಯರ್' ಸಿನಿಮಾ ಜುಲೈ 18ಕ್ಕೆ ರಿಲೀಸ್ ಆಗಲಿದೆ. ಅದಷ್ಟೇ ಅಲ್ಲ, ಇದೇ ತಿಂಗಳ 19ಕ್ಕೆ ಜೂನಿಯರ್ ಸಿನಿಮಾ ಮೊದಲ ಸಾಂಗ್ ಬಿಡುಗಡೆಯಾಗಲಿದೆ. ಈ ಸಿನಿಮಾ ಕಿಸ್ಸಿಕ್ ಬೆಡಗಿ ಶ್ರೀಲೀಲಾ ಕನ್ನಡಕ್ಕೆ ಬರುತ್ತಿದ್ದಾರೆ. ಇದು ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. 'ಮಾಯಾಬಜಾರ್' ಸಿನಿಮಾ ಖ್ಯಾತಿಯ ರಾಧಾಕೃಷ್ಣ ರೆಡ್ಡಿ ನಿರ್ದೇಶನದಲ್ಲಿ 'ಜೂನಿಯರ್' ಸಿನಿಮಾ ತಯಾರಾಗಿದೆ. ದಕ್ಷಿಣ ಭಾರತದ ಖ್ಯಾತ ನಿರ್ಮಾಣ ಸಂಸ್ಥೆ ವಾರಾಹಿ ಫಿಲ್ಮಂ ಪ್ರೊಡಕ್ಷನ್ ಕಿರೀಟಿ ಮೊದಲ ಚಿತ್ರಕ್ಕೆ ಬಂಡವಾಳ ಹೂಡಿದ್ದು, ಬಿಗ್ ಬಜೆಟ್‌ನಲ್ಲಿ ಸಿನಿಮಾ ನಿರ್ಮಾಣ ಚಿತ್ರ ಮೂಡಿ ಬಂದಿದೆ. ಬಹುದೊಡ್ಡ ಹಾಗೂ ಸ್ಟಾರ್ ತಾರಾಗಣ ಈ ಸಿನಿಮಾದ ಮತ್ತೊಂದು ಹೈಲೈಟ್. ಕಿರೀಟಿ ಜೊತೆ ರವಿಚಂದ್ರನ್, ಜೆನಿಲಿಯಾ ರಿತೇಶ್ ದೇಶ್‌ಮುಖ್, ಶ್ರೀಲೀಲಾ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. 'ಜೂನಿಯರ್' ಸಿನಿಮಾದ ತಾಂತ್ರಿಕ ಬಳಗ ಶ್ರೀಮಂತಿಕೆಯಿಂದ ಕೂಡಿದೆ. ದಕ್ಷಿಣ ಭಾರತದ ಖ್ಯಾತ ಸಂಗೀತ ನಿರ್ದೇಶಕ ರಾಕ್ ಸ್ಟಾರ್ ಖ್ಯಾತಿಯ ದೇವಿಶ್ರೀ ಪ್ರಸಾದ್ ಸಂಗೀತ, 'ಬಾಹುಬಲಿ' ಸಿನಿಮಾ ಖ್ಯಾತಿಯ ಕಣ್ಣು ಕೆ ಸೆಂಥಿಲ್ ಕುಮಾರ್ ಕ್ಯಾಮೆರಾ ನಿರ್ದೇಶನ, ಭಾರತೀಯ ಚಿತ್ರರಂಗದ ಖ್ಯಾತ ಸಾಹಸ ನಿರ್ದೇಶಕ ಪೀಟರ್ ಹೆನ್ ಸಾಹಸ ಚಿತ್ರಕ್ಕಿದೆ.



## 21ರಂದು ಹಸೆಮಣೆ ಏರಲು ಸಜ್ಜಾದ 'ಲಕ್ಷ್ಮಿ ಬಾರಮ್ಮ' ನಟ



'ಲಕ್ಷ್ಮಿ ಬಾರಮ್ಮ' ನಟ ಶಮಂತ್ ಬ್ರೋ ಗೌಡ ಅವರು ಮೇ 21ರಂದು ಹಸೆಮಣೆ ಏರಲು ಸಜ್ಜಾಗಿದ್ದಾರೆ. ಮೇಕಪ್ ಆರ್ಟಿಸ್ಟ್ ಮೇಘನಾ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಡಲಿದ್ದಾರೆ. ಇದೀಗ ಮದುವೆ ತಯಾರಿ ಜೋರಾಗಿ ನಡೆಯುತ್ತಿದೆ. ಅರಿಶಿನ ಶಾಸ್ತ್ರದಲ್ಲಿ ನಟ ಮಿಂದೆದಿದ್ದಾರೆ. ಕಾಲೇಜ್ ಕಾರ್ಯಕ್ರಮವೊಂದರಲ್ಲಿ ಶಮಂತ್ ಗೆಸ್ಟ್ ಆಗಿ ಆಗಮಿಸಿದ್ದರು. ಅಲ್ಲಿ ಮೇಘನಾ ಪರಿಚಯ ಆಗಿತ್ತು. ಅಲ್ಲಿಂದ ಶುರುವಾದ ಸ್ನೇಹ ಮದುವೆಗೆ ಮುನ್ನುಡಿ ಬರೆದಿದೆ. ಮನೆಯವರ ಸಮ್ಮತಿ ಪಡೆದು ಇತ್ತೀಚೆಗೆ ಅದ್ದೂರಿಯಾಗಿ ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಶಮಂತ್ ಮೂಲತಃ ಉತ್ತರ ಕರ್ನಾಟಕದವರು. ಶಮಂತ್ ಹಿರೇಮಠ ಅವರ ಪೂರ್ಣ ಹೆಸರು, ಇನ್ನೂ ಮೇಘನಾ ಮರಾಠಿಗರು. ಹೀಗಾಗಿ ಎರಡು ರೀತಿಯ ಪದ್ಧತಿಯಂತೆ ಮದುವೆ ಶಾಸ್ತ್ರಗಳು ನಡೆಯಲಿದೆ. 'ಬಿಗ್ ಬಾಸ್ ಕನ್ನಡ 8'ರಲ್ಲಿ ಶಮಂತ್ ಸ್ಪರ್ಧಿಯಾಗಿದ್ದರು. ಈ ಶೋನಲ್ಲಿ ಮಂಜು ಪಾವಗಡ ಗೆದ್ದಿದ್ದರು. ಈ ಕಾರ್ಯಕ್ರಮ ಬಳಿಕ 'ಲಕ್ಷ್ಮಿ ಬಾರಮ್ಮ' ಸೀರಿಯಲ್‌ನಲ್ಲಿ ಶಮಂತ್ ಲೀಡ್ ಹೀರೋ ಆಗಿ ನಟಿಸಿದ್ದರು.

## ದೇವರಕೊಂಡ ಸಹೋದರನ ಸಿನಿಮಾಗೆ ಕ್ಲ್ಯಾಪ್ ಶುಭ ಕೋರಿದ ರಶ್ಮಿಕಾ

ಆನಂದ್ ದೇವರಕೊಂಡ ಮತ್ತು ವೈಷ್ಣವಿ ಚೈತನ್ಯ ಮತ್ತೆ ಹೊಸ ಸಿನಿಮಾಗಾಗಿ ಒಂದಾಗಿದ್ದಾರೆ. 'ಬೇಬಿ' ಜೋಡಿಯ ಹೊಸ ಚಿತ್ರಕ್ಕೆ ನಟಿ ರಶ್ಮಿಕಾ ಮಂದಣ್ಣ ಕ್ಲ್ಯಾಪ್ ಮಾಡುವ ಮೂಲಕ ತಂಡಕ್ಕೆ ಶುಭಕೋರಿದ್ದಾರೆ.

ವಿಜಯ್ ದೇವರಕೊಂಡ ಸಹೋದರ ಆನಂದ್ ಸಿನಿಮಾಗೆ ರಶ್ಮಿಕಾ ಸಾಥ್ ನೀಡಿದ್ದಾರೆ. ಆನಂದ್ ಮತ್ತು ವೈಷ್ಣವಿ ನಟನೆಯ ಹೊಸ ಸಿನಿಮಾದ ಮುಹೂರ್ತ ನಿನ್ನೆ ಹೈದರಾಬಾದ್‌ನಲ್ಲಿ ಅದ್ದೂರಿಯಾಗಿ ನೆರವೇರಿದೆ. ಈ ಸಿನಿಮಾಗೆ ರಶ್ಮಿಕಾ ಕ್ಲ್ಯಾಪ್ ಮಾಡಿ ಟೀಮ್‌ಗೆ ವಿಶ್ ಮಾಡಿದ್ದಾರೆ. 2023ರಲ್ಲಿ ತೆರೆಕಂಡ 'ಬೇಬಿ' ಸಿನಿಮಾ ಸೂಪರ್ ಸಕ್ಸಸ್ ಕಂಡಿತ್ತು. ಮತ್ತೆ ಅದೇ ಜೋಡಿ ಜೊತೆಯಾಗಿರೋದು ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. ಈ ಸಿನಿಮಾವನ್ನು ಆದಿತ್ಯ ಹಾಸನ್ ನಿರ್ದೇಶನ ಮಾಡಿದ್ದಾರೆ. ಸಿತಾರಾ ಸಂಸ್ಥೆ ಈ ಸಿನಿಮಾವನ್ನು ನಿರ್ಮಾಣ ಮಾಡುತ್ತಿದೆ. 'ಬೇಬಿ' ಚಿತ್ರದ ಮೂಲಕ ತ್ರಿಕೋನ ಪ್ರೇಮಕಥೆ ತೋರಿಸಿದ್ದರು. ಆನಂದ್ ದೇವರಕೊಂಡ ಮತ್ತು ವೈಷ್ಣವಿ ಹೊಸ ಸಿನಿಮಾ ಯಾವ ಜಾನರ್ ಕಥೆ ಹೇಳಲು ಹೊರಟಿದ್ದಾರೆ ಎಂಬುದನ್ನು ನೋಡಲು ಫ್ಯಾನ್ಸ್ ಕ್ಯೂರಿಯಸ್ ಆಗಿದ್ದಾರೆ.



## ಆರತಿ ನನ್ನನ್ನು ಗಂಡನಾಗಿ ಅಲ್ಲ, ಚಿನ್ನದ ಮೊಟ್ಟೆಯಿಡುವ ಕೋಳಿಯಂತೆ ನಡೆಸಿಕೊಂಡಳು: ರವಿ ಮೋಹನ್

ಪತ್ನಿ ಆರತಿ ತನ್ನನ್ನು ಚಿನ್ನದ ಮೊಟ್ಟೆ ಇಡುವ ಕೋಳಿ ರೀತಿ ನಡೆಸಿಕೊಂಡಳು. ಅವಳು ನನ್ನ ಮಕ್ಕಳನ್ನು ಸಹ ನೋಡದಂತೆ ತಡೆಯುತ್ತಾಳೆ. ಈ ದುಸ್ಥಿತಿ ಯಾವ ತಂದೆಗೆ ಬರಬಾರದು ಎಂದು ನಟ ರವಿ ಮೋಹನ್ ಅಳಲನ್ನು ತೋಡಿಕೊಂಡಿದ್ದಾರೆ.

ರವಿ ಮೋಹನ್ ಅವರಿಂದ ಪ್ರತ್ಯೇಕವಾಗಿ ವಾಸಿಸುತ್ತಿರುವ ಆರತಿ, ಇತ್ತೀಚೆಗೆ ರವಿ ಮೋಹನ್ ಮಕ್ಕಳನ್ನು ನೋಡಿಕೊಳ್ಳುತ್ತಿಲ್ಲ ಎಂದು ಸಾಮಾಜಿಕ ಜಾಲತಾಣದಲ್ಲಿ ಮಕ್ಕಳ ಫೋಟೋಗಳು ಮತ್ತು ವೀಡಿಯೊಗಳನ್ನು ಪೋಸ್ಟ್ ಮಾಡಿದ್ದರು. ಇದಕ್ಕೆ ರವಿ ಮೋಹನ್ ಪ್ರತಿಕ್ರಿಯಿಸಿ ಸ್ಪಷ್ಟನೆ ನೀಡಿದ್ದಾರೆ. ಹೇಳಿಕೆಯಲ್ಲಿ ಆರತಿಯ ಹೆಸರನ್ನು ಉಲ್ಲೇಖಿಸದೆ, ಮಾಜಿ ಪತ್ನಿ ಎಂದು ಮಾತ್ರ ಹೇಳಿದ್ದಾರೆ. ಇದು ಮೊದಲ ಮತ್ತು ಕೊನೆಯ ಹೇಳಿಕೆ ಎಂದೂ ಸಹ ರವಿ ಹೇಳಿಕೊಂಡಿದ್ದಾರೆ. ಹೆಂಡತಿಯಿಂದ ದೂರ ಆಗಿದ್ದೇನೆ, ಮಕ್ಕಳಿಂದ ಅಲ್ಲ. ಮಕ್ಕಳನ್ನ ಬಳಸಿಕೊಂಡು ಹಣ ಮಾಡಲು ನೋಡ್ತಿದ್ದಾರೆ. ಆರತಿ ಜೊತೆ ಜೀವನ ಮುಂದುವರಿಸಲು ಪ್ರಯತ್ನಿಸಿದೆ. ಆದರೆ ನನ್ನನ್ನು ಹಣ ಮಾಡುವ ಯಂತ್ರದಂತೆ ನೋಡಿದ್ರು. ಗಂಡನಾಗಿ ಗೌರವ ಕೊಡಲಿಲ್ಲ. ಮಕ್ಕಳನ್ನ ನೋಡಲು ಬಿಡುತ್ತಿಲ್ಲ. 5 ವರ್ಷದಿಂದ ನನ್ನ ದುಡಿಮೆಯನ್ನೆಲ್ಲಾ ಆರತಿ ಮತ್ತು ಅವರ ಕುಟುಂಬ ಉಪಯೋಗಿಸಿಕೊಂಡಿದೆ ಎಂದು ರವಿ ಮೋಹನ್ ಹೇಳಿದ್ದಾರೆ.

ಮೇ 8ರಂದು ರವಿ ಮತ್ತು ಕೆನಿಶಾ ಚೆನ್ನೈನಲ್ಲಿ ನಡೆದ ನಿರ್ಮಾಪಕ ಇಶಾರಿ ಗಣೇಶ್ ಅವರ ಮಗಳ ಮದುವೆಗೆ ಹಾಜರಾಗಿದ್ದರು. ಅಲ್ಲಿಂದ ಮತ್ತಷ್ಟು ನಟನ ಬಗ್ಗೆ ಗಂಭೀರ ಆರೋಪಗಳು ಕೇಳಿ ಬರುತ್ತಿವೆ. ಇಬ್ಬರೂ ಒಟ್ಟಿಗೆ ಕಾಣಿಸಿಕೊಂಡ ಬೆನ್ನಲ್ಲೇ ಪತ್ನಿ ಆರತಿ ಪೋಸ್ಟ್ ಹಂಚಿಕೊಂಡಿದ್ದರು. ಇದೀಗ ಇದರ ಬೆನ್ನಲ್ಲೇ ಮತ್ತೊಮ್ಮೆ ರವಿ , ಗಾಯಕಿ ಆರತಕ್ಷತೆಯಲ್ಲಿ ಒಟ್ಟಿಗೆ ಕಾಣಿಸಿಕೊಂಡಿದ್ದರು. ಆರತಿ ಮಾಡಿದ ಆರೋಪಗಳಿಂದ ವಿಚಲಿತರಾಗದ ರವಿ ಮೋಹನ್, ಕೆನಿಶಾ ಫ್ರಾನ್ಸಿಸ್ ಜೊತೆಗೆ ಮೇ 10 ರಂದು ನಡೆದ ವಿವಾಹ ಆರತಕ್ಷತೆಯಲ್ಲಿ ಭಾಗವಹಿಸಿದ್ದರು.

### ಆರತಿ ಪೋಸ್ಟ್‌ನಲ್ಲಿ ಇದ್ದಿದ್ದೇನು?

**ನನ್ನ ಮಕ್ಕಳು 10 ಮತ್ತು 14 ವರ್ಷ ವಯಸ್ಸಿನವರು. ಅವರಿಗೆ ಭದ್ರತೆ ಬೇಕು, ಅವರು ಕಾನೂನು ಷರತ್ತುಗಳನ್ನು ಅರ್ಥಮಾಡಿಕೊಳ್ಳಲು ತುಂಬಾ ಚಿಕ್ಕವರು, ನಾನು ಇಂದು ಹೆಂಡತಿಯಾಗಿ ಮಾತನಾಡುವುದಿಲ್ಲ. ಅನ್ಯಾಯಕ್ಕೊಳಗಾದ ಮಹಿಳೆಯಾಗಿಯೂ ಅಲ್ಲ. ತಂದೆ ಕೇವಲ ಬಿರುದಲ್ಲ. ಅದು ಒಂದು ಜವಾಬ್ದಾರಿ. ನಾನು ಮತ್ತು ಕಾನೂನು ಇಬ್ಬರೂ ಬೇರೆ ರೀತಿಯಲ್ಲಿ ನಿರ್ಧರಿಸುವವರೆಗೆ ನಾನು ಆರತಿ ರವಿಯಾಗಿಯೇ ಇರುತ್ತೇನೆ. ಮಾಧ್ಯಮಗಳು, ಕಾನೂನು ಪ್ರಕ್ರಿಯೆ ಮುಗಿಯುವವರೆಗೆ ನನ್ನನ್ನು ಮಾಜಿ ಪತ್ನಿ ಎಂದು ಕರೆಯಬಾರದು ಎಂದು ಮನವಿ ಮಾಡಿದ್ದರು.**

## ಐಪಿಎಲ್‌ನಿಂದ ಮತ್ತೆ ಹೊರಬಿದ್ದ ಮಯಾಂಕ್ ಯಾದವ್

# ಬದಲಿ ಆಟಗಾರನ ಸೇರ್ಪಡೆ

ಐಪಿಎಲ್ 2025 ರ ಉಳಿದ 17 ಪಂದ್ಯಗಳು ಮೇ 17 ರ ಶನಿವಾರದಿಂದ ಪ್ರಾರಂಭವಾಗಲಿವೆ. ಭಾರತ-ಪಾಕಿಸ್ತಾನ ನಡುವಿನ ಉದ್ವಿಗ್ನತೆಯಿಂದಾಗಿ ಮೇ 9 ರಂದು ಬಿಸಿಸಿಐ ಪಂದ್ಯಾವಳಿಯನ್ನು ಹಠಾತ್ತನೆ ಮುಂದೂಡಿತು. ಈಗ ಪಂದ್ಯಾವಳಿ ಮತ್ತೆ ಪ್ರಾರಂಭವಾಗುತ್ತಿದೆ ಆದರೆ ಬಹುತೇಕ ಪ್ರತಿಯೊಂದು ತಂಡವು ವಿಭಿನ್ನ ಕಾರಣಗಳಿಂದಾಗಿ ಬದಲಾವಣೆಗಳನ್ನು ಮಾಡಬೇಕಾಗಿದೆ.

ಇದರ ನಡುವೆ ಲಕ್ನೋ ಸೂಪರ್ ಜೈಂಟ್ಸ್ ತಂಡವು ತನ್ನ ಯುವ ವೇಗಿ ಮಯಾಂಕ್ ಯಾದವ್ ಮತ್ತೆ ಗಾಯಗೊಂಡು ಟೂರ್ನಿಯಿಂದ ಹೊರಗುಳಿದಿರುವುದರಿಂದ ಭಾರಿ ಹಿನ್ನಡೆ ಅನುಭವಿಸಿದೆ. ಇತ್ತೀಚೆಗಷ್ಟೇ ಇಂಜುರಿಯಿಂದ ಚೇತರಿಸಿಕೊಂಡಿದ್ದ ಮಯಾಂಕ್ ಐಪಿಎಲ್‌ಗೆ ಎಂಟ್ರಿಕೊಟ್ಟಿದ್ದರು. ಆದರೀಗ ಅವರು ಮತ್ತೆ ಗಾಯಕ್ಕೆ ತುತ್ತಾಗಿದ್ದಾರೆ.

ಪಂದ್ಯಾವಳಿ ಪುನರಾರಂಭಗೊಳ್ಳುವ ಸುಮಾರು 48 ಗಂಟೆಗಳ ಮೊದಲು, ಮೇ 15 ರ ಗುರುವಾರ ಐಪಿಎಲ್ ಪತ್ರಿಕಾ ಪ್ರಕಟಣೆಯಲ್ಲಿ ಈ ಮಾಹಿತಿಯನ್ನು ನೀಡಲಾಗಿದೆ. ಇದರ ಪ್ರಕಾರ, ಬಲಗೈ ವೇಗದ ಬೌಲರ್ ಮಯಾಂಕ್ ಯಾದವ್ ಬೆನ್ನುನೋವಿನಿಂದಾಗಿ ಟೂರ್ನಿಯಿಂದ ಹೊರಗುಳಿದಿದ್ದಾರೆ.



ಮೇಲೆ ಹೇಳಿದಂತೆ ಮಯಾಂಕ್ ಗಾಯಕ್ಕೆ ತುತ್ತಾಗುತ್ತಿರುವುದು ಇದೇ ಮೊದಲಲ್ಲ. ಕಳೆದ ವರ್ಷವೂ ಅವರು ಕೇವಲ 4 ಪಂದ್ಯಗಳನ್ನು ಆಡಿದ ನಂತರ ಗಾಯಗೊಂಡಿದ್ದರು. ಈ ಕಾರಣದಿಂದಾಗಿ ಅವರು ಇಡೀ ಟೂರ್ನಿಯಿಂದ ಹೊರಗುಳಿದಿದ್ದರು.

ಹೀಗಾಗಿ ಒಂದು ವರ್ಷಗಳ ಕಾಲ ಕ್ರಿಕೆಟ್‌ನಿಂದ ದೂರ ಉಳಿದಿದ್ದ ಮಯಾಂಕ್, ಈ ಬಾರಿಯ ಐಪಿಎಲ್ ಆರಂಭವಾಗಿ ಸುಮಾರು ಪಂದ್ಯಗಳು ಮುಗಿದ ಬಳಿಕ ಲಕ್ನೋ ತಂಡವನ್ನು ಸೇರಿಕೊಂಡಿದ್ದರು. ಅಷ್ಟರಲ್ಲಾಗಲೇ ಲಕ್ನೋ ತಂಡ 9 ಪಂದ್ಯಗಳನ್ನು ಆಡಿ ಮುಗಿಸಿತ್ತು. ಆ ಬಳಿಕ ತಂಡ ಸೇರಿಕೊಂಡಿದ್ದ ಮಯಾಂಕ್ ಕೇವಲ 2 ಪಂದ್ಯಗಳನ್ನು ಆಡಿದ ಬಳಿಕ ಮತ್ತೆ ಗಾಯಗೊಂಡಿದ್ದಾರೆ.

ಇಂತಹ ಪರಿಸ್ಥಿತಿಯಲ್ಲಿ, ಲಕ್ನೋ ಸೂಪರ್ ಜೈಂಟ್ಸ್ ಈಗ ಮಯಾಂಕ್ ಬದಲಿಗೆ ನ್ಯೂಜಿಲೆಂಡ್‌ನ ಯುವ ವೇಗಿ ವಿಲ್ ಒ'ರೂರ್ಕ್ ಅವರನ್ನು ತಂಡಕ್ಕೆ ಸೇರಿಸಿಕೊಂಡಿದೆ. ಒ'ರೂರ್ಕ್ ಈ ಸೀಸನ್‌ನ ಉಳಿದ ಪಂದ್ಯಗಳಿಗೆ 3 ಕೋಟಿ ರೂ. ವೇತನ ಪಡೆಯಲಿದ್ದಾರೆ. ಇದು ಕಿವೀಸ್ ವೇಗಿಗೆ ಮೊದಲ ಐಪಿಎಲ್ ಆಗಲಿದೆ.

ಲಕ್ನೋ ಮಾತ್ರವಲ್ಲದೆ, ಪಂಜಾಬ್ ಕಿಂಗ್ಸ್ ಮತ್ತು ಗುಜರಾತ್ ಟೈಟಾನ್ಸ್ ಕೂಡ ಬದಲಿ ಆಟಗಾರರನ್ನು ಘೋಷಿಸಿವೆ. ಗುಜರಾತ್ ಟೈಟನ್ಸ್ ಜೋಸ್ ಬಟ್ಲರ್ ಬದಲಿಗೆ ಶ್ರೀಲಂಕಾದ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಕುಸಲ್ ಮೆಂಡಿಸ್ ಅವರನ್ನು 75 ಲಕ್ಷ ರೂ.ಗೆ ತಂಡಕ್ಕೆ ಸೇರಿಸಿಕೊಂಡಿದೆ.

ಹಾಗೆಯೇ ಪಂಜಾಬ್ ಕಿಂಗ್ಸ್ ಗಾಯಗೊಂಡ ವೇಗಿ ಲಾಕಿ ಫರ್ಗುಸನ್ ಅವರ ಬದಲಿಯಾಗಿ ಮತ್ತೊಬ್ಬ ನ್ಯೂಜಿಲೆಂಡ್ ವೇಗಿ ಕೈಲ್ ಜೇಮಿಸನ್ ಅವರನ್ನು 2 ಕೋಟಿ ರೂಗೆ ತಂಡಕ್ಕೆ ಸೇರಿಸಿಕೊಂಡಿದೆ. ಜೇಮೀಸನ್ 4 ವರ್ಷಗಳ ನಂತರ ಐಪಿಎಲ್‌ಗೆ ಮರಳುತ್ತಿದ್ದಾರೆ. ಇದಕ್ಕೂ ಮೊದಲು, ಅವರು 2021 ರಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ಆಡಿದ್ದರು.

## ವಿಲ್ ಜ್ಯಾಕ್ಸ್ ಬದಲಿಗೆ ಮುಂಬೈ ತಂಡಕ್ಕೆ ಎಂಟ್ರಿ ಕೊಟ್ಟ ಮತ್ತೊರ್ವ ಸ್ಫೋಟಕ ಬ್ಯಾಟರ್: ಹಾರ್ದಿಕ್ ಫುಲ್ ಖುಷ್



ಇಂಡಿಯನ್ ಪ್ರೀಮಿಯರ್ ಲೀಗ್ 2025ರ ನಾಳೆಯಿಂದ ಮತ್ತೊಮ್ಮೆ ಪ್ರಾರಂಭವಾಗುತ್ತಿದೆ. ಇದಕ್ಕೂ ಮೊದಲು ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷದಿಂದಾಗಿ ಐಪಿಎಲ್ ಅನ್ನು ಒಂದು ವಾರ ಮುಂದೂಡಬೇಕಾಯಿತು. ಆದಾಗ್ಯೂ, ಹೊಸ ವೇಳಾಪಟ್ಟಿಯ ಪ್ರಕಾರ, ರಾಷ್ಟ್ರೀಯ ತಂಡದ ಬದ್ಧತೆಗಳಿಂದಾಗಿ ಲೀಗ್‌ನ ಉಳಿದ ಪಂದ್ಯಗಳಲ್ಲಿ ಆಡಲು ಸಾಧ್ಯವಾಗದ ಅನೇಕ ವಿದೇಶಿ ಆಟಗಾರರಿದ್ದಾರೆ. ಆ ಹೆಸರುಗಳಲ್ಲಿ ಒಂದು ಇಂಗ್ಲೆಂಡ್‌ನ ವಿಲ್ ಜ್ಯಾಕ್ಸ್ ಅವರದ್ದು. ವೆಸ್ಟ್ ಇಂಡೀಸ್ ವಿರುದ್ಧದ ಏಕದಿನ ಮತ್ತು ಟಿ20 ಸರಣಿಗಳಿಗೆ ಇಂಗ್ಲೆಂಡ್ ತಂಡದಲ್ಲಿ ವಿಲ್ ಜ್ಯಾಕ್ಸ್ ಅವರನ್ನು ಸೇರಿಸಿಕೊಳ್ಳಲಾಗಿದೆ. ಐಪಿಎಲ್ 18 ನೇ ಋತುವಿನಲ್ಲಿ, ವಿಲ್ ಜ್ಯಾಕ್ಸ್ ಮುಂಬೈ ಇಂಡಿಯನ್ಸ್ ತಂಡದ ಪರ ಆಡುತ್ತಿದ್ದಾರೆ. ಅಂತಹ ಪರಿಸ್ಥಿತಿಯಲ್ಲಿ, ಫ್ರಾಂಚೈಸಿ ಈಗ ಜ್ಯಾಕ್ಸ್ ಬದಲಿಗೆ ಮತ್ತೊರ್ವ ಸ್ಫೋಟಕ ಬ್ಯಾಟರ್ ಇಂಗ್ಲೆಂಡ್‌ನ ಜಾನಿ ಬೈರ್‌ಸ್ಟೋವ್ ಅವರನ್ನು ತಮ್ಮ ತಂಡಕ್ಕೆ ಸೇರಿಕೊಳ್ಳಲು ಸಿದ್ಧತೆ ನಡೆಸುತ್ತಿದೆ. ಇಎಸ್‌ಪಿಎನ್ ಕ್ರಿಕ್‌ಇನ್ಫೋ ವರದಿಯ ಪ್ರಕಾರ, ಬೈರ್‌ಸ್ಟೋವ್ ಮತ್ತು ಫ್ರಾಂಚೈಸಿ ನಡುವಿನ ಮಾತುಕತೆ ಅಂತಿಮ ಹಂತದಲ್ಲಿದೆ. ಉಳಿದ ಎರಡು ಲೀಗ್ ಪಂದ್ಯಗಳ ನಂತರ ಮುಂಬೈ ಇಂಡಿಯನ್ಸ್ ಪರ ಬೈರ್‌ಸ್ಟೋವ್ ಆಡುವ ಸಾಧ್ಯತೆ ಇದೆ. ಮುಂಬೈ ಇಂಡಿಯನ್ಸ್ ತಂಡ ಇದುವರೆಗೆ ಆಡಿರುವ 12 ಪಂದ್ಯಗಳಲ್ಲಿ 14 ಅಂಕಗಳನ್ನು ಗಳಿಸಿದೆ.

ಜಾನಿ ಬೈರ್‌ಸ್ಟೋವ್ ಮುಂಬೈ ಇಂಡಿಯನ್ಸ್ ಸೇರುವುದನ್ನು ಅಧಿಕೃತವಾಗಿ ಘೋಷಿಸಲಾಗಿಲ್ಲ. ಮಾತುಕತೆ ಬಹುತೇಕ ಅಂತಿಮಗೊಂಡಿದೆ. ವಾಸ್ತವವಾಗಿ, ಮುಂಬೈ ಇಂಡಿಯನ್ಸ್ ತಂಡವು ಲೀಗ್ ಹಂತದಲ್ಲಿ ಇನ್ನೂ ಎರಡು ಪಂದ್ಯಗಳನ್ನು ಆಡಬೇಕಾಗಿದೆ. ಈ ಎರಡೂ ಪಂದ್ಯಗಳು ತಂಡಕ್ಕೆ ಬಹಳ ಮುಖ್ಯ. ಏಕೆಂದರೆ ಮುಂಬೈ ತಂಡ ಪ್ಲೇಆಫ್ ತಲುಪುವ ಸಮೀಕರಣವು ಈ ಎರಡು ಪಂದ್ಯಗಳಿಂದಲೇ ನಿರ್ಧಾರ ಆಗುತ್ತದೆ. ಅಲ್ಲದೆ ಮುಂಬೈ ತಂಡದ ಈ ಎರಡು ಲೀಗ್ ಪಂದ್ಯಗಳಿಗೆ ವಿಲ್ ಜ್ಯಾಕ್ಸ್ ಲಭ್ಯ ಇರುತ್ತಾರೆ. ಎಲ್ಲಾದರು ಮುಂಬೈ ಇಂಡಿಯನ್ಸ್ ತಂಡ ಪ್ಲೇಆಫ್ ತಲುಪಿದರೆ, ಮುಂಬರುವ ಪಂದ್ಯಗಳಿಗೆ ಜಾನಿ ಬೈರ್‌ಸ್ಟೋವ್ ಕಣಕ್ಕಿಳಿಯಲಿದ್ದಾರೆ. ಇಂಗ್ಲೆಂಡ್ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಬಗ್ಗೆ ಯಾವುದೇ ಅಧಿಕೃತ ಘೋಷಣೆ ಹೊರಬಿದ್ದಿಲ್ಲದಿರುವುದು ಇದೇ ಕಾರಣಕ್ಕೆ. ಐಪಿಎಲ್ ಮೆಗಾ ಹರಾಜಿನಲ್ಲಿ ಜಾನಿ ಬೈರ್‌ಸ್ಟೋವ್ ಕೂಡ ತಮ್ಮ ಹೆಸರನ್ನು ನೀಡಿದ್ದರು, ಆದರೆ ಅವರು ಸೇಲ್ ಆಗಲಿಲ್ಲ.

ಇನ್ನು ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ (ಡಬ್ಲ್ಯುಟಿಸಿ)ನಲ್ಲಿ ಆಡುತ್ತಿರುವ ದಕ್ಷಿಣ ಆಫ್ರಿಕಾದ ಆಟಗಾರರನ್ನು ಮೇ 26 ರೊಳಗೆ ಬಿಡುಗಡೆ ಮಾಡುವಂತೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಗುರುವಾರ ಇಂಡಿಯನ್ ಪ್ರೀಮಿಯರ್ ಲೀಗ್ ಫ್ರಾಂಚೈಸಿಗಳಿಗೆ ನಿರ್ದೇಶನ ನೀಡಿದೆ, ಇದರಿಂದಾಗಿ ಕೆಲ ಕ್ರಿಕೆಟಿಗರು ಐಪಿಎಲ್ ಪ್ಲೇಆಫ್‌ಗಳಿಗೆ ಲಭ್ಯವಿಲ್ಲ.

ದಕ್ಷಿಣ ಆಫ್ರಿಕಾ ಮೇ 31 ರಂದು ಬ್ರಿಟನ್‌ಗೆ ತೆರಳಬೇಕಾಗಿದೆ, ಪ್ಲೇ-ಆಫ್‌ಗಳು ಮೇ 29 ರಿಂದ ಪ್ರಾರಂಭವಾಗಲಿವೆ. ಮತ್ತು ವೆಸ್ಟ್ ಇಂಡೀಸ್ ವಿರುದ್ಧ ಇಂಗ್ಲೆಂಡ್ ನಡುವೆ ಬಿಳಿ ಚೆಂಡಿನ ಸರಣಿಯೂ ಇದೇ ದಿನಾಂಕದಿಂದ ಪ್ರಾರಂಭವಾಗಲಿದೆ. ತಂಡಗಳಿಗೆ ಅಧಿಕೃತ ಸಂದೇಶದಲ್ಲಿ ಬಿಸಿಸಿಐ, 'ದಕ್ಷಿಣ ಆಫ್ರಿಕಾದ ಆಟಗಾರರು ಮೇ 26, ಸೋಮವಾರದೊಳಗೆ ದಕ್ಷಿಣ ಆಫ್ರಿಕಾಕ್ಕೆ ಮರಳಬೇಕು' ಎಂದು ಹೇಳಿದೆ. ವೆಸ್ಟ್ ಇಂಡೀಸ್ ಆಟಗಾರರು ಪಂದ್ಯಾವಳಿಯುದ್ದಕ್ಕೂ ಲಭ್ಯವಿರುತ್ತಾರೆ.

## ಇನ್ಮುಂದೆ ಮನೆ ಕಟ್ಟುವ ಮುಂಚೆ ಓಸಿ ಸರ್ಟಿಫಿಕೆಟ್ ಕಡ್ಡಾಯ

# ಇಲ್ಲಾಂದ್ರೆ ವಿದ್ಯುತ್, ನೀರಿನ ಸಂಪರ್ಕವಿಲ್ಲ

**ಬೆಂಗಳೂರು:** ನಿನ್ನೆಯಿಂದ ಗ್ರೇಟರ್ ಬೆಂಗಳೂರು ಅಥಾರಿಟಿ ಜಾರಿಗೆ ಬಂದಿದೆ. ಇಡೀ ಬೆಂಗಳೂರಿನ ಆಡಳಿತ ಚಿತ್ರಣವೇ ಬದಲಾವಣೆ ಆಗಲಿದೆ. ಇದಕ್ಕೆ ಸಾಕ್ಷಿಯೆಂಬಂತೆ ವಿದ್ಯುತ್ ಮತ್ತು ನೀರಿನ ಸಂಪರ್ಕಕ್ಕೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದಿಂದ ಓಸಿ ಸರ್ಟಿಫಿಕೆಟ್ ಕಡ್ಡಾಯಗೊಳಿಸಲಾಗಿದೆ. ಸ್ವಾಧೀನನಾನುಭಾವ ಪತ್ರ ಇಲ್ಲದಿದ್ದರೆ ಸಂಪರ್ಕ ಸಿಗುವುದಿಲ್ಲ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್‌ರಿಂದ ಗುರುವಾರ ಆದೇಶ ಹೊರಡಿಸಲಾಗಿದೆ. ಸುಪ್ರಿಂಕೋರ್ಟ್ ಆದೇಶದಂತೆ ಓಸಿ ಸರ್ಟಿಫಿಕೆಟ್ ಕಡ್ಡಾಯವಾಗಿದೆ. ಬೆಂಗಳೂರಿನ 'ಎ' ಖಾತಾ ಹಾಗೂ 'ಬಿ' ಖಾತಾ ನಿವೇಶನವಾಗಿರಲಿ ಕಡ್ಡಾಯವಾಗಿ ಪ್ರಮಾಣ ಪತ್ರ ಪಡೆಯಬೇಕು. ಈಗಾಗಲೇ ವಿದ್ಯುತ್ ಸಂಪರ್ಕಕ್ಕಾಗಿ ಸುಮಾರು 66 ಸಾವಿರದ 400 ಅರ್ಜಿಗಳು ಸಲ್ಲಿಸಲಾಗಿದೆ. ಅವರಿಗೆಲ್ಲ ಬಿಬಿಎಂಪಿ ಸಿಬ್ಬಂದಿಯೇ ಕರೆ ಮಾಡಿ ಬೇಕಾದ ದಾಖಲೆ ಪಡೆಯಲಿದ್ದಾರೆ. ಇನ್ಮುಂದೆ ಮನೆ ಕಟ್ಟುವ ಮುಂಚೆ ಓಸಿ ಸರ್ಟಿಫಿಕೇಟ್ ಕಡ್ಡಾಯ ಮಾಡಲಾಗಿದೆ.



**ಆದೇಶ ಪತ್ರದಲ್ಲೇನಿ?:** ಬಿಬಿಎಂಪಿ ವ್ಯಾಪ್ತಿಯಲ್ಲಿ ಬೆಸ್ಕಾಂಗೆ ವಿದ್ಯುತ್ ಸಂಪರ್ಕ ಕೋರಿ ಸುಮಾರು 66,400 ಸಂಪರ್ಕಗಳಿಗಾಗಿ ಅರ್ಜಿಗಳು ಸಲ್ಲಿಕೆಯಾಗಿದೆ. ಸುಪ್ರಿಂಕೋರ್ಟ್ ಆದೇಶದಂತೆ ಸ್ಥಳೀಯ ಸಂಸ್ಥೆಗಳಿಂದ ಸ್ವಾಧೀನಾನುಭವ ಪ್ರಮಾಣ ಪತ್ರ, ಪೂರ್ಣತಾ ಪ್ರಮಾಣ ಪತ್ರ ಪಡೆದಿರುವ ಕಟ್ಟಡಗಳಿಗೆ ಮಾತ್ರ ವಿದ್ಯುತ್ ಮತ್ತು ನೀರು ಸರಬರಾಜು, ಒಳಚರಂಡಿ ಸಂಪರ್ಕ ನೀಡುವಂತೆ ಆದೇಶಿಸಲಾಗಿದೆ. ಸುಪ್ರಿಂಕೋರ್ಟ್ ಆದೇಶ ಹಿನ್ನಲೆ ಬಿಬಿಎಂಪಿ ವ್ಯಾಪ್ತಿಯಲ್ಲಿ ಬೆಸ್ಕಾಂ ವಿದ್ಯುತ್ ಸಂಪರ್ಕ ಕೋರಿರುವ ಕಟ್ಟಡಗಳಿಗೆ ಬಿಬಿಎಂಪಿಯಿಂದ 'ಎ' ಖಾತಾ ಅಥವಾ 'ಬಿ' ಖಾತಾ ಪಡೆಯಲಾಗಿರುವ ಬಗ್ಗೆ, ಕಟ್ಟಡ ನಿರ್ಮಾಣಕ್ಕೆ ನಕ್ಷೆ ಮಂಜೂರಾತಿ ಪಡೆಯಲಾಗಿರುವ ಬಗ್ಗೆ ಮತ್ತು ಸ್ವಾಧೀನಾನುಭವ ಪ್ರಮಾಣ ಪತ್ರ, ಪೂರ್ಣತಾ ಪ್ರಮಾಣ ಪತ್ರಕ್ಕೆ ಅರ್ಜಿ ಸಲ್ಲಿಸಿರುವ, ಸಲ್ಲಿಸುವ ವಿವರಗಳನ್ನು ಪಡೆಯಲು ಬಿಬಿಎಂಪಿಯಿಂದ ಎಸ್‌ಎಂಎಸ್ ಮತ್ತು ದೂರವಾಣಿ ಕರೆ ಮುಖಾಂತರ ವಿದ್ಯುತ್ ಸಂಪರ್ಕಕ್ಕಾಗಿ ಬಾಕಿ ಇರುವ ಅರ್ಜಿದಾರರನ್ನು ಸಂಪರ್ಕಿಸಲಾಗುತ್ತದೆ.

ಬಿಬಿಎಂಪಿ ಕೋರುವ ಮಾಹಿತಿಯನ್ನು ಒದಗಿಸಲು ಹಾಗೂ ಈ ಕೆಳಕಂಡ ಆನ್‌ಲೈನ್ ಲಿಂಕ್‌ನಲ್ಲಿ ನೊಂದಾಯಿತ ಎಂಜಿನಿಯರ್‌ಗಳ ಮುಖಾಂತರ ಸ್ವಾಧೀನಾನುಭವ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸುವಂತೆ ಬೆಂಗಳೂರು ನಾಗರೀಕರನ್ನು ಕೋರಲಾಗಿದೆ.

# ಗ್ರೇಟರ್ ಅಲ್ಲ, ಕ್ವಾರ್ಟರ್ ಬೆಂಗಳೂರು: ಆರ್.ಅಶೋಕ್ ಲೇವಡಿ

**ಬೆಂಗಳೂರು:** ಗ್ರೇಟರ್ ಅಲ್ಲ, ಕ್ವಾರ್ಟರ್ ಬೆಂಗಳೂರು ಮಾಡಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಲೇವಡಿ ಮಾಡಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬಂದ ಹಿನ್ನೆಲೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾಡಪ್ರಭು ಕೆಂಪೇಗೌಡರು ಒಂದು ಬೆಂಗಳೂರು ಕಟ್ಟಿದರೆ, ಕಾಂಗ್ರೆಸ್ ಸರ್ಕಾರ ಬೆಂಗಳೂರನ್ನು ಮೂರು ಭಾಗ ಮಾಡಿದೆ. ಇದರಿಂದಾಗಿ ಅಭಿವೃದ್ಧಿ ಸಾಧ್ಯವಾಗುವುದಿಲ್ಲ. 110 ಹಳ್ಳಿಗಳಲ್ಲಿ ಜನರಿಗೆ ಹೆಚ್ಚು ತೆರಿಗೆ ವಿಧಿಸಲಾಗಿದೆ. ಯಾರದ್ದೋ ಜಮೀನಿಗೆ ಬೆಲೆ ಹೆಚ್ಚಿಸುವಂತೆ ಮಾಡಲು ಇಂತಹ ಯೋಜನೆ ರೂಪಿಸಲಾಗಿದೆ. ಇದರಿಂದಾಗಿ ಕೆಂಪೇಗೌಡರ ಚಿಂತನೆಗೆ ದ್ರೋಹ ಬಗೆದಂತಾಗಿದೆ. ಬೆಂಗಳೂರು ಭಾಗವಾದರೆ ಆದಾಯ ಬರುವುದಿಲ್ಲ. ಐಟಿ-ಬಿಟಿ ಕೇಂದ್ರಗಳು ಒಂದು ಕಡೆ ಇರುವಾಗ, ಮತ್ತೊಂದು ಕಡೆಗೆ ಆದಾಯವೇ ಬರುವುದಿಲ್ಲ. ಮೂರು ಪಾಲಿಕೆಗಳು ನಿರ್ಮಾಣವಾದರೆ ಅಲ್ಲಿ ಕನ್ನಡಿಗರೇ ಮೇಯರ್ ಆಗುತ್ತಾರೆ ಎಂಬ ಖಚಿತತೆ ಇಲ್ಲ ಎಂದು ವಿರೋಧ ವ್ಯಕ್ತಪಡಿಸಿದರು.



ಮುಖ್ಯಮಂತ್ರಿಗಳು ಪಾಲಿಕೆಯಿಂದ ಆಯ್ಕೆಯಾಗುವುದಿಲ್ಲ ಎಂದಾದ ಮೇಲೆ ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಅವರನ್ನು ಹೇಗೆ ಅಧ್ಯಕ್ಷರನ್ನಾಗಿ ಮಾಡುತ್ತಾರೆ? ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲಿಕೆ ಸಭೆಯಲ್ಲಿ ಬಂದು ಕೂರಲು ಸಾಧ್ಯವಿಲ್ಲ. ಬೆಂಗಳೂರು ಭಾಗ ಆಗಬಾರದು ಎಂಬುದು ಬಿಜೆಪಿಯ ಅಭಿಪ್ರಾಯ. ಮುಂದೆ ನಮ್ಮ ಸರ್ಕಾರ ಬಂದರೆ ಬೆಂಗಳೂರನ್ನು ಒಂದು ಮಾಡುವ ಕೆಲಸ ಮಾಡುತ್ತೇವೆ. ಗ್ರೇಟರ್ ಬೆಂಗಳೂರಿಗೆ ವಿರುದ್ಧವಾಗಿ ಕಾನೂನು ಹೋರಾಟ ಮಾಡಲಿದ್ದೇವೆ ಎಂದು ಹೇಳಿದರು. ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಮ್ಮ ಲಾಭಕ್ಕೆ ಎಲ್ಲವನ್ನೂ ಮಾಡುತ್ತಿದ್ದಾರೆ. ಬಿಡಿಎ ಲೇಔಟ್‌ಗಳು ಇನ್ನೂ ಖಾಲಿ ಇದ್ದು, ಅಲ್ಲಿಗೆ ನೀರು, ವಿದ್ಯುತ್ ಕೊಡಲು ಆಗುತ್ತಿಲ್ಲ. ಬಿಬಿಎಂಪಿ ಚುನಾವಣೆಯನ್ನು ಮುಂದೂಡಲು ಈ ಯೋಜನೆ ಮಾಡಿದ್ದಾರೆ. ನಗರದಲ್ಲಿ ಎಲ್ಲ ಕಡೆ ಕಸದ ರಾಶಿ ಇದೆ, ಮೇಕೆದಾಟು ಯೋಜನೆ ಜಾರಿ ಮಾಡಿಲ್ಲ, ನಗರದ ಆಡಳಿತ ನಡೆಸಲು ಆಗುತ್ತಿಲ್ಲ. ಇಂತಹ ವಿಫಲತೆಯನ್ನು ಒಪ್ಪಿಕೊಳ್ಳದೆ ಇಂತಹ ಯೋಜನೆ ತಂದಿದ್ದಾರೆ ಎಂದು ಟೀಕಿಸಿದರು.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054